PRGI No.: KARKAN/2023/86346

# ವಿಜಯ ವಿಶ್ವವಾಣಿ

VIJAYA VISHWAVANI Kannada Daily | ವಿಜಯ ಧ್ವನಿ | ಕನ್ನಡ ದಿನಪತ್ರಿಕೆ | ₹1

ಬೆಂಗಳೂರು * ಬೆಂಗಳೂರು ಗ್ರಾಮಾಂತರ * ಚಿಕ್ಕಬಳ್ಳಾಪುರ * ಕೋಲಾರ * ಮಂಡ್ಯ * ರಾಮನಗರ * ತುಮಕೂರು * ಚಾಮರಾಜನಗರ * ಉತ್ತರ ಕರ್ನಾಟಕ * ಕಲಬುರ್ಗಿ * ಯಾದಗಿರಿ * ಬೀದರ್ * ರಾಯಚೂರು

Volume-2 | ಸಂಪುಟ–2 | Issue- 773 | ಸಂಚಿಕೆ–773 | Monday, December 15, 2025 | ಸೋಮವಾರ, ಡಿಸೆಂಬರ್ 15, 2025 | Pages- 8 | ಪುಟಗಳು–8

## ಶುಭ ಮುಂಜಾವು

* ನಿಮಗೆ ಯಾರು ಸಹಾಯ ಮಾಡಿದ್ದಾರೋ ಅವರನ್ನು ಮರೆಯಬೇಡಿ, ಯಾರು ನಿಮ್ಮನ್ನು ಪ್ರೀತಿಸುವರೋ ಅವರನ್ನು ದ್ವೇಷಿಸಬೇಡಿ, ನಿಮ್ಮನ್ನು ಯಾರು ನಂಬುತ್ತಾರೋ ಅವರಿಗೆ ಮೋಸ ಮಾಡಬೇಡಿ.

* ನನ್ನನ್ನು ಇಷ್ಟಪಡಿ ಅಥವಾ ದ್ವೇಷಿಸಿ ಎರಡು ನನ್ನ ಪರವಾಗಿದೆ, ನೀವು ನನ್ನನ್ನು ಇಷ್ಟಪಟ್ಟರೆ ನಾನು ನಿನ್ನ ಹೃದಯದಲ್ಲಿದ್ದೇನೆ, ನೀವು ನನ್ನನ್ನು ದ್ವೇಷಿಸಿದರೆ ನಾನು ನಿನ್ನ ಮನಸಿನಲ್ಲಿದ್ದೇನೆ.

–ಸ್ವಾಮಿ ವಿವೇಕಾನಂದ

"ಈ ಮೂರ್ಖರಿಂದ ಏನನ್ನೂ ನಿಭಾಯಿಸಲು ಸಾಧ್ಯವಿಲ್ಲ" ನಟ ಕಿಶೋರ್! 02

ವಿಶ್ವದ ಅತ್ಯಂತ ಕಿರಿಯ ತಾಯಿ ಯಾರು ಗೊತ್ತಾ! 05

ಕಾಂಗ್ರೆಸ್‌ನಿಂದ ಮತಗಳ್ಳತನದ ವಿರುದ್ಧ ರಣಕಹಳೆ 06

# ಜಿಬಿಎ ಚುನಾವಣೆ; ನಾಳೆಯಿಂದ 369 ವಾರ್ಡ್‌ಗಳ ಆಕಾಂಕ್ಷಿಗಳ ಅರ್ಜಿ ಸ್ವೀಕಾರ: ಡಿಸಿಎಂ ಡಿ.ಕೆ. ಶಿವಕುಮಾರ್

### ಕಟ್ಟಡ ನಿಧಿಗಾಗಿ ಸಾಮಾನ್ಯ ವರ್ಗಕ್ಕೆ 50 ಸಾವಿರ, ಮಹಿಳೆಯರು ಹಾಗೂ ಪರಿಶಿಷ್ಟ ಸಮುದಾಯದ ಅಭ್ಯರ್ಥಿಗಳಿಂದ 25 ಸಾವಿರ ಶೇವಣಿ ಸಂಗ್ರಹ

**ಬೆಂಗಳೂರು :** ಸೋಮವಾರದದ ಜಿಬಿಎ ಚುನಾವಣೆಗೆ ಅರ್ಜಿ ಸ್ವೀಕಾರ ಮಾಡಲಾಗುವುದು. ಮೀಸಲಾತಿ ಇನ್ನು ಅಂತಿಮವಾಗಿಲ್ಲವಾದರೂ 369 ವಾರ್ಡ್ ಗಳಲ್ಲಿ ಸ್ಪರ್ಧಿಸಲು ಯಾರಿಗೆಲ್ಲಾ ಆಸಕ್ತಿ ಇದೆ ಎಂದು ತಿಳಿಯಲು ಅರ್ಜಿ ಕರೆಯಲಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿದರು.

ದೆಹಲಿಯ ಕರ್ನಾಟಕ ಭವನದಲ್ಲಿ ಶಿವಕುಮಾರ್ ಅವರು ಭಾನುವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು.

"ನಿನ್ನೆ ಸಚಿವರ ಜೊತೆ ಚರ್ಚಿಸಿ ಈ ಅರ್ಜಿ ಜೊತೆಗೆ ಪಡೆಯುವ ಹಣವನ್ನು ಪಕ್ಷದ ಕಟ್ಟಡ ನಿಧಿಗೆ ಬಳಸಲು ತೀರ್ಮಾನಿಸಿದ್ದು, ಸಾಮಾನ್ಯವರ್ಗಕ್ಕೆ 50 ಸಾವಿರ ಹಾಗೂ ಮಹಿಳೆಯರು ಹಾಗೂ ಪರಿಶಿಷ್ಟ ಸಮುದಾಯದವರಿಗೆ 25 ಸಾವಿರ ರೂ. ನಿಗದಿಪಡಿಸಲಾಗಿದೆ. ಆನ್ಲೈನ್ ಅರ್ಜಿ ಹಾಕಲು ಅವಕಾಶ ಮಾಡಲಾಗಿದೆ" ಎಂದು ಮಾಹಿತಿ ನೀಡಿದರು.

**ಮತ ಕಳ್ಳತನ ವಿರುದ್ಧದ ಹೋರಾಟ ಮುಂದುವರಿಯಲಿದೆ:**

ಮತ ಕಳ್ಳತನ ವಿರುದ್ಧದ ಹೋರಾಟ ಇಲ್ಲಿಗೆ ಮುಗಿಯುವುದೇ ಎಂದು ಕೇಳಿದಾಗ, "ಪ್ರಜಾಪ್ರಭುತ್ವ ವ್ಯವಸ್ಥೆ ಉಳಿಸಲು ಮತ ಕಳ್ಳತನ ವಿರುದ್ಧ ನಾವು ಆರಂಭಿಸಿರುವ ಹೋರಾಟ ಮುಂದುವರಿಯಲಿದೆ. ಪ್ರತಿ ಕ್ಷೇತ್ರದಲ್ಲಿ ನಾವು ಲೀಗಲ್ ಬ್ಯಾಂಕ್ ಸ್ಥಾಪಿಸುತ್ತೇವೆ. ನಮ್ಮ ಪಕ್ಷದ ಪರ ಇರುವ ವಕೀಲರನ್ನು ಇದರಲ್ಲಿ ಸೇರಿಸಲಾಗುವುದು. ಇವರು ನಮ್ಮ ಕಾರ್ಯಕರ್ತರಿಗೆ ಕಾನೂನು ಸಲಹೆ



ನೀಡಲಾಗುವುದು.

ಜಿ.ಸಿ.ಚಂದ್ರಶೇಖರ್ ಅವರು ಬಿಎಲ್ ಎ ಗುರುತಿನ ಚೀಟಿ ನೀಡಲು ತಯಾರು ಮಾಡಿಕೊಂಡಿದ್ದಾರೆ. ಎಐಸಿಸಿಯಿಂದ ಒಪ್ಪಿಗೆ ಪಡೆಯಲು ತೆಗೆದುಕೊಂಡು ಹೋಗಲಾಗುವುದು. ನಾವು ಇಡೀ ದೇಶದಲ್ಲಿಯೇ ಅತಿ ಹೆಚ್ಚು ಸಹಿ ಸಂಗ್ರಹ ಮಾಡಿದ್ದೇವೆ.

**ಜನರ ಉತ್ಸಾಹ ಮುಂದಿನ ಚುನಾವನೆಗಳಿಗೆ ನಾಂದಿ:**

ಇಂದಿನ ಪ್ರತಿಭಟನೆಯಲ್ಲಿ ಜನರಲ್ಲಿ ಇದ್ದ ಉತ್ಸಾಹ 2028 ಹಾಗೂ 2029ರ ಚುನಾವಣೆಗೆ ನಾಂದಿಯಾಡಿದೆ. ಈ ದೇಶಕ್ಕೆ ಕಾಂಗ್ರೆಸ್ ಅನಿವಾರ್ಯತೆ ಇದೆ ಎಂದು ಪಕ್ಷ ಉಳಿಸಿಕೊಳ್ಳಲು ಕಾರ್ಯಕರ್ತರು ಸಜ್ಜಾಗಿದ್ದಾರೆ. ಇದರಿಂದ ಸಂತೋಷವಾಗಿದೆ, ನನ್ನ ಆತ್ಮಸ್ಥೈರ್ಯ ಹೆಚ್ಚಿಸಿದೆ. ಅಧಿಕಾರ ಸಿಗದ ಕಾರ್ಯಕರ್ತರು ಕೂಡ ತಮ್ಮ ಹಣದಲ್ಲಿ ಈ ಪ್ರತಿಭಟನೆಗೆ ಆಗಮಿಸಿದ್ದಾರೆ.

ನಗರ ಭಾಗದಲ್ಲಿ ಮತ ಕಳ್ಳತನ ಹೆಚ್ಚಾಗಿದೆ ಎಂದು ಕೇಳಿದಾಗ, "ಆಳಂದ ಕ್ಷೇತ್ರದಲ್ಲಿ ಹಳ್ಳಿಗಳಲ್ಲಿ ಹೊರ ರಾಜ್ಯಗಳ ಫೋನ್ ನಂಬರ್ ಬಳಸಿ ಮತದಾರರ ಹೆಸರು ತೆಗೆಸಲಾಗಿದೆ" ಎಂದು ತಿಳಿಸಿದರು.

**ನನ್ನನ್ನು ನೋಡಿದರೆ ನಮ್ಮ ನಾಯಕರು ಕುಶಲೋಪರಿ ವಿಚಾರಿಸುತ್ತಾರೆ**

ಹೈಕಮಾಂಡ್ ನಾಯಕರ ಭೇಟಿ ಬಗ್ಗೆ ಕೇಳಿದಾಗ, "ನಮ್ಮ ನಾಯಕರಿಗೆ ನನ್ನನ್ನು ನೋಡಿದ ತಕ್ಷಣ ಅರ್ಥವಾಗುತ್ತದೆ. ನನ್ನ ಕುಶಲೋಪರಿ ವಿಚಾರಿಸುತ್ತಾರೆ. ಇದು ಸೌಹಾರ್ದಯುತ ಭೇಟಿ, ವೈಯಕ್ತಿಕ ಭೇಟಿ ಅಲ್ಲ. ಇದರ ಹೊರತಾಗಿ ಬೇರೆ ವಿಚಾರಗಳನ್ನು ನಿಮ್ಮ ಮುಂದೆ ಬಹಿರಂಗಪಡಿಸಲು ಆಗುವುದಿಲ್ಲ. ಅದರ ಅವಶ್ಯಕತೆ ಇಲ್ಲ" ಎಂದರು.

ಬಹಳ ವರ್ಷಗಳ ನಂತರ ಸೋನಿಯಾ ಗಾಂಧಿ ಅವರನ್ನು ಭೇಟಿ ಮಾಡಿದ್ದೀರಿ ಎಂದು ಕೇಳಿದಾಗ, "ಇದು ಸುಳ್ಳು, ನಾವು ಭೇಟಿಯಾಗಿದ್ದಾಗ ಹೇಳಿಕೊಳ್ಳುವುದಿಲ್ಲ" ಎಂದರು.

ಇಂದಿನ ಭೇಟಿಯಲ್ಲಿ ನಿಮಗೆ ಅಭಯ ಸಿಕ್ಕಿದೆಯಂತೆ, ಸಮಸ್ಯೆ ಬಗೆಹರಿಯಲಿದೆ ಎಂದು ಕೇಳಿದಾಗ, "ನಿಮ್ಮ ಅರ್ಥ ಏನಿದೆಯೋ, ನನಗೆ ಯಾವ ಸಮಸ್ಯೆ ಇಲ್ಲ. ನೀವು (ಮಾಧ್ಯಮಗಳು) ಸಮಸ್ಯೆ ಸೃಷ್ಟಿಸುತ್ತಿದ್ದೀರಿ" ಎಂದು ಹೇಳಿದರು.

ಸೋಮವಾರ ಹೈಕಮಾಂಡ್ ನಾಯಕರನ್ನು ವೈಯಕ್ತಿಕವಾಗಿ ಭೇಟಿ ಮಾಡುತ್ತೀರಾ ಎಂದು ಕೇಳಿದಾಗ, "ಸೋಮವಾರ ದೆಹಲಿ ಪೊಲೀಸರ ನೋಟೀಸ್ ಗೆ ಉತ್ತರ ನೀಡಬೇಕು. ನಾಯಕರ ಭೇಟಿ ಬಗ್ಗೆ ನೋಡೋಣ. ನಿಮಗೆ ತಿಳಿಸುತ್ತೇನೆ" ಎಂದರು.

# ಪ್ರಿಯಾಂಕಾ ಗಾಂಧಿ ಜೊತೆ ಲಕ್ಷ್ಮೀ ಹೆಬ್ಬಾಳಕರ್ ಸಂವಾದ

**ನವದೆಹಲಿ:** ನವದೆಹಲಿಯಲ್ಲಿ ಭಾನುವಾರ ನಡೆದ ಓಟ್ ಚೋರ್ ಗದ್ದಿ ಚೋಡ್ ರ್‍ಯಾಲಿ ವೇಳೆ ಕರ್ನಾಟಕ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಸಂಸದೆ ಪ್ರಿಯಾಂಕಾ ಗಾಂಧಿ ಜೊತೆ ಸಂವಾದ ನಡೆಸಿದರು.

ರ್‍ಯಾಲಿಯಲ್ಲಿ ಭಾಗವಹಿಸಲು ಲಕ್ಷ್ಮೀ ಹೆಬ್ಬಾಳಕರ್ ಅವರು ಶುಕ್ರವಾರ ಸಂಜೆಯೇ ನವದೆಹಲಿಗೆ ತೆರಳಿದ್ದಾರೆ.

ಭಾನುವಾರ ನಡೆದ ರ್‍ಯಾಲಿಯಲ್ಲಿ ಪುತ್ರ ಮೃಣಾಲ ಹೆಬ್ಬಾಳಕರ್ ಹಾಗೂ ಬೆಳಗಾವಿ ಗ್ರಾಮೀಣ ಕ್ಷೇತ್ರದ ನೂರಾರು ಕಾರ್ಯಕರ್ತರೊಂದಿಗೆ ಭಾಗವಹಿಸಿದ್ದರು.



# ಆಳಂದ ವಿಧಾನಸಭಾ ಚುನಾವಣೆಯಲ್ಲಿ ಮತ ಕಳ್ಳತನ; ವ್ಯಕ್ತಿಯನ್ನು ಬಂಧಿಸಿದ ಸಿಐಡಿ!

ಬೆಂಗಳೂರು: 2023ರ ವಿಧಾನಸಭಾ ಚುನಾವಣೆಯಲ್ಲಿ ಆಳಂದ ಕ್ಷೇತ್ರದಲ್ಲಿ ನಡೆದಿದೆ ಎನ್ನಲಾದ ಮತಗಳವು ಆರೋಪದ ತನಿಖೆ ನಡೆಸುತ್ತಿರುವ ಸಿಐಡಿ, ಪಶ್ಚಿಮ ಬಂಗಾಳದ ನಾಡಿಯಾ ಜಿಲ್ಲೆಯ ವ್ಯಕ್ತಿಯನ್ನು ಬಂಧಿಸಿದೆ ಎಂದು ಇಲಾಖೆಯ ಮೂಲಗಳು ಶುಕ್ರವಾರ ತಿಳಿಸಿವೆ.

ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಹಲವು ಮತಗಳನ್ನು ಅಳಿಸಲು ಆರೋಪಿ ಅರ್ಜಿ ಸಲ್ಲಿಸಿದ್ದರು ಎಂದು ಮೂಲಗಳು ತಿಳಿಸಿವೆ.

ಸಿಐಡಿ ಮೂಲಗಳ ಪ್ರಕಾರ, ನಾಡಿಯಾದ ಬಾಪಿ ಅದ್ಯ ಎಂಬ ಆರೋಪಿಯನ್ನು ಅವರ ಬ್ಯಾಂಕ್ ಖಾತೆಗೆ ವರ್ಗಾವಣೆಯಾದ ಹಣದ ಜಾಡು ಹಿಡಿದ ನಂತರ ಬಂಧಿಸಲಾಗಿದೆ.

ಬಿಆರ್ ಪಾಟೀಲ್ ಮತ್ತು ಸಚಿವ ಮತ್ತು ಚಿತ್ತಾಪುರ ಶಾಸಕ ಪ್ರಿಯಾಂಕ್ ಖರ್ಗೆ ಅವರು ಮತ ಅಳಿಸುವಿಕೆ ಪ್ರಯತ್ನಗಳ ಬಗ್ಗೆ ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿಗಳ (ಅಇಔ) ಗಮನಕ್ಕೆ ತಂದಿದ್ದರು. ಆದರೆ, ಮುಖ್ಯ ಚುನಾವಣಾ ಅಧಿಕಾರಿ, ಯಾವುದೇ ಮುಂದಿನ ಕ್ರಮಗಳನ್ನು ನಿಲ್ಲಿಸಲು ಮತ್ತು ಮತದಾರರ ಪಟ್ಟಿಯ ಸದ್ಯದ ಸ್ಥಿತಿಯನ್ನು ಕಾಯ್ದುಕೊಳ್ಳಲು ನಿರ್ಧರಿಸಿದರು.

ಪಾಟೀಲ್ ಅವರ ಪ್ರಕಾರ, ದಲಿತರು ಮತ್ತು ಅಲ್ಪಸಂಖ್ಯಾತರನ್ನು ಒಳಗೊಂಡ 6,994 'ಕಾಂಗ್ರೆಸ್ ಮತಗಳನ್ನು' ಅಳಿಸಲು ಅರ್ಜಿಗಳನ್ನು ಸಲ್ಲಿಸಲಾಗಿತ್ತು. ಸಿಇಒ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಆದೇಶಿಸಿದ ನಂತರ ಮತ ಅಳಿಸುವಿಕೆಯನ್ನು ನಿಲ್ಲಿಸಲಾಯಿತು. ಈ ಮತಗಳನ್ನು ಅಳಿಸಿದ್ದರೆ ನಾನು ಖಂಡಿತವಾಗಿಯೂ ಚುನಾವಣೆಯಲ್ಲಿ ಸೋಲುತ್ತಿದ್ದೆ ಎಂದಿದ್ದಾರೆ.

ಅವರು 2023ರ ವಿಧಾನಸಭಾ ಚುನಾವಣೆಯಲ್ಲಿ ತಮ್ಮ ಹತ್ತಿರದ ಪ್ರತಿಸ್ಪರ್ಧಿ ಸುಭಾಷ್ ಗುತ್ತೇದಾರ್ (ಬಿಜೆಪಿ) ವಿರುದ್ಧ ಸುಮಾರು 10,000 ಮತಗಳ ಅಂತರದಿಂದ ಗೆದ್ದಿದ್ದರು.

ಇತ್ತೀಚೆಗೆ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ 'ವೋಟ್ ಚೋರಿ' ಹೇಗೆ ನಡೆಯುತ್ತಿದೆ ಎಂಬುದನ್ನು ವಿವರಿಸಿದರು ಮತ್ತು ಆಳಂದ ಕ್ಷೇತ್ರದ ಉದಾಹರಣೆ ನೀಡಿದ್ದರು.

ಇದನ್ನು ಗಂಭೀರವಾಗಿ ಪರಿಗಣಿಸಿದ ಕರ್ನಾಟಕ ಸರ್ಕಾರ, 'ಮತ ಕಳ್ಳತನ'ದ ತನಿಖೆಗಾಗಿ ಎಸ್ಐಟಿಯನ್ನು ರಚಿಸಿತು. ಸಿಐಡಿಯಲ್ಲಿ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಬಿಕೆ ಸಿಂಗ್ ಇದರ ನೇತೃತ್ವ ವಹಿಸಿದ್ದಾರೆ.

# ಇಕ್ಬಾಲ್ ಹುಸೇನ್ ಮಾತು ನಂಬಬೇಡಿ, ಅವನಿಗೆ ಮಾತಾಡೋ ಚಟ

**ಬೆಂಗಳೂರು:** ಹೈಕಮಾಂಡ್ ಸೂಚನೆಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬ್ರೇಕ್ ಫಾಸ್ಟ್ ಮೀಟಿಂಗ್ ಮಾಡಿ ನಮ್ಮಲ್ಲಿ ಯಾವುದೇ ಭಿನ್ನಮತವಿಲ್ಲ. ನಾವು ಸಹೋದರರಿದ್ದಂತೆ ಎಂದು ಹೇಳಿದ್ದರೂ ಕಾಂಗ್ರೆಸ್ ನಲ್ಲಿ ಕುರ್ಚಿ ಕದನ ವಿರಾಮ ಮಾತ್ರ ಮೇಲಿಂದ ಮೇಲೆ ಉಲ್ಲಂಘನೆ ಆಗುತ್ತಲೇ ಇದೆ.

ಡಿಕೆ ಶಿವಕುಮಾರ್ ಅವರ ಆಪ್ತ ಶಾಸಕ ಎಚ್ ಎ ಇಕ್ಬಾಲ್ ಹುಸೇನ್ ಅವರು ಒಂದು ಹೆಜ್ಜೆ ಮುಂದೆ ಹೋಗಿ, ಜನವರಿ 6 ರಂದು ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಹೇಳಿದ್ದಾರೆ.

ಬಳಿಕ ದೆಹಲಿಗೆ ತೆರಳುವ ಮುನ್ನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನದಲ್ಲಿ ತಮ್ಮ ಬೆಂಬಲಿಗ ಶಾಸಕನ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ಡಿಕೆಶಿ, ಇಕ್ಬಾಲ್ ಹುಸೇನ್ ಮಾತನ್ನು ಯಾರೂ ನಂಬಬೇಡಿ, ಅವನಿಗೆ ಮಾತಾಡೋ ಚಟ ಇದೆ. ಅವನ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಸಿಡಿಮಿಡಿಗೊಂಡರು. ಇಂದು ರಾಮನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಇಕ್ಬಾಲ್ ಹುಸೇನ್ ಅವರು, ಡಿಕೆ ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡುವುದೇ ನಮ್ಮ ಗುರಿ. ಅವರು ಜನವರಿ 6 ರಂದು ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಭವಿಷ್ಯ ನುಡಿದರು.



ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಹುದ್ದೆಯನ್ನು ಶಿವಕುಮಾರ್ ಅವರಿಗೆ ಬಿಟ್ಟುಕೊಡಬೇಕು. ಡಿಕೆಶಿಗೆ ಅವಕಾಶ ಸಿಗಬೇಕು. ಇದಕ್ಕೆ ಹೈಕಮಾಂಡ್ ಸ್ಪಂದಿಸುತ್ತಿದೆ. ಬಹುಶ: ಜನವರಿ 6ರಂದು ಸಿಎಂ ಸ್ಥಾನ ಸಿಗುವ ಸ್ಥಾನ ಸಿಗುವ ಸಾಧ್ಯತೆ ಇದೆ ಎಂದು ಹೇಳಿದ್ದರು.

# ರಿಷಬ್ ಶೆಟ್ಟಿ ಹರಕೆ ನೇಮೋತ್ಸವ ವಿವಾದ: ಆಡಳಿತ ಸಮಿತಿ ಮತ್ತು ದೈವ ನರ್ತಕ ಹೇಳಿದ್ದೇನು!

**ಮಂಗಳೂರು:** ನಟ ರಿಷಬ್ ಶೆಟ್ಟಿ ಮತ್ತು ಕಾಂತಾರಾ ಚಿತ್ರತಂಡದ ಹರಕೆಯ ದೈವ ನೇಮ ಮತ್ತು ಸಂಬಂಧಿತ ಆಚರಣೆಗಳು ದೇವಾಲಯದ ದೀರ್ಘಕಾಲದಿಂದ ಸ್ಥಾಪಿತವಾದ ಪದ್ಧತಿಗಳು ಮತ್ತು ಸಂಪ್ರದಾಯಗಳಿಗೆ



ಅನುಗುಣವಾಗಿ ಕಟ್ಟುನಿಟ್ಟಾಗಿ ನಡೆಸಲ್ಪಟ್ಟಿವೆ ಎಂದು ಬರೇಬೈಲು ಶ್ರೀ ಜಾರಂದಾಯ ಬಂಟ ದೈವಸ್ಥಾನ ಮತ್ತು ಶ್ರೀ ವಾರಾಹಿ ಪಂಜುರ್ಲಿ ದೈವಸ್ಥಾನದ ಆಡಳಿತ ಸಮಿತಿ ಸ್ಪಷ್ಟಪಡಿಸಿದೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ದೈವಸ್ಥಾನ ಸಮಿತಿಯ ಗೌರವಾಧ್ಯಕ್ಷ ರವಿ ಪ್ರಸನ್ನ, ವಿಶೇಷ ಗಮನ ಸೆಳೆದ ಎಣ್ಣೆ ಬೂಲ್ಯ ಆಚರಣೆಯು ದೇವಾಲಯದಲ್ಲಿ ಹಲವಾರು ವರ್ಷಗಳಿಂದ ಆಚರಣೆಯಲ್ಲಿದೆ ಮತ್ತು ಸಂಪ್ರದಾಯದಿಂದ ಸೂಚಿಸಲ್ಪಟ್ಟಂತೆ ನಿಖರವಾಗಿ ನಡೆಸಲ್ಪಟ್ಟಿದೆ ಎಂದು ಹೇಳಿದರು. ದೇವಾಲಯದಲ್ಲಿ ಅನುಸರಿಸುವ ಪದ್ಧತಿಗಳ ಬಗ್ಗೆ ಸಾಕಷ್ಟು ಜ್ಞಾನ ಅಥವಾ ತಿಳುವಳಿಕೆಯಿಲ್ಲದೆ ದೈವ ಸ್ವಾಧೀನದ ಸ್ಥಿತಿಯ ಬಗ್ಗೆ ವಿಶ್ಲೇಷಿಸುವ ಅಥವಾ ತೀರ್ಪು ನೀಡುವ ಔಚಿತ್ಯವನ್ನು ಅವರು ಪ್ರಶ್ನಿಸಿದರು. ಪ್ರತಿಯೊಂದು ದೈವಸ್ಥಾನವು ತನ್ನದೇ ಆದ ವಿಶಿಷ್ಟ ಆಚರಣೆಗಳನ್ನು ಹೊಂದಿದ್ದು, ಅವು ತಲೆಮಾರುಗಳಿಂದ ವಿಕಸನಗೊಂಡಿವೆ. ಹೊರಗಿನವರು ಆಚರಣೆಗಳ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಸಂದರ್ಭವನ್ನು ಅರ್ಥಮಾಡಿಕೊಳ್ಳದೆ ಅವುಗಳ ಬಗ್ಗೆ ಪ್ರತಿಕ್ರಿಯಿಸುವುದು ಸೂಕ್ತವಲ್ಲ ಎಂದು ಹೇಳಿದರು.

**ದೈವದ ಅನುಮತಿ ಪಡೆದು ಮಾಡಿದ ಪ್ರತಿಜ್ಞೆ**

ನಟ ರಿಷಭ್ ಶೆಟ್ಟಿ ಕೆಲವು ತಿಂಗಳ ಹಿಂದೆ ದೇವಾಲಯದಲ್ಲಿ ನೇಮ ಅರ್ಪಿಸಲು ಹರಕೆ ಹೊತ್ತುಕೊಂಡಿದ್ದರು. ಸಂಪ್ರದಾಯದಂತೆ, ಮೊದಲು ದೈವದಿಂದ ಅನುಮತಿ ಪಡೆದ ನಂತರವೇ ಆಚರಣೆಯನ್ನು ನಡೆಸಲಾಯಿತು.

ಎಲ್ಲಾ ಕಾರ್ಯವಿಧಾನಗಳನ್ನು ಗೌರವ ಮತ್ತು ಸಂಪ್ರದಾಯ ಬದ್ಧವಾಗಿ ಅನುಸರಿಸಲಾಗಿದೆ. ಯಾವುದನ್ನೂ ಅನಿಯಂತ್ರಿತವಾಗಿ ಮಾಡಲಾಗಿಲ್ಲ. ದೈವದ ಒಪ್ಪಿಗೆಯು ಪ್ರತಿಯೊಂದು ಆಚರಣೆಗೂ ಕೇಂದ್ರವಾಗಿದೆ ಮತ್ತು ಈ ನೇಮವು ಇದಕ್ಕೆ ಹೊರತಾಗಿಲ್ಲ ಎಂದರು.

**ಎಣ್ಣೆ ಬೂಲ್ಯ ಆಚರಣೆಯ ಕುರಿತು ಸ್ಪಷ್ಟೀಕರಣ** ರಿಷಬ್ ಶೆಟ್ಟಿ ಅವರ ಹರಕೆ ಆರಾಧನೆಯಲ್ಲಿ ದೈವದ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂಬ ಕೆಲವು ದೈವಾರಾಧಕರ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಎಣ್ಣೆ ಬೂಲ್ಯ ಆಚರಣೆಯ ಸಮಯದಲ್ಲಿ ದೈವವು ಯಾರ ಮಡಿಲಲ್ಲೂ ಮಲಗಿರಲಿಲ್ಲ ಎಂದು ಹೇಳಿದರು. ಬದಲಾಗಿ, ದೈವವು ಸೇವಾಕರ್ತರ ಕೈಗಳನ್ನು ಹಿಡಿದು ನೆಲದ ಮೇಲೆ ಕುಳಿತಿತ್ತು. ಈ ಪದ್ಧತಿ ಅಸಾಮಾನ್ಯ ಅಥವಾ ಹೊಸದಲ್ಲ ಎಂದರು.

ಈ ವಿಧಾನವನ್ನು ಹಿಂದಿನಿಂದಲೂ ಅನುಸರಿಸಿಕೊಂಡು ಬರಲಾಗಿದೆ. ಇದು ನಮ್ಮ ಧಾರ್ಮಿಕ ಆಚರಣೆಯ ಭಾಗವಾಗಿದೆ. ಇದನ್ನು ಭಕ್ತರು ತಲೆಮಾರುಗಳಿಂದ ಸ್ವೀಕರಿಸಿದ್ದಾರೆ. ಗೊಂದಲವನ್ನು ಸೃಷ್ಟಿಸಲು ಮತ್ತು ಆಚರಣೆಯನ್ನು ತಪ್ಪಾಗಿ ನಿರೂಪಿಸಲು ಹೀಗೆ ಟೀಕೆ ಮಾಡುತ್ತಿದ್ದಾರೆ ಎಂದರು. ದೈವಾರಾಧನೆ ಮತ್ತು ಅದರ ಪದ್ಧತಿಗಳ ಬಗ್ಗೆ ಜ್ಞಾನವಿಲ್ಲದ ವ್ಯಕ್ತಿಗಳು ಬೇಜವಾಬ್ದಾರಿಯುತ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಭಕ್ತರ ಭಾವನೆಗಳಿಗೆ ನೋವುಂಟು ಮಾಡಿದ್ದಾರೆ. ಇಂತಹ ಹೇಳಿಕೆಗಳು ತಲೆಮಾರುಗಳಿಂದ ಈ ನಂಬಿಕೆಯನ್ನು ಅನುಸರಿಸುತ್ತಿರುವ ಜನರಿಗೆ ನೋವನ್ನುಂಟುಮಾಡಿವೆ. ಇದು ಕೇವಲ ಒಂದು ಆಚರಣೆ ಅಥವಾ ಒಬ್ಬ ವ್ಯಕ್ತಿಯ ಬಗ್ಗೆ ಅಲ್ಲ, ಆದರೆ ಹಳೆಯ ನಂಬಿಕೆ ವ್ಯವಸ್ಥೆಯನ್ನು ಗೌರವಿಸುವ ಬಗ್ಗೆಯಾಗಿದೆ ಎಂದರು.

**ದೂರು ದಾಖಲು**

ತಪ್ಪು ಮಾಹಿತಿ ಹರಡಿದ ಮತ್ತು ಆನ್‌ಲೈನ್‌ನಲ್ಲಿ ನಿಂದನೀಯ ಹೇಳಿಕೆಗಳನ್ನು ಪೋಸ್ಟ್ ಮಾಡಿದ ಆರೋಪ ಹೊತ್ತಿರುವ ವ್ಯಕ್ತಿಗಳ ವಿರುದ್ಧ ದೇವಾಲಯ ಸಮಿತಿಯು ಪೊಲೀಸ್ ಆಯುಕ್ತರು ಮತ್ತು ಕದ್ರಿ ಪೊಲೀಸ್ ಠಾಣೆಗೆ ದೂರುಗಳನ್ನು ನೀಡಲಾಗಿದೆ. ಹೊಣೆಗಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ರವಿ ಪ್ರಸನ್ನ ಹೇಳಿದರು.

**ಗ್ರಾಮಸ್ಥರಿಂದ ಸಾಮೂಹಿಕ ಪ್ರಾರ್ಥನೆ**

ಇದಕ್ಕೂ ಮೊದಲು, ಗ್ರಾಮಸ್ಥರು ಜರಾಂಡಯ ಬಂಟ ದೈವದ ಮುಂದೆ ಒಟ್ಟುಗೂಡಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಒಗ್ಗಟ್ಟು ಮತ್ತು ನಂಬಿಕೆಯ ಸಂಕೇತವಾಗಿ ಈ ಪ್ರಾರ್ಥನೆಯನ್ನು ನಡೆಸಲಾಯಿತು, ಭಕ್ತರು ದೈವ ಮತ್ತು ದೇವಾಲಯದಲ್ಲಿ ಅನುಸರಿಸುವ ಸಂಪ್ರದಾಯಗಳಲ್ಲಿ ತಮ್ಮ ನಂಬಿಕೆಯನ್ನು ಪುನರುಚ್ಚರಿಸಿದರು.

ರಿಷಬ್ ಶೆಟ್ಟಿಯವರ ಮುಂದೆ ನರ್ತನ ಮಾಡಿದ್ದ ದೈವ ನರ್ತಕ ಮುಖೇಶ್ ಕೂಡ ಈ ವಿಷಯವನ್ನು ಪ್ರಸ್ತಾಪಿಸಿದರು. ದೈವವೇ ಅವರ ಮಾಧ್ಯಮ, ನ್ಯಾಯಾಲಯ ಮತ್ತು ಅಧಿಕಾರ ಎಂದು ಹೇಳಿದರು. ಹಿರಿಯರು ಕಲಿಸಿದಂತೆ ಮತ್ತು ತಲೆಮಾರುಗಳ ಮೂಲಕ ರವಾನಿಸಲ್ಪಟ್ಟಂತೆ ಆಚರಣೆಗಳನ್ನು ನಿಖರವಾಗಿ ಮಾಡಿಕೊಂಡು ಬಂದಿದ್ದೇನೆ ಎಂದಿದ್ದಾರೆ.

ಎಲ್ಲಾ ಉತ್ತರಗಳು ದೈವದಿಂದ ಬರುತ್ತವೆ. ನಮ್ಮ ಹಿರಿಯರು ನಮಗೆ ಕಲಿಸಿದ್ದನ್ನು ಮಾತ್ರ ನಾವು ಅನುಸರಿಸುತ್ತೇವೆ ಎಂದು ಅವರು ಹೇಳಿದರು, ದೈವಾರಾಧನೆಯು ಸಾರ್ವಜನಿಕ ಅಭಿಪ್ರಾಯಕ್ಕಿಂತ ನಂಬಿಕೆಯಲ್ಲಿ ಬೇರೂರಿದೆ ಎಂದು ಒತ್ತಿ ಹೇಳಿದರು.

# ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ವಿಧಿವಶ

ಕಾಂಗ್ರೆಸ್ ನ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ನಿಧನರಾಗಿದ್ದಾರೆ. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಇಂದು ಸಂಜೆ



ವಿಧಿವಶರಾಗಿದ್ದಾರೆ. ದಾವಣಗೆರೆ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಶಾಸಕ ಹಾಗೂ ಅಖಿಲ ಭಾರತ ವೀರಶೈವ ಮಹಾ ಸಭೆಯ ರಾಷ್ಟ್ರೀಯ ಅಧ್ಯಕ್ಷರಾದ 94 ವರ್ಷದ ಶಾಮನೂರು ಶಿವಶಂಕರಪ್ಪ ನಿಧನರಾಗಿದ್ದಾರೆ.

ದಶಕಗಳ ಕಾಲ ಸಕ್ರಿಯ ರಾಜಕಾರಣದಲ್ಲಿದ್ದ ಶಾಮನೂರು ಶಿವಶಂಕರಪ್ಪ ಅವರು ಆರು ಬಾರಿ ಶಾಸಕರಾಗಿ ಹಾಗೂ ಒಂದು ಬಾರಿ ಸಂಸದರಾಗಿ ಆಯ್ಕೆಯಾಗಿದ್ದರು. ರಾಜ್ಯದ ವಿವಿಧ ಸರ್ಕಾರಗಳಲ್ಲಿ ಪ್ರಮುಖ ಖಾತೆಗಳನ್ನು ನಿಭಾಯಿಸುವ ಮೂಲಕ ಸಚಿವರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಶಾಮನೂರು ಶಿವಶಂಕರಪ್ಪ ಅವರ ಪುತ್ರ ಎಸ್.ಎಸ್. ಮಲ್ಲಿಕಾರ್ಜುನ ತೋಟಗಾರಿಕೆ ಸಚಿವರಾಗಿದ್ದು ಅವರ ಸೊಸೆ ಪ್ರಭಾ ಮಲ್ಲಿಕಾರ್ಜುನ ಸಂಸದರಾಗಿದ್ದಾರೆ.

1931ರ ಜೂನ್ 16ರಂದು ದಾವಣಗೆರೆಯಲ್ಲಿ ಜನಿಸಿದ್ದ ಶಾಮನೂರು ಶಿವಶಂಕರಪ್ಪ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ವಿಧಾನಸಭೆಯ ಸದಸ್ಯರಾಗಿದ್ದು, ಅವರು ಭಾರತದಲ್ಲಿ ರಾಜ್ಯ ವಿಧಾನಸಭೆಯ ಅತ್ಯಂತ ಹಿರಿಯ ಸದಸ್ಯರಾಗಿದ್ದರು.

ಶಾಮನೂರು ಶಿವಶಂಕರಪ್ಪ ಅವರು ವಿಧಾನಸಭೆಗೆ ಆರು ಸಲ ಶಾಸಕರಾಗಿ, ಒಮ್ಮೆ ಸಂಸದರಾಗಿ ಆಯ್ಕೆಯಾಗಿದ್ದಾರೆ. 1997ರಲ್ಲಿ ದಾವಣಗೆರೆ ಲೋಕಸಭೆ ಮಧ್ಯಂತರ ಚುನಾವಣೆಯಲ್ಲಿ ಸೋಲು ಕಂಡಿದ್ದರು. ಐದು ದೇಶಕದ ರಾಜಕೀಯ ಜೀವನದಲ್ಲಿ ಒಂದು ಬಾರಿ ಸೋಲನ್ನಪ್ಪಿದ್ದಾರೆ. 1994, 2004, 2008, 2013, 2018, 2023 ರಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದರು.

# ಉತ್ತರ ನಗರ ಪಾಲಿಕೆ ಸಾಮೂಹಿಕ ಸ್ವಚ್ಛತಾ ಕಾರ್ಯ – ಒಟ್ಟು 1350 ಟನ್ ತ್ಯಾಜ್ಯ ತೆರವು

**ಬೆಂಗಳೂರು :** ಬೆಂಗಳೂರು ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಗರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಉದ್ದೇಶದಿಂದ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು 14ನೇ ಡಿಸೆಂಬರ್, 2025 ರಂದು ಬೆಳಿಗ್ಗೆ 07.00ಗಂಟೆ ಇಂದ ಸಂಜೆ 4:00ರವರೆಗೆ ನಡೆಸಲಾಯಿತು.

ನಗರ ಪಾಲಿಕೆಯ ಆಯುಕ್ತರಾದ ಶ್ರೀ ಪೊಮ್ಮಲ ಸುನೀಲ್ ಕುಮಾರ್* ಅವರ ನೇತೃತ್ವದಲ್ಲಿ ಸಾಮೂಹಿಕ ಸ್ವಚ್ಛತಾ ಕಾರ್ಯವನ್ನು ನಡೆಸಿದ್ದು, ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಅವರು ಸ್ಥಳಕ್ಕೆ ಭೇಟಿ ನೀಡಿ ಸ್ವಚ್ಛತಾ ಅಭಿಯಾನವನ್ನು ಪರಿಶೀಲಿಸಿ, ಅಗತ್ಯ ಸೂಚನೆಗಳನ್ನು ನೀಡಿದರು.

ಸ್ವಚ್ಛತಾ ಕಾರ್ಯವನ್ನು ನಾಗವಾರ ಜಂಕ್ಷನ್ ಇಂದ ಹೆಬ್ಬಾಳ ಜಂಕ್ಷನ್ (ಹೊರವರ್ತುಲ ರಸ್ತೆ) ಇಂದ ಅಲ್ಲಾಳಸಂದ್ರ ಬ್ರಿಜ್* ವರೆಗೆ ನಡೆಸಿದ್ದು, ಸದರಿ ಕಾರ್ಯದಲ್ಲಿ ಮೆಟ್ರೋ, ಓಊಂಖ, ಬಿ–ಸ್ಮೈಲ್, ಜಲಮಂಡಳಿ, ಬೆಸ್ಕಾಂ, ಸದರಿ ರಸ್ತೆಯ ಸುತ್ತ ಮುತ್ತಲಿರುವ ವಾಣಿಜ್ಯ ಮಳಿಗೆ ಮತ್ತು ಉದ್ದಿಮೆದಾರರು ಹಾಗೂ ಸ್ಥಳೀಯ ಸಂಘಟನೆಗಳು ಭಾಗವಹಿಸಿದ್ದವು.

ಈ ಕಾರ್ಯದಲ್ಲಿ ಟ್ರ್ಯಾಕ್ಟರ್, ಜೆಸಿಬಿ ಸೇರಿದಂತೆ ಇತರೆ ಯಂತ್ರೋಪಕರಣಗಳನ್ನು ಬಳಸಿ, ಸಿಬ್ಬಂದಿಗಳನ್ನು ತೊಡಗಿಸಿಕೊಂಡು ಡೆಬ್ರಿಸ್, ರಸ್ತೆ ಇಕ್ಕೆಲಗಳಲ್ಲಿನ ತ್ಯಾಜ್ಯ ಮತ್ತು ಅನುಪಯುಕ್ತ ಗೃಹೋಪಯೋಗಿ ವಸ್ತುಗಳು, ಕಟ್ಟಡ ಭಗ್ನಾವಶೇಷಗಳನ್ನು ತೆರವುಗೊಳಿಸಲಾಯಿತು.

**ಅಲ್ಲದೇ, ಸ್ವಚ್ಚತಾ ಕಾರ್ಯದ ವೇಳೆ**

ಮಹೇಂದ್ರ ಶೋ ರೂಂ ಎದುರು ಪಾದಚಾರಿ ಮಾರ್ಗವನ್ನು ಅನಧಿಕೃತವಾಗಿ



ಒತ್ತುವರಿ ಮಾಡಿಕೊಂಡು ನಡೆಸುತ್ತಿದ್ದ ಸುಮಾರು 40 ಅಂಗಡಿ ಮುಂಗಟ್ಟುಗಳನ್ನು ತೆರವು ಗೊಳಿಸಿ ಪಾದಚಾರಿ ಮಾರ್ಗವನ್ನು ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಯಿತು ಹಾಗೂ ಪುನಃ ಒತ್ತುವರಿ ಮಾಡದಂತೆ ತಿಳಿಸಲಾಯಿತು.

ಸ್ವಚ್ಛತಾ ಕಾರ್ಯದ ವೇಳೆ ಕಳೆದ ಒಂದು ವಾರದಿಂದ ಪ್ರತಿದಿನ 150 ಕ್ಕೂ ಹೆಚ್ಚು ಪೌರಕಾರ್ಮಿಕರು, 6 ಜೆಸಿಬಿ, 17 ಟ್ರ್ಯಾಕ್ಟರ್ ಹಾಗೂ 8 ಟಿಪ್ಪರ್ ಮತ್ತು ಕಾಂಪ್ಯಾಕ್ಟರ್ ಗಳನ್ನು ಬಳಸಿ ಕನ್ಸ್ಟ್ರಕ್ಷನ್ ಡೆಬ್ರಿಸ್ ಹಾಗೂ ಇತರೆ ತ್ಯಾಜ್ಯಗಳು ಸೇರಿ ಒಟ್ಟು 1200 ಟನ್ ನಷ್ಟು ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ವಾರ್ಡ್ 14ರ ದಾಸರಹಳ್ಳಿ ವಿಭಾಗದ ಸಾಮೂಹಿಕ ಸ್ವಚ್ಛತಾ ಕಾರ್ಯದಲ್ಲಿ 150 ಟನ್ ತ್ಯಾಜ್ಯ ತೆರವು ಮತ್ತು 80 ಮೀಟರ್ ಉದ್ದದ ಪಾದಾಚಾರಿ ಮಾರ್ಗ ಸೌಂದರೀಕರಣ

ಕಳೆದ ಒಂದು ವಾರದ ಅವಧಿಯಲ್ಲಿ ದಾಸರಹಳ್ಳಿ ವಿಭಾಗದ ಪೌರಕಾರ್ಮಿಕರು ಮತ್ತು ಸ್ವಚ್ಛತಾ ಸಿಬ್ಬಂದಿಗಳು ಯೂತ್ ಫಾರ್ ಪರಿವರ್ತನ ಸಂಸ್ಥೆಯ 100 ಜನ ಸ್ವಯಂಸೇವಕರ ಸಹಕಾರದೊಂದಿಗೆ ಸಾಮೂಹಿಕ ಸ್ವಚ್ಛತಾ ಕಾರ್ಯವನ್ನು ಕೈಗೊಂಡು, ಕಸದ ಬ್ಲಾಕ್ ಸ್ಪಾಟ್ ಗಳನ್ನು ತೆರವುಗೊಳಿಸಿ, 80 ಮೀಟರ್ ಉದ್ದದ ಪಾದಚಾರಿ ಮಾರ್ಗ ಸೌಂದರೀಕರಣಗೊಳಿಸುವುದರೊಂದಿಗೆ ಸುಮಾರು 130 ಟನ್ ಕಟ್ಟಡ ಬಗ್ನಾವಶೇಷಗಳು ಸೇರಿದಂತೆ 20 ಟನ್ ತ್ಯಾಜ್ಯಸೇರಿ ಒಟ್ಟು 150 ಟನ್ ತ್ಯಾಜ್ಯ ವಿಲೇವಾರಿ ಮಾಡಲಾಗಿರುತ್ತದೆ.

ಈ ಕಾರ್ಯಾಚರಣೆಯ ಮೂಲಕ ಸಾರ್ವಜನಿಕರಲ್ಲಿ ಮತ್ತು ಬೀದಿಬದಿಯ ವ್ಯಾಪಾರಿಗಳು, ವಾಣಿಜ್ಯ ಮಳಿಗೆ & ಉದ್ದಿಮೆದಾರರಲ್ಲಿ ಪಾದಚಾರಿ ಮಾರ್ಗ, ರಸ್ತೆ, ಸುತ್ತಮುತ್ತಲು ಇರುವ ಸ್ಥಳಗಳ ಸ್ವಚ್ಛತೆಯನ್ನು ಸುಧಾರಿಸುವುದು ಮತ್ತು ಕಾಪಾಡುವುದು, ಪರಿಸರ ಸಂರಕ್ಷಣೆ ಹಾಗೂ ನಾಗರಿಕರಲ್ಲಿ ಸ್ವಚ್ಛತಾ ಅಭ್ಯಾಸಗಳನ್ನು ಉತ್ತೇಜಿಸಲಾಯಿತು.

ಈ ಕಾರ್ಯದಲ್ಲಿ ಜಂಟಿ ಆಯುಕ್ತರಾದ ಮೊಹಮ್ಮದ್ ನಯೀಮ್ ಮೊಮಿನ್, ಶ್ರೀಮತಿ ಪಲ್ಲವಿ, ಘನತ್ಯಾಜ್ಯ ವಿಭಾಗದ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಹಾಯಕ ಅಭಿಯಂತರರು, ಕಿರಿಯ ಆರೋಗ್ಯ ಪರಿವೀಕ್ಷಕರು, ಪೌರಕಾರ್ಮಿಕರು ಹಾಗೂ ಮೇಲ್ವಿಚಾರಕರು ಸಕ್ರಿಯವಾಗಿ ಪಾಲ್ಗೊಂಡರು.

# ಹಾವೇರಿಯ ಹುಕ್ಕೇರಿ ಮಠದ ಶ್ರೀಗಳು ಸಮಾಜ ಶುದ್ದೀಕರಣ ಕ್ರಾಂತಿ ಮಾಡುತ್ತಿದ್ದಾರೆ: ಬಸವರಾಜ ಬೊಮ್ಮಾಯಿ

**ಹಾವೇರಿ:** ಹುಕ್ಕೇರಿ ಮಠದ ಶ್ರೀಗಳು ಸಮಾಜ ಶುದ್ದೀಕರಣ ಕ್ರಾಂತಿ ಮಾಡುತ್ತಿದ್ದಾರೆ. ಡಿ. 25 ರಿಂದ 30 ರ ವರೆಗೆ ನಡೆಯುವ ಜಾತ್ರಾ ಮಹೋತ್ಸವಕ್ಕೆ ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ವಿ. ಸೋಮಣ್ಣ, ಮೈಸೂರಿನ



ಒಡೆಯರಾದ ಸಂಸದ ಯದುವೀರ್ ಒಡರಯರ್ ಭಾಗವಹಿಸುತ್ತಿದ್ದಾರೆ. ಇದು ಐತಿಹಾಸಿಕ ಕಾರ್ಯಕ್ರಮ ಆಗಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿಯ ಹುಕ್ಕೇರಿ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು,

ಹುಕ್ಕೇರಿ ಮಠದ ಆಶ್ರಯದಲ್ಲಿ ನಡೆಯುತ್ತಿರುವ ಎಲ್ಲ ವಿದ್ಯಾಕೇಂದ್ರ, ಶಾಲೆಗಳ ಸುವರ್ಣ ಮಹೋತ್ಸವ. ನಾಡಿನ ಈ ಭಾಗದಲ್ಲಿ ಐವತ್ತು ವರ್ಷ ಸುದೀರ್ಘವಾಗಿ ಜಾತಿ ಭೇದ ಇಲ್ಲದೇ ಎಲ್ಲ ಸಮುದಾಯದ ಮಕ್ಕಳಿಗೆ ಶಿಕ್ಷಣ ಕೊಟ್ಟು ಸುಸಂಸ್ಕೃತ ವಾದ ವಿದ್ಯಾವಂತ ಸಮುದಾಯವನ್ನು ನಿರ್ಮಿಸಲು ಮಾಡಿರುವ ಸುದೀರ್ಘ ತಪಸ್ಸಿನ ಯಶಸ್ಸಿನ ಆಚರಣೆಯೇ ಸುವರ್ಣ ಮಹೋತ್ಸವ. ವಿದ್ಯಾರ್ಥಿ ನಿಲಯ ಉದ್ಘಾಟನೆ, ಭಕ್ತಿಯ ಗುರುವಂದನೆ, ಪರಮ ಪೂಜ್ಯರ ತುಲಾಭಾರ, ಇವೆಲ್ಲವನ್ನು ಭಕ್ತರು ಭಕ್ತಿ ಭಾವದ ಭಾವನೆ ಸಮರ್ಪಣೆಗೆ ಈ ಕಾರ್ಯಕ್ರಮ ಇಟ್ಟುಕೊಂಡಿದ್ದಾರೆ ಎಂದು ಹೇಳಿದರು.

**ಒಂದು ತಿಂಗಳಿಂದ ಕಾರ್ಯಕ್ರಮ**

ಹುಕ್ಕೇರಿ ಮಠದ ಶ್ರಿಗಳದ್ದು ಗಾಂಭಿರ್ಯದ ಸಾಧನೆಯ ವ್ಯಕ್ತಿತ್ವ ಅದಕ್ಕಾಗಿ ಧರ್ಮ ಜಾಗೃತಿಯ ಜೊತೆಗೆ ಯುವಕರಲ್ಲಿ ಶ್ರದ್ಧಾ ಭಾವನೆ ಮೂಡಿಸಿ ಅವರಲ್ಲಿರುವ ದುಶ್ಚಟ, ಕೆಟ್ಟ ವಿಚಾರ ಹೋಗಲಾಡಿಸಿ ಅವರ ಬದುಕು ಶುದ್ದವಾಗಬೇಕು ಬರುವಂತ ದಿನಗಳಲ್ಲಿ ಈ ಭಾಗದ ಜನರು ನೆಮ್ಮದಿಯಿಂದ ಬದುಕುವಂತೆ ಮಾಡಲು ಒಂದು ತಿಂಗಳಿಂದ ಕಾರ್ಯಕ್ರಮ ಮಾಡುತ್ತಿದ್ದಾರೆ. ಸಮಾಜ ಶುದ್ದೀಕರಣ ಕ್ರಾಂತಿಯನ್ನು ಹುಕ್ಕೇರಿ ಮಠದ ಶ್ರೀಗಳು ತೆಗೆದುಕೊಂಡಿದ್ದಾರೆ. ಆಧುನಿಕತೆಯ ಪ್ರಭಾವದಲ್ಲಿ ನಮ್ಮತನ, ನಮ್ಮ ಸಂಸ್ಕಾರ, ನಮ್ಮ ಅಸ್ತಿತ್ವವನ್ನೆ ಮುಳುಗಿಸುವ ಪ್ರಭಾವದಿಂದ ಪ್ರಕೃತಿಯೇ ಕೆಟ್ಟು ಹೋಗುವ ಪರಿಸ್ಥಿತಿ ಇದೆ. ಶೇಗುಣಸಿ, ಅಕ್ಕಿ ಆಲೂರು ಸೇರಿ ಎಲ್ಲ ಗುರುಗಳನ್ನು ಕರೆಸಿದ್ದಾರೆ. ಈ ಪ್ರವಚನ ನಿರಂತರ ನಡೆಯುತ್ತಿದೆ ಪ್ರತಿ ದಿನ ಎಂಟರಿಂದ ಹತ್ತು ಸಾವಿರ ಜನ ಸೇರುತ್ತಿದ್ದಾರೆ ಜನರಲ್ಲಿ ಬಕ್ತಿ ಭಾವ ಸಮೂಹವಾಗಿ ವ್ಯಕ್ತ ಆಗುತ್ತಿದೆ. ನಮ್ಮ ದಿನನಿತ್ಯದ ಚಟುವಟಿಕೆತಳಲ್ಲಿ ಅಳವಡಿಸಿಕೊಂಡಾಗ ನಮ್ ಸಂಸ್ಕೃತಿ ಆಗುತ್ತದೆ. ನಾಗರಿಕತೆ ಮತ್ತು ಸಂಸ್ಕೃತಿ ನಡುವಿನ ವ್ಯತ್ಯಾಸ ಜನರು ಮರೆತಿದ್ದಾರೆ. ನಮ್ಮ ಬಳಿ ಏನಿದೆಯೊ ಅದು ನಾಗರಿಕತೆ, ನಾವೇನಾಗಿದ್ದೇವೊ ಅದು ಸಂಸ್ಕೃತಿ ಎಂದರು.

**ಐತಿಹಾಸಿಕ ಕಾರ್ಯಕ್ರಮ**

ಇದು ಐತಿಹಾಸಿಕ ಕಾರ್ಯಕ್ರಮ ಆಗಲಿದೆ. ಹುಕ್ಕೇರಿ ಮಠದ ಶ್ರೀಗಳು ಬೆಳ್ಳಿ ತುಲಾಭಾರವನ್ನು ವಿದ್ಯಾರ್ಥಿಗಳ ಪ್ರಸಾದ ಕ್ಕೆ ನೀಡುತ್ತಿದ್ದಾರೆ. ಅವರು ಯಾವುದನ್ನೂ ಇಟ್ಟುಕೊಂಡಿಲ್ಲ.

ಮಠ ಮಾನ್ಯಗಳು ರಾಜ್ಯದಲ್ಲಿ ದೊಡ್ಡ ಪಾತ್ರ ವಹಿಸುತ್ತಿವೆ ಸಂಕಷ್ಟದ ಪರಿಸ್ಥಿತಿಯಲ್ಲಿ ಮಠಗಳು ಮಾರ್ಗದರ್ಶನ ಮಾಡುತ್ತಿವೆ ಹುಕ್ಕೇರಿ ಮಠ ಇಡಿ ಉತ್ತರ ಕರ್ನಾಟಕ ಕ್ಜೆ ಮಾರ್ಗರ್ಶಕ ಮಠ ಆಗುತ್ತದೆ ಎನ್ನುವ ವಿಶ್ವಾದ ಇದೆ ಎಂದು ಹೇಳಿದರು.



ಸಚಿವರಾದ ಆರ್ ಬಿ ತಿಮ್ಮಾಪುರ, ಮಾಂಕಾಳ ವೈದ್ಯ, ಮಾಜಿ ಸಚಿವ ತನ್ವಿರ್ ಸೇಠ್, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಆನೇಕಲ್ ಶಿವಣ್ಣ, ಎ ಸಿ ಶ್ರೀನಿವಾಸ್, ಪ್ರದೀಪ್ ಈಶ್ವರ್, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಮ್ ಅಹ್ಮದ್, ಎಂಎಲ್ಸಿಗಳಾದ ಪುಟ್ಟಣ್ಣ, ಮಂಜುನಾಥ್ ಭಂಡಾರಿ, ವಸಂತಕುಮಾರ್, ಬಸನಗೌಡ ಬಾದರ್ಲಿ, ಶ್ರೀನಿವಾಸ್, ಮಾಜಿ ಎಂಎಲ್ಸಿ ಯು ಬಿ ವೆಂಕಟೇಶ್ ಮತ್ತಿತರರು ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ಕರ್ನಾಟಕ ಭವನದಲ್ಲಿ ಭಾನುವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಅವರ ಜತೆ ಡಿಸಿಎಂ ಅವರು ಉಪಾಹಾರ ಸೇವಿಸಿದರು.

# ಲಯನ್ಸ್ ಪ್ರಾಂತೀಯ 2ರ ಸಮ್ಮೇಳನದಲ್ಲಿ 20 ಲಕ್ಷಕ್ಕೂ ಹೆಚ್ಚಿನ ಸೇವಾ ಕಾರ್ಯನಡೆಯಿತು

**ಬೆಂಗಳೂರು ಡಿ.14 :** ಅಂತರಾಷ್ಟ್ರೀಯ ಲಯನ್ಸ್ ಸಂಸ್ಥೆ ಜಿಲ್ಲಾ 317ಜಿ ನ ಪ್ರಾಂತೀಯ 2ರ ಸಂಯುಕ್ತ 2025 ನೇ ಸಮ್ಮೇಳನ ಬೆಂಗಳೂರಿನ ಯಶವಂತಪುರದಲ್ಲಿರುವ ಆರ್. ಜಿ. ರಾಯಲ್ ಹೋಟೆಲ್ ಸಭಾಂಗಣದಲ್ಲಿ ನಡೆಯಿತು.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಶೇಷಾದ್ರಿಪುರಂ ಕಾಲೇಜ್ ನ ಕಾರ್ಯದರ್ಶಿ ನಾಡೋಜ ಡಾ: ವುಡೇ ಪಿ. ಕೃಷ್ಣ ರವರು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡುತ್ತಾ ಅಂತರಾಷ್ಟ್ರೀಯ ಮಟ್ಟದಲ್ಲಿ ಲಯನ್ ಸಂಸ್ಥೆ ಅನೇಕ ಸೇವಾ ಕಾರ್ಯಗಳನ್ನು ಮಾಡುತ್ತಿದ್ದು, ಅದರಲ್ಲೂ ಆರೋಗ್ಯದ ಬಗ್ಗೆ ಹೆಚ್ಚು ಕಾಲಜೀ ವಹಿಸಿ, ಪ್ರತಿದಿನ ಆರೋಗ್ಯ ಶಿಬಿರಗಳನ್ನು ನಡೆಸುತ್ತಿದ್ದು ಬಡವರಿಗೆ ಅನೇಕ ಸೇವಾ ಕಾರ್ಯ ಮಾಡುತ್ತಿದೆ ಎಂದು ತಮ್ಮ ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿವೃತ್ತ ಐ.ಪಿ.ಎಸ್. ಪೊಲೀಸ್ ಅಧಿಕಾರಿ ಭಾಸ್ಕರ್ ರಾವ್ ಮಾತನಾಡುತ್ತಾ ಎಲ್ಲಿ ಸೇವೆ ನಡೆಯುತ್ತಿದೆಯೋ ಅಲ್ಲಿ ಲಯನ್ಸ್ ಸಂಸ್ಥೆ ಇರುತ್ತದೆ. ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಜೊತೆ ಲಯನ್ ಸಂಸ್ಥೆ ಹಾಗೂ ಇತರ ಸಂಘ ಸಂಸ್ಥೆಗಳು ಕೈಜೋಡಿಸಿ ಬಡವರಿಗೋಸ್ಕರ ಇಂತಹ ಅನೇಕ ಸೇವಾ ಕಾರ್ಯಗಳನ್ನು ಮಾಡುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂತೀಯ ಅಧ್ಯಕ್ಷ ಡಬ್ಲ್ಯೂ. ಡಿ. ವಿಜಯಕುಮಾರ್ ಈ ಸಂದರ್ಭದಲ್ಲಿ ಪ್ರಾಂತೀಯ ಸಮ್ಮೇಳನದ ಅಂಗವಾಗಿ 20 ಲಕ್ಷಕ್ಕೂ ಹೆಚ್ಚಿನ ಸೇವಾ ಕಾರ್ಯಕ್ಕೆ ಚಾಲನೆ ನೀಡಿದರು.

ಇದರಲ್ಲಿ ಮುಖ್ಯವಾಗಿ ವಿಜಯನಗರ ಲಯನ್ ಸಂಸ್ಥೆ ಹಾಗೂ ಲಯನ್ ಸತ್ಯನಾರಾಯಣ ರವರು 4 ಲಕ್ಷ ರೂಗಳ ಮೌಲ್ಯದ ಪರಿಸರ ಬಹುಪಯೋಗಿ ವಾಹನವನ್ನು ಮಾತೃಶ್ರೀ ಮನೋವಿಕಾಸ ಕೇಂದ್ರಕ್ಕೆ ನೀಡಿದರು.

ಬರ್ಡ್ಸ್ ಪ್ಯಾರಡೈಸ್ ಲಯನ್ ಸಂಸ್ಥೆಯ ದೀಪ ಎಸ್. ಅಯ್ಯಂಗಾರ್ ರವರು ಎಲ್. ಡಿ. ಎಸ್. ಎಫ್. ಜೊತೆ ಸೇರಿ 4 ಲಕ್ಷ ರೂಗಳ ಎಲೆಕ್ಟ್ರಿಕ್ ಆಟೋವನ್ನು ವಿಧವಾ ಮಹಿಳೆಗೆ ವಿತರಿಸಿದರು.

ಮಾತೃಶ್ರೀ ಮನೋವಿಕಾಸ ಕೇಂದ್ರಕ್ಕೆ ದಿನಸಿ




ಪದಾರ್ಥಗಳು ಹಾಗೂ ಬಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಿದರು. ಮಾಗಡಿ ರಸ್ತೆಯ ಶ್ರೀ ಅಂದಾಲಮ್ಮ ಮಠದ ಶಾರದಾ ಕ್ರಿಯಾ ಕೇಂದ್ರಕ್ಕೆ ನಾಲ್ಕು ಲಕ್ಷ ವೆಚ್ಚದಲ್ಲಿ ಶೌಚಾಲಯವನ್ನು ನಿರ್ಮಿಸಿ ಕೊಟ್ಟರು. ಕನಕನಗರ ಲಯನ್ ಸಂಸ್ಥೆಯ ವಿಜಯಕುಮಾರ್ ಮೆನನ್ ರವರು ತ್ರಿನೀತಿ ಮೆಟ್ರೋ ನಿಲ್ದಾಣದಲ್ಲಿ 2 ಲಕ್ಷ ರೂ ವೆಚ್ಚದಲ್ಲಿ ಮಕ್ಕಳಿಗೆ ಹಾಲುಣಿಸುವ ಕೇಂದ್ರವನ್ನು ನಿರ್ಮಿಸಿ ಕೊಟ್ಟಿದ್ದಾರೆ. ಲಯನ್ ಸಿ. ವಿ. ಗೀತಾ ರವರು ಕಿದ್ವಾಯಿ ಆಸ್ಪತ್ರೆಯ ಒಳ ರೋಗಿಗಳಿಗೆ 28 ಸಾವಿರ ರೂಗಳ ಔಷಧಿ ವಿತರಿಸಿದರು. ಈ ರೀತಿ ಲಯನ್ಸ್ ಸಂಸ್ಥೆಯ ವತಿಯಿಂದ ಇನ್ನೂ ಅನೇಕ ಸೇವಾ ಕಾರ್ಯಗಳನ್ನು ಪ್ರಾಂತೀಯ ಇತರ ಲಯನ್ ಸಂಸ್ಥೆಯ ಜೊತೆಗೂಡಿ ವಿತರಿಸಲಾಯಿತು. ಇದರ ಜೊತೆಗೆ ಅನೇಕ ಆರೋಗ್ಯ ಶಿಬಿರಗಳನ್ನು ಏರ್ಪಡಿಸಿ ಉಚಿತ ಔಷಧಿ ಮಾತ್ರೆಗಳನ್ನು ವಿತರಿಸಲಾಯಿತು. ಈ ಸಮಾರಂಭದಲ್ಲಿ ಲಯನ್ ಜಿಲ್ಲಾ ಗವರ್ನರ್ ಆಕಾಶ್ ಎ. ಸುವರ್ಣ, ಮಾಜಿ ಜಿಲ್ಲಾ ಗವರ್ನರ್ ಗಳಾದ ಸಿ.ಎಂ. ನಾರಾಯಣಸ್ವಾಮಿ, ಎಂ. ಅಶ್ವ ತಯ್ಯ, ಕೆ .ಎಲ್. ಸುಬ್ರಹ್ಮಣ್ಯಂ, ಜಿಲ್ಲಾ ಉಪ ರಾಜ್ಯಪಾಲರು, ವಲಯ ಅಧ್ಯಕ್ಷರಾದ ವಿ. ಗೋಪಾಲ್, ಡಿ.ಪ್ರಭಾಕರ್, ದೀಪ ಎಸ್. ಅಯ್ಯಂಗಾರ್, ಮಾಜಿ ಗವರ್ನರ್ ಗಳು, ಅನೇಕ ಕ್ಯಾಬಿನೆಟ್ ಸದಸ್ಯರು, ಪ್ರಾಂತೀಯ ಲಯನ್ ಸಂಸ್ಥೆಯ ಅಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು

# ಆರೋಗ್ಯ ಶಿಬಿರವನ್ನು ಸದುಪಯೋಗ ಮಾಡಿಕೊಳ್ಳಿ: ಶಾಸಕ ಗೋಪಾಲಯ್ಯ ಸಲಹೆ

**ಬೃಹತ್ ಆರೋಗ್ಯ ತಪಾಸಣಾ ಶಿಬಿರ**

**ಬೆಂಗಳೂರು:** ಮನುಷ್ಯನಿಗೆ ಆರೋಗ್ಯ ಬಹಳ ಮುಖ್ಯ ಆರೋಗ್ಯಕ್ಕೆ ಮೊದಲ ಆದ್ಯತೆ ನೀಡುವುದು ಅತ್ಯಗತ್ಯ. ಹಾಗಾಗಿ ಎಲ್ಲರೂ ಆರೋಗ್ಯ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಮಾಜಿ ಸಚಿವ



ಹಾಗೂ ಹಾಲಿ ಶಾಸಕ ಕೆ ಗೋಪಾಲಯ್ಯ ಸಲಹೆ ನೀಡಿದರು.

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಕುರುಬರಹಳ್ಳಿ ಆತ್ರೇಯ ಶಾಲೆಯ ಆವರಣದಲ್ಲಿ ಹಿರಿಯ ನಾಗರೀಕರಿಗಾಗಿ ವಿಶೇಷವಾಗಿ ಆಯೋಜಿಸಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಇಂದಿನ ಆರೋಗ್ಯ ತಪಾಸಣಾ ಶಿಬಿರದಲ್ಲಿ ಬಿ.ಪಿ, ಶುಗರ್, ಕಂಪ್ಲೀಟ್ ಬ್ಲಡ್ ಟೆಸ್ಟ್, ಇಸಿಜಿ, ಎಕೊ, ಕಣ್ಣಿನ ಪೊರೆಯಿರುವವರಿಗೆ ಉಚಿತ ಶಸ್ತ್ರಚಿಕಿತ್ಸೆ ಸೇರಿದಂತೆ ಇನ್ನೂ ಹಲವು ಸೌಲಭ್ಯ ಹಾಗೂ ತಪಾಸಣೆಯನ್ನು ಮಾಡಲಾಗುತ್ತಿದೆ. ಈ ಶಿಬಿರದಲ್ಲಿ ವಯಸ್ಕ ದಂಪತಿಗಳಿಬ್ಬರೂ ಪಾಲ್ಗೊಂಡು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ ಶಿಬಿರವನ್ನು ಎಲ್ಲರೂ ಸದ್ಬಳಕೆ ಮಾಡಿಕೊಂಡು ಆರೋಗ್ಯವನ್ನು ಕಾಪಾಡಿಕೊಂಡು ಉತ್ತಮ ಜೀವನ ನಡೆಸಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಬಿಬಿಎಂಪಿ ಮಾಜಿ ಉಪಮೇಯರ್ ಹೇಮಲತಾ ಗೋಪಾಲಯ್ಯ, ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯ ಡಾ.ಮಂಜುನಾಥ್ ಗೌಡ, ಶ್ರೀ ಮಹಾಲಕ್ಷ್ಮಿ ಎಜುಕೇಷನ್ ಟ್ರಸ್ಟ್ ನ ಅಧ್ಯಕ್ಷ ಜಯರಾಮ್, ಮಂಡಲದ ಅಧ್ಯಕ್ಷ ಡಾ.ನಾಗೇಂದ್ರ, ಕಾರ್ಯದರ್ಶಿಗಳಾದ ನಿಸರ್ಗ ಜಗದೀಶ್, ಅವಿನ್ ಆರಾಧ್ಯ, ವಾರ್ಡ್ ಅಧ್ಯಕ್ಷ ಮಂಜುನಾಥ್, ಸ್ಥಳೀಯ ಮುಖಂಡರಾದ ವೆಂಕಟೇಶ್, ಶ್ರೀನಿವಾಸ್, ವೆಂಕಟೇಶ್ ಮೂರ್ತಿ, ಶಿವಾನಂದಮೂರ್ತಿ, ಗಂಗಾ ಹನುಮಯ್ಯ, ಹಾಗೂ ಇತರರು ಹಾಜರಿದ್ದರು.

# "ಈ ಮೂರ್ಖರಿಂದ ಏನನ್ನೂ ನಿಭಾಯಿಸಲು ಸಾಧ್ಯವಿಲ್ಲ" ನಟ ಕಿಶೋರ್!

ಜೈ ಶ್ರೀ ರಾಮ್‌ನಿಂದ ವಂದೇ ಮಾತರಂ ವರೆಗೆ .. ಎನ್ನುವ ಶೀರ್ಷಿಕೆಯೊಂದಿಗೆ ನಟ ಕಿಶೋರ್ ಅವರು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿರುವ ಬರಹವು ಇದೀಗ ಮಿಶ್ರ ಪ್ರತಿಕ್ರಿಯೆಗೆ ಕಾರಣವಾಗಿದೆ.

ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಬಿಜೆಪಿ ಸರ್ಕಾರವನ್ನು ಗುರಿಯಾಗಿಸಿಕೊಂಡು ನಟ ಕಿಶೋರ್ ಅವರು ಈ ಟ್ವೀಟ್ ಮಾಡಿದ್ದಾರೆ. ಈ ಹೊತ್ತಿಗೆ ನಾವು ಅರ್ಥಮಾಡಿಕೊಂಡಿರಬೇಕಿತ್ತು ಈ ಮೂರ್ಖರಿಂದ



ಏನನ್ನೂ ನಿಭಾಯಿಸಲು ಸಾಧ್ಯವಿಲ್ಲವೆಂದು... ಅವರು ಮಾಡಬಹುದಾದದ್ದು ಇಷ್ಟೇ ವಿಭಜಿಸು ಇಲ್ಲ ದಿಕ್ಕು ತಪ್ಪಿಸುವುದು ಎಂದು ನಟ ಕಿಶೋರ್ ಹೇಳಿದ್ದಾರೆ.

ಇತರರನ್ನು ಪ್ರೀತಿಯಿಂದ ಸ್ವಾಗತಿಸಲು ಬಳಸುತ್ತಿದ್ದ ಅಭಿವ್ಯಕ್ತಿಯನ್ನು ಹೇಗೆ ಸ್ವಾಧೀನಪಡಿಸಿಕೊಂಡು ಅದನ್ನು ಯುದ್ಧಘೋಷವಾಗಿ, ಮುಸ್ಲಿಮರ ವಿರುದ್ಧ ದ್ವೇಷದ ಅಸ್ತ್ರವಾಗಿ, ಅಧಿಕಾರ ಹಿಡಿಯುವ ಸುಲಭ ಸಾಧನವಾಗಿ ಪರಿವರ್ತಿಸಲಾಗಿದೆಯೋ ಹಾಗೆಯೇ, ಸ್ವಾತಂತ್ರ್ಯ ಹೋರಾಟದಲ್ಲಿ ಯಾವುದೇ ಪಾತ್ರವಿಲ್ಲದ, ನಿಜವಾದ ದೇಶಭಕ್ತರು ನಿರ್ಮಿಸಿದ ಎಲ್ಲವನ್ನೂ ಮಾರುತ್ತಿರುವ ಅಧಿಕಾರದಲ್ಲಿರುವ ನಿಷ್ಪ್ರಯೋಜಕ ಜನರು ಈಗ ನಮ್ಮ ಸ್ವಾತಂತ್ರ್ಯ ಹೋರಾಟಗಾರರು ಬಳಸಿದ ಹಾಡನ್ನು. ಕಾಲಾಂತರದಲ್ಲಿ ಕೋಮು ಪಕ್ಷಪಾತದ ಕಾದಂಬರಿ ಆನಂದ ಮಠಕ್ಕೆ ತಳಕು ಹಾಕಿಕೊಂಡರೂ ಸಹ, ಸ್ವಾತಂತ್ರ್ಯ ಹೋರಾಟಕ್ಕೆ ಜೀವ ತುಂಬಿದ ಮತ್ತು ಭಾರತದಾದ್ಯಂತ ಜನರನ್ನು ಒಗ್ಗೂಡಿಸಿದ ಹಾಡನ್ನು ಧಾರ್ಮಿಕ ಆಧಾರದ ಮೇಲೆ ದೇಶವನ್ನು ವಿಭಜಿಸಲು, ತಮ್ಮ ರಾಜಕೀಯ ಲಾಭಕ್ಕೆ ಬಳಸಲು ಪ್ರಯತ್ನಿಸುತ್ತಿದ್ದಾರೆ. ಕುಸಿಯುತ್ತಿರುವ ರೂಪಾಯಿ ಮೌಲ್ಯ, ಆರ್ಥಿಕತೆ ಮತ್ತು ಕುಸಿಯುತ್ತಿರುವ ಪ್ರಜಾಪ್ರಭುತ್ವ ಸಂಸ್ಥೆಗಳು, ನಕಲಿ ಜಿಡಿಪಿ ಮತ್ತು ರೈತರಿಗೆ ನೀಡಿದ ನಕಲಿ ಭರವಸೆಗಳು, ಆರೋಗ್ಯ ಮತ್ತು ನಿರುದ್ಯೋಗ, ಅಮೆರಿಕ ಮತ್ತು ಚೀನಾ, ಮಣಿಪುರ ಮತ್ತು ಲಡಾಖ್, ವಿಜ್ಞಾನಿಗಳು ಮತ್ತು ವಿದ್ವಾಂಸರ ಅಕ್ರಮ ಬಂಧನಗಳು ಮುಂತಾದ ಎಲ್ಲಾ ಅಗತ್ಯ ಮತ್ತು ಗಂಭೀರ ಸಮಸ್ಯೆಗಳನ್ನು ನಿರ್ಲಕ್ಷಿಸಿ ಎಂದು ಟೀಕಿಸಿದ್ದಾರೆ.

ಸೋಷಿಯಲ್ ಮೀಡಿಯಾದಲ್ಲಿ ಮಿಶ್ರ ಪ್ರತಿಕ್ರಿಯೆ: ಇನ್ನು ನಟ ಕಿಶೋರ್ ಅವರು ಈಚೆಗೆ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿರುವ ಈ ಪೋಸ್ಟ್ ಸೋಷಿಯಲ್ ಮೀಡಿಯಾದಲ್ಲಿ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಸಿದ್ದೇಶ್ ಎನ್ನುವವರು, ಕೋಟಿ ಗಟ್ಟಲೆ ಖರ್ಚು ಮಾಡಿ ಅಧಿವೇಶನ ನಡೆಸ್ತಾರೆ. ಆದ್ರೆ ಚರ್ಚೆ ಆಗೋ ವಿಷಯ ಮಾತ್ರ ಬರಿ ಇಂತವೆ.....! ಬನ್ನಿ ಸಾರ್ ನಾವು ನೀವು Anti Nationalಗಳು ಪಕ್ಕದ ದೇಶಕ್ಕೆ ಹೋಗೋಣ. ಈ ದೇಶದ ಕಥೆ ಇಷ್ಟೇ ಎಂದು ಬೆಂಬಲ ಸೂಚಿಸಿದ್ದಾರೆ.

# ಜನರ ಅನುಕೂಲಕ್ಕಾಗಿ ನೂತನ ತೆರಿಗೆ ನೀತಿ ಜಾರಿ: ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶ ಉಜ್ವಲ್ ಭೂಯಾನ್

**ಬೆಂಗಳೂರು:** ಹೊಸ ತೆರಿಗೆ ಕಾಯ್ದೆ ಜಾರಿಗೆ ತರುತ್ತಿದ್ದು, ಇದರಲ್ಲಿ ಪಾರದರ್ಶಕತೆ ಮತ್ತು ಕಾರ್ಯಕ್ಷಮತೆಯಿಗಾಗಿ ತಂತ್ರಜ್ಞಾನ ಆಧಾರಿತ ಯೋಜನೆಗಳನ್ನು ಪರಿಚಯಿಸಲಾಗಿದೆ ಇದು ಸಾಮಾನ್ಯ ಜನರಿಗೆ ಬಹಳ ಅನುಕೂಲವಾಗಲಿದೆ ಎಂದು ಸುಪ್ರೀಂ ಕೋರ್ಟ್ ನ ನ್ಯಾಯಾಧೀಶ ಉಜ್ವಲ್ ಭೂಯಾನ್ ಹೇಳಿದರು.

ಆಲ್ ಇಂಡಿಯಾ ಫೆಡರೇಶನ್ ಆಫ್ ಟ್ಯಾಕ್ಸ್




ಪಾರ್ಟಿಸಿಪೆನ್ಸರ್, ಕರ್ನಾಟಕ ಸ್ಟೇಟ್ ಚಾರ್ಟೆಡ್ ಅಕೌಂಟ್ಸ್ ಅಸೋಸಿಯೇಷನ್ ಬೆಂಗಳೂರು ಬ್ರಾಂಚ್ ಆಫ್ ಎಸ್‌ಐಆರ್ ಸಿ ಆಫ್ ಐಸಿಎಐ ಸಂಯುಕ್ತ ಆಶ್ರಯದಲ್ಲಿ ಬೆಂಗಳೂರು ಅರಮನೆ ಮೈದಾನದಲ್ಲಿ ಆಯೋಜಿಸಿದ್ದ 28ನೇ ರಾಷ್ಟೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಆದಾಯ ತೆರಿಗೆ ಕಾಯ್ದೆ, 1961 ಅನ್ನು ಆರು ದಶಕಗಳ ನಂತರ ರದ್ದುಪಡಿಸಲಾಗಿದ್ದು, ಅದರ ಬದಲಿಗೆ ಆದಾಯ ತೆರಿಗೆ ಕಾಯ್ದೆ, 2025 ಜಾರಿಗೆ ಬರುತ್ತದೆ. ಇದು ಮುಂದಿನ ಏಪ್ರಿಲ್ ನಿಂದ ಜಾರಿಗೆ ಬರಲಿದೆ. ಅನುಸರಣೆ ಸರಳೀಕರಣ, ಡಿಜಿಟಲ್ ಪರಿವರ್ತನೆ ಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗುತ್ತಿದೆ.

ಮಾನವಪರವಾದ ಪಕ್ಷಪಾತವನ್ನು ಕಡಿಮೆ ಮಾಡಲು ಆದ್ಯತೆ ನೀಡಲಾಗುತ್ತಿದೆ. ಪಾರದರ್ಶಕತೆ ಮತ್ತು ಕಾರ್ಯಕ್ಷಮತೆಯಿಗಾಗಿ ತಂತ್ರಜ್ಞಾನ ಆಧಾರಿತ ಯೋಜನೆಗಳನ್ನು ಪರಿಚಯಿಸಲಾಗಿದೆ ಎಂದರು.

ವರ್ಚುವಲ್ ಡಿಜಿಟಲ್ ಆಸ್ತಿಗಳು ಮತ್ತು ಡಿಜಿಟಲ್ ಸ್ಪೇಸ್‌ಗೆ ವ್ಯಾಪಕ ವ್ಯಾಖ್ಯಾನಗಳನ್ನು ನೀಡಲಾಗಿದೆ. ಐಟಿಆರ್ ಫಾರ್ಮ್‌ಗಳು ಮತ್ತು ತ್ರೈಮಾಸಿಕ ಟಿಡಿಎಸ್ ಫಾರ್ಮ್‌ಗಳನ್ನು ಹೆಚ್ಚು ಸರಳ ಮತ್ತು ಸುಲಭವಾಗಿ ಅರ್ಥವಾಗುವಂತೆ ಮರು ವಿನ್ಯಾಸಗೊಳಿಸಲಾಗಿದೆ ಎಂದು ತಿಳಿಸಿದರು.

ಈ ತೆರಿಗೆ ಪಾರ್ಟಿಸಿಪೆನ್ಸರ್ ಮತ್ತು ಲೆಕ್ಕ ಪರಿಶೋಧಕರು ತೆರಿಗೆಯನ್ನು ಪಾವತಿಸಲು ಸಹಾಯ ಮಾಡುತ್ತಿದ್ದಾರೆ. ಇದರ ಜತೆಗೆ ತೆರಿಗೆ ವಂಚಿತರನ್ನು ಪತ್ತೆ ಹಚ್ಚುವ ಕೆಲಸ ಕೂಡ ಮಾಡುತ್ತಿರುವುದು ಖುಷಿ ವಿಚಾರ ಎಂದರು.

ಹೈಕೋರ್ಟ್ ನ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮಾತನಾಡಿ, ತೆರಿಗೆ ಸಂಗ್ರಹಣೆಯನ್ನು ಪಾರದರ್ಶಕವಾಗಿ ಮತ್ತು ಕಟ್ಟುನಿಟ್ಟಾಗಿ ವಸೂಲಿ ಮಾಡಿದ್ದೆ ಆದಲ್ಲಿ ನಮ್ಮ ದೇಶದ ಆರ್ಥಿಕ ಪರಿಸ್ಥಿತಿಯನ್ನು ಮತ್ತಷ್ಟು ಸುಧಾರಿಸಬಹುದಾಗಿದೆ. 2047 ರ ಅವಧಿಗೆ ನಮ್ಮ ದೇಶದ ಆರ್ಥಿಕತೆಯನ್ನು ಮತ್ತಷ್ಟು ಸದೃಢ ಮಾಡುವ ಜವಾಬ್ದಾರಿ ಎಲ್ಲರ ಮೇಲೆ ಇದೆ. ಇದು ನಮ್ಮ ದೇಶ ಎಂಬ ಅಭಿಯಾನ ಎಲ್ಲರ ಮೇಲು ಇರಬೇಕು ಎಂದರು.

ಆಲ್ ಇಂಡಿಯಾ ಫೆಡರೇಶನ್ ಆಫ್ ಟ್ಯಾಕ್ಸ್ ಪ್ರಾಕ್ಟಿಸ್ ನರ್ ಅಧ್ಯಕ್ಷರಾದ ಸಿಎ. ಎಸ್. ವೆಂಕಟರಮಣಿ ಮಾತನಾಡಿ, ಎಲ್ಲರೂ ನನ್ನ ಮೇಲೆ ನಂಬಿಕೆ ಇಟ್ಟು ಇಂದು ಅಧ್ಯಕ್ಷ ಸ್ಥಾನ ನೀಡಿದ್ದೀರಿ ನಿಮ್ಮ ನಂಬಿಕೆಯನ್ನು ಉಳಿಸಿಕೊಂಡು ಹೋಗುತ್ತೇನೆ. ನಾನು ಈ ಕ್ಷೇತ್ರದಲ್ಲಿ ಹಲವಾರು ಹುದ್ದೆಗಳನ್ನು ಅಲಂಕರಿಸಿದ್ದೇನೆ. ಜ್ಞಾನ ಮತ್ತು ವಿವಿಧ ಕಂಪನಿಗಳ ಜತೆಗೆ ಸಹಕಾರವನ್ನು ನಾನು ಬಯಸುತ್ತೇನೆ ಎಂದು ಭರವಸೆ ನೀಡಿದರು.

ಇದೇ ವೇಳೆ ಆಲ್ ಇಂಡಿಯಾ ಫೆಡರೇಶನ್ ಆಫ್ ಟ್ಯಾಕ್ಸ್ ಪ್ರಾಕ್ಟಿಸ್ ನರ್ ಅಧ್ಯಕ್ಷರಾಗಿ ನಿಯೋಜಿತ ಅಧ್ಯಕ್ಷರಾದ ಸಿಎ. ಎಸ್ . ವೆಂಕಟರಮಣಿ ಅಧಿಕಾರ ಸ್ವೀಕಾರ ಮಾಡಿದರು.

ಆಲ್ ಇಂಡಿಯಾ ಫೆಡರೇಶನ್ ಆಫ್ ಟ್ಯಾಕ್ಸ್ ಪ್ರಾಕ್ಟಿಸ್ ನರ್ ನಿಕಟ ಪೂರ್ವ ಅಧ್ಯಕ್ಷ ಸಮೀರ್ ಎಸ್ ಜೆನ್ನಿ, ಕೆಎಸ್ ಸಿಎಎ ಅಧ್ಯಕ್ಷ ಸಿ. ಎ. ಶಿವಪ್ರಕಾಶ್ ವಿರಕ್ತಮಠ, ಬೆಂಗಳೂರು ಶಾಖೆಯ ಅಧ್ಯಕ್ಷ ಸಿಎ ಮಂಜುನಾಥ ಹಾಗೂ ಸಮ್ಮೇಳನದ ಅಧ್ಯಕ್ಷ ಎಫ್..ಆರ್. ಸಿಂಘ್ವಿ, ಸಮ್ಮೇಳನದ ಸಂಘಟನಾ ಸಮಿತಿಯ ಜಿ.ಎಸ್. ಪ್ರಶಾಂತ್, ರಾಘವೇಂದ್ರ ಪುರಾಣಿಕ್, ರವೀಂದ್ರ ಕೋರೆ ಇತರರು ಇದ್ದರು.

# ಟ್ರಾನ್ಸ್ ಜೆಂಡರ್ ವ್ಯಕ್ತಿಗಳು ಮತ್ತು ಅಂಚಿನಲ್ಲಿರುವ ಮಹಿಳೆಯರಿಗೆ ಉಚಿತ ವೈದ್ಯಕೀಯ ಶಿಬಿರ

**ಬೆಂಗಳೂರು:** ಬೆಂಗಳೂರಿನಲ್ಲಿರುವ ವಿಕಾಸ್ ಇಂಡಿಯಾ ನೆಟ್‌ವರ್ಕ್ (ವಿಐಎನ್), ಸಿಎಸ್‌ಐ ಆಸ್ಪತ್ರೆ, ಆಶ್ರಯ ಬೆಂಗಳೂರು ಸೆಂಟ್ರಲ್ ಚರ್ಚ್ ಮತ್ತು ರಿಡೆಂಪ್ಟೋರಿಸ್ಟ್ ಫಾದರ್ಸ್ (ಸಿಎಸ್‌ಎಸ್‌ಆರ್) ಸಹಯೋಗದೊಂದಿಗೆ, ಬೆಂಗಳೂರಿನ ಕುಕ್ಸನ್ ರಸ್ತೆಯಲ್ಲಿರುವ ನವ ಸ್ಫೂರ್ತಿ ಕೇಂದ್ರದಲ್ಲಿ ಟ್ರಾನ್ಸ್ಜೆಂಡರ್ ವ್ಯಕ್ತಿಗಳು ಮತ್ತು ಅಂಚಿನಲ್ಲಿರುವ ಮಹಿಳೆಯರಿಗಾಗಿ ಉಚಿತ ವೈದ್ಯಕೀಯ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಗಿತ್ತು.

ಸಿಎಸ್‌ಐ ಆಸ್ಪತ್ರೆಯ ಪ್ರತಿನಿಧಿಗಳು ಮತ್ತು ರಿಡೆಂಪ್ಟೋರಿಸ್ಟ್‌ಗಳ ಸಮ್ಮುಖದಲ್ಲಿ ದೀಪ ಬೆಳಗಿಸುವ ಮೂಲಕ ವೈದ್ಯಕೀಯ ಶಿಬಿರವನ್ನು ಉದ್ಘಾಟಿಸಲಾಯಿತು. ಟ್ರಾನ್ಸ್ ಜೆಂಡರ್ ಸಮುದಾಯ ಮತ್ತು ಅಂಚಿನಲ್ಲಿರುವ ಮಹಿಳೆಯರ ಗಣನೀಯ ಸಂಖ್ಯೆಯ ಜನರು ಈ ಶಿಬಿರದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಭಾಗವಾಗಿ ಶಿಬಿರದ ಫಲಾನುಭವಿಗಳಿಗೆ ಪಡಿತರ ಕಿಟ್‌ಗಳು, ಕಂಬಳಿಗಳು ಮತ್ತು ಊಟದ ಪ್ಯಾಕೆಟ್‌ಗಳನ್ನು ನೀಡಲಾಯಿತು. ವೈದ್ಯಕೀಯ ಶಿಬಿರವನ್ನು ಫಾದರ್ ಎ. ಎಸ್. ರಾಜಾ, ಸಿ.ಎಸ್.ಎಸ್.ಆರ್, ಸೀನಿಯರ್ ಲವೀನಾ, ಸೀನಿಯರ್ ಜ್ಯೋತಿ ಅವರು ಶ್ರೀಮತಿ ಜಯಶ್ರೀ, ಡಾ. ಅವರ ಸಹಾಯದಿಂದ ನಿಖರವಾಗಿ ಯೋಜಿಸಿ ಕಾರ್ಯಗತಗೊಳಿಸಿದರು. ಸಿ.ಆರ್. ಮಹಿಳಾ ವೈದ್ಯಕೀಯ ಅಧೀಕ್ಷಕರು, ಆಡಳಿತಾಧಿಕಾರಿ ಶ್ರೀ ಲೂಯಿಸ್ ರಾವ್ ಮತ್ತು ಬೆಂಗಳೂರಿನ ಸಿಎಸ್‌ಐ ಆಸ್ಪತ್ರೆಯ ದಕ್ಷ ವೈದ್ಯಕೀಯ ತಂಡ. ವಿಕಾಸ್ ಇಂಡಿಯಾ ನೆಟ್‌ವರ್ಕ್ ಮತ್ತು ಅದರ ಪಾಲುದಾರರು ವೈದ್ಯಕೀಯ ಶಿಬಿರದ ವಿಶೇಷ ಕೊಡುಗೆದಾರರಿಗೆ, ಆಶ್ರಯ ಬೆಂಗಳೂರು ಸೆಂಟ್ರಲ್ ಚರ್ಚ್‌ನ ಪ್ರತಿನಿಧಿಗಳು, ರೆಡ್ಮೆಟೋರಿಸ್ಟ್ ಫಾದರ್ಸ್ ಮತ್ತು ಅಮ್ಮಾಸ್ ಪೇಸ್ಟ್ರೀಸ್‌ನ ಮಾಲೀಕ ಶ್ರೀ ಆಂಟನಿ ಜಾರ್ಜ್‌ಗೆ ಕೃತಜ್ಞತೆಗಳನ್ನು ವ್ಯಕ್ತಪಡಿಸಿದರು.






# ಮೊಟ್ಟೆಗಳಲ್ಲಿ ಕ್ಯಾನ್ಸರ್ ಕಾರಕ ಅಂಶ ಪತ್ತೆ; ಗ್ರಾಹಕರಲ್ಲಿ ಆತಂಕ ಹುಟ್ಟುಹಾಕಿದ ವೈರಲ್ ವಿಡಿಯೋ!

**ಬೆಂಗಳೂರು:** ನಿರ್ದಿಷ್ಟ ಬ್ರಾಂಡ್‌ನ ಮೊಟ್ಟೆಗಳಲ್ಲಿ ಕ್ಯಾನ್ಸರ್‌ಗೆ ಕಾರಣವಾಗುವ 'ಜಿನೋಟಾಕ್ಸಿಕ್ ಅಂಶ' ಪತ್ತೆಯಾಗಿದೆ ಎಂದು ಹೇಳುವ ವೈರಲ್ ವಿಡಿಯೋ ಇದೀಗ ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕ ಚರ್ಚೆಯನ್ನು ಹುಟ್ಟುಹಾಕಿದೆ. ಮೊಟ್ಟೆಗಳಲ್ಲಿ ನಿಷೇಧಿತ ಕ್ಯಾನ್ಸರ್ ಕಾರಕ ಅಂಶವಿದೆ ಎಂದು ಹೇಳಿರುವ ಪ್ರಯೋಗಾಲಯದ ಪರೀಕ್ಷೆಗಳ ವರದಿಯನ್ನು ವಿಡಿಯೋದಲ್ಲಿ ಉಲ್ಲೇಖಿಸಲಾಗಿದ್ದು, ಇದು ಗ್ರಾಹಕರ ಕಳವಳಕ್ಕೆ ಕಾರಣವಾಗಿದೆ.

ಬೆಂಗಳೂರಿನ ಎಚ್‌ಸಿಜಿ ಕ್ಯಾನ್ಸರ್ ಆಸ್ಪತ್ರೆಯ ಕನ್ಸಲ್ಟೆಂಟ್ ಮೆಡಿಕಲ್ ಆಂಕೊಲಾಜಿಸ್ಟ್ ಡಾ. ಸ್ಮಿತಾ ಸಲ್ಡಾನಾ, ನೈಟ್ರೋಫ್ಯೂರಾನ್‌ಗಳು ಸೇರಿದಂತೆ ಇತರೆ ವಸ್ತುಗಳನ್ನು ಕೆಲವೊಮ್ಮೆ ಕೋಳಿ ಸಾಕಣೆಯಲ್ಲಿ ಬಳಸಲಾಗುತ್ತದೆ. 'ನೈಟ್ರೋಫ್ಯೂರಾನ್‌ಗಳ ಕೆಲವು ಮೆಟಾಬಾಲೈಟ್‌ಗಳು, ಮಾನವ ದೇಹದಲ್ಲಿ ದೀರ್ಘಕಾಲದವರೆಗೆ ಮುಂದುವರಿದರೆ, ಡಿಎನ್‌ಎಗೆ ಹಾನಿ ಮಾಡಬಹುದು ಮತ್ತು ಅವು ಜಿನೋಟಾಕ್ಸಿಕ್ ಸಾಮರ್ಥ್ಯವನ್ನು ಹೊಂದಿರುತ್ತವೆ. ಮೊಟ್ಟೆಗಳು ಸ್ವತಃ ಕ್ಯಾನ್ಸರ್ ಕಾರಕವಲ್ಲ' ಎಂದು ಅವರು ವಿವರಿಸಿದರು.

'ಮೊಟ್ಟೆಗಳು ಉತ್ತಮ ಗುಣಮಟ್ಟದ ಪ್ರೋಟೀನ್ ಮೂಲವಾಗಿದ್ದು, ಕ್ಯಾನ್ಸರ್ ರೋಗಿಗಳಿಗೆ ಹೆಚ್ಚಾಗಿ ಶಿಫಾರಸು ಮಾಡಲಾಗುತ್ತದೆ. ಅದರಲ್ಲಿ ನಿಷೇಧಿತ ವಸ್ತುಗಳು ಇದ್ದರೆ ಮಾತ್ರ ಈ ಕಳವಳ ಉಂಟಾಗುತ್ತದೆ' ಎಂದು ಅವರು ಹೇಳಿದರು.

'ಆಧುನಿಕ ಆಹಾರ ಪದ್ಧತಿಯಲ್ಲಿ ಕ್ಯಾನ್ಸರ್‌ಕಾರಕಗಳ ಅನೇಕ ಸಂಭಾವ್ಯ ಮೂಲಗಳಲ್ಲಿ ಇದು ಒಂದು ಉದಾಹರಣೆಯಾಗಿದೆ. ಸಂಸ್ಕರಿಸಿದ ಆಹಾರ, ಹೇರ್ ಡೈ, ಮೇಕಪ್ ಉತ್ಪನ್ನಗಳು, ಕೈಗಾರಿಕಾ ಬಣ್ಣಗಳು ಮತ್ತು ಸಂಸ್ಕರಿಸಿದ ಮಾಂಸಗಳಲ್ಲಿ ಡಿಎನ್‌ಎಗೆ ಹಾನಿ ಮಾಡುವ ರಾಸಾಯನಿಕಗಳಿವೆ. ನಮ್ಮ ಪರಿಸರವು ಅಂತಹ ಅಪಾಯಗಳಿಂದ ತುಂಬಿದೆ ಮತ್ತು ಸಾಮಾಜಿಕ ಮಾಧ್ಯಮದ ಹೇಳಿಕೆಗಳ ಬಗ್ಗೆ ಭಯಪಡುವ ಬದಲು ಪರಿಶೀಲಿಸಿದ ಅಪಾಯಗಳ ಮೇಲೆ ಕೇಂದ್ರೀಕರಿಸುವುದು ಮುಖ್ಯವಾಗಿದೆ' ಎಂದು ಡಾ. ಸಲ್ಡಾನಾ ಹೇಳಿದರು.

ಆಹಾರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಬಲವಾದ ಸರ್ಕಾರದ ನಿಯಂತ್ರಣ ಅಗತ್ಯ. ಮೊಟ್ಟೆಗಳು ಮತ್ತು ಇತರ ಆಹಾರ ಉತ್ಪನ್ನಗಳು ಶುದ್ಧವಾಗಿದೆಯೇ ಅಥವಾ ಹಾನಿಕಾರಕ ವಸ್ತುಗಳಿಂದ ಮುಕ್ತವಾಗಿವೆಯೇ ಎಂದು ಗ್ರಾಹಕರು ವೈಯಕ್ತಿಕವಾಗಿ ಪರೀಕ್ಷಿಸಲು ಅಥವಾ ಪರಿಶೀಲಿಸಲು ಸಾಧ್ಯವಿಲ್ಲದ ಕಾರಣ, ಎಫ್ಎಸ್ಎಸ್ಎಐ ನಂತಹ ಅಧಿಕೃತ ಸಂಸ್ಥೆಗಳು ಈ ಆಹಾರಗಳು ಕಲಬೆರಕೆಯಿಲ್ಲದವು ಮತ್ತು ಸೇವಿಸಲು ಸುರಕ್ಷಿತವಾಗಿದೆಯೇ ಎಂದು ನಿಯಮಿತವಾಗಿ ಪರಿಶೀಲಿಸಬೇಕು ಮತ್ತು ಪ್ರಮಾಣೀಕರಿಸಬೇಕು ಎಂದು ಹೇಳಿದರು.

'ಮೊಟ್ಟೆಗಳು ಪ್ರೋಟೀನ್‌ನ ಅಮೂಲ್ಯ ಮೂಲವಾಗಿ ಉಳಿದಿವೆ ಮತ್ತು ಅವುಗಳನ್ನು ಸುರಕ್ಷಿತವಾಗಿ ಆಹಾರದಲ್ಲಿ ಸೇರಿಸಿಕೊಳ್ಳಬಹುದು. ಗ್ರಾಹಕರು ಸಾಧ್ಯವಾದಾಗಲೆಲ್ಲ ತಾಜಾ, ಸಾವಯವ ಮೊಟ್ಟೆಗಳನ್ನು ಆಯ್ಕೆ ಮಾಡಿಕೊಳ್ಳಲು ಮತ್ತು ಅಸ್ಪಷ್ಟ ಲೇಬಲ್‌ಗಳನ್ನು ಹೊಂದಿರುವ ಪ್ಯಾಕ್ ಮಾಡಿದ ಉತ್ಪನ್ನಗಳೊಂದಿಗೆ ಎಚ್ಚರಿಕೆಯಿಂದ ಇರಬೇಕು' ಎಂದು ಆಸ್ಟರ್ ವೈಟ್‌ಫೀಲ್ಡ್ ಆಸ್ಪತ್ರೆಯ ಮುಖ್ಯ ಕ್ಲಿನಿಕಲ್ ಡಯೆಟಿಷಿಯನ್ ವೀಣಾ ವಿ ಹೇಳಿದರು.

ಬೆಂಗಳೂರಿನ ವಾಸವಿ ಆಸ್ಪತ್ರೆಗಳ ಶಸ್ತ್ರಚಿಕಿತ್ಸಾ



ಆಂಕೊಲಾಜಿಸ್ಟ್ ಡಾ. ಶ್ರೀಕಾಂತ್ ರೆಡ್ಡಿ ಮಾತನಾಡಿ, 'ವೈದ್ಯಕೀಯವಾಗಿ, ಮೊಟ್ಟೆಗಳನ್ನು ತಿನ್ನುವುದರಿಂದ ಕ್ಯಾನ್ಸರ್ ಬರುತ್ತದೆ ಎಂಬುದಕ್ಕೆ ಯಾವುದೇ ವೈಜ್ಞಾನಿಕ ಪುರಾವೆಗಳಿಲ್ಲ. ಶಸ್ತ್ರಚಿಕಿತ್ಸೆಯ ನಂತರ ರೋಗಿಗಳಿಗೆ ಹೆಚ್ಚಾಗಿ ಮೊಟ್ಟೆಗಳನ್ನು ತಮ್ಮ ಆಹಾರದಲ್ಲಿ ಸಮೃದ್ಧ ಪ್ರೋಟೀನ್ ಮೂಲವಾಗಿ ಸೇರಿಸಲು ಸೂಚಿಸಲಾಗುತ್ತದೆ' ಎಂದರು.

ವೈರಲ್ ಹೇಳಿಕೆಗಳು ಜಾಗೃತಿ ಮೂಡಿಸಬಹುದಾದರೂ, ಗ್ರಾಹಕರು ಪರಿಶೀಲಿಸಿದ ಮಾಹಿತಿ, ವ್ಯಾಯಾಮ ಮಿತಗೊಳಿಸುವಿಕೆ ಮತ್ತು ಪ್ರಮಾಣೀಕೃತ, ಸುರಕ್ಷಿತ ಆಹಾರಕ್ಕೆ ಆದ್ಯತೆ ನೀಡಬೇಕು, ಮಾರುಕಟ್ಟೆಯಲ್ಲಿ ಅಸ್ತಿತ್ವದಲ್ಲಿರುವ ಕ್ಯಾನ್ಸರ್ ಜನಕ ಉತ್ಪನ್ನಗಳನ್ನು ಕಡಿಮೆ ಮಾಡಲು ಸರ್ಕಾರದ ಮಧ್ಯಸ್ಥಿಕೆ ಅಗತ್ಯ ಎಂದು ತಜ್ಞರು ಹೇಳುತ್ತಾರೆ.

# ಓಟ್ ಚೋರಿ ಸುಳ್ಳನ್ನು ಸತ್ಯ ಮಾಡಲು ಕಾಂಗ್ರೆಸ್ ಯತ್ನ:ಬಸವರಾಜ ಬೊಮ್ಮಾಯಿ

**ಹಾವೇರಿ:** ಓಟ್ ಚೋರಿ ಹೆಸರಿನಲ್ಲಿ ಕಾಂಗ್ರೆಸ್ ನವರು ಸುಳ್ಳನ್ನು ಸತ್ಯ ಮಾಡಲು ಹೊರಟಿದ್ದಾರೆ. ಅದರಿಂದ ಏನೂ ಆಗುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಓಟ್ ಚೋರಿ ಸುಳ್ಳನ್ನು ಸತ್ಯ ಮಾಡುವ ಅಭಿಯಾನ ಬಹಳಷ್ಟು ಕಾಂಗ್ರೆಸ್ ನಾಯಕರಿಗೆ ಅದರ ಬಗ್ಗೆ ನಂಬಿಕೆ ಇಲ್ಲ. ಅವರ ಪ್ರತಿಷ್ಠೆಗೆ ಅಲ್ಲಿಗೆ ಹೋಗುತ್ತಿದ್ದಾರೆ. ಸುಳ್ಳು ಸಾವಿರ ಬಾರಿ ಹೇಳಿ ಸತ್ಯ ಮಾಡಲು ಹೊರಟವರ ಮೇಲೆ ಕಾಂಗ್ರೆಸ್ ನವರಿಗೆ ನಂಬಿಕೆ ಇದೆ. ಅದರಿಂದ ಏನೂ ಆಗಲ್ಲ. ಬಿಹಾರ್ ನಲ್ಲಿ ಇದನ್ನೇ ಮುಂದಿಟ್ಟುಕೊಂಡು ಚುನಾವಣೆ ಮಾಡಿದರು. ಅಲ್ಲಿ ಕಾಂಗ್ರೆಸ್ ಅತ್ಯಂತ ಕಡಿಮೆ ಸ್ಥಾನ ಪಡೆಯಿತು. ಅದರಿಂದ ಇನ್ನೂ ಪಾಠ ಕಲಿತಿಲ್ಲ ಅಂದರೆ ಏನು ಮಾಡಲು ಆಗುವುದಿಲ್ಲ ಎಂದು ಹೇಳಿದರು.

**ಸತ್ಯ ಹೊರಬರುತ್ತದೆ**

ಆಳಂದ ಬಿಜೆಪಿ ಮಾಜಿ ಶಾಸಕ ಸುಭಾಷ್ ಗುತ್ತಿದಾರ್ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಚಾರ್ಜ್ ಶೀಟ್ ಸಲ್ಲಿಸಿದ ತಕ್ಷಣ ಏನೂ ಆಗಲ್ಲ. ಕೋರ್ಟ್ ನಲ್ಲಿ ಸಾಬೀತಾಗಬೇಕು. ಯಾವ ಸಂದರ್ಭದಲ್ಲಿ ಎಸ್ ಐ ಟಿ ರಚನೆ ಆಗಿದೆ. ಎಸ್ ಐಟಿ ಯಾವ ರೀತಿ ತನಿಖೆ ಮಾಡಿದೆ. ಇಲೆಕ್ಷನ್ ಕಮಿಷನ್ ಆಗಲೇ ಸ್ಪಷ್ಟನೆ ನೀಡಿದೆ. ಆರು ಸಾವಿರ ಮತ ಕಡಿತ ಮಾಡುವಂತೆ ಅರ್ಜಿ ಬಂದರೂ ಕೇವಲ 18 ಮತ ಕಡಿತ ಮಾಡಿದ್ದಾರೆ. ಹೀಗಾಗಿ ಕೋರ್ಟ್ ನಲ್ಲಿ ಸತ್ಯ ಹೊರಬರುತ್ತದೆ. ಚುನಾವಣಾ ಆಯೋಗದ ಪಾತ್ರ ಏನು ಸತ್ಯಾಂಶ ಏನು ಎಲ್ಲವೂ ಹೊರ ಬರುತ್ತದೆ ಎಂದು



ಹೇಳಿದರು.

**ನೈತಿಕ ಪೊಲೀಸ್ ಗಿರಿ ಒಪ್ಪುವುದಿಲ್ಲ**

ಸವಣೂರಿನಲ್ಲಿ ಶಿಕ್ಷಕನ ಮೇಲೆ ಹಲ್ಲೆ ಮಾಡಿರುವ ಪ್ರಕರಣ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ನೈತಿಕ ಪೊಲಿಸ್ ಗಿರಿ ಒಪ್ಪುವುದಿಲ್ಲ ತಪ್ಪು ಮಾಡಿದವರಿಗೆ ಶಿಕ್ಷೆ ಆಗಬೇಕು. ಅದರ ಬದಲು ರಸ್ತೆಯಲ್ಲಿ ಮೆರವಣಿಗೆ ಮಾಡಿ ಬಟ್ಟೆ ಹರಿಯುವುದು ಸರಿಯಲ್ಲ. ಅಮಾನವೀಯವಾಗಿ ಮಾಡುವ ಕೃತ್ಯಕ್ಕೆ ಅವಕಾಶ ಕೊಡಬಾರದು. ಶಿಕ್ಷಕನಿಗೆ ಚಪ್ಪಲಿ ಹಾರ ಹಾಕಿ ಮೆರವಣಿಗೆ ಮಾಡಿ ಕಾನೂನು ಕೈ ತೆಗೆದುಕೊಂಡಿದ್ದಾರೆ. ಆತ ತಪ್ಪು ಮಾಡಿದ್ದರೆ ಶಿಕ್ಷೆ ಆಗಬೇಕು. ಅದಕ್ಕಿಂತ ಮುಂಚೆ ಬೀದಿ ಬೀದಿಗಳಲ್ಲಿ ಮೆರವಣಿಗೆ ಮಾಡಿರುವುದು ಅನಾಗರಿಕತೆ. ಪ್ರಜಾಪ್ರಭುತ್ವದಲ್ಲಿ ಇದಕ್ಕೆ ಅವಕಾಶ ಇಲ್ಲ. ಇಲ್ಲಿ ಪೊಲೀಸರು ನಿಷ್ಕ್ರಿಯ ಆಗಿದ್ದಾರೆ. ಅವರ ನಿರ್ಲಕ್ಷ್ಯದಿಂದ ಇದೆಲ್ಲಾ ಆಗಿದೆ. ಹಲವು ರೇಪ್ ಪ್ರಕರಣಗಳು ನಡೆದರೂ ಪುಂಡ ಪೋಕರಿಗಳನ್ನೇ ಹಿಡಿದಿಲ್ಲ. ಕಾನೂನು ಉಲ್ಲಂಘನೆ ಮಾಡುವವರಿಗೆ ಪ್ರೋತ್ಸಾಹ ಕೊಟ್ಟಿದ್ದಕ್ಕೆ ಇಂತಹ ಪ್ರಕರಣ ನಡೆಯುತ್ತಿವೆ. ಹೀಗಾಗಿ ಇದೆಲ್ಲಾ ಆಗುತ್ತಿದೆ. ಇಲ್ಲದಿದ್ದರೆ ಇದನ್ನು ತಡೆಯಬಹುದಿತ್ತು ಒಂದು ವರ್ಗ ಓಲೈಸುವ ಕೆಲಸದ ಪರಿಣಾಮ ಈ ರೀತಿ ನಡೆದಿದೆ ಓಲೈಕೆ ರಾಜಕಾರಣದ ಪ್ರತಿಬಿಂಬ ಇದು ಎಂದು ಆರೋಪಿಸಿದರು.

ಸ್ಥಳೀಯ ಶಾಸಕರು ಕೆಲವರು ನೀರು ಹಾಕುತ್ತಾರೆ, ಕೆಲವರು ಪೆಟ್ರೋಲ್ ಹಾಕುತ್ತಾರೆ ಎಂದು ನೀಡಿರುವ ಹೇಳಿಕೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಯಾರು ನೀರು ಹಾಕುತ್ತಾರೆ, ಯಾರು ಪೆಟ್ರೋಲ್ ಹಾಕುತ್ತಾರೆ ಎಂದು ಶಾಸಕರೇ ಹೇಳಬೇಕು. ನಾವು ಆರೋಪಿ ಪರ ಮಾತನಾಡುತ್ತಿಲ್ಲ. ತಪ್ಪು ಮಾಡಿದವರನ್ನೆಲ್ಲ ಚಪ್ಪಲಿಯಲ್ಲಿ ಹೊಡೆಯುತ್ತಾರಾ? ಹಾನಗಲ್ ನಲ್ಲಿ ರೇಪ್ ಮಾಡಿದವರನ್ನು ಚಪ್ಪಲೊಯಲ್ಲಿಯೇ ಹೊಡೆದು ಕರೆದುಕೊಂಡು ಹೋಗಿದ್ದರಾ ಎಂದು ಪ್ರಶ್ನಿಸಿದರು.

# ದೇಶದ 140 ಕೋಟಿ ಜನರ ಮತದಾನದ ಹಕ್ಕು ಉಳಿಸಲು ಹೋರಾಟ: ಡಿಸಿಎಂ ಡಿ.ಕೆ. ಶಿವಕುಮಾರ್

## ನಮ್ಮ ಹೋರಾಟಕ್ಕೆ ಗಾಬರಿಗೊಂಡು ದೆಹಲಿಗೆ ವಾಹನ ಪ್ರವೇಶ ತಡೆಯುತ್ತಿರುವ ಬಿಜೆಪಿ ಸರ್ಕಾರ

**ನವದೆಹಲಿ:** ದೇಶದ 140 ಕೋಟಿ ಜನರ ಮತದಾನದ ಹಕ್ಕು ಉಳಿಸಲು ನಾವು ಮತಕಳ್ಳತನದ ವಿರುದ್ಧ ಹೋರಾಟ ಮಾಡುತ್ತಿದ್ದೇವೆ. ಇದರಲ್ಲಿ ಯಾವುದೇ ರಾಜಕೀಯ ಉದ್ದೇಶವಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ದೆಹಲಿಯ ಕರ್ನಾಟಕ ಭವನದಲ್ಲಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಭಾನುವಾರ ಪ್ರತಿಕ್ರಿಯೆ ನೀಡಿದರು.



ವೋಟ್ ಚೋರಿ ಪ್ರತಿಭಟನೆ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರ ನಾಯಕತ್ವದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ನಾವು ಮತಕಳ್ಳತನ ವಿರುದ್ಧದ ಹೋರಾಟ ಆರಂಭಿಸಿದ್ದೆವು. ಈಗ ರಾಮಲೀಲಾ ಮೈದಾನದಲ್ಲಿ ಪ್ರತಿಭಟನೆ ಮಾಡುತ್ತಿದ್ದೇವೆ. ಈ ದೇಶದಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಬೇಕು ಎಂಬ ಸಂದೇಶ ನೀಡಲಾಗುತ್ತಿದೆ. ದೇಶದ ಚುನಾವಣೆಗಳು ಈಗ ನ್ಯಾಯಸಮ್ಮತವಾಗಿಲ್ಲ. ಮತಕಳ್ಳತನ ಮಾಡಲಾಗುತ್ತಿದೆ. ಇದಕ್ಕೆ ಸಾವಿರಾರು ಉದಾಹರಣೆಗಳಿವೆ. ರಾಹುಲ್ ಗಾಂಧಿ ಅವರು ಈ ವಿಚಾರವಾಗಿ ಸಂಸತ್ತಿನಲ್ಲಿ ಧ್ವನಿ ಎತ್ತಿದ್ದಾರೆ. ಇನ್ನು ಹಲವು ಬಾರಿ ಮಾಧ್ಯಮಗೋಷ್ಠಿ ಮೂಲಕ ದಾಖಲೆಗಳನ್ನು ಬಹಿರಂಗಗೊಳಿಸಿದ್ದಾರೆ. ಇಷ್ಟಾದರೂ ಚುನಾವಣಾ ಆಯೋಗದಿಂದ ಸರಿಯಾದ ಉತ್ತರ ಸಿಗುತ್ತಿಲ್ಲ. ಹೀಗಾಗಿ ಸಾಂವಿಧಾನಿಕ ಸಂಸ್ಥೆಗಳ ದುರ್ಬಳಕೆ ಬಗ್ಗೆ ಜನರಿಗೆ ಅರಿವು ಮೂಡಿಸಲು ನಾವು ಬೀದಿಗಿಳಿದು ಹೋರಾಟ ಮಾಡುತ್ತಿದ್ದೇವೆ" ಎಂದು ತಿಳಿಸಿದರು.

**ರಾಜ್ಯದ ಸುಮಾರು 4 ಸಾವಿರ ಕಾರ್ಯಕರ್ತರು ಭಾಗಿ**

"ದೆಹಲಿಯ ಪ್ರತಿಭಟನೆಗೆ ರಾಜ್ಯದಿಂದ ಆಗಮಿಸುವ 1500 ಕಾರ್ಯಕರ್ತರಿಗೆ ನಾವು ವಾಸ್ತವ್ಯದ ವ್ಯವಸ್ಥೆ ಕಲ್ಪಿಸಿದ್ದೇವೆ. ಸುಮಾರು 2 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಹಾಗೂ ನಾಯಕರು ತಮ್ಮ ವ್ಯವಸ್ಥೆ ತಾವೇ ಮಾಡಿಕೊಂಡಿದ್ದಾರೆ. ಕೆಲವರು ವಿಮಾನ, ಮತ್ತೆ ಕೆಲವರು ರೈಲಲ್ಲಿ ಆಗಮಿಸಿದ್ದಾರೆ. ಸುಮಾರು 3500 ರಿಂದ 4000 ಜನ ಪ್ರತಿಭಟನೆಗೆ ಬಂದಿದ್ದಾರೆ. ಮತಕಳ್ಳತನ ವಿರುದ್ಧ ರಾಜ್ಯದಲ್ಲಿ ನಡೆದ ಸಹಿಸಂಗ್ರಹ ಅಭಿಯಾನದಲ್ಲಿ 1.42 ಕೋಟಿ ಸಹಿ ಸಂಗ್ರಹ ಮಾಡಲಾಗಿದೆ. ಇಲ್ಲಿ ಸೇರಿರುವ ನಾಯಕರು, ಕಾರ್ಯಕರ್ತರೇ ಈ ಹೋರಾಟದ ಉತ್ಸಾಹಕ್ಕೆ ಸಾಕ್ಷಿ. ಇಲ್ಲಿರುವ ಪ್ರತಿಯೊಬ್ಬರೂ ದೇಶ ಹಾಗೂ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಉಳಿಸಿಕೊಳ್ಳಬೇಕು, ಮತದಾನದ ಹಕ್ಕು ಕಾಪಾಡಬೇಕು ಎಂದು ಬಂದಿದ್ದಾರೆ" ಎಂದು ತಿಳಿಸಿದರು.

"ದೆಹಲಿಗೆ ಬರುವ ವಾಹನಗಳನ್ನು ಬಿಜೆಪಿ ಸರ್ಕಾರ ತಡೆ ಹಿಡಿದಿದೆಯಂತೆ. ವಾಹನ ದೆಹಲಿಯೊಳಗೆ ಪ್ರವೇಶ ಮಾಡಲು ಅವಕಾಶ ನೀಡುತ್ತಿಲ್ಲ. ಯಾಕೆ ಈ ರೀತಿ ಮಾಡುತ್ತಿದ್ದಾರೆ ತಿಳಿಯುತ್ತಿಲ್ಲ. ಕೇಂದ್ರ ಸರ್ಕಾರ ಈ ವಿಚಾರದಲ್ಲಿ ಯಾಕೆ ಗಾಬರಿಯಾಗುತ್ತಿದೆ ಗೊತ್ತಿಲ್ಲ. ನಮ್ಮ ಧ್ವನಿಯನ್ನು ಅಡಗಿಸಲು ಯಾರಿಂದಲೂ ಸಾಧ್ಯವಿಲ್ಲ" ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಕಚೇರಿಗೆ ಭೇಟಿ ನೀಡುವ ಬಗ್ಗೆ ಕೇಳಿದಾಗ, "ಕಾಂಗ್ರೆಸ್ ಕಚೇರಿಗೆ ಬರುವಂತೆ ನಮಗೆ ಆಹ್ವಾನ ನೀಡಿದ್ದಾರೆ. ಸಂಚಾರ ದಟ್ಟಣೆ ಹಿನ್ನೆಲೆಯಲ್ಲಿ ಅಲ್ಲಿಂದ ನಾವು ಬಸ್ ಮೂಲಕ ರಾಮಲೀಲಾ ಮೈದಾನಕ್ಕೆ ತೆರಳುತ್ತೇವೆ. ಈ ಪ್ರತಿಭಟನೆಗಾಗಿ ನಾವು ನಮ್ಮ ಕಾರ್ಯಕರ್ತರಿಗೆ ವಿಶೇಷವಾಗಿ ಚಳಿ ವಾತಾವರಣಕ್ಕೆ ಅನುಕೂಲವಾಗುವಂತೆ ಟೀ ಶರ್ಟ್ ಮಾಡಿಸಲಾಗಿದೆ" ಎಂದು ತಿಳಿಸಿದರು.

**ಸೋಲು, ಗೆಲುವಿಗೆ ಕಾಂಗ್ರೆಸಿಗರು ಯೋಚಿಸುವುದಿಲ್ಲ:**

ಸೋಲಿನ ಹತಾಶೆಯಿಂದ ಕಾಂಗ್ರೆಸ್ ಈ ರೀತಿ ಸಮಾವೇಶ ಮಾಡುತ್ತಿದೆ ಎಂಬ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಅವರು ತಮ್ಮ ಖುಷಿಗೆ ಏನು ಬೇಕಾದರೂ ಮಾತನಾಡುತ್ತಾರೆ. ನಾವು ಕಾಂಗ್ರೆಸಿಗರು ಸೋಲು, ಗೆಲುವಿನ ಬಗ್ಗೆ ಯೋಚನೆ ಮಾಡುವುದಿಲ್ಲ. ಈ ದೇಶಕ್ಕೆ ಸ್ವಾತಂತ್ರ್ಯ ಹಾಗೂ ಸಂವಿಧಾನ ತಂದು ಕೊಟ್ಟಾಗ ನಮ್ಮ ಹಿರಿಯರು ಸಾಕಷ್ಟು ಪ್ರಾಣತ್ಯಾಗ ಮಾಡಿದ್ದಾರೆ. ಈ ದೇಶದ ಆರ್ಥಿಕ ತಜ್ಞನಿಗೆ ಸೋನಿಯಾ ಗಾಂಧಿ ಅವರು ಅಧಿಕಾರ ತ್ಯಾಗ ಮಾಡಿದರು. ಇಂದಿರಾ ಗಾಂಧಿ ಹಾಗೂ ರಾಜೀವ್ ಗಾಂಧಿ ಅವರು ದೇಶಕ್ಕಾಗಿ ಪ್ರಾಣವನ್ನೇ ಅರ್ಪಿಸಿದರು. ಜವಾಹರ್ ಲಾಲ್ ನೆಹರೂ, ಗಾಂಧಿಜಿ ಸೇರಿದಂತೆ ಅನೇಕ ಮಹನೀಯರು ಜೈಲುವಾಸ ಅನುಭವಿಸಿದರು. ನೂರು ವರ್ಷಗಳ ಹಿಂದೆ ಮಹಾತ್ಮಾ ಗಾಂಧಿ ಅವರು ದೇಶದ ಸ್ವಾತಂತ್ರ್ಯ ಹೋರಾಟದ ನಾಯಕತ್ವ ವಹಿಸಿದರು. ಇಂದು ಪಕ್ಷ ಕಷ್ಟಕಾಲದಲ್ಲಿರುವಾಗ ಮಲ್ಲಿಕಾರ್ಜುನ ಖರ್ಗೆ ಅವರು ಪಕ್ಷದ ಅಧ್ಯಕ್ಷರಾಗಿದ್ದಾರೆ" ಎಂದು ತಿಳಿಸಿದರು.

# ಚಾಕೊಲೇಟ್ ನೀಡಿ ಬಾಲಕಿ ಮೇಲೆ ಅತ್ಯಾಚಾರ, ಕೊಲೆ: ಅರ್ಜಿ ತಿರಸ್ಕರಿಸಿದ ರಾಷ್ಟ್ರಪತಿ ಮುರ್ಮು!

**ನವದೆಹಲಿ:** ಚಾಕೊಲೇಟ್ ನೀಡುವ ಆಮಿಷವೊಡ್ಡಿ ಎರಡು ವರ್ಷದ ಅಪ್ರಾಪ್ತ ಬಾಲಕಿಯನ್ನು ಅಪಹರಿಸಿ, ಅತ್ಯಾಚಾರವೆಸಗಿದ ಬಳಿಕ ಆಕೆಯನ್ನು ಹತ್ಯೆಗೈದು ಜೈಲು



ಶಿಕ್ಷೆಗೊಳಗಾದ ಅಪರಾಧಿಯ ಕ್ಷಮಾದಾನ ಅರ್ಜಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ತಿರಸ್ಕರಿಸಿದ್ದಾರೆ ಎಂದು ಅಧಿಕಾರಿಗಳು ಭಾನುವಾರ ತಿಳಿಸಿದ್ದಾರೆ.

2022ರ ಜುಲೈ 25 ರಂದು ಅಧಿಕಾರ ವಹಿಸಿಕೊಂಡ ಬಳಿಕ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಿರಸ್ಕರಿಸಿದ ಮೂರನೇ ಕ್ಷಮದಾನ ಅರ್ಜಿ ಇದಾಗಿದೆ. ಮಹಾರಾಷ್ಟ್ರದ ಜಲ್ನಾ ನಗರದ ಇಂದಿರಾನಗರ ಪ್ರದೇಶದಲ್ಲಿ 2012ರ ಮಾರ್ಚ್ 6 ರಂದು ಬಾಲಕಿ ಮೇಲೆ ಅತ್ಯಾಚಾರ, ಕೊಲೆ ನಡೆದಿತ್ತು. ಅಪರಾಧಿ ರವಿ ಅಶೋಕ್ ಘುಮಾರಿಗೆ ವಿಧಿಸಿದ್ದ ಮರಣದಂಡನೆಯನ್ನು ಸುಪ್ರೀಂಕೋರ್ಟ್ 2019ರ ಅಕ್ಟೋಬರ್ 3 ರಂದು ಎತ್ತಿ ಹಿಡಿದಿತ್ತು.

# ಮಂಗಳವಾರ ಬಾಲವಿಕಾಸ ಅಕಾಡೆಮಿ ಪ್ರಶಸ್ತಿಗಳ ಪ್ರದಾನ: ಅಕಾಡೆಮಿಗೆ ಹೊಸ ಸ್ವರೂಪ ನೀಡಿದ ಸಂಗಮೇಶ ಬಬಲೇಶ್ವರ

**ಬೆಳಗಾವಿ:** ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ ಇದೇ ಪ್ರಥಮಬಾರಿಗೆ ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಗಳ ಪ್ರಧಾನ ಸಮಾರಂಭ ಹಮ್ಮಿಕೊಂಡಿದ್ದು, 2022–23 ಹಾಗೂ 2023–24 ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ಪುರಸ್ಕೃತರಿಗೆ ವಿತರಿಸಲಾಗುತ್ತಿದೆ.

ಕರ್ನಾಟಕ ಬಾಲವಿಕಾಸ ಅಕಾಡೆಮಿಯು ರಾಜ್ಯದ ಸುಮಾರು 2 ಕೋಟಿ ಮಕ್ಕಳ ಶ್ರೆಯೋಭಿವೃದ್ಧಿಗಾಗಿ ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಶ್ರಮಿಸುತ್ತಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ನೇತೃತ್ವ ಮತ್ತು ಮಾರ್ಗದರ್ಶನದಲ್ಲಿ ಅಂದು ಮಧ್ಯಾಹ್ನ 1 ಗಂಟೆಗೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಬಾಲವಿಕಾಸ ಅಕಾಡೆಮಿಯ 2022–23 ಮತ್ತು 2023–24 ಸಾಲಿನ ಗೌರವ ಪ್ರಶಸ್ತಿ, ಮಕ್ಕಳ ಚಂದಿರ ಪುಸ್ತಕ ಪ್ರಶಸ್ತಿ, ಬಾಲ ಗೌರವ ಪ್ರಶಸ್ತಿ ಹಾಗೂ ವಿಶೇಷ ಗೌರವ ಪ್ರಶಸ್ತಿಗಳನ್ನು ವಿತರಿಸಲಾಗುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಸೇರಿದಂತೆ ಹಲವಾರು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳಿಂದ ಆಯ್ಕೆ ಮಾಡಿರುವ ಪ್ರಶಸ್ತಿ ಪುರಸ್ಕೃತರು ಆಗಮಿಸಲಿದ್ದಾರೆ.

ಈ ಪ್ರಶಸ್ತಿಗಳು ಮಕ್ಕಳ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹನೀಯರಿಗೆ ಮತ್ತು ಪ್ರತಿಭಾವಂತ ಮಕ್ಕಳಿಗೆ ಪ್ರೇರಣೆಯಾಗಲಿವೆ. ಮಕ್ಕಳಲ್ಲಿನ ಸೂಪ್ತ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವುದು ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮ ಆದ್ಯತೆಯಾಗಿದೆ ಎಂದು ಅವರು ತಿಳಿಸಿದ್ದಾರೆ.

ಮಕ್ಕಳನ್ನು ಗೌರವಿಸುವುದು ಮತ್ತು ಅವರನ್ನು ಪ್ರೋತ್ಸಾಹಿಸುವುದು ಅಕಾಡೆಮಿಯ ಜವಾಬ್ದಾರಿ. ಈ ಪ್ರಶಸ್ತಿಗಳನ್ನು ಗಣ್ಯರ ಮೂಲಕವೇ ಕೊಡಿಸಬೇಕೆಂಬ ಮಹದಾಸೆಯಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳರ್ ಅವರ ನೇತೃತ್ವ ಮತ್ತು ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನಾಡಿನ ಗಣ್ಯಮಾನ್ಯರ ಉಪಸ್ಥಿತಿಯಲ್ಲಿ ಮಕ್ಕಳಿಗೆ ಪ್ರಶಸ್ತಿ ನೀಡಿ, ಗೌರವ ಸಲ್ಲಿಸಲಾಗುವುದು ಎಂದು ಅವರು ಹೇಳಿದ್ದಾರೆ.

ಧಾರವಾಡ ಬಾಲ ವಿಕಾಸ ಅಕಾಡೆಮಿ ವತಿಯಿಂದ ಕೊಡ ಮಾಡುವ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆಯಾದ ಸಾಹಿತಿ, ಲೇಖಕರು, ಸಂಘ–ಸಂಸ್ಥೆಗಳಿಗೆ 25 ಸಾವಿರ ನಗದು ಬಹುಮಾನ, ಮಕ್ಕಳ ಚಂದಿರ ಪ್ರಶಸ್ತಿಗೆ ಆಯ್ಕೆಯಾದ ಲೇಖಕರಿಗೆ 15 ಸಾವಿರ ನಗದು ಬಹುಮಾನ ಹಾಗೂ ಅಕಾಡೆಮಿ ಬಾಲ ಗೌರವ ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ 10 ಸಾವಿರ ನಗದು ಬಹುಮಾನ, ವಿಶೇಷ ಗೌರವ ಪ್ರಶಸ್ತಿ ಪುರಸ್ಕೃತರಿಗೆ 10 ಸಾವಿರ ನಗದು ಬಹುಮಾನವನ್ನು ವಿತರಿಸಿ ಗೌರವಿಸಲಾಗುತ್ತದೆ ಎಂದು ಅವರು ಹೇಳಿದರು.

**2022 ನೇ ಸಾಲಿನ ಮಕ್ಕಳ ಚಂದಿರ ಪ್ರಶಸ್ತಿಗೆ ಆಯ್ಕೆಯಾದ ಲೇಖಕ ಪುಸ್ತಕ:**

ಮೈಸೂರಿನ ಕೊಳ್ಳೆಗಾಲ ಶರ್ಮಾ ಅವರ ಗುಬ್ಬಿಯ ಬ್ರಹ್ಮಾಸ್ತ್ರ ಪುಸ್ತಕ, ವಿಜಯಪೂರದ ಎಸ್. ಎಸ್ ಸಾತಿಹಾಳ ಅವರ ಹಾಡು ಕೋಗಿಲೆ ಹಾಡು ಪುಸ್ತಕ, ಬೆಂಗಳೂರಿನ ಡಾ. ಬೇಲೂರ ರಘುನಂದನ ಅವರ ಚಿಟ್ಟೆ ಪುಸ್ತಕ, ವಿಜಯಪೂರನ ಹ.ಮ. ಪೂಜಾರ ಅವರ ಅಜ್ಜನ ಮನೆಯ ಅಂಗಳದಲ್ಲಿ ಪುಸ್ತಕ, ಬಾಗಲಕೋಟಯ ಡಾ. ಕರವೀರ ಪ್ರಭು ಕ್ಯಾಲಕೊಂಡ ಅವರ ಮಗುವಿಗೆ ಲಸಿಕೆ ಕೊಡಿಸಿದ್ದೀರಾ? ಪುಸ್ತಕಗಳ 2022 ನೇ ಸಾಲಿನ ಮಕ್ಕಳ ಚಂದಿರ ಪ್ರಶಸ್ತಿಗೆ ಆಯ್ಕೆಯಾಗಿವೆ.

**2023 ನೇ ಸಾಲಗೆ ಮಕ್ಕಳ ಚಂದಿರ ಪುಸ್ತಕ ಪ್ರಶಸ್ತಿಗೆ ಆಯ್ಕೆಯಾದ ಲೇಖಕ ಪುಸ್ತಕ:**

ದಕ್ಷಿಣ ಕನ್ನಡದ ನಿರ್ಮಲಾ ಸುರತ್ಕಲ್ ಅವರ ಪುಟ್ಟಿಗೆ ಸಿಟ್ಟಿಲ್ಲ ಪುಸ್ತಕ, ಧಾರವಾಡದ ಲಲಿತಾ ಪಾಟೀಲ ಅವರ ಗಪ್ ಚುಪ್ ಪುಸ್ತಕ. ಹಾವೇರಿಯ ಮಾಲತೇಶ ಅಂಗೂರ ಅವರ ಕಾಡು–ಮೇಡು ಪುಸ್ತಕ ಹಾಗೂ ನಾಗರಾಜ ಹುಡೇದ ಬೆರಗು ಪುಸ್ತಕಗಳಿಗೆ 2023 ನೇ ಸಾಲಿನ ಮಕ್ಕಳ ಚಂದಿರ ಪುಸ್ತಕ ಪ್ರಶಸ್ತಿ ಲಭಿಸಿದೆ.

**2022–23ನೇ ಸಾಲಗೆ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆ:**

ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ತುಮಕೂರ ಜಿಲ್ಲೆಯ ತಿಪಟೂರು ಪ್ರೋ ಕೃಷ್ಣಮೂರ್ತಿ ಬಿಳಿಗೆರೆ. ವಿಜಯಪುರದ ಲಲಿತಾ ಕೆ ಹೊಸಪ್ಯಾಟಿ, ಮಂಗಳೂರಿನ ಭಾಸ್ಕರ ಅಚ್ಚಳ, ಮಕ್ಕಳ ರಂಗಭೂಮಿ ಕ್ಷೇತ್ರದಲ್ಲಿ ರಾಯಚೂರಿನ ವಿ. ಎನ್ ಅಕ್ಕಿ, ಮಕ್ಕಳ ಸಾಂಸ್ಕೃತಿಕ, ಚಿತ್ರಕಲೆ ಕ್ಷೇತ್ರದಲ್ಲಿ ಮೈಸೂರಿನ ಎಸ್. ಎಫ್. ಹುಸೇನಿ, ಮಕ್ಕಳ ವಿಕಲಚೇತನ ಕ್ಷೇತ್ರದಲ್ಲಿ ಬೆಳಗಾವಿಯ ಮಾಹೇಶ್ವರಿ ಅಂಧ ಮಕ್ಕಳ ಶಾಲೆ, ಮಕ್ಕಳ ಮನೋವಿಕಾಸ. ಹಕ್ಕುಗಳ ಕ್ಷೇತ್ರದಲ್ಲಿ ಶಿವಮೊಗ್ಗದ ಡಾ ಕೆ. ಎಸ್ ಪವಿತ್ರಾ ಅವರು 2022–23ನೇ ಸಾಲಿನ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

**2023–24ನೇ ಸಾಲಿಗೆ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆ:**

ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಪಂಡಿತ ರಾಮಕೃಷ್ಣಶಾಸ್ತ್ರಿ, ಮೈಸೂರಿನ ಬೆ. ಗೋ. ರಮೇಶ, ಕೊಪ್ಪಳದ ಅರುಣಾ ನರೇಂದ್ರ, ಮಕ್ಕಳ ರಂಗಭೂಮಿ ಕ್ಷೇತ್ರದಲ್ಲಿ ಬೆಂಗಳೂರಿನ ಮಾಲತೇಶ ಬಡಿಗೇರ, ಮಕ್ಕಳ ಸಾಂಸ್ಕೃತಿಕ, ಶೈಕ್ಷಣಿಕ, ಚಿತ್ರಕಲೆ ಕ್ಷೇತ್ರದಲ್ಲಿ ಹುಬ್ಬಳ್ಳಿಯ ಪ್ರತಾಪ ಆರ್ ಬಹುರೂಪಿ, ಮಕ್ಕಳ ಶೈಕ್ಷಣಿಕ.ಸಾಮಾಜಿಕ ಕ್ಷೇತ್ರದಲ್ಲಿ ಬೀದರನ ಶಾಹೀನ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಟ್, ಮಕ್ಕಳ ಮನೋವಿಕಾಸ ಹಕ್ಕುಗಳ ಕ್ಷೇತ್ರದಲ್ಲಿ ಬೆಂಗಳೂರಿನ ನಾಗಸಿಂಹ ಜಿ. ರಾವ್ ಅವರು 2023–24ನೇ ಸಾಲಿನ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

**2022–23ನೇ ಸಾಲಿನ ಅಕಾಡೆಮಿ ಬಾಲಗೌರವ ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳು:**

ಸಂಗೀತ ಕ್ಷೇತ್ರದಲ್ಲಿ ಕಲಬುರ್ಗಿ ವಿಭಾಗದ ಅಪೇಕ್ಷಾ ಎಸ್. ಎನ್ ಸರಕಿಲ್. ಮೈಸೂರು ವಿಭಾಗದ ಪಂಚಮಿ ಬಿದನೂರ. ಬೆಳಗಾವಿ ವಿಭಾಗದ ಅಥರ್ವಾ ಆರ್. ಘಂಟೆಣ್ಣವರ ಹಾಗೂ ನೃತ್ಯ ಕ್ಷೇತ್ರದಲ್ಲಿ ಕಲಬುರ್ಗಿ





ವಿಭಾಗದ ಸೃಷ್ಟಿ ಅಡಿಗ, ಮೈಸೂರು ವಿಭಾಗದ ಸಿಂಚನ ಹೆಚ್. ಎಮ್. ಬೆಂಗಳೂರು ವಿಭಾಗದ ಎನ್ ಶ್ರಿಯ ನರೇಂದ್ರ, ಬೆಳಗಾವಿ ವಿಭಾಗದ ಶ್ರೇಯಾ ಪ್ರಲ್ಹಾದ ಕುಲಕರ್ಣಿ ಮತ್ತು ಕ್ರೀಡಾ ಕ್ಷೇತ್ರದಲ್ಲಿ ಮೈಸೂರು ವಿಭಾಗದ ಬಿ. ದಿಯಾ ಭೀಮಯ್ಯ. ಬೆಂಗಳೂರು ವಿಭಾಗದ ಚಾರ್ವಿ ಎ.. ಬೆಳಗಾವಿ ವಿಭಾಗದ ಕಾವ್ಯಾ ತುಕಾರಾಮ ದಾನ್ವೇನವರ, ಕಲಬುರ್ಗಿ ವಿಭಾಗದ ಬಸವಪ್ರಸಾದ ಜ. ಪಾಟೀಲ, ಚಿತ್ರಕಲೆ ಕ್ಷೇತ್ರದಲ್ಲಿ ಮೈಸೂರು ವಿಭಾಗದ ದೃತಿ ಎಸ್.. ಕಲಬುರ್ಗಿ ವಿಭಾಗದ ಅಮೂಲ್ಯ ಮಠಪತಿ, ಬೆಳಗಾವಿ ವಿಭಾಗದ ಸುಖದಾ ಸತೀಶ ಮುರಗೋಡ. ಬಹುಮುಖ ಕ್ಷೇತ್ರದಲ್ಲಿ ಕಲಬುರ್ಗಿ ವಿಭಾಗದ ಮಯಾಂಕ ವಿ ಹಿರೇನೂರ. ಮೈಸೂರು ವಿಭಾಗದ ಧನ್ವಿ, ಬೆಂಗಳೂರು ವಿಭಾಗದ ಧವನಿ ಎನ್. ಬೆಳಗಾವಿ ವಿಭಾಗದ ಎಂ. ವಿ. ಶ್ರೇಯಾ, ಅಭಿನವ ಕರಡಿ ಹಾಗೂ ವಿಜ್ಞಾನ ಕ್ಷೇತ್ರದಲ್ಲಿ ಮೈಸೂರು ವಿಭಾಗದ ಲಿಖಿತ್ ಆರ್., ಬೆಳಗಾವಿ ವಿಭಾಗದ ಪ್ರಿಯಾಂಕಾ ಮಂಡಲಿಕ ಪವಾರ, ಬೆಂಗಳೂರು ವಿಭಾಗದ ಪ್ರಜ್ವಲ್ ಎನ್ ಹಲಾಳೆ 2022–23ನೇ ಸಾಲಿನ ಅಕಾಡೆಮಿ ಬಾಲಗೌರವ ಪ್ರಶಸ್ತಿಗೆ ಆಯ್ಕೆ ಆಗಿದ್ದಾರೆ.

2023–24ನೇ ಸಾಲಿನ ಅಕಾಡೆಮಿ ಬಾಲಗೌರವ ಪ್ರಶಸ್ತಿಗೆ ಆಯ್ಕೆ: ಸಂಗೀತ ಕ್ಷೇತ್ರದಲ್ಲಿ ಸ್ವಾತಿಕ ಗು. ಮಹಾಮನೆ. ಅನುರಾಗ ನಾಯಕ್. ಸಮರ್ಥ ಗೂಳಪ್ಪಾ ವಿಜಯನಗರ. ನೃತ್ಯ ಕ್ಷೇತ್ರದಲ್ಲಿ ವರ್ಷಿಣಿ ಪತ್ತಾರ. ದಿವ್ಯಶ್ರೀ ಎಚ್.ಆರ್.. ಪೃಥ್ವಿ ಎಮ್ ಹೆಗಡೆ, ಪಲ್ಲವಿ ಚಾಕಲಬ್ಬಿ, ಪ್ರತಿಫಲಾ ಮೆಂಚ, ನಿಶಾಂತ ಹಿರೇಮಠ, ರಚನಾ ಹಂಚಿನಮನಿ, ಕ್ರೀಡಾ ಕ್ಷೇತ್ರದಲ್ಲಿ ಅನಿಕೇತ ಬಳ್ಳಾರಿ. ಸ್ನೇಹ ಎಚ್ ಕೊಟ್ಯಾನ್, ಗ್ಲೋರಿಯಾ ಮುರ್ತೋಟಿ, ಸಮರ್ಥ ವಿ. ಕುಲಕರ್ಣಿ, ಕುಮಾರಿ ಜಾಹ್ನವಿ ಎಂ.ಆರ್., ಜೋನ್ನಾ ಭಾಸ್ಕರ್ ಹಾಗೂ ಬಹುಮುಖ ಕ್ಷೇತ್ರದಲ್ಲಿ ಸಾಹಿತ್ಯ ಗೊಂಡಬಾಳ, ಸಾನಿಧ್ಯ ಆಚಾರ್ಯ, ಸಂಕೇತ ಹೊಳೆಆಲೂರ. ಅನುಪ್ರಿಯಾ ಕುಲಕರ್ಣಿ, ಪುನಂ ಜಾಧವ, ಸುಪ್ರಿಯಾ ಇಟಗಿ, ಭೈರವಿ ಎಮ್.. ಶ್ರೀಲಕ್ಷ್ಮೀ ಭಟ್, ವಿಜ್ಞಾನ ಕ್ಷೇತ್ರದಲ್ಲಿ ನಮ್ರತಾ ಸಿನ್ನೂರ. ಕುಮಾರಿ ಉದ್ಭವಿ ಶೆಟ್ಟಿ, ಕುಮಾರಿ ಭಾಗ್ಯಶ್ರೀ ಡೊಣಗಿ, ಕುಮಾರಿ ಖುಷಿ ಎಮ್.. ನಾಟಕ ಕ್ಷೇತ್ರದಲ್ಲಿ ಕುಮಾರ ದಿಗಂತ ತುಂಬರಗುದ್ದಿ ಆಯ್ಕೆಯಾಗಿದೆ.

**2022–23 ನೇ ಸಾಲಿನ ವಿಶೇಷ ಗೌರವ ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳ ವಿವರ:**

ಪೂಜಾ ಭರಮಪ್ಪ ಹೊಂಬಳೇರ, ರೇಷ್ಮಾ ನದಾಫ್, ಸಾತವ್ವಾ ಸಿ ಹರಿಜನ್, ಸಿದ್ದಾರ್ಥ ಅಗ್ನಿ, ಗೌತಮ ವಿಶ್ವನಾಥ ಭಾವಿಕಟ್ಟಿ, ಅಂಬಿಕಾ, ಕುಮಾರ ಭೀಮಾ ಎಸ್. ರಂಗನಾಥ ಕೆ.. ಮಂಜುಶ್ರೀ ಟಿ.. ಕುಮಾರ ನಿಶ್ಚಲ್ ಸಾಯಿ, ನಾಗವೇಣಿ. ಲಾವಣ್ಯ, ಶಿವಕುಮಾರ ಹೆಚ್. ಆರ್., ಡೇವಿಡ, ಲಕ್ಷ್ಮೀ, ಜಯಭೀಮರಾವ, ಸಾಗರ, ನಾಗು ಮಂ.. ಸಂತೋಷ್, ಜೀವನ್, ಗಾಯತ್ರಿ, ಲಕ್ಷ್ಮೀ, ಮೀನಾಕ್ಷಿ, ಸಮೀಕ್ಷಾ, ನಾಗವೇಣಿ, ಕಿರಣ ಇಂಗಳ ವಿದ್ಯಾರ್ಥಿಗಳು ಆಯ್ಕೆ ಆಗಿದ್ದಾರೆ.

**2023–24 ನೇ ಸಾಲಿನ ವಿಶೇಷ ಗೌರವ ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳ ವಿವರ:**

ದರ್ಶನ ಕುಂಟಗೌಡ್ರು, ಸುದೀಪ ಉಪ್ಪಾರ, ಪರಶುರಾಮ ದೊಡ್ಡಮನಿ, ಮಹೇಶ ಚವಡಿ. ಸಂಜನಾ ಪೂಜಾರಿ, ಕೃಷ್ಣಾ ಪೂಜಾರಿ, ಸಂಜೀವ ತೆಗ್ಗಿ. ಲಕ್ಷ್ಮೀ ವೆಂಕಟಪ್ಪ, ಭಾಗ್ಯಲಕ್ಷ್ಮೀ ಬಸವರಾಜ, ಕಾವ್ಯಶ್ರೀ ಜಿ.ಜೆ. ಸಾಗರ್ ಬಿ. ಎಸ್. ರಾಮಚರಣ, ಲಾವಣ್ಯ ಎಸ್.. ದಿವ್ಯಾ ಎನ್ ನಾಗರಾಜ, ಚಂದನ್ ಪಿ. ಆರ್., ಲಕ್ಷ್ಮೀ, ಸುಕನ್ಯ, ಪ್ರತಿಕ್ಷಾ, ಸ್ವಪ್ನಾ, ಪ್ರವೀಣ ಜೆ. ಎನ್.. ರೋಜಾ, ವಸಂತಿ, ಭಾಗ್ಯಲಕ್ಷ್ಮೀ, ಆಕಾಶ, ನೇತ್ರಾವತಿ, ಸುಜನ್. ಮೌನೇಶ, ಶ್ರೀನಿವಾಸ ಬಿಸಲದಿನ್ನಿ ವಿದ್ಯಾರ್ಥಿಗಳು ಆಯ್ಕೆ ಆಗಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿ ಯೋಜನಾಧಿಕಾರಿ ಅಕ್ಕಮಹಾದೇವಿ ವಿಶೇಷ ಕರ್ತವ್ಯ ಅಧಿಕಾರಿ ಅನ್ನಪೂರ್ಣ ಸಂಗಳದ ಹಾಗೂ ಇತರರು ಇದ್ದರು.

**ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾರ್ಗದರ್ಶನದಲ್ಲಿ ಅಕಾಡೆಮಿಗೆ ಹೊಸಸ್ವರೂಪ**

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಮಾರ್ಗದರ್ಶನದಲ್ಲಿ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಕಳೆದ ಎರಡು ವರ್ಷಗಳಿಂದ ಹಲವಾರು ಮಾದರಿ ಕಾರ್ಯಕ್ರಮಗಳ ಮೂಲಕ ಅಕಾಡೆಮಿಯನ್ನು ಕ್ರಿಯಾಶೀಲವಾಗಿ ಮುನ್ನಡೆಸಿದ್ದಾರೆ. ಧಾರವಾಡದಲ್ಲಿರುವ ಅಕಾಡೆಮಿಯ ಕೇಂದ್ರ ಕಚೇರಿಯ ಕಟ್ಟಡದಲ್ಲಿ ಸುಮಾರು 20 ಲಕ್ಷ ರೂ.ಗಳ ವೆಚ್ಚದಲ್ಲಿ ಸುಸಜ್ಜಿತ ಸ್ಟುಡಿಯೋ ನಿರ್ಮಿಸಲಾಗಿದೆ. ಈಗ ನೂತನ ಸ್ಟುಡಿಯೋ ಉದ್ಘಾಟನೆಗೆ ಸಿದ್ಧಗೊಂಡಿದೆ.

ಮಿಷನ್ ವಿದ್ಯಾಕಾಶಿ ಮೂಲಕ ಎಸ್‌ಎಸ್‌ಎಲ್‌ಸಿ ಮಕ್ಕಳ ಫಲಿತಾಂಶ ಸುಧಾರಣೆಗಾಗಿ ಬಾಲ ವಿಕಾಸ ಅಕಾಡೆಮಿಯ ಸ್ಟುಡಿಯೋವನ್ನು ಬಳಸಿಕೊಳ್ಳಲು ನಿರ್ಧರಿಸಲಾಗಿದೆ. ಈ ಸ್ಟುಡಿಯೋದಲ್ಲಿ ನಾಡಿನ ಸಂಪನ್ಮೂಲ ವ್ಯಕ್ತಿಗಳನ್ನು ಕರೆತಂದು ಮಕ್ಕಳಿಗೆ ಉಪಯುಕ್ತವಾಗುವ ವಿಷಯ ತಜ್ಞರ ಮೂಲಕ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಹೆಚ್ಚಿಸುವ ಉದ್ದೇಶ ಹೊಂದಿದೆ.

ಬಾಲ ವಿಕಾಸ ಅಕಾಡೆಮಿಯಲ್ಲಿರುವ ಅವಕಾಶ ವಂಚಿತ ಮಕ್ಕಳನ್ನು ಗುರುತಿಸಿ ಅವರನ್ನು ನಿಸರ್ಗದ ಮಡಿಲಿಗೆ ಕರೆತರುವ ನಿಟ್ಟಿನಲ್ಲಿ ಬಾಲವಿಕಾಸ ಅಕಾಡೆಮಿ ಮಹತ್ವದ ಹೆಜ್ಜೆಯನ್ನಿಟ್ಟಿದೆ. 15 ದಿನಗಳವರೆಗೆ ಅವರ ವ್ಯಕ್ತಿತ್ವ ವಿಕಸನ ಕಾರ್ಯಾಗಾರ ನಡೆಸುವ ಮೂಲಕ ರಾಜ್ಯದಲ್ಲಿನ 10 ಜನರ, ಮೂರು ತಂಡಗಳನ್ನಾಗಿಸಿ ಮಕ್ಕಳಿಗೆ ಹೊಸ ಆತ್ಮವಿಶ್ವಾಸ ತರುವ ಕೆಲಸ ಮಾಡುತ್ತಿದ್ದಾರೆ.

ದಾನಿಗಳ ನೆರವಿನಿಂದ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಅನುದಾನದ ಹಣವನ್ನು ಬಳಸಿಕೊಂಡು ಪುಸ್ತಕಗಳನ್ನು ಚಿಕ್ಕೋಡಿ, ವಿಜಯಪುರ, ಬಾಗಲಕೋಟೆ, ಬೆಳಗಾವಿ ಈ ನಾಲ್ಕು ಶೈಕ್ಷಣಿಕ ಜಿಲ್ಲೆಯ ಪ್ರತಿ ಸರಕಾರಿ ಶಾಲೆಗಳಿಗೆ ಈ ಪುಸ್ತಕವನ್ನು ಜಿಲ್ಲಾಧಿಕಾರಿ, ಸಿಇಓ ಅವರ ಸಹಕಾರದಲ್ಲಿ ಮುಟ್ಟಿಸುವ ಕೆಲಸ ಮಾಡಿದೆ.

ಇಂದಿನ ಬದಲಾದ ಜೀವನಶೈಲಿಯಲ್ಲಿ ಮಕ್ಕಳ ಮನಸ್ಥಿತಿಯನ್ನು ಅರ್ಥಮಾಡಿಕೊಳ್ಳಲು ಮತ್ತು ಅವರೊಂದಿಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಪಾಲಕರಿಗೆ ಮಾರ್ಗದರ್ಶನ ನೀಡುವ ಉದ್ದೇಶದಿಂದ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಪಾಲಕರಿಗೆ ವಿಶೇಷ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.

ದತ್ತಿನಿಧಿ ಪಡೆಯುವ ಅವಕಾಶವಿದ್ದು, ಅದರಿಂದ 25 ಲಕ್ಷ ದತ್ತಿನಿಧಿಯ ಮೂಲಕ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಹಣ ಇಟ್ಟು, ಅದರಿಂದ ಬರುವ ಬಡ್ಡಿಯ ಮೂಲಕ ಮಕ್ಕಳಿಗೆ ವಿಶೇಷ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ, ಆರ್ಥಿಕವಾಗಿ ಹಿಂದುಳಿದವರಿಗೆ, ಅವಕಾಶ ವಂಚಿತ ಮಕ್ಕಳಿಗೆ, ಫೀ ಕಟ್ಟಲು ಆಗದೆ ಇರುವವರಿಗೆ ಇದನ್ನು ಕೊಡಲು ಬಬಲೇಶ್ವರ ಅವರು ಸಚಿವರೊಂದಿಗೆ ಚರ್ಚಿಸಿದ್ದಾರೆ.

ಒಟ್ಟಾರೆ ಕಳೆದ 2 ವರ್ಷಗಳಿಂದ ಅಕಾಡೆಮಿಯನ್ನು ಅತ್ಯಂತ ಕ್ರಿಯಾಶೀಲವಾಗಿ ಮುನ್ನಡೆಸುತ್ತಿರುವ ಸಂಗಮೇಶ ಬಬಲೇಶ್ವರ, ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಸಲಹೆ ಪಡೆದು ಅನೇಕ ಅರ್ಥಪೂರ್ಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ನಿರ್ಧರಿಸಿದ್ದಾರೆ.

# ಬೆಡ್ತಿ ವರದಾ ನದಿ ಜೋಡಣೆಗೆ ತಪ್ಪು ಕಲ್ಪನೆಯಿಂದ ವಿರೋಧ ಬೇಡ: ಬಸವರಾಜ ಬೊಮ್ಮಾಯಿ

**ಹಾವೇರಿ:** ಬೆಡ್ತಿ ವರದಾ ನದಿ ಜೋಡಣೆಗೆ ತಪ್ಪು ಕಲ್ಪನೆಯಿಂದ ವಿರೋಧ ಮಾಡಿವುದು ಬೇಡ, ನೀರಿನ ಸದ್ಬಳಕೆಗೆ ಮಾಡಿರುವ ಯೋಜನೆ ಪರಿಷ್ಕರಣೆ ಆಗಿದೆ. ಶೇ 10% ಮಾತ್ರ ನೀರನ್ನು ಬಳಸಿಕೊಳ್ಳಲು ಯೋಜಿಸಿದ್ದು, ಒಟ್ಟು ನೀರಿನ ಹರಿವಿಗೆ ಯಾವುದೇ ತೊಂದರೆಯಿಲ್ಲ, ದಯವಿಟ್ಟು ಯೋಜನೆಗೆ ಸಹಕಾರ ನೀಡಬೇಕು ಎಂದು



ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮನವಿ ಮಾಡಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಿನ್ನೆ ಪರಮ ಪೂಜ್ಯ ಸ್ವರ್ಣವಲ್ಲಿ ಶ್ರೀಗಳ ನೇತೃತ್ವದಲ್ಲಿ ಬೆಡ್ತಿ – ವರದಾ ಕುರಿತು ಚರ್ಚೆ ಮಾಡಿದ್ದಾರೆ. ಬೆಡ್ತಿ ಯೋಜನೆಗೆ ಆಕ್ಷೇಪ ವ್ಯಕ್ತ ಪಡಿಸಿದ್ದಾರೆ. ನಾವು ಆ ಭಾಗದ ಜನರ ಗುರುಗಳ ಭಾವನೆ ಗೌರವಿಸುತ್ತೇವೆ. ತಪ್ಪು ಕಲ್ಪನೆ ಮೇಲೆ ವಿರೋಧ ಮಾಡುವುದು ಬೇಡ ಅನ್ನುವ ಮನವಿಯನ್ನು ಆದರ ಪೂರಕವಾಗಿ ಮಾಡುತ್ತೇನೆ. ಈ ಯೋಜನೆ ಸುಮಾರು 30 ವರ್ಷದಿಂದ ಇದೆ. ನ್ಯಾಷನಲ್ ವಾಟರ್ ಡೆವಲಪ್ಮೆಂಟ್ ಆಥಾರಿಟಿ ಯಿಂದ ಬಂದಿರುವ ಯೋಜನೆ. ದಕ್ಷಿಣ ಭಾರತದ ಪ್ರಮುಖ ಮೂರು ಯೋಜನೆಗಳಲ್ಲಿ ಇದು ಒಂದು. ಈಗಿರುವ ರಾಜಕಾರಣಿಗಳು ಆಗ ಯಾರೂ ರಾಜಕಾರಣದಲ್ಲಿ ಇರಲೇ ಇಲ್ಲ ಎಂದು ಹೇಳಿದರು.

**ಸದ್ಬಳಕೆಗೆ ಯೋಜನೆ**

ಇದು ನೀರಿನ ಸದ್ಬಳಕೆಗೆ ಮಾಡಿರುವ ಯೋಜನೆ. ಈಗ ಯೋಜನೆ ಪರಿಷ್ಕರಿಣೆ ಆಗಿದೆ. ಸಣ್ಣ ಬ್ಯಾರೇಜ್ ಮಾಡಿ ಲಿಫ್ಟ್ ಮಾಡಲಾಗುತ್ತದೆ ಯಾವುದೆ ದೊಡ್ಡ ಪ್ರಮಾಣದಲ್ಲಿ ಹಾನಿಯಾಗುವುದಿಲ್ಲ. ನದಿಯ ಕೇವಲ 10 % ರಷ್ಟು ನೀರು ಮಾತ್ರ ತೆಗೆದುಕೊಳ್ಳಬೇಕು ಅನ್ನುವ ಚಿಂತನೆ ಇದೆ. ಹೀಗಾಗಿ ನದಿ ಪಾತ್ರದ ನೀ ರಿನ ಹರಿವಿಗೆ ಯಾವುದೇ ತೊಂದರೆ ಇಲ್ಲ. ಈ ಯೋಜನೆಗೆ ಡಿ ಪಿ ಆರ್ ಆಗಬೇಕು ಪರಿಸರದ ಪರಿಣಾಮಗಳ ಅಧ್ಯಯನ ಆಗಬೇಕು. ಅದರ ಸಾಧಕ ಬಾಧಕ ನೋಡುತ್ತಾರೆ. ಇದೆಲ್ಲ ಪ್ರಕ್ರಿಯೆ ಇದೆ. ದಯವಿಟ್ಟು ಸಹಕಾರ ಮಾಡಬೇಕು. ಯೋಜನೆ ಸಂಪೂರ್ಣ ವಿವರ ಬಂದಾಗ ಪರಿಣಿತರು ತೀರ್ಮಾನ ಮಾಡುತ್ತಾರೆ. ನೀರಿನ ಸಂಪತ್ತು ಸದ್ಬಳಕೆ ಆಗಬೇಕು. ನೀರೇ ಇಲ್ಲದ ಈ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಕೂಡ ಇದೆ. ನಾವು ಮಳೆಗಾಲದಲ್ಲಿ ನೀರು ಹಿಡಿದಿಟ್ಟು ಬೇಸಿಗೆಯಲ್ಲಿ ನೀರು ಉಪಯೋಗಿಸ್ತೇವೆ ಬರ ಪ್ರದೇಶಕ್ಕೆ ಈ ನೀರು ಅನುಕೂಲ ಅಗುತ್ತದೆ. ಒಬ್ಬರಿಗೊಬ್ಬರು ಸಹಕಾರ ಕೊಡಬೇಕು. ಯೋಜನೆಯಿಂದ ಯಾವುದೇ ತೊಂದರೆ ಇಲ್ಲ. ಇದರಿಂದ ಬರ ಪೀಡಿತ ಹಾವೇರಿ ಮತ್ತು ಇತರ ಜಿಲ್ಲೆಗೆ ಅನುಕೂಲ ಆಗುತ್ತದೆ ಎಂದು ಹೇಳಿದರು.

# ಕಲ್ಯಾಣ ಕರ್ನಾಟಕದ 41 ಶಾಲೆಗಳಲ್ಲಿ 'ನೆಹರು ಸ್ಟ್ರೀಮ್ (STREAM) ಲ್ಯಾಬ್' ಸ್ಥಾಪನೆ – 'ಕ್ವಾಂಟಮ್ ಫಿಸಿಕ್ಸ್' ಮತ್ತು 'ಪರಿಸರ ವಿಜ್ಞಾನ' ಕಲಿಕೆಗೆ ವಿಶೇಷ ಆದ್ಯತೆ: ಸಚಿವ ಎನ್.ಎಸ್. ಬೋಸರಾಜು ಘೋಷಣೆ

**ಬೆಂಗಳೂರು :** ರಾಜ್ಯದ ಶಾಲಾ ಶಿಕ್ಷಣ ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆ ತರುವ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 41 'ನೆಹರು ಸ್ಟ್ರೀಮ್ ಲ್ಯಾಬ್' (Nehru STREAM Labs) ಗಳನ್ನು



ಸ್ಥಾಪಿಸುವುದಾಗಿ *ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ನೀಡಿರುವ ಅವರು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಸಹಯೋಗದೊಂದಿಗೆ ಜಾರಿಗೊಳ್ಳುತ್ತಿರುವ ಈ ಯೋಜನೆಯು, ಸಾಂಪ್ರದಾಯಿಕ ವಿಜ್ಞಾನ ಕಲಿಕೆಗಿಂತ ಒಂದು ಹೆಜ್ಜೆ ಮುಂದೆ ಹೋಗಿ, ಭವಿಷ್ಯದ ಅತ್ಯಾಧುನಿಕ ವಿಜ್ಞಾನ ಮತ್ತು ಪರಿಸರ ಸುಸ್ಥಿರತೆಯನ್ನು ಒಳಗೊಂಡ ವಿಶಿಷ್ಟ ಪಠ್ಯಕ್ರಮವನ್ನು ಆ ಭಾಗದ ವಿದ್ಯಾರ್ಥಿಗಳಿಗೆ ಪರಿಚಯಿಸಲಿದೆ. 'ಸ್ಟ್ರೀಮ್' (STREAM) ಪದದ ವ್ಯಾಖ್ಯಾನವನ್ನು ಜಾಗತಿಕ ವೈಜ್ಞಾನಿಕ ಪ್ರಗತಿ ಮತ್ತು ಸ್ಥಳೀಯ ಪರಿಸರ ಅಗತ್ಯಗಳಿಗೆ ಅನುಗುಣವಾಗಿ ರೂಪಿಸಲಾಗಿದೆ ಎಂದು ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ.

ಖಿಖಿಖಇಂಒ ಎಂದರೆ ವಿಜ್ಞಾನ (ಖಿಭಿಜಟಿಭಿಜ), ತಂತ್ರಜ್ಞಾನ (Technology), ರೊಬೊಟಿಕ್ಸ್ (Robotics), ಪರಿಸರ ವಿಜ್ಞಾನ (Ecology), ಖಗೋಳಶಾಸ್ತ್ರ (Astronomy) ಮತ್ತು ಗಣಿತ (Mathematics) ಆಗಿರುತ್ತದೆ," ಎಂದು ಸಚಿವರು ವಿವರಿಸಿದರು.

"ಇದೇ ಮೊದಲ ಬಾರಿಗೆ ಶಾಲಾ ಮಟ್ಟದಲ್ಲಿಯೇ ವಿದ್ಯಾರ್ಥಿಗಳಿಗೆ 'ಕ್ವಾಂಟಮ್ ಫಿಸಿಕ್ಸ್'ನ (Quantum Physics) ಮೂಲಭೂತ ಪರಿಕಲ್ಪನೆಗಳನ್ನು ಪರಿಚಯಿಸಲಾಗುತ್ತಿದೆ. ಇದು ಬ್ರಹ್ಮಾಂಡದ ಮೂಲ ಸ್ವರೂಪದ ಬಗ್ಗೆ ಮಕ್ಕಳಲ್ಲಿ ಕುತೂಹಲವನ್ನು ಮೂಡಿಸಲಿದೆ. ಅದೇ ಸಮಯದಲ್ಲಿ, ನಾವು ಪರಿಸರ ವಿಜ್ಞಾನಕ್ಕೆ (Ecology) ಹೆಚ್ಚಿನ ಒತ್ತು ನೀಡುತ್ತಿದ್ದೇವೆ. ಇದು ದೇಶದಲ್ಲೇ ಮೊದಲ ಬಾರಿಗೆ ಜಾರಿಯಾಗುತ್ತಿರುವ ವಿನೂತನ ಉಪಕ್ರಮವಾಗಿದ್ದು, ಇದರಲ್ಲಿ ಮಕ್ಕಳು ತರಗತಿ ಕೊಠಡಿಯಿಂದ ಹೊರಬಂದು, ತಮ್ಮ ಸುತ್ತಮುತ್ತಲಿನ ಸ್ಥಳೀಯ ಸಸ್ಯ ಮತ್ತು ಪ್ರಾಣಿ ಸಂಕುಲದ (Flora and Fauna) ಬಗ್ಗೆ ಪ್ರಾಯೋಗಿಕ ಜ್ಞಾನ ಪಡೆಯಲಿದ್ದಾರೆ. ಎಳೆಯ ವಯಸ್ಸಿನಲ್ಲೇ ಮಕ್ಕಳ ಮನಸ್ಸಿನಲ್ಲಿ ಸುಸ್ಥಿರತೆ ಮತ್ತು ಪರಿಸರ ಕಾಳಜಿಯನ್ನು ಬಿತ್ತುವುದು ನಮ್ಮ ಗುರಿಯಾಗಿದೆ," ಎಂದು ಹೇಳಿದರು.

ಕೆಕೆಆರ್‌ಡಿಬಿ (KKRDB) ಅಧ್ಯಕ್ಷರಾದ ಡಾ. ಅಜಯ್ ಧರ್ಮಸಿಂಗ್ ಅವರು*, "ನಾವು ಮಕ್ಕಳನ್ನು ಎಳೆಯ ವಯಸ್ಸಿನಲ್ಲೇ ಭವಿಷ್ಯಕ್ಕೆ ಸಿದ್ಧಗೊಳಿಸಬೇಕು. ಮೊದಲ ಹಂತದಲ್ಲಿ, ಈ ಭಾಗದ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಂದರಂತೆ ಒಟ್ಟು 41 ಶಾಲೆಗಳಲ್ಲಿ ಈ ಲ್ಯಾಬ್‌ಗಳನ್ನು ಪ್ರಾರಂಭಿಸುತ್ತಿದ್ದೇವೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲೂ ನಗರದ ವಿದ್ಯಾರ್ಥಿಗಳಿಗೆ ಸಮಾನವಾದ ವೈಜ್ಞಾನಿಕ ಮನೋಭಾವ ಮತ್ತು ಅವಕಾಶಗಳು ದೊರೆಯಬೇಕು ಎಂಬುದು ನಮ್ಮ ಆಶಯ," ಎಂದು ತಿಳಿಸಿದ್ದಾರೆ.

ಈಗಾಗಲೆ ಕೆಕೆಆರ್‌ಡಿಬಿ ಕಾರ್ಯದರ್ಶಿಗಳು ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಿಗೆ ಪತ್ರದ ಮೂಲಕ (ದಿನಾಂಕ: 10.12.2025) 41 ಕರ್ನಾಟಕ ಪಬ್ಲಿಕ್ ಶಾಲೆಗಳ (KPS) ಪಟ್ಟಿಯನ್ನು ಅಂತಿಮಗೊಳಿಸುವಂತೆ ಸೂಚಿಸಿದ್ದಾರೆ.

**ಯೋಜನೆಯ ಮುಖ್ಯಾಂಶಗಳು:**

ಒಟ್ಟು 3 ಕೋಟಿ ವೆಚ್ಚದ ಈ ಯೋಜನೆಯು ಸಮಗ್ರ ಪಠ್ಯಕ್ರಮವನ್ನು ಒಳಗೊಂಡಿದೆ:

**ರೊಬೊಟಿಕ್ಸ್:** ಆಟೊಮೇಷನ್ ಮತ್ತು ಕೋಡಿಂಗ್ ಕೌಶಲ್ಯಗಳು.

**ಪರಿಸರ ವಿಜ್ಞಾನ (Ecology):** (ಪ್ರಮುಖ ಆದ್ಯತೆ) ಸ್ಥಳೀಯ ಜೀವವೈವಿಧ್ಯ (ಸಸ್ಯ/ಪ್ರಾಣಿ) ಮತ್ತು ಸುಸ್ಥಿರತೆಯ ಬಗ್ಗೆ ಪ್ರಾಯೋಗಿಕ ಕ್ಷೇತ್ರ ಅಧ್ಯಯನ.

**ಖಗೋಳಶಾಸ್ತ್ರ:** ಬಾಹ್ಯಾಕಾಶ ಮತ್ತು ವಿಶ್ವದ ಅರಿವು.

**ಗಣಿತ:** ಸುಧಾರಿತ ಗಣಿತದ ಸಮಸ್ಯೆಗಳ ಪರಿಹಾರ.

**ಕ್ವಾಂಟಮ್ ಫಿಸಿಕ್ಸ್:** ಮೂಲಭೂತ ಪರಿಕಲ್ಪನೆಗಳ ಪರಿಚಯ (ವಿಶೇಷ ಸೇರ್ಪಡೆ).

# ಕರ್ನಾಟಕ 2 ಜಿಲ್ಲೆಗಳಲ್ಲಿ ಪ್ಲಾಸ್ಟಿಕ್ ಪಾರ್ಕ್ ಸ್ಥಾಪನೆ, 15 ಲಕ್ಷ ಉದ್ಯೋಗ ಸೃಷ್ಟಿ

ದೇಶದಲ್ಲಿ ಪ್ಲಾಸ್ಟಿಕ್ ಉದ್ಯಮ ವಲಯವು ಲಕ್ಷಾಂತರ ಉದ್ಯೋಗ ಸೃಷ್ಟಿಸಿದೆ. ಈ ಕ್ಷೇತ್ರದ ಬೆಳವಣಿಗೆ ಉತ್ತೇಜಿಸುವ ಮಹತ್ತರ ಉದ್ದೇಶದಿಂದ ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ಉದ್ಯಮಿಗಳು ತಮಗೆ ಎಲ್ಲಿ ಬೇಕೋ ಅಲ್ಲಿ ಪ್ಲಾಸ್ಟಿಕ್ ಪಾರ್ಕ್ ಅರ್ಜಿ




ಹಾಕಿಕೊಳ್ಳಬಹುದು. ಸರ್ಕಾರ ತಮಗೆ ತ್ವರಿತವಾಗಿ ಭೂಮಿ ಕೊಡುತ್ತದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಅವರು ಶನಿವಾರ ಹೇಳಿದರು. ಯಾವ ಜಿಲ್ಲೆಗಳಿಗೆ ಆದ್ಯತೆ ಸಿಗಲಿದೆ?, ಎಷ್ಟು ಉದ್ಯೋಗ ಸೃಷ್ಟಿ? ಯೋಜನೆ ಎಲ್ಲ ಮಾಹಿತಿ ಇಲ್ಲಿದೆ. ನಗರದಲ್ಲಿ ನಡೆದ ಪ್ಲಾಸ್ಟ್ ಇಂಡಿಯಾ–2026 ಪ್ರದರ್ಶನ ಮೇಳದ ಪೂರ್ವಭಾವಿ ಉದ್ಘಾಟನಾ ಸಮಾವೇಶದಲ್ಲಿ ಸಚಿವರು ಭಾಗವಹಿಸಿದ್ದರು. ಕರ್ನಾಟಕದ ಪ್ಲಾಸ್ಟಿಕ್ ಉದ್ಯಮಿಗಳಿಗಾಗಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. 12ನೇ ವರ್ಷದ ಈ ಅಂತಾರಾಷ್ಟ್ರೀಯ ಸಮಾವೇಶವು ಮುಂದಿನ ವರ್ಷ 2026 ಫೆಬ್ರವರಿ 5ರಿಂದ 10ರವರೆಗೆ ದೆಹಲಿಯ ಭಾರತ ಮಂಟಪದಲ್ಲಿ ಜರುಗಲಿದೆ ಎಂದರು.

ಸಮಾವೇಶದಲ್ಲಿ ಮಾತನಾಡಿದ ಅವರು, ಕರ್ನಾಟಕದ ಕರಾವಳಿ ಜಿಲ್ಲೆ ದಕ್ಷಿಣ ಕನ್ನಡದ ಮಂಗಳೂರು ಮತ್ತು ಉತ್ತರ ಕರ್ನಾಟಕದ ವಿಜಯಪುರ ಜಿಲ್ಲೆಯ ಮುಳವಾಡ ಕೈಗಾರಿಕಾ ಪ್ರದೇಶದಲ್ಲಿ 200 ಎಕರೆಯಲ್ಲಿ ಸುಸಜ್ಜಿತ 'ಪ್ಲಾಸ್ಟಿಕ್ ಪಾರ್ಕ್' ಸ್ಥಾಪಿಸಲಾಗುವುದು. ಉದ್ಯಮಿಗಳು ಇವೆರಡರ ಪೈಕಿ ತಮಗೆ ಬೇಕಾದಲ್ಲಿ ಅಲ್ಲಿ ಅರ್ಜಿ ಹಾಕಿದರೆ ನಿಗದಿತ ಭೂಮಿ ಒದಗಿಸಲಾಗುತ್ತದೆ ಎಂದು ಭರವಸೆ ನೀಡಿದರು. ಈ ಮೂಲಕ ರಾಜ್ಯದಲ್ಲಿ ಪ್ರಮುಖ ಉದ್ಯಮವೊಂದು ಉದಯಿಸಲಿದೆ ಎಂದು ಅವರು ತಿಳಿಸಿದರು. ಪ್ಲಾಸ್ಟಿಕ್ ವಲಯಕ್ಕೆ ಬೇಕಾದ ಪ್ರತಿಭಾವಂತ ಮಾನವ ಸಂಪನ್ಮೂಲ ಅಭಿವೃದ್ಧಿ ಮತ್ತು ಸಂಶೋಧನೆಗಾಗಿ ಕೇಂದ್ರೀಯ ಪೆಟ್ರೋಕೆಮಿಕಲ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆಯು (ಸಿಐಪಿಇಟಿ) ಇಲ್ಲಿ ತನ್ನ ಕ್ಯಾಂಪಸ್ ತೆರೆಯಲಿದೆ. 15 ಲಕ್ಷ ಉದ್ಯೋಗ ಸೃಷ್ಟಿ..! ಪ್ಲಾಸ್ಟಿಕ್ ಉದ್ಯಮ ವಲಯದ ಬೆಳವಣಿಗೆಯಿಂದ ಭಾರತದಲ್ಲಿ ಈಗಾಗಲೇ 40 ಲಕ್ಷ ಜನರಿಗೆ ಉದ್ಯೋಗ ದೊರಕಿದೆ. ಇದೇ ಉದ್ಯಮದಿಂದ ಮುಂದಿನ ಒಂದು ವರ್ಷದಲ್ಲಿ ಇನ್ನೂ 15 ಲಕ್ಷ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆ ಇದೆ. ರಾಜ್ಯದಲ್ಲಿ ಹೂಡಿಕೆದಾರರಿಗೆ ಆದ್ಯತೆ ಇದೆ. ಇಲ್ಲಿ ಸಾಕಷ್ಟು ಅವಕಾಶಗಳು ಇವೆ. ರಾಜ್ಯದ ಸಮಗ್ರ ಕೈಗಾರಿಕಾ ಬೆಳವಣಿಗೆಯ ಗುರಿ ನಮ್ಮ ಸರ್ಕಾರಕ್ಕೆ ಇದೆ ಎಂದ ಅವರು ಹೂಡಿಕೆದಾರರಿಗೆ ಮುಕ್ತ ಆಹ್ವಾನ ನೀಡಿದರು.

ಪ್ಲಾಸ್ಟಿಕ್ ಲೋಹವು ಜೀವನದ ಅವಿಭಾಜ್ಯ ಅಂಗವಾಗಿದೆ. ಹೀಗಾಗಿ ಗುಣಮಟ್ಟದ ಉತ್ಪನ್ನಗಳ ತಯಾರಿಕೆಗೆ ಆದ್ಯತೆ ಕೊಡಬೇಕಾಗಿದೆ. ರಾಷ್ಟ್ರ ಮಟ್ಟದಲ್ಲಿ ಈ ವಲಯದ ವಹಿವಾಟು 2026ರಲ್ಲಿ ವಾರ್ಷಿಕವಾಗಿ 50 ಬಿಲಿಯನ್ ಡಾಲರ್ ಮುಟ್ಟುವುದು ನಿಚ್ಚಳವಾಗಿದೆ ಎಂದು ತಿಳಿಸಿದರು.

# ಜಿಬಿಎ ನಗರ ಪಾಲಿಕೆಗಳಲ್ಲಿ 650ಕ್ಕೂ ಹೆಚ್ಚು ನಾಮ ನಿರ್ದೇಶಿತ ಸದಸ್ಯರ ನೇಮಕಾತಿ ಆಪಾದನೆ ಆಧಾರ ರಹಿತ: ನಗರಾಭಿವೃದ್ಧಿ ಇಲಾಖೆಯಿಂದ ಸ್ಪಷ್ಟನೆ

**ಬೆಂಗಳೂರು :** ಡಿಸೆಂಬರ್ರಂ 11 ರಂದು ಕರ್ನಾಟಕ ವಿಧಾನಸಭೆಯಲ್ಲಿ ಮಂಡಿಸಲಾಗಿರುವ ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ) ವಿಧೇಯಕ, 2025 ರಲ್ಲಿ ಪ್ರಕರಣ 30ಕ್ಕೆ ಪ್ರಸ್ತಾಪಿಸಲಾಗಿರುವ ತಿದ್ದುಪಡಿಯಿಂದ ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ 05 ನಗರ ಪಾಲಿಕೆಗಳಿಗೆ 700ಕ್ಕೂ ಹೆಚ್ಚು ನಾಮ ನಿರ್ದೇಶಿತ ಸದಸ್ಯರನ್ನು ನೇಮಕ ಮಾಡಲು ಸಂವಿಧಾನಕ್ಕೆ ವಿರುದ್ಧವಾಗಿ ಸರ್ಕಾರವು ಮುಂದಾಗಿದೆ ಹಾಗೂ ಈ ಪ್ರಕ್ರಿಯೆಯಿಂದ ಸದರಿ ನಗರ ಪಾಲಿಕೆಗಳಿಗೆ ಚುನಾವಣೆ ಸದ್ಯಕ್ಕೆ ನಡೆಯುವುದಿಲ್ಲ ಎಂಬ ಸಂಶಯ ಮೂಡಿದೆ ಎಂದು ವ್ಯಕ್ತಪಡಿಸಲಾಗಿರುವ ಅಭಿಪ್ರಾಯವು ಆಧಾರ ರಹಿತವಾಗಿದೆ. ಇದು ತಿದ್ದುಪಡಿಯ ಉದ್ದೇಶವನ್ನು ಅರ್ಥ ಮಾಡಿಕೊಳ್ಳದೇ ಸಾರ್ವಜನಿಕರಲ್ಲಿ ತಪ್ಪು ಅಭಿಪ್ರಾಯವನ್ನು ಮೂಡಿಸುವ ದುರುದ್ದೇಶದಿಂದ ಕೂಡಿರುತ್ತದೆ ಎಂದು ಮೇಲ್ನೋಟಕ್ಕೆ ಕಂಡುಬರುತ್ತದೆ.



ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಅನುಸಾರ ಕಾಲಕಾಲಕ್ಕೆ ಗ್ರೇಟರ್ ಬೆಂಗಳೂರು ಪ್ರದೇಶದ ಭೂ ಪ್ರದೇಶದ ಮಿತಿಗಳನ್ನು ಮಾರ್ಪಾಡು ಮಾಡಲು ಅವಕಾಶವನ್ನು ಕಲ್ಪಿಸಲಾಗಿದ್ದು, ನಿಯಮಾನುಸಾರ ಕ್ರಮವಹಿಸಿ ಸ್ಥಳೀಯ ಪ್ರಾಧಿಕಾರಗಳನ್ನು ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಗೆ ಸೇರ್ಪಡಿಸಿಕೊಳ್ಳಬಹುದಾಗಿದೆ. ಈ ರೀತಿ ಸೇರ್ಪಡಿಸಿಕೊಳ್ಳಲಾದ ಪ್ರದೇಶವನ್ನು ಪುನರ್ ವಿಂಗಡಿಸಿ ಚುನಾವಣೆ ನಡೆಸುವವರೆವಿಗೂ ಸದರಿ ನೂತನ ಪ್ರದೇಶಕ್ಕೆ ಯಾವುದೇ ಜನಪ್ರತಿನಿಧಿ ಇಲ್ಲದಂತಾಗುತ್ತದೆ. ಸದರಿ ಪ್ರದೇಶವನ್ನು ಆ ವ್ಯಾಪ್ತಿಯ ನಗರ ಪಾಲಿಕೆಯಲ್ಲಿ ಪ್ರತಿನಿಧಿಸುವವರು ಯಾರು ಇಲ್ಲದಂತಾಗಿ ಸದರಿ ಪ್ರದೇಶದ ಆಡಳಿತ ನಿರ್ವಹಣೆ ಮತ್ತು ಬೆಳವಣಿಗೆಗೆ ಆಡಚಣೆ ಉಂಟಾಗುವ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ, ಪ್ರಕರಣ 30ಕ್ಕೆ ತಿದ್ದುಪಡಿಯನ್ನು ಪ್ರಸ್ತಾಪಿಸಲಾಗಿದ್ದು, ಗ್ರೇಟರ್ ಬೆಂಗಳೂರು ಪ್ರದೇಶಕ್ಕೆ ಸೇರ್ಪಡಿಸಲಾಗುವ ಸ್ಥಳಿಯ ಪ್ರದೇಶದ ಸಾಮಾನ್ಯ ನಿವಾಸಿಯನ್ನು ಪ್ರತಿ 20 ಸಾವಿರ ಜನ ಸಂಖ್ಯೆಗೆ ಕನಿಷ್ಠ ಒಬ್ಬ ವ್ಯಕ್ತಿಯಂತೆ ಆ ನಿರ್ದಿಷ್ಟ ನಗರ ಪಾಲಿಕೆಗೆ ಹೆಚ್ಚುವರಿ ಸದಸ್ಯನಾಗಿ ನಾಮ ನಿರ್ದೇಶನ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆ. ಅಂತಹ ನಾಮ ನಿರ್ದೇಶಿತ ವ್ಯಕ್ತಿಯು ಚುನಾಯಿತ ಪ್ರತಿನಿಧಿಯಾಗಿಲ್ಲದ ಕಾರಣ ಆ ನಗರ ಪಾಲಿಕೆಯಲ್ಲಿ ಮತದಾನ ಮಾಡುವ ಅಧಿಕಾರವನ್ನು ಹೊಂದಿರುವುದಿಲ್ಲ ಹಾಗೂ ಆ ಸ್ಥಳೀಯ ಪ್ರದೇಶಕ್ಕೆ ಚುನಾವಣೆ ನಡೆಸುವವರೆವಿಗೆ ಮಾತ್ರ ನಾಮ ನಿರ್ದೇಶಿತ ಸದಸ್ಯನಾಗಿ ಮುಂದುವರೆಯಲು ಅವಕಾಶವಿರುತ್ತದೆ.

ಯಾವುದಾದರೂ ಪಂಚಾಯಿತಿ ಪ್ರದೇಶದ ಭಾಗವನ್ನು ಚಿಕ್ಕ ನಗರ ಪ್ರದೇಶದಲ್ಲಿ ವಿಲೀನಗೊಳಿಸಿದ ಸಂದರ್ಭದಲ್ಲಿ, ಮುನಿಸಿಪಲ್ ಕೌನ್ಸಿಲ್ ಅನ್ನು ಪುನರ್ ರಚಿಸುವವರೆವಿಗೆ ಅಂತಹ ಪ್ರದೇಶದ ಸಾಮಾನ್ಯ ನಿವಾಸಿಯಾಗಿರುವ ವ್ಯಕ್ತಿಯನ್ನು ಹೆಚ್ಚುವರಿ ಕೌನ್ಸಿಲರ್ ಆಗಿ ಸರ್ಕಾರವು ನಾಮ ನಿರ್ದೇಶನಗೊಳಿಸುವ ಬಗ್ಗೆ ಕರ್ನಾಟಕ ಮುನಿಸಿಪಾಲಿಟಿ ಅಧಿನಿಯಮ, 1964ರ ಪ್ರಕರಣ 360 (ಡಿ) ರಲ್ಲಿಯೂ ಸಹ ಅವಕಾಶವನ್ನು ಕಲ್ಪಿಸಲಾಗಿದೆ.

ನಾಮ ನಿರ್ದೇಶಿತ ವ್ಯಕ್ತಿಯು ಅನಿರ್ದಿಷ್ಟ ಅವಧಿಗೆ ಆ ನಗರ ಪಾಲಿಕೆಯ ಸದಸ್ಯರಾಗಿ ಮುಂದುವರೆಯುವುದು ಸೂಕ್ತವಲ್ಲ ಎಂಬ ಉದ್ದೇಶದಿಂದ ಪ್ರಕರಣ 29ಕ್ಕೆ ಸಹ ತಿದ್ದುಪಡಿಯನ್ನು ಪ್ರಸ್ತಾಪಿಸಿದ್ದು, ಹೊಸದಾಗಿ ಸೇರಿಸಲಾದ ಸ್ಥಳೀಯ ಪ್ರದೇಶಕ್ಕಾಗಿ ಪುನರ್ ವಿಂಗಡನೆಯನ್ನು 03 ತಿಂಗಳುಗಳ ಅವಧಿಯೊಳಗೆ ಮಾಡತಕ್ಕದ್ದು ಎಂದು ನಿರ್ದಿಷ್ಟ ಪಡಿಸಲು ಪ್ರಸ್ತಾಪಿಸಲಾಗಿದೆ. ಮುಂದುವರೆದು, ಪ್ರಕರಣ 33ಕ್ಕೆ ತಿದ್ದುಪಡಿಯನ್ನು ಪ್ರಸ್ತಾಪಿಸಿ, ಹೊಸದಾಗಿ ಸೇರಿಸಲಾದ ಸ್ಥಳೀಯ ಪ್ರದೇಶಕ್ಕಾಗಿ ಪುನರ್ ವಿಂಗಡನೆಯ ತರುವಾಯ ಆ ಪ್ರದೇಶದ ಸೇರ್ಪಡೆಯ ದಿನಾಂಕದಿಂದ 06 ತಿಂಗಳುಗಳಿಗಿಂತ ತಡವಾಗದಂತೆ ಚುನಾವಣೆಯನ್ನು ನಡೆಸತಕ್ಕದ್ದು ಎಂದು ಸೇರ್ಪಡಿಸಲು ಪ್ರಸ್ತಾಪಿಸಲಾಗಿದೆ. ಅಂದರೆ, ಪ್ರಸ್ತಾಪಿತ ನಾಮ ನಿರ್ದೇಶಿತ ವ್ಯಕ್ತಿಯು ಆ ನಗರ ಪಾಲಿಕೆಯ ಹೆಚ್ಚುವರಿ ಸದಸ್ಯರಾಗಿ ಮುಂದುವರೆಯಲು ಕಾಲಮಿತಿಯನ್ನು ಕಲ್ಪಿಸಲಾಗಿದೆ. ಚುನಾವಣೆಯಲ್ಲಿ ಹೊಸದಾಗಿ ಆಯ್ಕೆಯಾದ ಸದಸ್ಯರು ಆ ನಗರ ಪಾಲಿಕೆಯ ಉಳಿದ ಅವಧಿಯವರೆಗೆ ಮಾತ್ರ ಸದಸ್ಯತ್ವವನ್ನು ಹೊಂದಿರುತ್ತಾರೆ.

ಎಲ್ಲಾ ಅಂಶಗಳನ್ನು ಪ್ರಸ್ತಾಪಿತ ತಿದ್ದುಪಡಿ ವಿಧೇಯಕದಲ್ಲಿ ಗಮನಿಸಬಹುದಾಗಿದ್ದು, ಅವುಗಳನ್ನು ಸಂಪೂರ್ಣವಾಗಿ ಗಮನಿಸದೇ ಸಾರ್ವಜನಿಕರಲ್ಲಿ ತಪ್ಪು ಅಭಿಪ್ರಾಯ ಮೂಡಿಸಲು ಪ್ರಯತ್ನಿಸಿರುವುದು ಸೂಕ್ತವಾದ ಕ್ರಮವಲ್ಲ.

ನೂತನವಾಗಿ ರಚಿಸಲಾದ ನಗರ ಪಾಲಿಕೆಗಳ ವಾರ್ಡ್‌ಗಳ ಚುನಾವಣೆ ನಡೆಸಲು ರಾಜ್ಯ ಸರ್ಕಾರವು ಬದ್ಧವಾಗಿದೆ. ಅದಕ್ಕೆ ಪೂರಕವಾಗಿ ಈಗಾಗಲೇ ದಿನಾಂಕ: 02–09–2025ರ ಪ್ರತ್ಯೇಕ ಅಧಿಸೂಚನೆಗಳಲ್ಲಿ ಗ್ರೇಟರ್ ಬೆಂಗಳೂರು ಪ್ರದೇಶದ 05 ನಗರ ಪಾಲಿಕೆಗಳ ಗಡಿ ಪ್ರದೇಶಗಳನ್ನು ನಿರ್ದಿಷ್ಟಪಡಿಸಿ ನಗರ ಪಾಲಿಕೆಗಳನ್ನು ಸ್ಥಾಪಿಸಿ ಆದೇಶಿಸಲಾಗಿದೆ. ಮುಂದುವರೆದು, ದಿನಾಂಕ: 19–11–2025 ಮತ್ತು 01–12–2025 ರಂದು ಪ್ರತ್ಯೇಕವಾಗಿ ಹೊರಡಿಸಿರುವ ಅಧಿಸೂಚನೆಗಳ ಮೂಲಕ 05 ನಗರ ಪಾಲಿಕೆಗಳಲ್ಲಿ ಒಟ್ಟು 369 ವಾರ್ಡ್‌ಗಳ ಪುನರ್ ವಿಂಗಡಣೆಯನ್ನು ಮಾಡಲಾಗಿದೆ. ಈ ರೀತಿ 369 ವಾರ್ಡ್‌ಗಳ ಪುನರ್ ವಿಂಗಡಣೆ ಈಗಾಗಲೇ ಆಗಿರುವುದರಿಂದ, ಸದರಿ ವಾರ್ಡ್‌ಗಳಿಗೆ ನಾಮ ನಿರ್ದೇಶಿತ ಸದಸ್ಯರನ್ನು ನೇಮಕ ಮಾಡಲು ಅವಕಾಶವಿರುವುದಿಲ್ಲ. ಈ ವಾರ್ಡ್ ಗಳಿಗೆ ಚುನಾವಣೆ ನಡೆಸಿ, ಚುನಾಯಿತ ಪ್ರತಿನಿಧಿಗಳನ್ನು ಆಯ್ಕೆ ಮಾಡಲಾಗುತ್ತದೆ. ಮುಂದುವರೆದು, ಚುನಾವಣೆಗಳನ್ನು ನಡೆಸಲು ರಾಜ್ಯ ಚುನಾವಣಾ ಆಯೋಗಕ್ಕೆ ಪೂರಕವಾಗಿ ದಿನಾಂಕ: 01–09–2025ರ ಅಧಿಸೂಚನೆಯ ಮೂಲಕ ಗ್ರೇಟರ್ ಬೆಂಗಳೂರು ಆಡಳಿತ (ಚುನಾವಣೆ) ನಿಯಮಗಳು, 2025 ಮತ್ತು ದಿನಾಂಕ: 15–09–2025ರ ಅಧಿಸೂಚನೆಯ ಮೂಲಕ ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025 ಗಳನ್ನು ಅಂತಿಮಗೊಳಿಸಿ ಹೊರಡಿಸಲಾಗಿರುತ್ತದೆ. ರಾಜ್ಯ ಚುನಾವಣಾ ಆಯೋಗವು ಸಹ ಗ್ರೇಟರ್ ಬೆಂಗಳೂರು ಪ್ರದೇಶದ 05 ನಗರ ಪಾಲಿಕೆಗಳ ಸಾರ್ವತ್ರಿಕ ಚುನಾವಣೆಗೆ ವಾರ್ಡ್ ವಾರು ಮತದಾರರ ಪಟ್ಟಿಯನ್ನು ತಯಾರಿಸುವ ಬಗ್ಗೆ ಕಾರ್ಯಕ್ರಮ ಪಟ್ಟಿಯನ್ನು ನಿಗದಿಪಡಿಸಿ, ಆ ನಿಟ್ಟಿನಲ್ಲಿ ಕಾಲಮಿತಿಯಲ್ಲಿ ಕ್ರಮವಹಿಸುತ್ತಿದೆ.

ಹೀಗೆ ಗ್ರೇಟರ್ ಬೆಂಗಳೂರು ಪ್ರದೇಶದ 05 ನಗರ ಪಾಲಿಕೆಗಳ ಸಾರ್ವತ್ರಿಕ ಚುನಾವಣೆಗೆ ಸರ್ಕಾರವು ಎಲ್ಲಾ ಅಗತ್ಯ ಕ್ರಮವಹಿಸುತ್ತಿರುವ ಈ ಸಂದರ್ಭದಲ್ಲಿ ತಪ್ಪು ಮಾಹಿತಿಯನ್ನು ಸಾರ್ವಜನಿಕರಿಗೆ ನೀಡುವುದು ಸಮಂಜಸವಲ್ಲ ಎಂದು ತಿಳಿಸಲಾಗಿದೆ.

# ನಟಿ Shilpa Shetty ಒಡೆತನದ ಪಬ್ ನಲ್ಲಿ ಹೈಡ್ರಾಮಾ

**ಬೆಂಗಳೂರು:** ಬೆಂಗಳೂರಿನಲ್ಲಿರುವ ನಟಿ ಶಿಲ್ಪಾಶೆಟ್ಟಿ ಒಡೆತನದ ಪಬ್ ನಲ್ಲಿ ಹೈಡ್ರಾಮಾ ನಡೆದಿದ್ದು, ಪಬ್ ಸಿಬ್ಬಂದಿ ಮೇಲೆ ಉದ್ಯಮಿಯೊಬ್ಬರು ಹಲ್ಲೆ ಮಾಡಿರುವ ವಿಡಿಯೋ ವೈರಲ್ ಆಗುತ್ತಿದೆ.

ಬೆಂಗಳೂರು ನಗರದ ಲ್ಯಾಂಗ್‌ಫೋರ್ಡ್ ರಸ್ತೆಯಲ್ಲಿರುವ ನಟಿ ಶಿಲ್ಪಾಶೆಟ್ಟಿ ಒಡೆತನದ 'ಬ್ಯಾಸ್ಟಿಯನ್' ಪಬ್‌ನಲ್ಲಿ ಗಲಾಟೆ ನಡೆದಿದ್ದು, 2 ದಿನಗಳ ನಂತರ ಈ ಪ್ರಕರಣ ಬೆಳಕಿಗೆ ಬಂದಿದೆ. ಮೂಲಗಳ ಪ್ರಕಾರ ಗುರುವಾರ ರಾತ್ರಿ 1.30 ಸುಮಾರಿಗೆ ಈ ಘಟನೆ ನಡೆದಿದ್ದು, ಪಬ್‌ನಲ್ಲಿ ಸರ್ವಿಸ್ ವಿಚಾರಕ್ಕೆ ಸಂಬಂಧಿಸಿದಂತೆ ಗಲಾಟೆ ನಡೆದಿದೆ ಎಂದು ಹೇಳಲಾಗಿದೆ.

ಉದ್ಯಮಿಯೊಬ್ಬರು ಪಬ್ ಸಿಬ್ಬಂದಿಗಳ ಜೊತೆ ವಾಗ್ವಾದ ನಡೆಸಿದ್ದು ಈ ವೇಳೆ ಸಿಬ್ಬಂದಿಗಳ ವಿರುದ್ದ ಆವಾಚ್ಯಶಬ್ಧಗಳಿಂದ ನಿಂದಿಸಿದ್ದಾರೆ ಎನ್ನಲಾಗಿದೆ. ಈ ವೇಳೆ ಸಿಬ್ಬಂದಿ ಹಾಗೂ ಉದ್ಯಮಿ ನಡುವೆ ವಾಗ್ವಾದ ನಡೆದು, ಪಬ್ ಸಿಬ್ಬಂದಿಯ ಮೇಲೆ ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ.

ಇನ್ನು ಪಬ್ ಮುಚ್ಚುವ ಸಮಯದಲ್ಲಿ ಈ ಗಲಾಟೆ ನಡೆದಿದೆ. ಪಬ್‌ನಲ್ಲಿ ಸರ್ವಿಸ್ ನೀಡುವ ವಿಚಾರಕ್ಕೆ ಉದ್ಯಮಿ ಸಿಬ್ಬಂದಿಗಳ ಮೇಲೆ ಸಿಟ್ಟಾಗಿದ್ದಾರೆ. ಈ ವೇಳೆ ಸಿಬ್ಬಂದಿಗಳು ತುಂಬಾ ತಾಳ್ಮೆಯಿಂದ, ಅವರನ್ನು ಸಮಾಧಾನ ಮಾಡಲು ಮುಂದಾಗಿದ್ದಾರೆ.

ಆದರೆ ಉದ್ಯಮಿ ಮಾತು ಕೇಳದೆ ಸಿಬ್ಬಂದಿ ಮೇಲೆ ಹಲ್ಲೆ ಮಾಡಿದ್ದಾರೆ. ಈ ಘಟನೆಯ ವೇಳೆ ಉದ್ಯಮಿ ಅತಿಯಾಗಿ ಮದ್ಯಪಾನ ಮಾಡಿದ್ದರು ಎಂದು ಹೇಳಲಾಗಿದೆ. ಸಿಬ್ಬಂದಿ ಮೇಲೆ ಹಲ್ಲೆ ಮಾಡುವುದನ್ನು ತಡೆಯಲು ಪಬ್‌ನ ಬೌನ್ಸರ್‌ಗಳು ಪ್ರಯತ್ನಿಸಿದ್ದಾರೆ.




**ವಿಡಿಯೋ ವೈರಲ್** ಪಬ್ ನಲ್ಲಿ ನಡೆದ ಗಲಾಟೆ ಅಲ್ಲಿನ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಈ ವಿಡಿಯೋ ಇದೀಗ ವ್ಯಾಪಕ ವೈರಲ್ ಆಗುತ್ತಿದೆ.

**ಪೊಲೀಸ್ ದೂರು, ತನಿಖೆ** ಇನ್ನು ಗಲಾಟೆಯ ಬಗ್ಗೆ ಯಾವುದೇ ದೂರು ದಾಖಲಾಗಿಲ್ಲ. ಇದೀಗ ಪೊಲೀಸರು ಸ್ವತಃ ಪಬ್‌ಗೆ ಬಂದು ಮಾಹಿತಿ ಕಲೆಹಾಕಿದ್ದಾರೆ. ಕಬ್ಬನ್ ಪಾರ್ಕ್ ಠಾಣೆ ಪೊಲೀಸರಿಗೆ ಈ ಗಲಾಟೆ ಬಗ್ಗೆ ವಿಡಿಯೋವೊಂದು ಸಿಕ್ಕಿದೆ, ಅದರ ಆಧಾರ ಮೇಲೆ ತನಿಖೆ ನಡೆಸಿದ್ದಾರೆ.

# ಆಳಂದ ಮತಗಳ್ಳತನ ಪ್ರಕರಣ: SIT ಆರೋಪಪಟ್ಟಿ ಸತ್ಯಾಂಶಗಳಿಂದ ತುಂಬಿದೆ; ಡಿಕೆ.ಶಿವಕುಮಾರ್

**ಬೆಂಗಳೂರು:** ಆಳಂದ ವಿಧಾನಸಭಾ ಕ್ಷೇತ್ರದ ಮತಗಳ್ಳತನ ಪ್ರಕರಣದಲ್ಲಿ ವಿಶೇಷ ತನಿಖಾ ತಂಡ (ಎಸ್ಐಟಿ) ನ್ಯಾಯಾಲಯದಲ್ಲಿ ಸಲ್ಲಿಸಿರುವ ಆರೋಪಪಟ್ಟಿ ಸತ್ಯಾಂಶಗಳಿಂದ ತುಂಬಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಶನಿವರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದೆ ಅವರು, ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತಗಳ್ಳತನ ನಡೆದಿರುವುದು ಸತ್ಯ. ಹೀಗಾಗಿ ಬಿಜೆಪಿ ಮಾಜಿ ಶಾಸಕ ಗುತ್ತೇದಾರ್ ಅವರ ವಿರುದ್ಧ ಆರೋಪ ಪಟ್ಟಿ ಸಲ್ಲಿಕೆ ಮಾಡುವ ಮೂಲಕ ಮತಗಳ್ಳತನ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಆಳಂದ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಸುಭಾಷ್ ಗುತ್ತೇದಾರ್ ಅವರ ವಿರುದ್ಧ ಸಲ್ಲಿಕೆಯಾಗಿರುವ ಆರೋಪಪಟ್ಟಿ ಕುರಿತ ಪ್ರಶ್ನೆಗೆ ಉತ್ತರಿಸಿ, ಈ ಪ್ರಕರಣದಲ್ಲಿ ಯಾವುದೇ ಮುಚ್ಚು ಮರೆಯಿಲ್ಲ. ಅಕ್ರಮ ನಡೆದಿರುವುದು ಸತ್ಯ. ಗಂಭೀರವಾದ ತನಿಖೆ ನಡೆಸಿ, ಆರೋಪಪಟ್ಟಿ ಸಲ್ಲಿಸಿದ್ದಾರೆ. ಈ ವಿಚಾರದ ಬಗ್ಗೆ ನಮ್ಮ ಶಾಸಕರು ಸದನದಲ್ಲಿ ದನಿ ಎತ್ತಲಿದ್ದಾರೆ. ಇದು ಕೇವಲ ಕರ್ನಾಟಕದ ದನಿಯಲ್ಲ. ಇಡೀ ಭಾರತದ ದನಿ. ಜನರ ಕೃಪೆಯಿಂದ ನಾವು ಇಲ್ಲಿ ಅಧಿಕಾರಕ್ಕೆ ಬಂದಿದ್ದೇವೆ ಎಂದು ತಿಳಿಸಿದರು.

ಪ್ರಕರಣ ತನಿಖೆ ನಡೆಸಿ, ಅಧಿಕಾರಿಗಳು ಕ್ರಮ ತೆಗೆದುಕೊಂಡಿದ್ದಾರೆ. ಫೋನ್‌ನಲ್ಲಿ ದಾಖಲೆಗಳು ಡಿಲೀಟ್ ಆಗಿವೆ ಎಂದು ಇದೆ. ಇದರ ಬಗ್ಗೆ ವರದಿ ತರಿಸಿಕೊಂಡು ನೋಡಿ ಆ ನಂತರ ಮಾತನಾಡುತ್ತೇನೆ. ರಾಹುಲ್ ಗಾಂಧಿ ಅವರ ಸಲಹೆಯಂತೆ ಲೀಗಲ್ ಬ್ಯಾಂಕ್ ಅನ್ನು ಪ್ರತಿ ಕ್ಷೇತ್ರದಲ್ಲೂ ಪ್ರಾರಂಭ ಮಾಡಬೇಕು. ಈ ವಿಚಾರದ ಬಗ್ಗೆ ನಾವು ಹೋರಾಟ ಮಾಡುತ್ತೇವೆ ಎಂದರು.

# ಸಿಂಪಲ್ ಸುನಿ ನಿರ್ದೇಶನದ 'ದೇವರು ರುಜು ಮಾಡಿದನು' ಚಿತ್ರದ ಹ್ಯಾಪಿ ಬರ್ತಡೇ ಹಾಡಿಗೆ ಯುವನಟ ವಿರಾಜ್ ಭರ್ಜರಿ ಸ್ಟೆಪ್ಸ್

**ಬೆಂಗಳೂರು :** ಗತವೈಭವ ಸಿನಿಮಾ ಸಕ್ಸಸ್ ಖುಷಿಯಲ್ಲೀಗ ನಿರ್ದೇಶಕ ಸಿಂಪಲ್ ಸುನಿ ದೇವರು ರುಜು ಮಾಡಿದನು ಚಿತ್ರ ಕೈಗೆತ್ತಿಗೊಂಡಿದ್ದಾರೆ. ಈ ಚಿತ್ರದ ಮೂಲಕ ರಂಗಭೂಮಿ ಕಲಾವಿದ ವಿರಾಜ್ ಹೀರೋ ಆಗಿ ಚಿತ್ರರಂಗ ಪ್ರವೇಶ ಮಾಡುತ್ತಿದ್ದಾರೆ. ಶೀರ್ಷಿಕೆ ಮೂಲಕ ಕುತೂಹಲ ಹೆಚ್ಚಿಸಿರುವ ದೇವರು ರುಜು ಮಾಡಿದನು ಸಿನಿಮಾದ ಪ್ರಮೋಷನಲ್ ಸಾಂಗ್ ಬಿಡುಗಡೆ ಮಾಡಲಾಗಿದೆ.

ಬೆಂಗಳೂರಿನ ಎಂಎಂಬಿ ಲೆಗಸಿಯಲ್ಲಿ ದೇವರು ರುಜು ಮಾಡಿದನು ಸಿನಿಮಾದ ಹ್ಯಾಪಿ ಬರ್ತಡೇ ಹಾಡು ರಿಲೀಸ್ ಮಾಡಲಾಯಿತು. ಈ ಸಂದರ್ಭದಲ್ಲಿ ಗಾಯಕ ಅಂಥೋನಿ ದಾಸ್ ಸೇರಿದಂತೆ ಇಡೀ ಚಿತ್ರತಂಡ ಉಪಸ್ಥಿತರಿದ್ದರು.

**ಹಾಡು ಬಿಡುಗಡೆ ಬಳಿಕ ನಿರ್ದೇಶಕ**

ಸಿಂಪಲ್ ಸುನಿ ಮಾತನಾಡಿ, ದೇವರು ರುಜು ಮಾಡಿದನು ಮ್ಯೂಸಿಕಲ್ ಜರ್ನಿ ಸಿನಿಮಾ. ಚಿತ್ರದಲ್ಲಿ ಒಟ್ಟು 12 ಸಾಂಗ್ ಇದೆ. ವಿರಾಜ್ ಅದ್ಭುತ ಡ್ಯಾನ್ಸರ್. ಆಂಥೋನಿ ಸರ್ ನಾನು ನಿಮಗೆ ಋಣಿಯಾಗಿರುತ್ತೇನೆ. ಹಾಡನ್ನು ಪ್ರಮೋಷನ್ ಮಾಡಲು ಇಲ್ಲಿಗೆ ಬಂದಿದ್ದಾರೆ. ನಮಗೆ ಖುಷಿಯಾಗಿದೆ. ಇದಕ್ಕೆ ಹೇಳುವುದು ಸಿನಿಮಾ ದೊಡ್ಡದು. ನಾಗಾರ್ಜುನ್ ಅವರು ಒಳ್ಳೆ ಸಾಹಿತ್ಯ ಕೊಟ್ಟಿದ್ದಾರೆ. ಕೀರ್ತಿ ಅವರು ಅದ್ಭುತ ನಟಿ. ಒಳ್ಳೆ ಕಲಾದಂಡು ಚಿತ್ರದಲ್ಲಿ ಇದೆ ಎಂದರು.

ನಾಯಕ ವಿರಾಜ್ ಮಾತನಾಡಿ, ಸಿನಿಮಾ ಅನ್ನೋದು ಕನಸು, ದಾರಿ,ಜೀವನ. ಚಿಕ್ಕ ವಯಸ್ಸಿನಿಂದ ನಾನು ಇದನ್ನೇ ಅಂದುಕೊಂಡು ಬಂದಿದ್ದೇನೆ. ಈಗ ಅದನ್ನೇ ಫಾಲೋ ಮಾಡುತ್ತಿದ್ದೇನೆ. ನಮ್ಮ ಜೀವನದಲ್ಲಿ ಅಂದುಕೊಂಡ ಕೆಲಸ ಆಗುವುದಿಲ್ಲ. ಬೇರೆಯದ್ದೇ ಆಗುತ್ತದೆ. ಇದನ್ನು ದೇವರು ರುಜು ಮಾಡಿರುತ್ತಾನೆ. ಹ್ಯಾಪಿ ಬರ್ತಡೇ ಹಾಡಿಗೆ ಮಾಸ್ ರೂಪ ಕೊಟ್ಟಿದ್ದೇವೆ. ಇದು ಎಲ್ಲರ ಹುಟ್ಟುಹಬ್ಬಕ್ಕೆ ಬೇಕಾಗುವ ಹಾಡು. ಇದನ್ನು ಹೊರತುಪಡಿಸಿ ಬಹಳ ಅದ್ಭುತ ಹಾಡು ನಮ್ಮ ಚಿತ್ರದಲ್ಲಿ ಇದೆ ಎಂದರು.

ಗಾಯಕ ಆಂಥೋನಿ ದಾಸ್ ಹಾಡಿನ ಬಗ್ಗೆ ಮಾಹಿತಿ ಹಂಚಿಕೊಂಡರು. ನಾಯಕ ಕೀರ್ತಿ ಕೃಷ್ಣ ತಮ್ಮ ಪಾತ್ರದ



ಬಗ್ಗೆ ಮಾತನಾಡಿದರು.

ನಾಗಾರ್ಜುನ್ ಶರ್ಮಾ ಸಾಹಿತ್ಯ ಬರೆದ ಹ್ಯಾಪಿ ಬರ್ತಡೇ ಹಾಡಿಗೆ ಖ್ಯಾತ ಗಾಯಕ ಆಂಥೋನಿ ದಾಸ್ ಧ್ವನಿ ನೀಡಿದ್ದಾರೆ. ಜೂಡಾ ಸ್ಯಾಂಡಿ ಸಂಗೀತ ನಿರ್ದೇಶನ ಮಾಡಿದ್ದಾರೆ. ವಿರಾಜ್ ಭರ್ಜರಿಯಾಗಿ ಹ್ಯಾಪಿ ಬರ್ತಡೇ ಗೀತೆಗೆ ಹೆಜ್ಜೆ ಹಾಕಿದ್ದಾರೆ.

**ದೇವರು ರುಜು ಮಾಡಿದನು ಚಿತ್ರದಲ್ಲಿ ವಿರಾಜ್ ಗೆ ಜೋಡಿಯಾಗಿ ಯುವನಟಿಯರಾದ**

ಕೀರ್ತಿ ಕೃಷ್ಣ ಹಾಗೂ ದ್ವಿತಾ ರೈ ಅಭಿನಯಿಸುತ್ತಿದ್ದಾರೆ. ಸಿಂಪಲ್ ಸುನಿ ಇಲ್ಲೂ ಎಲ್ಲ ಕೆಲಸ ಮಾಡಿದ್ದಾರೆ. ಕಥೆ–ಚಿತ್ರಕಥೆ–ಸಂಭಾಷಣೆ ಹಾಗೂ ನಿರ್ದೇಶನ ಹೀಗೆ ಎಲ್ಲವನ್ನೂ ಹೆಗಲ ಮೇಲೆ ಹೊತ್ತುಕೊಂಡಿದ್ದಾರೆ.

ಚಿತ್ರಕ್ಕೆ ಜುಡಾ ಸಂಗೀತ ಕೊಟ್ಟಿದ್ದಾರೆ. ಸಂತೋಷ್ ರೈ ಪಾತಾಜೆ ಕ್ಯಾಮರಾವರ್ಕ್ ಮಾಡುತ್ತಿದ್ದಾರೆ. ಗ್ರೀನ್ ಹೌಸ್ ಮೂವೀಸ್ ಬ್ಯಾನರ್ ನಡಿ ಗೋವಿಂದ್ ರಾಜ್ ಸಿಟಿ ಈ ಚಿತ್ರಕ್ಕೆ ದುಡ್ಡುಹಾಕುತ್ತಿದ್ದಾರೆ.

# ಪಕ್ಷವನ್ನು ಬೂತ್ ಮಟ್ಟದಲ್ಲಿ ತಯಾರಿ ಮಾಡುವ ಕಾಲ ಬಂದಿದೆ: ಬಸವರಾಜ ಬೊಮ್ಮಾಯಿ

**ಹಾವೇರಿ:** ನೂತನವಾಗಿ ಆಯ್ಕೆಯಾಗಿರುವ ಮಂಡಲ ಅಧ್ಯಕ್ಷರು ಜಿಲ್ಲಾ ಘಟಕದೊಂದಿಗೆ ಸೇರಿ ಮುಂದಿನ ಹತ್ತು ದಿನಗಳಲ್ಲಿ ಹಾವೇರಿ ಜಿಲ್ಲೆಯಲ್ಲಿ ಕೆಟ್ಟಿರುವ ರಸ್ತೆಗಳ ಫೋಟೊ ತೆಗೆದು ರಸ್ತೆ ಗ್ಯಾರೆಂಟಿ ಕೊಡುವಂತೆ ಆಂದೋಲನ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ



ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಭಾರತೀಯ ಜನತಾ ಪಾರ್ಟಿ ಹಾವೇರಿ ವಿಧಾನಸಭಾ ಮತಕ್ಷೇತ್ರದ ವತಿಯಿಂದ ಏರ್ಪಡಿಸಿದ *ಹಾವೇರಿ ನಗರ – ಹಾವೇರಿ ಗ್ರಾಮೀಣ – ಹತ್ತಿಮತ್ತೂರ ಮಂಡಲಗಳ* ನೂತನ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಯಾವಾಗ ಒಳ್ಳೆಯ ಕೆಲಸ ಮಾಡಲು ಸೇರುತ್ತೇವೆ ಅದೆ ಒಳ್ಳೆಯ ಗಳಿಗೆ. ಬುದ್ದಿ ಮತ್ತು ಹೃದಯ ಯಾವಾಗ ಒಂದೇ ಸಮಯಕ್ಕೆ ಸೇರುತ್ತದೆ ಅದೆ ಅಮೃತ ಘಳಿಗೆ ಈಗ ಹಾವೇರಿ ಬಿಜೆಪಿಗೆ ಅಮೃತ ಘಳಿಗೆ ಬಂದಿದೆ. ಹಿಂದೆ ಇಬ್ಬರು ಮಂಡಲ ಅಧ್ಯಕ್ಷರು ಚನ್ನಾಗಿ ಕೆಲಸ ಮಾಡಿದ್ದಾರೆ. ಇನ್ನೊಂದು ಮಂಡಲ ಮಾಡುವ ಸಲುವಾಗಿ ಆಯ್ಕೆ ತಡವಾಯಿತು. ಹತ್ತಿ ಮತ್ತೂರು ಅಧ್ಯಕ್ಷರಾದರೆ ಅನುಕೂಲವಾಗುತ್ತದೆ ಎನ್ನುವ ಕಾರಣದಿಂದ ತಡವಾಯಿತು. ತಡವಾಗಲು ಎರಡು ಕಾರಣ ಇದೆ ಹಳಬರು ಒಳ್ಳೆಯ ಕೆಲಸ ಮಾಡಿದ್ದಾರೆ ಅವರನ್ನು ಹೇಗೆ ತೆಗೆಯುವುದು ಹೊಸಬರು ಬಹಳ ಜನ ಇದ್ದಾರೆ ಅವರಲ್ಲಿ ಯಾರನ್ನು ಮಾಡುವುದು ಎನ್ನುವ ಜಿಜ್ಞಾಸೆ ಇರುತ್ತದೆ. ಎಲ್ಲವೂ ಸರಳವಾಗಿ ನಡೆದಿದೆ ಎಂದು ಹೇಳಿದರು.

**ಯುದ್ದ ತಯಾರಿ**

ನೂತನ ಅಧ್ಯಕ್ಷರು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷ ಕೊಡುವ ಕೆಲಸ ನಿಷ್ಠೆಯಿಂದ ಮಾಡಿ ನಾವು ನಿಮಗೆ ಹೆಗಲಿಗೆ ಹೆಗಲು ಕೊಟ್ಟು ನಿಲ್ಲುತ್ತೇವೆ. ರಾಜಕೀಯವಾಗಿ ಪ್ರಮುಖ ಘಟ್ಟದಲ್ಲಿ ನಾವಿದ್ದೇವೆ. ಚುನಾವಣೆ ಇನ್ನೂ ಎರಡೂವರೆ ವರ್ಷ ಇದೆ. ಆದರೆ, ಯುದ್ಧದ ತಯಾರಿ ಶಾಂತಿಯ ಕಾಲದಲ್ಲಿ ಮಾಡಬೇಕು. ನಮ್ಮ ಪಕ್ಷವನ್ನು ಬೂತ ಮಟ್ಟದಲ್ಲಿ ತಯಾರಿ ಮಾಡುವ ಕಾಲ ಬಂದಿದೆ. ಸಕ್ರೀಯರಾದವರನ್ನು ಎಸ್ಸಿ ಎಸ್ಟಿ ರೈತರು, ಯುವಕರು, ಮಹಿಳೆಯರ ಘಟಕ ಮಾಡಬೇಕು. ಏಳು ಘಟಕ ಮಾಡಿದರೆ ಸುಮಾರು ಎಪ್ಪತ್ತು ಜನರಾಗುತ್ತಾರೆ. ಬೂತ್ ಪದಾಧಿಕಾರಿಗಳ ಆಯ್ಕೆಯನ್ನು ಪ್ರಾಮಾಣಿಕವಾಗಿ ಮಾಡಬೇಕು. ಎಲ್ಲ ಬೂತುಗಳಿಗೆ ಹೋಗಿ ಹಿರಿಯುರು ಯುವಕರನ್ನು ಸೇರಿಸಿ ಆಯ್ಕೆ ಮಾಡಬೇಕು ಎಂದು ಸಲಹೆ ನೀಡಿದರು.

**ಸರ್ಕಾರದ ವಿರುದ್ದ ಆಂದೋಲನ**

ಎರಡನೆಯದಾಗಿ ರಾಜ್ಯ ಮಟ್ಟದಲ್ಲಿ ನಡೆಯುತ್ತಿರುವ ಬೆಳವಣಿಗೆಗೆ ಹೋರಾಟ ಮಾಡಬೇಕು. ಮೂರು ಅಧ್ಯಕ್ಷರು ಮನೆ ಮಠ ಮರೆಯಬೇಕು. ನಾವು ನೀವು ಸೇರಿ ಹೋರಾಟ ಮಾಡೋಣ ಸುದೀರ್ಘವಾದ ಹೋರಾಟ ಮಾಡಲು ಅವಕಾಶ ಇದೆ ರಾಜ್ಯ ಸರ್ಕಾರ ನುಡಿದಂತೆ ನಡೆದಿಲ್ಲ. ಮೆಕ್ಕೆಜೋಳ ಖರಿದಿಸಿಲ್ಲ, ಬೆಳೆ ಹಾನಿ ಪರಿಹಾರ ಕೊಟ್ಟಿಲ್ಲ. ಯಾವುದೇ ಅಭಿವೃದ್ಧಿ ಆಗಿಲ್ಲ. ಮುಂದಿನ ಹತ್ತು ದಿನದಲ್ಲಿ ಪ್ರಮುಖ ರಸ್ತೆಗಳು ಕೆಟ್ಟಿರುವ ಫೋಟೊ ತೆಗೆದು ರಸ್ತೆ ಗ್ಯಾರಂಟಿ ಕೊಡಿ ಎಂದು ಆಂದೋಲನ ಮಾಡಬೇಕು. ರೈತರಿಗೆ ಬೇಕಾದ ರಸ್ತೆ, ತಾಲೂಕು ಹಾಗೂ ಜಿಲ್ಲಾ ರಸ್ತೆಗಳ ಅಭಿವೃದ್ಧಿಗೆ ಹೋರಾಟ ಮಾಡಬೇಕು. ಎಲ್ಲವನ್ನು ಸಾಮಾಜಿಕ ಜಾಲತಾಣ ಮಾಧ್ಯಮಗಳಲ್ಲಿ ಹಾಕಬೇಕು ಟೀಕೆ ಬಂದಾಗ, ವಿರೋಧ ಬಂದಾಗ ನಾವು ಕೆಲಸ ಮಾಡುತ್ತಿದ್ದೇವೆ ಎಂದು ಅರ್ಥ. ಇದಕ್ಕೆ ಪೂರಕವಾಗಿ ಜಿಲ್ಲಾ ಪದಾಧಿಕಾರಿಗಳು ಪೂರಕವಾಗಿ ಮತ್ತು ಮಂಡಲ ಪದಾಧಿಕಾರಿಗಳು ಒಂದು ವಾರದಲ್ಲಿ ಮಾಡಬೇಕು ಎಂದು ಹೇಳಿದರು.

**ಜನ ಸಂಪರ್ಕ ಮಾಡಿ**

ಎಲ್ಲಾ ತಾಲೂಕುಗಳಲ್ಲಿ ಎಲ್ಲ ವರ್ಗದವರಿಗೆ ಸರಿಯಾದ ಪ್ರಾತಿನಿಧ್ಯ ದೊರೆಯುವಂತೆ ಮಾಡಬೇಕು. ಎಸ್ಸಿ ಎಸ್ಟಿ, ಒಬಿಸಿ, ಮಹಿಳಾ ಮೋರ್ಚಾ, ರೈತ ಮೋರ್ಚಾಗಳನ್ನು ಬಲಪಡಿಸಬೇಕು. ಜಿಲ್ಲಾ ಮಟ್ಟದಲ್ಲಿ ಮೋರ್ಚಾಗಳು ಗಟ್ಟಿಯಾದರೆ ತಾಲೂಕು ಮೋರ್ಚಾಗಳು ಗಟ್ಟಿಯಾಗುತ್ತವೆ. ನಾವು ಪ್ರತಿಯೊಂದು ಜಿಲ್ಲಾ ಪಂಚಾಯತಿಗಳಿಗೆ ಬರುತ್ತೇವೆ ಅಲ್ಲಿನ ಸಮಸ್ಯೆ ನೋಡಿ ಪ್ರತಿಭಟನೆ ಮಾಡುತ್ತೇವೆ. ಮುಂದಿನ ಮೂರು ತಿಂಗಳು ನಿರಂತರ ಈ ರೀತಿ ಕಾರ್ಯಕಮ್ರ ಮಾಡೋಣ ಪ್ರಧಾನಿ ಮೋದಿಯವರ ವಿಕಸಿತ, ಸಬ್ ಕೆ ಸಾತ್ ಸಬ್ ಕಾ ವಿಕಾಸ್ ಸಬ್ ಕಾ ಪ್ರಯಾಸ್ ಅವರ ಉದ್ದೇಶ ಈಡೆರುವ ರೀತಿಯಲ್ಲಿ ಪ್ರಾಮಾಣಿಕ ರೀತಿಯಲ್ಲಿ ಮಾಡೋಣ ಎಲ್ಲ ಶಾಸಕರು, ಎಂಪಿ ಗಳು ಜನ ಸಂಪರ್ಕ ಮಾಡಿ ಜನರೊಂದಿಗೆ ಇರಬೇಕು. ಯಾರಿಗಾದರೂ ಹೊಸ ಯೋಜನೆ ಆಲೋಚನೆ ಬಂದರೆ ಅವರು ನಮೊ ಆ್ಯಪ್ ಗೆ ಕಳುಹಿಸಬೇಕು ಅದನ್ನು ಅವರು ರಾಷ್ಟ್ರ ಮಟ್ಟದಲ್ಲಿ ಮಾಡುತ್ತಾರೆ. ಇಲ್ಲಿ ಆರಂಭವಾಗಿರುವ ಪ್ರಯಾಣ ವಿಜಯ ಯಾತ್ರೆಯಾಗುವವರೆಗೂ ನಾವು ವಿರಮಿಸಬಾರದು. ಎಲ್ಲ ಅಧ್ಯಕ್ಷರು ಕ್ರಿಯಾಶಿಲರಾಗಿ ಕೆಲಸ ಮಾಡಬೇಕು. ಇಡಿ ಕರ್ನಾಟಕದಲ್ಲಿ ಹಾವೇರಿ ಜಿಲ್ಲಾ ಘಟಕ ಮಾದರಿಯಾಗಲಿ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷರಾದ ವೀರುಪಾಕ್ಷಪ್ಪ ಬಳ್ಳಾರಿ, ಮಾಜಿ ಶಾಸಕರಾದ ಶಿವರಾಜ ಸಜ್ಜನ, ಮುಖಂಡರುಗಳಾದ ಗವಿಸಿದ್ದಪ್ಪ ದ್ಯಾಮಣ್ಣವರ, ಎನ್.ಎಂ ಈಟೇರ, ಡಿ.ಎಸ್ ಮಾಳಗಿ, ಮುತ್ತಣ್ಣ ಯಲಿಗಾರ, ನಿಕಟ ಪೂರ್ವ ಅಧ್ಯಕ್ಷರುಗಳಾದ ಗಿರೀಶ ತುಪ್ಪದ, ಬಸವರಾಜ ಕಳಸೂರ ಹಾಗೂ ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾದ ಮಾರುತಿ ಗೊರವರ, ಕಿರಣ ಕೊಳ್ಳಿ, ಬಸವರಾಜ ಕೋಳಿವಾಡ ಸೇರಿದಂತೆ ಹಲವಾರು ಪ್ರಮುಖರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕೇವಲ 300 ರೂಪಾಯಿಗೆ ಎಲ್‌ಪಿಜಿ ಸಿಲಿಂಡರ್ ಘೋಷಿಸಿದ ಸರ್ಕಾರ

ಕೇಂದ್ರ ಸರ್ಕಾರವು ಸಬ್ಸಿಡಿ ಮೂಲಕ ಎಲ್‌ಪಿಜಿ ಸಿಲಿಂಡರ್ ಅನ್ನು ಮನೆಬಾಗಿಲಿಗೆ ತಲುಪಿಸುತ್ತಿದೆ. ಡಿಸೆಂಬರ್ ಆರಂಭದಲ್ಲೇ ವಾಣಿಜ್ಯ ಬಳಕೆ ಸಿಲಿಂಡರ್ ದರ ಇಳಿಸುವ ಮೂಲಕ ಗುಡ್‌ನ್ಯೂಸ್ ಕೊಟ್ಟಿದೆ. ಆದರೆ ದಿನಬಳಕೆ ಸಿಲಿಂಡರ್ ದರ ಯತಾಸ್ಥಿತಿಯಲ್ಲಿದ್ದು, ಕರ್ನಾಟಕದಲ್ಲಿ ದಿನಬಳಕೆ ಎಲ್‌ಪಿಜಿ ದರ ?855.50 ಇದೆ. ಆದರೆ ಅಸ್ಸಾಂ ಸರ್ಕಾರ ಕೇವಲ ?300ಗೆ ಎಲ್‌ಪಿಜಿ ಸಿಲಿಂಡರ್ ಲಭ್ಯವಾಗುವಂತೆ ಪ್ರಮುಖ ಸಬ್ಸಿಡಿಯನ್ನು ಘೋಷಿಸಿದೆ. ಹೌದು, ಅಸ್ಸಾಂ ಸರ್ಕಾರವು



ಅರ್ಹರ ಮನೆಗಳಿಗೆ ಕೇವಲ ?300ಗೆ ಎಲ್‌ಪಿಜಿ ಸಿಲಿಂಡರ್ ಲಭ್ಯವಾಗುವಂತೆ ಪ್ರಮುಖ ಸಬ್ಸಿಡಿಯನ್ನು ಘೋಷಿಸುವ ಮೂಲಕ ಬಡ ಕುಟುಂಬಗಳಿಗೆ ನೆಮ್ಮದಿ ನೀಡಿದೆ. ಪ್ರಧಾನ ಮಂತ್ರಿ ಉಜ್ವಲ ಯೋಜನೆ (ಪಿಎಂಯುವೈ) ಅಡಿಯಲ್ಲಿ ಕಡಿಮೆ ಆದಾಯದ ಕುಟುಂಬಗಳನ್ನು ಗುರಿಯಾಗಿರಿಸಿ ಈ ಘೋಷಣೆ ಮಾಡಲಾಗಿದೆ. ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಡಿಸೆಂಬರ್ ಆರಂಭದಲ್ಲೇ ಈ ಬಗ್ಗೆ ಅಧಿಕೃತವಾಗಿ ಮಾಹಿತಿ ಹಂಚಿಕೊಂಡರು.

ರಾಜ್ಯದ ಲಕ್ಷಾಂತರ ಕುಟುಂಬಗಳಿಗೆ 300 ರೂಪಾಯಿಗೆ ಎಲ್‌ಪಿಜಿ ಸಿಲಿಂಡರ್ ಶೀಘ್ರದಲ್ಲೇ ಕೈಸೇರಲಿದೆ ಎಂದು ಘೋಷಿಸಿದರು. ಕಡಿಮೆ ಆದಾಯದ ಕುಟುಂಬಗಳ ಮೇಲಿನ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿರುವ ಈ ಉಪಕ್ರಮವು ಒರುನೋಡೈ ಯೋಜನೆ ಮತ್ತು ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿ ಫಲಾನುಭವಿಗಳಿಗೆ ಎಲ್‌ಪಿಜಿ ಸಿಲಿಂಡರ್‌ಗಳ ಮೇಲೆ 250 ರೂಪಾಯಿ ಸಬ್ಸಿಡಿ ಒದಗಿಸುತ್ತದೆ ಎಂದಿದ್ದಾರೆ. ರಾಜ್ಯ ಸರ್ಕಾರವು ಶುದ್ಧ ಅಡುಗೆ ಇಂಧನವನ್ನು ಕೈಗೆಟುಕುವ ದರದಲ್ಲಿ ಪಡೆಯಲು ಹೆಚ್ಚುವರಿ ಬೆಂಬಲವನ್ನು ನೀಡಲಿದೆ ಎಂದಿದ್ದಾರೆ. ಅದರಂತೆ ಕೇವಲ 300 ರೂಪಾಯಿಗೆ ಅಡುಗೆ ಅನಿಲ ಸಿಗುವುದು ಇನ್ಮುಂದೆ ಕೇವಲ ಕನಸಲ್ಲ, ಆದರೆ ಅಸ್ಸಾಂನ ಲಕ್ಷಾಂತರ ಕುಟುಂಬಗಳಿಗೆ ಶೀಘ್ರದಲ್ಲೇ ಇದು ಕಾರ್ಯರೂಪಕ್ಕೆ ಬರಲಿದೆ ಎಂದು ಸಿಹಿಸುದ್ದಿ ನೀಡಿದ್ದಾರೆ. ಅಸ್ಸಾಂನ ಒರುನೋಡಿ ಕುಟುಂಬಗಳು ಮತ್ತು ಪಿಎಂ ಉಜ್ವಲ ಫಲಾನುಭವಿಗಳು ಶೀಘ್ರದಲ್ಲೇ ರಾಜ್ಯ ಸರ್ಕಾರದಿಂದ ತಮ್ಮ ಎಲ್‌ಪಿಜಿ ಸಿಲಿಂಡರ್‌ಗಳಿಗೆ ರೂ. 250 ಸಬ್ಸಿಡಿ ಪಡೆಯಲಿದ್ದಾರೆ. ಇದು ನನ್ನ ಕುಟುಂಬ ಸದಸ್ಯರಿಗೆ ಜೀವನವನ್ನು ಮತ್ತಷ್ಟು ಸುಲಭಗೊಳಿಸುತ್ತದೆ ಎಂದು ಅವರು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಅಲ್ಲದೆ ಪಿಎಂಯುವೈ ಅಡಿಯಲ್ಲಿ ಕೇಂದ್ರ ಸರ್ಕಾರದ ಅಸ್ತಿತ್ವದಲ್ಲಿರುವ ಬೆಂಬಲಕ್ಕೆ ಪೂರಕವಾಗಿ ಈ ಸಬ್ಸಿಡಿಯನ್ನು ನೇರವಾಗಿ ಫಲಾನುಭವಿಗಳಿಗೆ ನೀಡಲು ಅಸ್ಸಾಂ ಸರ್ಕಾರ ಮುಂದಾಗಿದೆ. ಸರ್ಕಾರದ ಈ ಕ್ರಮದಿಂದಾಗಿ ಆರ್ಥಿಕವಾಗಿ ದುರ್ಬಲ ಕುಟುಂಬಗಳ ದೊಡ್ಡ ಭಾಗಕ್ಕೆ, ವಿಶೇಷವಾಗಿ ಮಹಿಳೆಯರಿಗೆ ಪ್ರಯೋಜನವನ್ನು ನೀಡುತ್ತದೆ. ಅಸ್ಸಾಂನ ಒರುನೋಡೈ ಮತ್ತು ಪಿಎಂಯುವೈ ಫಲಾನುಭವಿಗಳಿಗೆ ಈ ನಿರ್ಧಾರವು ದೊಡ್ಡ ವರದಾನವಾಗಲಿದೆ. , ಒಂದಾದ ಒರುನೋಡೈ ಯೋಜನೆಯು ಪ್ರಸ್ತುತ ಅರ್ಹ ಕುಟುಂಬಗಳಿಗೆ ಅಗತ್ಯ ವೆಚ್ಚಗಳನ್ನು ಪೂರೈಸಲು ಮಾಸಿಕವಾಗಿ ಆರ್ಥಿಕ ಸಹಾಯವನ್ನು ಒದಗಿಸುತ್ತಿದೆ. ಕರ್ನಾಟಕದಲ್ಲೂ ದರ ಇಳಿಕೆ? ಹೀಗಾಗಿ ಸದ್ಯ ಎಲ್‌ಪಿಜಿ ಸಬ್ಸಿಡಿಯನ್ನು ಇದೇ ಯೋಜನೆಗೆ ಸಂಯೋಜಿಸುವ ಮೂಲಕ ರಾಜ್ಯ ಸರ್ಕಾರವು ಹೆಚ್ಚುತ್ತಿರುವ ಮನೆಯ ವೆಚ್ಚಗಳನ್ನು ಮತ್ತಷ್ಟು ಪರಿಹರಿಸಲು ಮುಂದಾಗಿದೆ. ಇಂಧನ ಬೆಲೆಗಳು ಕಡಿಮೆ ಆದಾಯದ ಜನರಿಗೆ ಹೊರೆಯಾಗಿರುವುದರಿಂದ ಮುಂದಿನ ವರ್ಷದ ವಿಧಾನಸಭಾ ಚುನಾವಣೆಗೆ ಮುನ್ನವೇ ರಾಜ್ಯದ ಜನರಿಗೆ ಈ ರಿಲೀಫ್ ನೀಡಿದೆ. ಕರ್ನಾಟಕ ಸರ್ಕಾರ ಕೂಡ ಇದೇ ಮಾದರಿ ಕಡಿಮೆ ದರಕ್ಕೆ ಎಲ್‌ಪಿಜಿ ಸಿಲಿಂಡರ್ ವಿತರಿಸಿದರೆ ಜನಸಾಮಾನ್ಯರಿಗೆ ಹೊರೆ ತಗ್ಗಲಿದೆ.

# ವಿಶ್ವದ ಅತ್ಯಂತ ಕಿರಿಯ ತಾಯಿ ಯಾರು ಗೊತ್ತಾ! ಆಕೆ 5 ವರ್ಷಕ್ಕೆ ಗಂಡು ಮಗುವಿಗೆ ಜನ್ಮ ನೀಡಿದ್ದ ಕಥೆ

ಈ ಭೂಮಿ ಮೇಲೆ ಎಂತಹ ವಿಚಿತ್ರ ರೀತಿಯ ಘಟನೆಗಳು ನಡೆಯುತ್ತವೆ ಅಂದರೆ ನೀವು ಅದನ್ನು ಕೆಲವೊಮ್ಮೆ ಊಹಿಸುವುದು ಸಹ ಕಷ್ಟವಾಗುತ್ತದೆ. ಹಲವು ಬಾರಿ ಇಂತಹ ಘಟನೆಗಳು ನಿಮಗೆ ಅಚ್ಚರಿ ಹಾಗೂ ಕುತೂಹಲ ಮೂಡಿಸುತ್ತವೆ. ಅಂತಹ ಹತ್ತು ಹಲವು ವಿಚಾರಗಳು ಅಥವಾ ಘಟನೆಗಳ ಪೈಕಿ ನಾವಿಂದು ಅತ್ಯಂತ ಚಿಕ್ಕ ವಯಸ್ಸಿನಲ್ಲೇ ಗರ್ಭಧರಿಸಿದ ಹುಡುಗಿಯ ಕಥೆಯೊಂದರ ಕುರಿತಾಗಿ ತಿಳಿದುಕೊಳ್ಳೋಣ. ಗರ್ಭಧರಿಸಲು ಮಹಿಳೆ ಒಂದು ವಯಸ್ಸಿಗೆ ಬರಬೇಕು. ಹಾಗೆ ಕಾನೂನು ಪ್ರಕಾರವಾಗಿಯೂ ಆ ವಯಸ್ಸನ್ನು ನಿಗಧಿ ಮಾಡಲಾಗಿದೆ. ಇದು ಮಹಿಳೆಯರ ಆರೋಗ್ಯದ ದೃಷ್ಟಿಯಿಂದ ವಿಶ್ವದ ಯಾವುದೇ ದೇಶಕ್ಕೆ ಹೋದರು ಸಹ ನೋಡಬಹುದು. ಆದ್ರೆ ಇಲ್ಲೊಂದು ಪ್ರಕರಣದಲ್ಲಿ ಚಿಕ್ಕ ಮಗು ಗರ್ಭಧರಿಸಿ ತನ್ನಂತೆ ಮತ್ತೊಂದು ಮಗುವಿಗೆ ಜನ್ಮ ನೀಡಿದ ವಿಚಿತ್ರ ಹಾಗೂ ಅಷ್ಟೇ ಕುತೂಹಲಕಾರಿ ಘಟನೆ ನೋಡಬಹುದು.

ಈ ಘಟನೆ ನಡೆದಿರುವುದು ಸೌತ್ ಅಮೆರಿಕದ ಸಣ್ಣ ದೇಶ ಪೆರುವಿನಲ್ಲಿ. ಪೆರುವಿನ ಸಣ್ಣ ಹಳ್ಳಿಯಾಗಿರುವ ಆಂಡಿಯನ್ ಎಂಬ ಪ್ರದೇಶದಲ್ಲಿ ಈ ಘಟನೆ ನಡೆದಿತ್ತು. ಹೌದು ಆಕೆ ಕೇವಲ 5 ವರ್ಷದ ಹುಡುಗಿ ಚಿಕ್ಕ ಮಗುವಿಗೆ ಜನ್ಮ ನೀಡಿದ್ದಳು. ಇದು ಇಡೀ ವೈದ್ಯಕೀಯ ಪ್ರಪಂಚಕ್ಕೆ ದೊಡ್ಡ ಅಚ್ಚರಿಯಾಗಿತ್ತು, ಹಾಗೆ ಆಕೆಯನ್ನು ವಿಶ್ವದ ಅತ್ಯಂತ ಕಿರಿ ವಯಸ್ಸಿನ ತಾಯಿ ಎಂದು ಕರೆಯಲಾಗಿತ್ತು. ಏನಿದು ಘಟನೆ ಆಕೆ ತಾಯಿಯಾಗಿದ್ದು ಹೇಗೆ!

ಆಂಡಿಯನ್ ಹಳ್ಳಿಯಲ್ಲಿ 5 ವರ್ಷದ ಲೀನಾ ಮದೀನಾ ಎಂಬ ಹುಡುಗಿ 5 ವರ್ಷದವಳಾಗಿದ್ದಾಗ ಮಗುವಿಗೆ ಜನ್ಮ ನೀಡಿದ್ದಳು. ಇದು 1939ರಲ್ಲಿ ನಡೆದ ಘಟನೆಯಾಗಿದೆ. ಆಕೆಯ ಹೊಟ್ಟೆಯಲ್ಲಿ ಗಡ್ಡೆ ಬೆಳೆಯುತ್ತಿದೆ ಎಂದು ನಂಬಲಾಗಿತ್ತಾದರೂ ಬಳಿಕ ಆಕೆಯ ಹೊಟ್ಟೆಯಲ್ಲು ಭ್ರೂಣವಿದೆ ಎಂದು ತಿಳಿದು ಎಲ್ಲರು ಆಘಾತಕ್ಕೊಳಗಾಗಿದ್ದರು. ಲೀನಾಗೆ ಪೂರ್ಣ ಪರೀಕ್ಷೆಯನ್ನು ನೀಡಿದ ನಂತರ ವೈದ್ಯರು ಆಘಾತಕಾರಿ ವಿಚಾರ ಹೇಳಿದ್ದರು. ಆಕೆಯನ್ನು ಪರೀಕ್ಷೆಗೆ ಒಳಪಡಿಸುವ ಸಮಯಕ್ಕೆ ಆಕೆ 7 ತಿಂಗಳ ಗರ್ಭಿಣಿಯಾಗಿದ್ದಳು. ಹಾಗೆ ಆಕೆಗೆ ಶಸ್ತ್ರಚಿಕಿತ್ಸೆ ಮೂಲಕ 3 ಕೆ.ಜಿ ತೂಕದ ಗಂಡು ಮಗುವಿಗೆ ಜನ್ಮ ನೀಡಿದಳು. ಈ ವೇಳೆಗೆ ಆಕೆ 5 ವರ್ಷ 7 ತಿಂಗಳು 21 ದಿನದ ಮಗು ಆಗಿದ್ದಳು. ಹೀಗಾಗಿ ವಿಶ್ವದ ಅತ್ಯಂತ ಕಿರಿಯ ತಾಯಿ ಎಂಬ ಕೀರ್ತಿ ಪಡೆದಳು.

**ಆಕೆ ಗರ್ಭಿಣಿಯಾಗಿದ್ದಕ್ಕೆ ಸಿಗಲಿಲ್ಲ ಉತ್ತರ!**

ಲೀನಾ ಗರ್ಭಿಣಿಯಾಗಿರುವುದು ಆರಂಭದಲ್ಲಿ ಪೋಷಕರಿಗೂ ತಿಳಿದಿರಲಿಲ್ಲ. ಆಕೆಯ ಉದರ



ಉಬ್ಬಿಕೊಂಡಿದ್ದ ಕಾರಣ ಹೊಟ್ಟೆಯಲ್ಲಿ ಕ್ಯಾನ್ಸರ್ ಅಥವಾ ಇನ್ಯಾವುದೇ ಅನಾರೋಗ್ಯ ಇರಬಹುದು ಎಂದು ಪರೀಕ್ಷೆಗೆ ಮುಂದಾಗಲಾಗಿತ್ತು. ಆದ್ರೆ ಆಕೆ ಗರ್ಭಿಣಿ ಎಂಬ ವಿಚಾರ ತಿಳಿದು ಆಘಾತಕ್ಕೊಳಗಾಗಿದ್ದರು. ಆದ್ರೆ ಆಕೆ ಗರ್ಭಿಣಿಯಾಗಿರುವುದು ಹೇಗೆ ಅನ್ನೋದನ್ನು ಪತ್ತೆ ಮಾಡಲು ವೈದ್ಯರ ತಂಡ ಹಾಗೆ ಅಧಿಕಾರಿಗಳು ಸಹ ಮುಂದಾದರು.

ಆದ್ರೆ ಆಕೆ ಗರ್ಭಿಣಿಯಾಗಲು ಕಾರಣವಾಗಿದ್ದು ಯಾರು ಎಂಬುದನ್ನು ಪತ್ತೆ ಮಾಡುವುದು ಕಷ್ಟವಾಗಿತ್ತು. ಆಕೆಯಲ್ಲಿ ಹಾರ್ಮೋನ್ ಸಂಬಂಧಿತ ದೈಹಿಕ ಸಮಸ್ಯೆಗಳಿರುವುದನ್ನು ವೈದ್ಯರ ತಂಡ ಪತ್ತೆ ಮಾಡಿದ್ದರು. ಆಕೆ ಹುಟ್ಟುವಾಗಲೇ ಇಂತಹದೊಂದು ಸಮಸ್ಯೆಯೊಂದಿಗೆ ಹುಟ್ಟಿದ್ದಳು. ಲೀನಾ ಬಾಲ್ಯದಲ್ಲಿ ಸಾಮಾನ್ಯವಾಗಿ ಕಂಡುಬರುವ ಅಕಾಲಿಕ ಪ್ರೌಢಾವಸ್ಥೆಯ ಸ್ಥಿತಿಯ ಒಂದು ವಿಪರೀತ ಪ್ರಕರಣವನ್ನು ಪ್ರತಿನಿಧಿಸುತ್ತಾರೆ. ಅಕಾಲಿಕ ಪ್ರೌಢಾವಸ್ಥೆಯನ್ನು ಹುಡುಗಿಯರಿಗೆ 8 ವರ್ಷಕ್ಕಿಂತ ಮೊದಲು ಮತ್ತು ಹುಡುಗರಿಗೆ 9 ವರ್ಷಕ್ಕಿಂತ ಮೊದಲು ಪ್ರಾರಂಭವಾಗುವ ದ್ವಿತೀಯ ಲೈಂಗಿಕ ಬೆಳವಣಿಗೆ ಎಂದು ವ್ಯಾಖ್ಯಾನಿಸುತ್ತಾರೆ. ಆದ್ರೆ ಲೀನಾ ಪ್ರಕರಣದಲ್ಲಿ ಇದು ತದ್ವಿರುದ್ಧವಾಗಿತ್ತು.

**ಗಂಡು ಮಗು ಹೆಸರು ಗೆರಾರ್ಡೋ**

ಆಕೆಗೆ ಜನಿಸಿದ ಗಂಡು ಮಗುವಿಗೆ ಗೆರಾರ್ಡೋ ಎಂದು ನಾಮಕರಣ ಮಾಡಲಾಗಿತ್ತು. ಆಕೆ ಮಗುವಿಗೆ ಜನ್ಮ ನೀಡಿದ್ದರೂ ಸಹ ಅದರ ಪಾಲನೆ ಹಾಗೂ ಪೋಷಣೆಯನ್ನು ಲೀನಾಳ ತಾಯಿ ನೋಡಿಕೊಂಡಳು, ಗೆರಾರ್ಡೋಗೆ ತನ್ನ ತಾಯಿ ಲೀನಾ ಎಂಬುದು 10 ವರ್ಷದವನಿದ್ದಾಗ ತಿಳಿದಿತ್ತು. ಹಾಗೆ ಆತ ತನ್ನ ತಾಯಿ ಲೀನಾಳನ್ನು ಅಕ್ಕ ಎಂದು ತಿಳಿದುಕೊಂಡಿದ್ದ. ಹಾಗೆ ಲೀನಾ ಕೂಡ ಮಗನೊಂದಿಗೆ ಯಾವಾಗಲು ಆಟವಾಡುತ್ತಿದ್ದಳು.

**ತಂದೆಯ ವಿರುದ್ಧ ಪ್ರಕರಣ, ತನಿಖೆ, ನಿರಪರಾಧಿ**

ಆಕೆ ಅತೀ ಚಿಕ್ಕ ವಯಸ್ಸಿನಲ್ಲಿ ಗರ್ಭಿಣಿಯಾದ ಕಾರಣಕ್ಕೆ ತಂದೆಯ ಮೇಲೆ ಅನುಮಾನ ಮೂಡಿತ್ತು, ಹೀಗಾಗಿ ಪೊಲೀಸರು ಆತನ ವಿಚಾರಣೆಗೆ ಒಳಪಡಿಸಿದ್ದರು. ಆದ್ರೆ ಅದರಿಂದ ಯಾವ ಪ್ರಯೋಜನವೂ ಆಗಿರಲಿಲ್ಲ. ಹಾಗೆ ವೈದ್ಯರ ಸಮ್ಮುಖದಲ್ಲಿ ಮತ್ತು ಆಪ್ತ ಸಮಾಲೋಚಕರ ಸಮ್ಮುಖದಲ್ಲಿ ಲೀನಾ 6 ವರ್ಷದವಳಾಗಿದ್ದಾಗಲು ಆಕೆಯಿಂದ ಈ ವಿಚಾರ ತಿಳಿಯುವ ಸಲುವಾಗಿ ವಿಚಾರಣೆ ನಡೆಸಲಾಗಿತ್ತು. ಆದ್ರೆ ಆಕೆಯಿಂದ ಸಹ ಯಾವುದೇ ಸಾಕ್ಷಿ ಅಥವಾ ಮಾಹಿತಿ ಸಿಕ್ಕಿರಲಿಲ್ಲ. ಹೀಗಾಗಿ ಈ ಪ್ರಕರಣ ವೈದ್ಯಕೀಯವಾಗಿ ಹಾಗೆ ಕಾನೂನಾತ್ಮಕವಾಗಿ ಹಾಗೆ ಕೌತುಕಗಳ ಜೀವಂತವಾಗಿ ಇಟ್ಟುಕೊಂಡಿದೆ.

**ಈಗ ಎಲ್ಲಿದ್ದಾರೆ ಗೆರಾರ್ಡೋ ಮತ್ತು ಲೀನಾ**

ಈ ಇಬ್ಬರು ಒಟ್ಟಿಗೆ ಬೆಳೆದರು ಸಹ ಗೆರಾರ್ಡೋ 1979 ರಲ್ಲಿ 40 ನೇ ವಯಸ್ಸಿನಲ್ಲಿ ಮೂಳೆ ಕ್ಯಾನ್ಸರ್ ನಿಂದ ನಿಧನರಾದರು. ಅಲ್ಲಿಯವರೆಗೂ ಯಾವುದೇ ಅನಾರೋಗ್ಯವಿಲ್ಲದೆ ಬದುಕಿದ್ದ ಅವರು ಒಮ್ಮೆಲೆ ಮೂಳೆ ಕ್ಯಾನ್ಸರ್‌ಗೆ ತುತ್ತಾಗಿ ಮೃತಪಟ್ಟರು. ಆದ್ರೆ ಇನ್ನೊಂದು ಕಡೆ ಲೀನಾ ಅವರ ಕಥೆ ಬೇರೆಯಾಗಿದೆ. ಅವರು ಬೆಳೆಯುತ್ತಾ ಸಮಾಜದಿಂದ ದೂರ ಉಳಿಯಲು ನಿರ್ಧರಿಸಿದರು. ಹಾಗೆ ಲೀನಾ 33 ವರ್ಷದವರಾಗಿದ್ದಾಗ ವಿವಾಹ ಕೂಡ ಆದರು. ಇದಾದ ಬಳಿಕ ತಮ್ಮ ಎರಡನೇ ಮಗುವಿಗೆ ಜನ್ಮ ನೀಡಿದರು.

# ನಾಗವಾರ–ಬಾಗಲೂರು ಕ್ರಾಸ್ ಮೆಟ್ರೋ ಕಾಮಗಾರಿ ವಿಳಂಬಕ್ಕೆ ಸಚಿವ ಆಕ್ರೋಶ

ನಾಗವಾರ ನಿಲ್ದಾಣದಿಂದ ಬಾಗಲೂರು ಕ್ರಾಸ್ ನಿಲ್ದಾಣದವರೆಗೆ ನಡೆಯುತ್ತಿರುವ ಎರಡನೇ ಹಂತದ ನಮ್ಮ ಮೆಟ್ರೋ ನೀಲಿ ಮಾರ್ಗದ ಕಾಮಗಾರಿಯನ್ನು ಸಚಿವ ಕೃಷ್ಣ ಬೈರೇಗೌಡ ಅವರು ಇಂದು ಬೆಳ್ಳಂಬೆಳಿಗ್ಗೆ ಪರಿಶೀಲಿಸಿದ್ದಾರೆ. ಈ ಮೆಟ್ರೋ ಮಾರ್ಗದ ನಾಗವಾರ, ವೀರಣ್ಣಪಾಳ್ಯ, ಹೆಬ್ಬಾಳ, ಎಸ್ಟೀಮ್ ಮಾಲ್ ಜಂಕ್ಷನ್, ಅಲ್ಲಾಳಸಂದ್ರ, ಜಕ್ಕೂರು ಏರೋಡ್ರೋಮ್, ಬ್ಯಾಟರಾಯನಪುರ, ಕೊಡಿಗೇಹಳ್ಳಿ ಬಳಿ ಮೆಟ್ರೋ ಕಾಮಗಾರಿ ವೀಕ್ಷಣೆ ಮಾಡಿದ್ದಾರೆ. ಕೆಲವೆಡೆ ಎರಡು ವರ್ಷಗಳಾದರೂ ಮೆಟ್ರೋ ಪಿಲ್ಲರ್ ನಿರ್ಮಾಣ ಮುಗಿದಿಲ್ಲ ಎಂದು ಅಧಿಕಾರಿಗಳನ್ನು ಸ್ಥಳದಲ್ಲೇ ತರಾಟೆಗೆ



ತೆಗೆದುಕೊಂಡಿದ್ದಾರೆ. ಎಲ್ಲೋ ನಡೆಯುವ ಮೆಟ್ರೋ ನಿರ್ಮಾಣ ಕಾಮಗಾರಿಗಾಗಿ ಇನ್ನೆಲ್ಲೋ ರಸ್ತೆ ಬ್ಲಾಕ್ ಮಾಡಿ ಜನರಿಗೆ ಏಕೆ ತೊಂದರೆ ಕೊಡುತ್ತಿದ್ದೀರಾ? ಎಂದು ಮೆಟ್ರೋ ಅಧಿಕಾರಿಗಳಿಗೆ ಚಳಿಬಿಡಿಸಿದ್ದಾರೆ. ಮೆಟ್ರೋ ಕಾಮಗಾರಿ ತ್ಯಾಜ್ಯಗಳಿಂದ ಫುಟ್‌ಪಾತ್‌ಗಳು ಹಾಗೂ ಸರ್ವೀಸ್ ರಸ್ತೆಗಳು ತುಂಬಿ ಹೋಗಿವೆ. ಫುಟ್‌ಪಾತ್ ತ್ಯಾಜ್ಯಗಳಿಂದ ತುಂಬಿರುವ ಪರಿಣಾಮ ಪಾದಾಚಾರಿಗಳು ಹಾಗೂ ವಾಹನ ಸಂಚಾರಿಗಳಿಗೆ ಸಮಸ್ಯೆಯಾಗಿದೆ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಕೂಡಲೇ ಇಲ್ಲಿರುವ ತ್ಯಾಜ್ಯಗಳನ್ನು ವಿಲೇವಾರಿ ಮಾಡಿ, ಜನಸಂಚಾರಕ್ಕೆ ಅನುವು ಮಾಡಿಕೊಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಸಚಿವರ ಎದುರೇ ಮೆಟ್ರೋ ಅಧಿಕಾರಿಗಳು ತ್ಯಾಜ್ಯ ತೆರವುಗೊಳಿಸಿದ್ದಾರೆ. ಮೆಟ್ರೋ ಕಾಮಗಾರಿಗಾಗಿ ಅನಗತ್ಯವಾಗಿ ಹಲವು ರಸ್ತೆಗಳನ್ನು ಬ್ಲಾಕ್ ಮಾಡಲಾಗಿದೆ. ಇದರ ಪರಿಣಾಮ ವಾಹನ ಸವಾರರಿಗೆ ಪ್ರತಿನಿತ್ಯ ಟ್ರಾಫಿಕ್ ಸಮಸ್ಯೆ ಹೆಚ್ಚಾಗಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ. ಹೀಗಾಗಿ ಕೂಡಲೇ ರಸ್ತೆ ತಡೆಗಳನ್ನು ತೆರವುಗೊಳಿಸಿ, ವಾಹನ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮೆಟ್ರೋ ಕಾಮಗಾರಿಗಳನ್ನು ಶೀಘ್ರ ಮುಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ವೇಳೆ ಬೆಂಗಳೂರು ಉತ್ತರ ಪಾಲಿಕೆ ಆಯುಕ್ತರಾದ ಸುನೀಲ್ ಕುಮಾರ್, ಮೆಟ್ರೋ ಮುಖ್ಯ ಇಂಜಿನಿಯರ್, ಬಿಡಬ್ಲ್ಯೂಎಸ್‌ಎಸ್‌ಬಿ ಹಾಗೂ ಬೆಸ್ಕಾಂ ಅಧಿಕಾರಿಗಳು ಹಾಜರಿದ್ದರು. ಮೆಟ್ರೋ ಬ್ಲೂ ಲೈನ್ ಕುರಿತು ಎರಡು ಹಂತಗಳಲ್ಲಿ ನಡೆಯುತ್ತಿರುವ ನಮ್ಮ ಮೆಟ್ರೋ ಬ್ಲೂ ಲೈನ್ ಮಾರ್ಗವು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನಕ್ಕೆ ಸಂಪರ್ಕ ಕಲ್ಪಿಸಲಿದೆ. ಹಂತ–2ಎ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ಕೆ.ಆರ್.ಪುರ ಕೃಷ್ಣರಾಜಪುರದ ಮಾರ್ಗ ಹಾಗೂ ಹಂತ–2ಬಿ ಕೆ.ಆರ್.ಪುರದಿಂದ ವಿಮಾನ ನಿಲ್ದಾಣಕ್ಕೆ ಮೆಟ್ರೋ ಮಾರ್ಗದ ಕಾಮಗಾರಿ ಪ್ರಗತಿಯಲ್ಲಿದೆ. ಹಂತ–2ಬಿ ನಿರ್ಮಾಣವು ಫೆಬ್ರವರಿ 2022ರಿಂದ ಪ್ರಾರಂಭವಾಗಿದೆ. ಸುಮಾರು 58.19 ಕಿ.ಮೀ ಉದ್ದದ ಈ ಮಾರ್ಗವು ಸೆಂಟ್ರಲ್ ಸಿಲ್ಕ್ ಬೋರ್ಡ್–ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಡುವೆ ಬರುತ್ತಿದೆ.

# ಸರ್ವಾಧಿಕಾರ ಆಡಳಿತಗಳು ಪ್ರಜಾಪ್ರಭುತ್ವ ರಕ್ಷಿಸುವ ಹಾಗೆ ನಟಿಸುತ್ತಲೇ ಬುಡಮೇಲು ಮಾಡುತ್ತಿವೆ : ಸಿದ್ದರಾಮಯ್ಯ

**ದೆಹಲಿ :** ಪ್ರಜಾಪ್ರಭುತ್ವ ಪ್ರಕ್ರಿಯೆಯನ್ನು ರಕ್ಷಿಸುವಂತೆ ನಟಿಸುತ್ತಲೇ, ಅದನ್ನು ಬುಡಮೇಲು ಮಾಡುವುದನ್ನೇ ಪ್ರಪಂಚದಾದ್ಯಂತದ ಸರ್ವಾಧಿಕಾರಿ ಆಡಳಿತಗಳು ಮೂಲ ತಂತ್ರವನ್ನಾಗಿಸಿದೆ. ಇಂದು ಬಿಜೆಪಿ ಇದನ್ನೇ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯಆರೋಪಿಸಿದ್ದಾರೆ.

ಮತಗಳ್ಳತನದ ಬಗ್ಗೆ ನಡೆದ ರ್ಯಾಲಿಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬಿಜೆಪಿಯವರು ಸಂಸ್ಥೆಗಳನ್ನು ತಮ್ಮ ಹಿಡಿತಕ್ಕೆ ತೆಗೆದುಕೊಳ್ಳುತ್ತಾರೆ. ಚುನಾವಣಾ ಯಂತ್ರೋಪಕರಣಗಳನ್ನು ಬೆದರಿಸುತ್ತಾರೆ. ಮತದಾರರ ಪಟ್ಟಿಗಳನ್ನು ವಿರೂಪಗೊಳಿಸುತ್ತಾರೆ. ವಿಪಕ್ಷಗಳು ಗೆಲುವಿನ ಸಾಧ್ಯತೆಯ ಪ್ರದೇಶಗಳಲ್ಲಿ ಮತದಾನದ ಪ್ರಮಾಣವನ್ನು ದಮನಿಸುತ್ತಾರೆ. ಹಣ ಮತ್ತು ಅಧಿಕಾರದ ಮೂಲಕ ಸಮಾನ ಅವಕಾಶದ ಸಾಧ್ಯತೆಯನ್ನು ಉಲ್ಲಂಘಿಸುತ್ತಾರೆ.

ಇದು ಕೇವಲ ದುರಾಡಳಿತವಲ್ಲ. ಈ 'ಮತಗಳ್ಳತನ'ವು ಭಾರತದ ಪರಿಕಲ್ಪನೆಯ ಮೇಲಿನ ದಾಳಿಯಾಗಿದೆ ಎಂದು ತಿಳಿಸಿದ್ದಾರೆ.

ಕದ್ದ ಮತಗಳಿಂದ ಅಧಿಕಾರಕ್ಕೆ ಬಂದ ಸರ್ಕಾರವು ಪ್ರಜಾಸತ್ತಾತ್ಮಕ ಸರ್ಕಾರವಲ್ಲ ಎಂಬುದು ಸುಸ್ಪಷ್ಟ. ಅದು ಜನರನ್ನು ಹೆದರಿಸುವ, ಜನಾದೇಶವನ್ನು ತಿರುಚುವ, ಮತ್ತು ವಂಚನೆಯ ಮೂಲಕ ಮಾತ್ರ ಬದುಕುಳಿಯುವ ಸರ್ಕಾರ. ಇದು, ಪ್ರಜಾಪ್ರಭುತ್ವಗಳು ಚುನಾವಣಾ ದೌರ್ಜನ್ಯಗಳ ಮಟ್ಟಕ್ಕೆ ಇಳಿಯುವ ರೀತಿಯಾಗಿದೆ. ಇಂದು ಬಿಜೆಪಿಯ 'ಮತಗಳ್ಳತನ'ವು ಸ್ವಾತಂತ್ರ್ಯಾನಂತರದ ನಮ್ಮ ಗಣರಾಜ್ಯಕ್ಕೆ ಎದುರಾದ ಅತಿದೊಡ್ಡ ಬೆದರಿಕೆಯಾಗಿದೆ.

ಇಂತಹ ಕ್ಲಿಷ್ಟಕರ ಸಮಯದಲ್ಲಿ , ಅಸಾಧಾರಣ ಧೈರ್ಯದಿಂದ ನಿಂತಿರುವ ಏಕೈಕ ನಾಯಕ ಶ್ರೀ ರಾಹುಲ್ ಗಾಂಧಿಯವರು.

ಶ್ರೀ ರಾಹುಲ್ ಗಾಂಧಿಯವರು ಹೊಂದಿಕೆಯಾಗದ ಮತದಾರರ ಪಟ್ಟಿಗಳನ್ನು, ಬೂತ್ ಮಟ್ಟದ ಲ್ಲಿ ತಿರುಚಿದ ಅಂಶಗಳನ್ನು ಮತ್ತು ವ್ಯವಸ್ಥಿತ, ಸಂಘಟಿತ ಮತಗಳ್ಳತನ'ವನ್ನು ತನಿಖೆಯ ಮೂಲಕ ಬಯಲು ಮಾಡಿದರು.



ಮಹದೇವಪುರದಿಂದ ಆಳಂದವರೆಗೆ, ಹರಿಯಾಣದಿಂದ ಬಿಹಾರದವರೆಗೆ, ಹೀಗೆ ಕ್ಷೇತ್ರದಿಂದ ಕ್ಷೇತ್ರಕ್ಕೆ, ವಿಶೇಷವಾಗಿ ಕಾಂಗ್ರೆಸ್ ಮತ್ತು ಐಎನ್ಡಿಐಎ (INDIA) ಮೈತ್ರಿಕೂಟದ ಬಲಹೊಂದಿರುವ ಪ್ರದೇಶಗಳಲ್ಲಿ ಮತಗಳನ್ನು ಯಾವರೀತಿಯಲ್ಲಿ ದಮನ ಮಾಡಲಾಗಿದೆ, ವರ್ಗಾಯಿಸಲಾಗಿದೆ ಅಥವಾ ದುರ್ಬಲಗೊಳಿಸಲಾಗಿದೆ ಎಂಬುದನ್ನು ಅವರು ಬಹಿರಂಗಪಡಿಸಿದರು.

ಕರ್ನಾಟಕದ ಮಹದೇವಪುರ ಮತ್ತು ಆಳಂದ ವಿಧಾನಸಭಾ ಕ್ಷೇತ್ರಗಳಲ್ಲಿ, 'ವೋಟ್ ಚೋರಿ' ಕೇವಲ ಆರೋಪವಾಗಿರದೇ, ಜೀವಂತ ವಾಸ್ತವ ಎಂದು ಶ್ರೀ ರಾಹುಲ್ ಗಾಂಧಿಯವರು ಗಂಭೀರ ಅಕ್ರಮಗಳನ್ನು ಉದಾಹರಣೆಗಳಾಗಿ ಎತ್ತಿ ತೋರಿಸಿದ್ದಾರೆ.

ಮಹದೇವಪುರದಲ್ಲಿ ಸಾವಿರಾರು ನಕಲಿ ಅಥವಾ ಮೋಸದ ಮತದಾರರ ನಮೂದುಗಳು ಮತ್ತು ಚುನಾವಣಾ ಪಟ್ಟಿಗಳಲ್ಲಿನ ವ್ಯತ್ಯಾಸಗಳು ಕ್ಷೇತ್ರದಲ್ಲಿ ಬಿಜೆಪಿಯ ಅಲ್ಪ ವ್ಯತ್ಯಾಸದಲ್ಲಿ ಗೆದ್ದಿರುವುದಕ್ಕೆ ಪರಸ್ಪರ ಸಂಬಂಧ ಹೊಂದಿದೆ ಎಂದು ಪುರಾವೆಗಳನ್ನು ಒದಗಿಸುತ್ತದೆ.

ಆಳಂದದಲ್ಲಿ 2023ರ ವಿಧಾನಸಭಾ ಚುನಾವಣೆಗೂ ಮುನ್ನ ಕಾನೂನುಬದ್ಧ ಮತದಾರರ ಹೆಸರನ್ನು ಅಳಿಸಿ ಹಾಕಲು ಪ್ರಯತ್ನಿಸಿದ ಸಾವಿರಾರು ಪ್ರಕರಣಗಳು ದಾಖಲಾಗಿವೆ. ಪಟ್ಟಿಯಲ್ಲಿನ ಹೆಸರುಗಳನ್ನು ತೆಗೆಯಲು ಕೋರಿ ಸಲ್ಲಿಸಿದ 6,018 ಅರ್ಜಿಗಳ ಬಗ್ಗೆ ಎಫ್‌ಐಆರ್ ಮತ್ತು ಎಸ್‌ಐಟಿ ತನಿಖೆಯನ್ನು ಕೈಗೊಳ್ಳಲು ಇದು ಕಾರಣವಾಯಿತು.

ನಿನ್ನೆ, ಒಂದು ವಿಶೇಷ ತನಿಖಾ ತಂಡ (SIT) ದೋಷಾರೋಪ ಪಟ್ಟಿಯನ್ನು ಸಲ್ಲಿಸಿದ್ದು, ಇದರಲ್ಲಿ ಮಾಜಿ ಬಿಜೆಪಿ ಶಾಸಕರು ಮತ್ತು ಅವರ ಪುತ್ರ ಸೇರಿದಂತೆ ಏಳು ವ್ಯಕ್ತಿಗಳು ಆಳಂದ ಕ್ಷೇತ್ರದಲ್ಲಿ ಸುಮಾರು 6,000 ಮತದಾರರ ಹೆಸರುಗಳನ್ನು ತೆಗೆದುಹಾಕಲು ಪ್ರಯತ್ನಿಸಿದ ಆರೋಪವಿದೆ. ಇದು "ಮತಗಳತನ' ವಿರುದ್ಧದ ಹೋರಾಟದಲ್ಲಿ ಮಹತ್ವದ ಕಾನೂನು ಹೆಜ್ಜೆಯಾಗಿದೆ.

ಇದನ್ನು ಬಹಿರಂಗಪಡಿಸಿರುವುದರಿಂದ ರಾಹುಲ್ ಗಾಂಧಿಯವರು ಈ ಗಣರಾಜ್ಯದ ನೈತಿಕ ದಿಕ್ಸೂಚಿಯಾಗಿರುವುದಲ್ಲದೆ ಮತಗಳ್ಳತನದ ವಿರುದ್ಧದ ಹೋರಾಟಗಾರರಾಗಿದ್ದಾರೆ ಎಂಬುದಕ್ಕೆ ನಿದರ್ಶನವಾಗಿದೆ.

ಈ ಹೋರಾಟ ಸಾಂವಿಧಾನಿಕ ನೈತಿಕತೆಯಲ್ಲಿ ಅಡಕವಾಗಿದ್ದು, ಅಂಬೇಡ್ಕರ್ ವಾದಿ ಚಿಂತನೆಯಾಗಿದೆ ಹಾಗೂ ಪ್ರಜಾಪ್ರಭುತ್ವದ ಮೂಲಭೂತ ತತ್ವವಾಗಿದೆ. ಸಾರ್ವಭೌಮತ್ವ ಜನರಿಗೆ ಸೇರಿದ್ದು , ಯಾವುದೇ ಒಂದು ಪಕ್ಷ, ಒಂದು ಆಳ್ವಿಕೆ ಹಾಗೂ ಚುನಾವಣೆಗಳನ್ನು ಕದಿಯಲಿಚ್ಚಿಸುವವರದ್ದು ಖಂಡಿತಾ ಅಲ್ಲ.

ಇಂದು ಅವರ ನಾಯಕತ್ವದಲ್ಲಿ ಕೋಟ್ಯಂತರ ಭಾರತೀಯರು "ನಮ್ಮ ಪ್ರಜಾಪ್ರಭುತ್ವವನ್ನು ಕದಿಯಲು ನಾವು ಬಿಡುವುದಿಲ್ಲ" ಎಂದು ಹೇಳುವ ಮನವಿಪತ್ರದ ಮೇಲೆ ಸಹಿ ಹಾಕಿದ್ದಾರೆ.

ಇದೊಂದು ಅಮೂರ್ತ ಚರ್ಚೆಯಾಗಿರದೆ ತಾಂತ್ರಿಕ ಸಮಸ್ಯೆಯಾಗಿದೆ. ಪ್ರತಿ ಭಾರತೀಯನಿಗೂ ಇದು ವೈಯಕ್ತಿಕ ವಿಚಾರವಾಗಿದೆ. ಯುವತಿಯೊಬ್ಬಳು ಮತ ಚಲಾಯಿಸಲು ಗಂಟೆಗಟ್ಟಲೆ ಸರತಿಯಲ್ಲಿ ನಿಂತು, ನಂತರ ತನ್ನ ಮತವನ್ನು ಅಳಿಸಿಹಾಕಲಾಗಿದೆ ಎಂದು ಗೊತ್ತಾದಾಗ, ಮೋಸ ಹೋದ ಅನುಭವವಾಗುತ್ತದೆ.

ವೃದ್ಧ ರೈತನೊಬ್ಬ ಮುಂಜಾನೆ ಎದ್ದು ಮತ ಚಲಾಯಿಸಲು ಬಂದಾಗ, ಅವನ ಹೆಸರು ಕಾಣೆಯಾಗಿದೆ ಎಂದು ತಿಳಿದಾಗ ದ್ರೋಹವುಂಟಾಗಿರುವ ಅನುಭವವಾಗುತ್ತದೆ.

ದಲಿತರು, ಒಬಿಸಿಗಳು, ಅಲ್ಪಸಂಖ್ಯಾತರು ಮತ್ತು ಬಡವರು, ತಮ್ಮ ಪ್ರಜಾಸತ್ತಾತ್ಮಕ ಧ್ವನಿಯ ಮೇಲೆ ಹೆಚ್ಚು ಅವಲಂಬಿತರಾದವರು, ತಮ್ಮ ಮತಗಳನ್ನು ಯುಕ್ತಿಯಿಂದ ನಿರ್ವಹಿಸಲಾಗಿದೆ ಎಂದು ಕಂಡುಕೊಂಡರೆ, ಅದು ಸಾಮಾಜಿಕ ನ್ಯಾಯದ ಮೇಲಿನ ಆಕ್ರಮಣವೇ ಸರಿ.

"ಮತಗಳ್ಳತನ" ಕೇವಲ ಸಂಖ್ಯೆಗಳ ಮಾತಲ್ಲ. ಇದು ಘನತೆ, ಸಮಾನತೆ ಮತ್ತು ನಮ್ಮ ಗಣರಾಜ್ಯದ ಆತ್ಮದ ಬಗ್ಗೆಗಿನ ವಿಷಯವಾಗಿದೆ.

ಇಂದು ದೆಹಲಿಯಿಂದ, ಈ ಐತಿಹಾಸಿಕ ರ್‍ಯಾಲಿಯ ಮೂಲಕ ನಾನು ಪ್ರತಿಯೊಬ್ಬ ಭಾರತೀಯನಿಗೆ ಕರೆನೀಡುತ್ತಿದ್ದೇನೆ..

**ನಿಮ್ಮ ಮತವನ್ನು ರಕ್ಷಿಸಿ! ನಿಮ್ಮ ಪ್ರಜಾಪ್ರಭುತ್ವವನ್ನು ರಕ್ಷಿಸಿ!**

**ನಿಮ್ಮ ಭವಿಷ್ಯವನ್ನು ರಕ್ಷಿಸಿ!**

ಈ ಚಳುವಳಿ ಚುನಾವಣೆಗಳಿಗಿಂತ ದೊಡ್ಡದು. ಈ ಚಳುವಳಿ ಯಾವುದೇ ಪಕ್ಷಕ್ಕಿಂತ ದೊಡ್ಡದು. ಈ ಚಳುವಳಿ ತಲೆಮಾರುಗಳು ಹೋರಾಡಿದ ಗಣರಾಜ್ಯವನ್ನು ಉಳಿಸುವುದರ ಕುರಿತಾಗಿದೆ.

**ನಾವು ಒಟ್ಟಾಗಿ ಆಗ್ರಹಿಸಬೇಕಿರುವುದು:**

ಪಾರದರ್ಶಕ ಚುನಾವಣಾ ಪಟ್ಟಿ, ಚುನಾವಣಾ ಪ್ರಾಧಿಕಾರದ ಉತ್ತರದಾಯಿತ್ವ, ಸ್ವತಂತ್ರ ಸಂಸ್ಥೆಗಳು, ವಿಶ್ವಾಸಾರ್ಹ ಮತದಾನದ ವ್ಯವಸ್ಥೆ ಹಾಗೂ ಸಾಂವಿಧಾನಿಕ ಮೌಲ್ಯಗಳಲ್ಲಿ ಬೇರೂರಿರುವ ರಾಜಕೀಯ ಸಂಸ್ಕೃತಿ.

"ಮತಗಳ್ಳತನದ ಹಿಂಬಾಗಿಲಿನ ಮೂಲಕ ಫ್ಯಾಸಿಸಂ ಭಾರತವನ್ನು ಪ್ರವೇಶಿಸಲು ಬಿಡುವುದಿಲ್ಲ." ಎಂದು ನಾವು ಘೋಷಿಸಬೇಕಿದೆ.

ನಾವು ಕೋಟ್ಯಂತರ ಭಾರತೀಯರ ಸಹಿಯನ್ನು ಇಲ್ಲಿ ಹಸ್ತಾಂತರಿಸುತ್ತಿದ್ದೇವೆ, ಇದು ಕದ್ದ ಯಾವುದೇ ಚುನಾವಣೆಗಿಂತ ಬಲವಾದ ನೈತಿಕ ಜನಾದೇಶವಾಗಿದೆ.

ಒಂದು ರಾಷ್ಟ್ರವಾಗಿ, ಒಂದು ಜನರಾಗಿ, ಒಂದು ಪ್ರಜಾಪ್ರಭುತ್ವವಾಗಿ ಏಳೋಣ.

ಮತಗಳ್ಳತನ' ಭಾರತಕ್ಕೆ ಬೆದರಿಕೆಯೊಡ್ಡಿದಾಗ, ಜನರು ಅದರ ವಿರುದ್ಧ ತಿರುಗಿ ನಿಂತು ಗೆದ್ದರು ಎಂದು ಇತಿಹಾಸದಲ್ಲಿ ದಾಖಲಾಗಲಿ ಎಂದು ತಿಳಿಸಿದ್ದಾರೆ.

# ಕಾಂಗ್ರೆಸ್‌ನಿಂದ ಮತಗಳ್ಳತನದ ವಿರುದ್ಧ ರಣಕಹಳೆ

**ನವದೆಹಲಿ :** ಕರ್ನಾಟಕ ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ನಡೆದಿರುವ ಮತಗಳ್ಳತನ ವಿರುದ್ಧ ಹೋರಾಟ ನಡೆಸುತ್ತಿರುವ ಪ್ರತಿಪಕ್ಷ ಕಾಂಗ್ರೆಸ್ ದೆಹಲಿಯಲ್ಲಿ ಕೇಂದ್ರ ಸರ್ಕಾರ ಹಾಗೂ ಕೇಂದ್ರ ಚುನಾವಣಾ ಆಯೋಗದ



ವಿರುದ್ಧ ಸಮರ ಸಾರುವ ಮೂಲಕ ಬೃಹತ್ ಪ್ರತಿಭಟನೆ ನಡೆಸಿ, ಶಕ್ತಿ ಪ್ರದರ್ಶನ ನಡೆಸಿತು.

ಪ್ರತಿಭಟನೆಗೂ ಮುನ್ನ ಕಾಂಗ್ರೆಸ್ ಮುಖಂಡರು ನವದೆಹಲಿಯ ಇಂದಿರಾ ಕಾಂಗ್ರೆಸ್ ಭವನಕ್ಕೆ ತೆರಳಿ ಬಳಿಕ ಬಸ್‌ಗಳಲ್ಲಿ, ದೆಹಲಿಯ ರಾಮಲೀಲಾ ಮೈದಾನಕ್ಕೆ ಆಗಮಿಸಿದರು. ಈ ವೇಳೆ ಕಾರ್ಯಕರ್ತರು ಪಕ್ಷ ನೀಡಿದ್ದ ಟೀ ಶರ್ಟ್‌ಗಳನ್ನು ಧರಿಸಿ ಕೇಂದ್ರ ಚುನಾವಣಾ ಆಯೋಗ ಮತ್ತು ಎನ್‌ಡಿಎ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತ ಪಡಿಸಿದರು.

ರಾಮಲೀಲ ಮೈದಾನದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕ ಗಾಂಧಿ ವಾದ್ರಾ ಸೇರಿದಂತೆ ಇತರ ನಾಯಕರ ಕಟೌಟ್‌ಗಳು ಕಾಂಗ್ರೆಸ್ ಧ್ವಜಗಳು ರಾರಾಜಿಸಿದವು.

ದೆಹಲಿಯ ರಾಮಲೀಲ ಮೈದಾನದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಇತರ ರಾಜ್ಯಗಳ ಮುಖಂಡರು ಪಾಲ್ಗೊಂಡು ಮತಗಳ್ಳತನದ ವಿರುದ್ಧ ಅಭಿಯಾನ ನಡೆಸಿದರು.

ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಈ ಬೃಹತ್ ಪ್ರತಿಭಟನೆಯಲ್ಲಿ ಮತದಾರರ ಹಕ್ಕಿನ ರಕ್ಷಣೆಗಾಗಿ ಮತ್ತು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಈ ಹೋರಾಟ ನಡೆಸಲಾಯಿತು. ಚಳಿಗಾಲದ ಸಂಸತ್ ಅಧಿವೇಶನದಲ್ಲಿ ಮತಪಟ್ಟಿ ಪರಿಷ್ಕರಣೆ ಕುರಿತು, ಪ್ರತಿಪಕ್ಷಗಳು ಹಾಗೂ ಆಡಳಿತ ರೂಢ ಹಾಗೂ ಎನ್‌ಡಿಎ ಆರೋಪ–ಪ್ರತ್ಯಾರೋಪಗಳು ನಡೆದ ಬೆನ್ನಲ್ಲೇ ಕಾಂಗ್ರೆಸ್ ಮತಗಳ್ಳತನದ ವಿರುದ್ಧ ಹೋರಾಟವನ್ನು ತೀವ್ರಗೊಳಿಸಿದೆ.

ಕಾಂಗ್ರೆಸ್ ನಾಯಕ ಭೂಪೇಶ್ ಬಘೇಲ್ ಪ್ರತಿಕ್ರಿಯೆ ನೀಡಿ ಮತಗಳ್ಳತನ ಮಾಡಿ ಅಧಿಕಾರಕ್ಕೆ ಬರಲಾಗಿದೆ. ಈ ಮತಗಳವು ಖಂಡಿಸಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ ನಡೆಸಿದೆ ಎಂದು ಹೇಳಿದರು.

ಈ ಹಿಂದೆ ಮತಗಳ್ಳತನದ ವಿರುದ್ಧ ದಾಖಲೆಗಳನ್ನು ಬಿಡುಗಡೆ ಮಾಡಿದ ರಾಹುಲ್ ಗಾಂಧಿ ಬಿಹಾರದಲ್ಲೂ, ಮತಗಳ್ಳತನ ನಡೆದಿದೆ ಎಂದು ಆರೋಪಿಸಿದರು. ಇದರ ಬೆನ್ನಲ್ಲೇ ಕರ್ನಾಟಕದ ಕಲ್ಬುರ್ಗಿ ಜಿಲ್ಲೆಯ ಆಳಂದದಲ್ಲಿ ಮತಗಳ್ಳತನ ನಡೆದಿರುವ ಬಗ್ಗೆ, ವಿಶೇಷ ತನಿಖಾ ತಂಡ ಮಾಜಿ ಶಾಸಕ ಸುಭಾಶ್ ಗುತ್ತೇದಾರ್ ಹಾಗೂ ಪುತ್ರ ಹರ್ಷಾನಂದ ಗುತ್ತೇದಾರ್ ವಿರುದ್ಧ ಎಸ್‌ಐಟಿ ಆರೋಪಪಟ್ಟಿ ದಾಖಲಿಸಿದೆ.

ಕಾಂಗ್ರೆಸ್ ಮುಖಂಡ ವೇಣುಗೋಪಾಲ್ ಮತ ಚೋರಿ ನಡೆದಿರುವ ಬಗ್ಗೆ ಕೇಂದ್ರ ಚುನಾವಣಾ ಆಯೋಗವನ್ನು ತೀವ್ರವಾಗಿ ತರಾಟೆಗೆ ತಗೆದುಕೊಂಡಿದ್ದಾರೆ. ಕೇವಲ ಬಿಹಾರದಲ್ಲಿ ಮಾತ್ರವಲ್ಲ ದೇಶದ ಹಲವೆಡೆ ಮತಗಳ್ಳತನ ನಡೆದಿದೆ. ಈ ಕೃತ್ಯದಲ್ಲಿ ಕೇಂದ್ರ ಸರ್ಕಾರ ಚುನಾವಣಾ ಆಯೋಗ ಶ್ಯಾಮೀಲಾಗಿದೆ ಎಂದು ಆರೋಪಿಸಿದ್ದರು. ಮತಗಳ್ಳತನ ಹರಿಯಾಣ, ಬಿಹಾರದ, ಮಹಾರಾಷ್ಟ್ರದಲ್ಲೂ ನಡೆದಿದೆ, ಪ್ರಜಾಪ್ರಭುತ್ವ ಉಳಿಸುವ ದೃಷ್ಟಿಯಿಂದ ಕಾಂಗ್ರೆಸ್ ಈ ಪ್ರತಿಭಟನೆ ನಡೆಸಿದೆ. ಮತಗಳ್ಳತನ ಕುರಿತಂತೆ ಕಾಂಗ್ರೆಸ್ ಮಾಡುತ್ತಿರುವ ಆರೋಪಗಳನ್ನು ಕೇಂದ್ರ ಚುನಾವಣಾ ಆಯೋಗ ಸ್ಪಷ್ಟವಾಗಿ ತಳ್ಳಿಹಾಕಿದೆ. ಮತಗಳ್ಳತನ ಆರೋಪದ ನಡುವೆಯೂ ಇತ್ತೀಚೆಗೆ ಬಿಹಾರದಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಪ್ರಚಂಡ ಜಯಭೇರಿ ಬಾರಿಸಿತ್ತು. ಪ್ರತಿಪಕ್ಷ ಕಾಂಗ್ರೆಸ್ ಎರಡಂಕಿ ದಾಟಲು ವಿಫಲವಾಗಿತ್ತು.

**ರಾಜಕೀಯ ಪ್ರೇರಿತ ಹೋರಾಟವಲ್ಲ: ಡಿಕೆಶಿ**

ದೇಶದ ಹಲವು ಕಡೆ ನಡೆದಿರುವ ಮತಗಳ್ಳತನ ವಿರುದ್ಧ ಪಕ್ಷ ಕೈಗೊಂಡಿರುವ ಹೋರಾಟದಲ್ಲಿ ರಾಜಕೀಯವಿಲ್ಲ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದರು.

ದೆಹಲಿಯಲ್ಲಿಂದು ಮತಚೋರಿ ಹೋರಾಟದ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮತಚೋರಿ ಕುತಿತು ರಾಹುಲ್ ಗಾಂಧಿ ನೇತೃತ್ವದಲ್ಲಿ ಮೊದಲ ಬಾರಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದ ಬಳಿಕ ಈಗ ದೆಹಲಿಯ ರಾಮಲೀಲ ಮೈದಾನದಲ್ಲಿ ಮತಚೋರಿ ವಿರುದ್ಧ ಬೃಹತ್ ಆಂಧೋಲನ ನಡೆಸಿದ್ದೇವೆ ಎಂದರು.

ದೇಶದ 160 ಕೋಟಿ ಮತದಾರರ ಸಂವಿಧಾನದ ಹಕ್ಕನ್ನು ಉಳಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಹೋರಾಟ ಮಾಡುತ್ತಿದೆ. ಈ ಹೋರಾಟದಲ್ಲಿ ರಾಜಕೀಯವಿಲ್ಲ, ಮತಗಳ್ಳತನ ನಡೆದಿರುವ ಹಿನ್ನೆಲೆಯಲ್ಲಿ ದೇಶದಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಮತದಾನ ನಡೆಯುವುದು ಸಾಧ್ಯವಿಲ್ಲ ಎಂದು ಹೇಳಿದರು.

ಮತಗಳ್ಳತನದ ಬಗ್ಗೆ ಕೇಂದ್ರ ಚುನಾವಣಾ ಆಯೋಗ ಇದುವರೆಗೂ ಕ್ರಮ ಕೈಗೊಂಡಿಲ್ಲ, ಆಯೋಗದ ಜೊತೆ ಕೇಂದ್ರ ಸರ್ಕಾರ ಶಾಮೀಲಾಗಿ ಸಂವಿಧಾನದ ಅಧಿಕಾರವನ್ನು ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ಅವರು ಆರೋಪಿಸಿದರು..

ಸಂವಿಧಾನಕ್ಕೆ ಧಕ್ಕೆ ಬಂದಾಗ ಕಾಂಗ್ರೆಸ್ ಹೋರಾಟ ಮಾಡುತ್ತಾ ಬಂದಿದೆ, ಇಂದು ಎಸಿಸಿ ಅಧ್ಯಕ್ಷ ಮಲ್ಲಿಕಾರ್ಜು ಖರ್ಗೆ ನೇತೃತ್ವದಲ್ಲಿ ಮತಚೋರಿ ವಿರುದ್ಧ ಬೃಹತ್ ನಡೆಸಿದ್ದೇವೆ ಎಂದು ಹೇಳಿದರು.

# ಅಭ್ಯರ್ಥಿಗಳ ಸ್ಟ್ರೇ ವೇಕೆನ್ಸಿ ಆಯ್ಕೆ ದಾಖಲಾತಿಯ ದಿನಾಂಕ ವಿಸ್ತರಣೆ

**ಬೆಂಗಳೂರು, ಡಿಸೆಂಬರ್ 14:** ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ– ಪದವಿಪೂರ್ವ 2025 (UGNEET) ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್ ಗಳ ಪ್ರವೇಶಕ್ಕೆ ಸ್ಟ್ರೇ ವೇಕೆನ್ಸಿ ಸುತ್ತಿನ ಸೀಟು ಹಂಚಿಕೆಗೆ ಅವಕಾಶ ನೀಡಲಾಗಿದೆ. ಹೊಸದಾಗಿ ಇಚ್ಛೆ/ಆಯ್ಕೆಗಳನ್ನು ದಾಖಲಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ತನ್ನ ಅಧಿಕೃತ ಜಾಲತಾಣದಲ್ಲಿ ಲಿಂಕ್ ತೆರೆದಿದೆ. ಅಭ್ಯರ್ಥಿಗಳ ಆಯ್ಕೆ ದಾಖಲಿಸಲು ದಿನಾಂಕ ವಿಸ್ತರಣೆ ಮಾಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯ ನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಅವರು ತಿಳಿಸಿದರು. ನಾರ್ಟಕ ಪರೀಕ್ಷಾ ಪ್ರಾಧಿಕಾರ (KEA) ಯುಜಿನೀಟ್ ಅಭ್ಯರ್ಥಿಗಳ ಸ್ಟ್ರೇ ವೇಕೆನ್ಸಿ ಸುತ್ತಿನ ಸೀಟು ಹಂಚಿಕೆಗೆ ಮೊದಲು ಡಿಸೆಂಬರ್ 12ರಂದು ಸಂಜೆ 5ಗಂಟೆವರೆಗೆ ಅವಕಾಶ ನೀಡಲಾಗಿತ್ತು. ಇದೀಗ ಅದನ್ನು ಡಿಸೆಂಬರ್ 15ರ ಬೆಳಗ್ಗೆ 11 ಗಂಟೆಗೆ ದಿನಾಂಕ ವಿಸ್ತರಣೆ ಮಾಡಲಾಗಿದೆ. ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ಯುಜಿನೀಟ್ ಅಭ್ಯರ್ಥಿಗಳು ಮೂರನೇ ಸುತ್ತಿನಲ್ಲಿ ಪಾವತಿಸಿರುವ ವೈದ್ಯಕೀಯ ಕೋರ್ಸ್ ಶುಲ್ಕದ ಅನ್ವಯ ಇಚ್ಛೆಗಳನ್ನು ದಾಖಲಿಸಬಹುದು. 3ನೇ ಸುತ್ತಿನಲ್ಲಿ ದಂತ ವೈದ್ಯಕೀಯ ಸೀಟು ಸಿಕ್ಕಿರುವವರು ಕೂಡ ವೈದ್ಯಕೀಯ ಕೋರ್ಸ್ ಗೆ ಆಪ್ಷನ್ಸ್ ದಾಖಲಿಸಬಹುದು. ಕಾಲೇಜಿಗೆ ವರದಿ ಮಾಡಿಕೊಳ್ಳಲು ಸೂಚನೆ ಈಗಾಗಲೇ ಡಿಸೆಂಬರ್ 13ರಂದು ಬೆಳಗ್ಗೆ 10ಕ್ಕೆ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶ ಹಾಗೂ ಅದೇ ದಿನ ಮಧ್ಯಾಹ್ನ 2ಗಂಟೆಗೆ ವೈದ್ಯಕೀಯ ಕೋರ್ಸ್ ನ ಅಂತಿಮ ಫಲಿತಾಂಶ ಪ್ರಕಟಿಸಲಾಗಿದೆ. ದಂತ ವೈದ್ಯಕೀಯ ಕೋರ್ಸ್ ನ ಅಂತಿಮ ಫಲಿತಾಂಶವನ್ನು ಡಿಸೆಂಬರ್ 13ರಂದು ಮಧ್ಯಾಹ್ನ 3ಗಂಟೆಗೆ ಪ್ರಕಟಿಸಲಾಗಿದೆ. ಸೀಟು ಹಂಚಿಕೆಯಾದವರು ಡಿಸೆಂಬರ್ 15ರೊಳಗೆ ಶುಲ್ಕ ಪಾವತಿಸಿ, ಕಾಲೇಜಿಗೆ ವರದಿ ಮಾಡಿಕೊಳ್ಳುವಂತೆ ಅವರು ಅಭ್ಯರ್ಥಿಗಳಿಗೆ ಸೂಚಿಸಿದರು. ನೋಂದಣಿ ಮಾಡದಿರುವ ಅಭ್ಯರ್ಥಿಗಳು ಸ್ಟ್ರೇ ವೇಕೆನ್ಸಿ ಸುತ್ತಿನಲ್ಲಿ ಭಾಗವಹಿಸಲು ಇಚ್ಛೆ ಇದ್ದಲ್ಲಿ ತಾವು ತೆಗೆದುಕೊಳ್ಳಬಯಸುವ ಸೀಟಿನ ಸಂಪೂರ್ಣ ಶುಲ್ಕದ ಡಿಡಿ (ಕಾರ್ಯನಿರ್ವಾಹಕ ನಿರ್ದೇಶಕರು ಕೆಇಎ) ತೆಗೆದುಕೊಂಡು ಮನವಿ ಸಲ್ಲಿಸಬೇಕೆಂದು ತಿಳಿಸಲಾಗಿತ್ತು. ಅಂಥವರಿಗೂ ಟಿಕೆಟ್ ಹಂಚಿಕೆಯಲ್ಲಿ ಅವಕಾಶ ನೀಡಲಾಗುತ್ತದೆ ಎಂದು ಕೆಇಎ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ನೆಲಮಂಗಲ–ತುಮಕೂರು ಹೈವೇ ಕಾಮಗಾರಿ ಪೂರ್ಣ ಯಾವಾಗ!

ಬೆಂಗಳೂರಿನಲ್ಲಿ ವರ್ಷದಿಂದ ವರ್ಷಕ್ಕೆ ಸಂಚಾರ ದಟ್ಟಣೆ ಹೆಚ್ಚಾಗುತ್ತಿದೆ. ನಗರದಲ್ಲಿ ಒತ್ತಡ ಕಡಿಮೆ ಮಾಡಲು ರಸ್ತೆ, ರೈಲ್ವೆ, ನಮ್ಮ ಮೆಟ್ರೋ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಈ ನಿಟ್ಟಿನಲ್ಲಿ ತುಮಕೂರುವರೆಗೆ ಕೈಗೊಳ್ಳಲಾದ 12 ಪಥಗಳ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯು ವಿಳಂಬವಾಗುತ್ತಿದೆ. ಇದಕ್ಕೆ ಕಾರಣವೇನು, ಯೋಜನೆ ಪೂರ್ಣ ಯಾವಾಗ, ಎಲ್ಲಿಂದ ಎಲ್ಲಿಗೆ ಹೆದ್ದಾರಿ ನಿರ್ಮಾಣ, ಇದರ ಪ್ರಯೋಜನಗಳ ವಿವರ ಇಲ್ಲಿದೆ. ಬೆಂಗಳೂರಿನ ಮೇಲಾಗುತ್ತಿರುವ ದಟ್ಟಣೆ ಕಡಿಮೆ ಮಾಡಲು ಸರ್ಕಾರವು ಈಗಾಗಲೇ ತುಮಕೂರು ವರೆಗೆ ಮೆಟ್ರೋ ವಿಸ್ತರಣೆಗೆ ಅನುಮೋದನೆ ನೀಡಿದೆ. ಅಲ್ಲದೇ ಬೆಂಗಳೂರಿನಿಂದ ತುಮಕೂರುವರೆಗೆ ಇರುವ ಹಾಲಿ ರೈಲು ಮಾರ್ಗವನ್ನು ನಾಲ್ಕು ಪಥಗಳಿಗೆ ವಿಸ್ತರಿಸುವ ಯೋಜನೆ ಇದೆ. ಅದರೊಂದಿಗೆ ಕೇಂದ್ರ ಸರ್ಕಾರದ ಭಾರತ್ ಮಾಲಾ ಯೋಜನೆಯಡಿ ಬೆಂಗಳೂರು ಗ್ರಾಮಾಂತರ ವ್ಯಾಪ್ತಿಯಗೆ ನೆಲಮಂಗಲ–ತುಮಕೂರುವರೆಗೆ ಬೃಹತ್ ಹೆದ್ದಾರಿ ನಿರ್ಮಿಸಲಾಗುತ್ತಿದೆ. ಈ ಮೂಲಕ ನಗರದಲ್ಲಿ ಒತ್ತಡ ಕಡಿಮೆ ಆಗಲು, ನಗರದಿಂದ ಹೊರ ಹೋಗುವ ಪ್ರಯಾಣಿಕರಿಗೆ, ವಾಹನಗಳಿಗೆ ಸಲೀಸಾಗುವಂತೆ ಈ ಯೋಜನೆಗಳನ್ನು ರೂಪಿಸಲಾಗಿದೆ.

2,000 ಕೋಟಿ ವೆಚ್ಚದ ಬೃಹತ್ ಯೋಜನೆ ಸುಮಾರು 2,000 ಕೋಟಿ ವೆಚ್ಚದಲ್ಲಿ ನಿರ್ಮಾಣ ಆಗುತ್ತಿರುವ 44 ಕಿಲೋ ಮೀಟರ್ ಉದ್ದದ ನೆಲಮಂಗಲ–ತುಮಕೂರು ಹೆದ್ದಾರಿಯು 12 ಲೈನ್‌ಗಳನ್ನು ಹೊಂದಿರಲಿದೆ. ಪಥಗಳ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯನ್ನು ಶನಿವಾರ ಸಂಸದ ಡಾ.ಕೆ.ಸುಧಾಕರ್ ಅವರು ಪರಿಶೀಲಿಸಿದರು. ಇದೇ ವೇಳೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ಅಧಿಕಾರಿಗಳಿಗೆ ಮಹತ್ವ ಸೂಚನೆ ನೀಡಿದರು.

2027ಕ್ಕೆ ಹೆದ್ದಾರಿ ಯೋಜನೆ ಪೂರ್ಣ ಭರವಸೆ ಉತ್ತರ ಕರ್ನಾಟಕ ಸೇರಿದಂತೆ ಇತರ ಭಾಗಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಹದ್ದಾರಿ ಇದಾಗಿದೆ. ಆದರೆ ಕಾಮಗಾರಿ ಮಾತ್ರ ನಿರೀಕ್ಷಿತ ವೇಗದಲ್ಲಿ ಸಾಗದೇ ವಿಳಂಬವಾಗಿದ್ದ ಕುರಿತು ಸಂಸದರು ಪ್ರಶ್ನಿಸಿದ್ದಾರೆ. ಅದಕ್ಕೆ ಅಧಿಕಾರಿಗಳು, ಭೂಸ್ವಾಧೀನ ಪ್ರಕ್ರಿಯೆಯಲ್ಲಿದ್ದ ತೊಡಕುಗಳಿಂದ ಕಾಮಗಾರಿ ವಿಳಂಬವಾಗಿದೆ. 2027ರ ಮಾರ್ಚ್ ತಿಂಗಳೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸುವುದಾಗಿ ಮಾಹಿತಿ ನೀಡಿದರು.

ಗ್ರಾಮಗಳಿಗೆ ಅಂಡರ್ ಪಾಸ್, ಸರ್ವಿಸ್ ರಸ್ತೆ ನಿರ್ಮಾಣ ಕುರಿತಂತೆ ಅಧಿಕಾರಿಗಳಿಗೆ ಅಗತ್ಯ ಸಲಹೆ ನೀಡಿ ಒಟ್ಟಾರೆ ಈ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾಗಿ ಸಾಮಾಜಿಕ ಜಾಲತಾಣದಲ್ಲಿ ಸಂಸದ ಸುಧಾಕರ್ ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಈ ಹೆದ್ದಾರಿಯಿಂದ ಪ್ರಯೋಜನವೇನು ಬೆಂಗಳೂರಿನಿಂದ ಉತ್ತರ ಕರ್ನಾಟಕ, ಮಲೆನಾಡಿನ ಶಿವಮೊಗ್ಗ ಹಾಗೂ ಮುಂಬೈ, ಗೋವಾ ಕಡೆಗೆ ಹೋಗುವವರಿಗೆ ಲಕ್ಷಾಂತರ ವಾಹನಗಳಿಗೆ ಶೀಘ್ರ ಸಂಚಾರಕ್ಕೆ ಸಹಾಯವಾಗುತ್ತದೆ. ನೆಲಮಂಗಲದಲ್ಲಿ ಹಬ್ಬಗಳ ಸಂದರ್ಭದಲ್ಲಿ, ವಾರಾಂತ್ಯ ಸಂಚಾರ ಸರಾಗವಾಗುತ್ತದೆ. ವಾಹನಗಳು ದಟ್ಟಣೆಯಲ್ಲಿ ನಿಲ್ಲುವುದು ತಪ್ಪುತ್ತದೆ. ನಗರದಿಂದ ಬಸ್, ಕಾರು ಇತರ ವಾಹನಗಳು ದಾಬಾಸ್ ಪೇಟೆ ವರೆಗೆ ಹೋಗಲು ಸುಮಾರು ಎರಡು ಗಂಟೆ ಹಿಡಿಯುತ್ತದೆ. ಈ 12 ಪಥದ ಹೆದ್ದಾರಿ ನಿರ್ಮಾಣವಾದರೆ ಬೆಂಗಳೂರು ಹಾಗೂ ಇತರ ಊರುಗಳಿಗೆ ಸಂಪರ್ಕ ಮತ್ತಷ್ಟು ಪರಿಣಾಮಕಾರಿ, ಸಂಚಾರ ಸರಳವಾಗಲಿದೆ. ಸಂಚಾರ ಸಮಯ ಇಳಿಕೆ ಆಗುತ್ತದೆ.

# ಮಂತ್ರಾಲಯ ರಾಯರ ಮಠಕ್ಕೆ ಜಾತಿಗಳನ್ನ ತರಬೇಡಿ: ಜಗ್ಗೇಶ್ ಹೀಗಂದಿದ್ದೇಕೆ!

ಕನ್ನಡ ಚಿತ್ರರಂಗದ ಹಿರಿಯ ಹಾಸ್ಯ ನಟ ಹಾಗೂ ಹಾಲಿ ಬಿಜೆಪಿ ರಾಜ್ಯಸಭಾ ಸಂಸದ ಜಗ್ಗೇಶ್ ಅವರು ಮಂತ್ರಾಲಯದ ಶ್ರೀಗುರುರಾಘವೇಂದ್ರ ಸ್ವಾಮಿಯ ಅಪ್ಪಟ ಭಕ್ತರು. ಬಿಡುವು ಸಿಕ್ಕಾಗಲೆಲ್ಲ ತಪ್ಪದೇ ಅವರು ರಾಯರ ಮಠಕ್ಕೆ ತೆರಳಿ, ದರ್ಶನ ಹಾಗೂ ವಿಶೇಷ ಪೂಜೆಯಲ್ಲಿ ಪಾಲ್ಗೊಳ್ಳುತ್ತಾರೆ.

ತಮ್ಮ ಸೋಷಿಯಲ್ ಮೀಡಿಯಾದಲ್ಲಿಯೂ ರಾಯರ ಫೋಟೋಗಳನ್ನು ಹಂಚಿಕೊಳ್ಳುತ್ತಾ ನಮಿಸುತ್ತಿರುತ್ತಾರೆ. ಆದರೆ, ಜಗ್ಗೇಶ್ ಅವರು ಮಂತ್ರಾಲಯಕ್ಕೆ ಹೋಗುವ ಸಂಬಂಧ ಜಾತಿ ವಿಚಾರ ಉಲ್ಲೇಖಿಸಿ ಅವಮಾನ ಮಾಡಿರುವುದಾಗಿ ಖುದ್ದು ಅವರೇ ಬೇಸರ ಹಂಚಿಕೊಂಡಿದ್ದಾರೆ. ರಾಯರ ಮಠಕ್ಕೆ ಜಾತಿಗಳನ್ನು ತರಬೇಡಿ ಎಂದು ಜಗ್ಗೇಶ್ ಮನವಿ ಮಾಡಿದ್ದಾರೆ. "ರಾಯರ ದರ್ಶನ" ಆಲ್ಬಮ್ ಸಾಂಗ್ ಬಿಡುಗಡೆ ಸಮಾರಂಭದಲ್ಲಿ ಜಗ್ಗೇಶ್ ಈ ವಿಚಾರವನ್ನು ಪ್ರಸ್ತಾಪಿಸಿದ್ದಾರೆ.

'ನಾನು ಮಂತ್ರಾಲಯಕ್ಕೆ ಹೋದರೆ ಗುರುಗಳಿಗೆ ಪಾದಸೇವೆ ಮಾಡದೆ ಬರಲ್ಲ. ಅದನ್ನ ಕೆಲವರು ಅವಮಾನಕಾರಿಯಾಗಿ ಮಾತನಾಡಿದ್ದಾರೆ. ಹೋಗಿ ಬ್ರಾಹ್ಮಣರ ಕಾಲಿಗೆ ಬೀಳ್ತಾನೆ, ಅಯೋಗ್ಯ ಅಂತೆಲ್ಲ ಅಂದಿದ್ದಾರೆ. ಆ ಪುಣ್ಯಾತ್ಮರಿಗೆ ನಾನು ಉತ್ತರ ಕೊಡಲು ಬಯಸುತ್ತೇನೆ' ಎಂದಿದ್ದಾರೆ.

'ರಾಘವೇಂದ್ರ ಸ್ವಾಮಿಗಳು ಕುಳಿತ ಜಾಗದಲ್ಲಿ ಈ ಸ್ವಾಮೀಜಿಗಳು ಕುಳಿತುಕೊಳ್ತಾರೆ. ರಾಯರು ಬಳಸಿದ್ದ



ವಸ್ತುಗಳಿಂದಲೇ ಇವರು ಪೂಜೆ ಮಾಡ್ತಾರೆ. ಹೀಗಾಗಿ ಇವರು ಸಂಪೂರ್ಣ ರಾಯರ ಪ್ರತಿನಿಧಿಗಳು. ಆ ಪೀಠದಲ್ಲಿ ಅವರನ್ನು ಸುಮ್ಮನೆ ನೋಡಿದರೆ ಸಾಕು, ಅನೇಕ ಸಂಕಷ್ಟಗಳು ದೂರವಾಗುತ್ತೆ. ಇನ್ನು ಅವರ ಪಾದ ಮುಟ್ಟಿ ಸೇವೆ ಮಾಡುವುದು ಸಾಕ್ಷಾತ್ ರಾಯರಿಗೆ ಮಾಡಿದಂತೆ' ಎಂದು ಹೇಳಿದ್ದಾರೆ. 'ಅದು ಜಾತ್ಯಾತೀತ ಮಠ' 'ರಾಯರು ಏನಾದ್ರೂ ಈ ಕಾಲದಲ್ಲಿದ್ದು, ನಾವು ಅವರ ಪಾದ ಮುಟ್ಟಿ ಸೇವೆ ಮಾಡಿದ್ರೆ ಏನು ಫಲ ಬರುತ್ತೋ! ಅವರ ಪಾದ ಮುಟ್ಟಿದರೂ ಅಷ್ಟೇ ಸಿಗುತ್ತೆ. ದಯವಿಟ್ಟು ರಾಯರ ಮಠದಲ್ಲಿ ಜಾತಿಗಳನ್ನ ತರಬೇಡಿ.

ಅದು ಜಾತ್ಯಾತೀತ ಮಠ. ಒಂದು ವೇಳೆ ಅಂತಹ ಭಾಷೆ ನಿಮ್ಮ ಬಾಯಲ್ಲಿ ಬಂದರೆ ನಿಮ್ಮ ಬದುಕಿಗೆ, ಬೆಳವಣಿಗೆಗೆ ಬಹಳ ಕುಂಠಿತವಾಗುತ್ತೆ. ತುಂಬಾ ತೊಂದರೆಗಳನ್ನು ಎದುರಿಸುತ್ತೀರಿ' ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

'ಈ ರೀತಿ ಮಾತನಾಡುವವರಿಗೆ ರಾಯರೇ ನಿಮಗೆ ಒಂದು ದಿನ ಎಚ್ಚರಿಸುತ್ತಾರೆ. ದಯವಿಟ್ಟು ಆ ವಿಚಾರವನ್ನ ಯಾರೂ ಮಾತನಾಡಬೇಡಿ. ನಾನು ಇರುವುದೇ ರಾಯರ ಮಠಕ್ಕೆ ಸೇವೆ ಮಾಡಲು, ಈ ಹಿಂದೆಯೂ ನಾನು ಇದನ್ನು ಮಾಡಿಕೊಂಡು ಬಂದಿದ್ದೇನೆ. ಇವತ್ತಲ್ಲ, ಕೊನೆಯ ಉಸಿರಿರುವವರೆಗೆ ರಾಯರು ಅವರಲ್ಲಿದ್ದಾರೆ ಎನ್ನುವುದು ನನ್ನ ನಂಬಿಕೆ' ಎಂದು ಜಗ್ಗೇಶ್ ಹೇಳಿದ್ದಾರೆ.

# ವಂದೇ ಭಾರತ್ ಸ್ಲೀಪರ್ ರೈಲು ಕಾರ್ಯಾಚರಣೆಗೆ ಸಜ್ಜು, ಟಿಕೆಟ್ ದರ, ವೇಳಾಪಟ್ಟಿ

ಭಾರತೀಯ ರೈಲ್ವೆ ಇಲಾಖೆಯು ದೇಶದ ಮೊದಲ ವಂದೇ ಭಾರತ್ ಎಕ್ಸ್‌ಪ್ರೆಸ್ ಸ್ಲೀಪರ್ ರೈಲು (Vande Bharat Express Sleeper Train) ಕಾರ್ಯಾಚರಣೆ ಆರಂಭಕ್ಕೆ ಸಜ್ಜಾಗಿದೆ. ಇದು ವಂದೇ ಭಾರತ್ ರೈಲಿನ ರೂಪಾಂತರದ ರೈಲಾಗಿದೆ. ರಾಷ್ಟ್ರ ರಾಜಧಾನಿ ದೆಹಲಿಯಿಂದ ಪಾಟ್ನಾ ನಗರದವರೆಗೆ ತನ್ನ ಮೊದಲ ಸೇವೆ ನೀಡುವ ಬಗ್ಗೆ ಇಲಾಖೆ ಅಪ್ಡೇಟ್ ನೀಡಿದೆ. ಬಹುದೂರದ ಪ್ರಯಾಣದ ಪ್ರಯಾಣಿಕರನ್ನು ಗಮನದಲ್ಲಿಟ್ಟುಕೊಂಡು ತಯಾರಿಸಲಾದ ಈ ವಂದೇ ಭಾರತ್ ಎಕ್ಸ್‌ಪ್ರೆಸ್ ಸ್ಲೀಪರ್ ರೈಲು ದೆಹಲಿ ಮತ್ತು ಪಾಟ್ನಾ ರಾತ್ರಿ ಪಾಳಿಯಲ್ಲಿ ಕಾರ್ಯ ನಿರ್ವಹಿಸಲಿದೆ. ಕನಿಷ್ಠ ಪ್ರಯಾಣದ ಸಮಯದಲ್ಲಿ ಸಾರ್ವಜನಿಕರಿಗೆ ಆರಾಮದಾಯಕ ಮತ್ತು ಸುಗಮ ಪ್ರಯಾಣ ಖಚಿತಪಡಿಸುತ್ತದೆ. ದೂರದ ಗಮ್ಯಸ್ಥಾನ ತಲುಪಲು ಪ್ರಯಾಣಿಕರಿಗೆ ಕಡಿಮೆ ಸಮಯದಲ್ಲಿ ಐಶಾರಾಮಿ ಅನುಭವ ಸಹಿತ ಉತ್ತಮ ಸೇವೆ ಒದಗಿಸಲಿದೆ ಎಂದು ಇಲಾಖೆ ತಿಳಿಸಿದೆ. ನೈಟ್ ಟ್ರಾವೆಲ್ ಇಷ್ಟಪಡುವವರಿಗೆ ಈ ರೈಲು ಸೂಕ್ತ ಎನಿಸುತ್ತದೆ.

ಸ್ಲೀಪರ್ ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆ ವಿವರ



ಇತರ ರೈಲುಗಳಿಗಿಂತ ಈ ದೆಹಲಿ–ಪಾಟ್ನಾ ಸ್ಲೀಪರ್ ವಂದೇ ಭಾರತ್ ರೈಲು ಆಧುನಿಕ ವ್ಯವಸ್ಥೆ ಹೊಂದಿದೆ. ಅತೀ ಕಡಿಮೆ ಸಮಯದಲ್ಲಿ 1000 ಕಿ.ಮೀ ದೂರದ ರಾತ್ರಿ ಪ್ರಯಾಣವನ್ನು ಕ್ರಮಿಸುತ್ತದೆ. ಕೇವಲ 08 ಗಂಟೆಗಲ್ಲಿ ಗಮ್ಯಸ್ಥಾನ ತಲುಪುತ್ತದೆ. ಈ ವೇಳೆ ರೈಲಿನ ವೇಗ ಪ್ರತಿ ಗಂಟೆಗೆ ಗರಿಷ್ಠ 160 ಕಿಲೋ ಮೀಟರ್ ಇರಲಿದೆ. ವಾರದಲ್ಲಿ ಏಳು ದಿನಗಳಲ್ಲಿ ಆರು ದಿನ ಕಾರ್ಯಾಚರಣೆ ಮಾಡಲಿದೆ ಎಂದು ರೈಲ್ವೆ ಇಲಾಖೆಯ ಮೂಲಗಳು ತಿಳಿಸಿವೆ.

ಟಿಕೆಟ್ ದರ, ರೈಲು ಸೇವೆ ಆರಂಭ ದಿನಾಂಕ?

ಪಾಟ್ನಾ–ದೆಹಲಿ ಸ್ಲೀಪರ್ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ಟಿಕೆಟ್ ದರದ ಬಗ್ಗೆ ಅಧಿಕೃತ ಮಾಹಿತಿ ತಿಳಿಸಬೇಕಿದೆ. ಒಂದು ಅಂದಾಜಿನ ಪ್ರಕಾರ ಫಸ್ಟ್ ಕ್ಲಾಸ್ ಎಸಿ ಕೋಚ್ ಟಿಕೆಟ್ ದರ ಅಂದಾಜು 2000–3000 ರೂಪಾಯಿ ನಿಗದಿ ಆಗಬಹುದು. 16 ಬೋಗಿಗಳು ಈ ರೈಲು ಸಂಚಾರ 2026 ಜನವರಿ ಆರಂಭದಲ್ಲಿ ಶುರುವಾಗಬಹುದು ಎಂದು ಹೇಳಲಾಗುತ್ತಿದೆ. ಇದು ನಿಜವಾದಲ್ಲಿ ರೈಲ್ವೆ ಇಲಾಖೆ ಹೊಸ ವರ್ಷಕ್ಕೆ ಪ್ರಯಾಣಿಕರಿಗೆ ಗುಡ್ ನ್ಯೂಸ್ ಕೊಟ್ಟಂತಾಗುತ್ತದೆ.

ಸ್ಲೀಪರ್ ವಂದೇ ಭಾರತ್ ರೈಲಿನ ವೈಶಿಷ್ಟ್ಯತೆಗಳು

ದೇಶದ ಮೊದಲ ಸ್ಲೀಪರ್ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಅತ್ಯುತ್ತಮ ದರ್ಜೆಯ ಮೂಲ ಸೌಕರ್ಯಗಳನ್ನು ಒಳಗೊಂಡಿದೆ. ಉತ್ತಮ ಅನುಭವ ನೀವು ಸ್ಲೀಪರ್ ಬರ್ತ್‌ಗಳು, ಆಧುನಿಕ ರೀತಿಯಲ್ಲಿ ವಿನ್ಯಾಸ ಮಾಡಿದ ಒಳಾಂಗಣ, ಆಟೋ ಸೆನ್ಸರ್‌ಗಳೊಂದಿಗೆ ಬಾಗಿಲು ಕೆಲಸ ಮಾಡುತ್ತವೆ. ಬಯೋ–ಡೈಜೆಸ್ಟರ್ ಶೌಚಾಲಯಗಳು, ಸೂಕ್ತ ಬೆಳಕು ನೀಡುವ ಕಿಟಕಿಗಳ ವ್ಯವಸ್ಥೆ ಇದೆ. ಇದೆಲ್ಲ ಕಾರಣದಿಂದ ಪ್ರಯಾಣಿಕರಿಗೆ ಈ ರೈಲು ವಿಶೇಷ ಅನ್ನಿಸುತ್ತದೆ.

ರೈಲಿನಲ್ಲಿ ಸಿಸಿಟಿವಿ ಕಣ್ಗಾವಲು ವ್ಯವಸ್ಥೆ ಇದೆ. ರೈಲಿನ ಕಾರ್ಯ ದಕ್ಷತೆ, ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿರುವ ರೈಲ್ವೆ ಅಧಿಕಾರಿಗಳು ದೀರ್ಘ ಪ್ರಯಾಣದ ಜನರಿಗೆ ಇದೊಂದು ಉತ್ತಮ ಆಯ್ಕೆ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ದೆಹಲಿ–ಪಾಟ್ನಾ ಮಾರ್ಗದಲ್ಲಿ ಸೇವೆ ಆರಂಭಿಸಿದ ಬಳಿಕ ಭವಿಷ್ಯದಲ್ಲಿ ಇತರ ಮಾರ್ಗಗಳಲ್ಲೂ ಈ ರೈಲಿನ ಸೇವೆ ನಿರೀಕ್ಷಿಸಬಹುದಾಗಿದೆ.

# ಬೆಂಗಳೂರಿನ ಈ ಭಾಗಗಳಲ್ಲಿ ಡಿಸೆಂಬರ್ 20ರ ವರೆಗೆ ಕರೆಂಟ್ ಕಟ್

ವಿದ್ಯುತ್‌ಗೆ ಸಂಬಂಧಿಸಿದ ಕಾಮಗಾರಿ ನಡೆಯುವ ಸ್ಥಳಗಳಲ್ಲಿ ಮುಂಜಾಗ್ರತಾ ಕ್ರಮವಾಗಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಮಾಡಲಾಗುತ್ತದೆ. ಹಾಗೆಯೇ



ಇದೀಗ ಡಿಸೆಂಬರ್ 20ರ ವರೆಗೆ ಬೆಂಗಳೂರಿನ ಈ ಭಾಗಗಳಲ್ಲಿ ಕರೆಂಟ್ ಕಟ್ ಆಗಲಿದೆ ಎಂದು ಬೆಸ್ಕಾಂ ಮಾಹಿತಿ ನೀಡಿದೆ. ಹಾಗಾದ್ರೆ, ಎಲ್ಲೆಲ್ಲಿ, ಸಮಯ ಹಾಗೂ ಕಾರಣ ಏನು ಎಂದು ತಿಳಿಯಿರಿ. ಕೆಪಿಟಿಸಿಎಲ್ ವತಿಯಿಂದ ತುರ್ತುನಿರ್ವಹಣಾ ಕಾರ್ಯ ಕೈಗೊಳ್ಳುವ ಹಿನ್ನೆಲೆ ಡಿಸೆಂಬರ್ 20ರ ವರೆಗೆ ಬೆಳಗ್ಗೆ 10ರಿಂದ ಸಂಜೆ 6 ಗಂಟೆಯವರೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ. ಹಾಗಾದ್ರೆ, ಎಲ್ಲೆಲ್ಲಿ ಎನ್ನುವ ಪ್ರಶ್ನೆಗೆ ಉತ್ತರ ಇಲ್ಲಿದೆ ನೋಡಿ.

ಎಲ್ಲೆಲ್ಲಿ ವಿದ್ಯುತ್ ವ್ಯತ್ಯಯ?: ಟ್ರಾನ್ಸ್‌ಫಾರ್ಮರ್‌ಗಳು ಮತ್ತು ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸುವ ಕಾರ್ಯ ಕೈಗೊಳ್ಳುವ ಹಿನ್ನೆಲೆ ಡಿಸೆಂಬರ್ 20ರ ವರೆಗೆ ಪ್ರಭಾಕರ್ ಲೇಔಟ್, ಗುಂಡಪ್ಪ ಲೇಔಟ್, ಅಂಜನಿ ಲೇಔಟ್, ಆಶ್ರಯ ಲೇಔಟ್, ಕೆಂಪಮ್ಮ ಲೇಔಟ್, ವೆಂಕಟಗಿರಿಕೋಟೆ, ರಾಯಲ್ ಸರ್ಕಲ್, ಬಾಗೇಪಲ್ಲಿ ಸರ್ಕಲ್, ಟ್ಯಾಂಕ್ ಬ್ಲಂಡ್ ರಸ್ತೆ, ಟೀಚರ್ಸ್ ಕಾಲೋನಿ ಮತ್ತು ತಿಮ್ಮಸಂದ್ರ ಸೇರಿದಂತೆ ಪ್ರದೇಶಗಳಲ್ಲಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕರೆಂಟ್ ಕಟ್ ಆಗಲಿದ ಎಂದು ತಿಳಿಸಿದೆ. ಗ್ರಾಹಕರು ಹೆಚ್ಚಿನ ಮಾಹಿತಿಗಾಗೀ ಬೆಸ್ಕಾಂ ಅಧಿಕೃತ ವೆಬ್‌ಸೈಟ್ ಽಣಣಠಿ://ಛಿಞಛಿಟಿಟ.ಇಚಿಡಿಟಿಚಿಣಚಿಞಚಿ.ರಠಡಿ.ಟಿಗೆ ಭೇಟಿ ನೀಡಬಹುದು ಅಥವಾ ಸಹಾಯವಾಣಿಗೆ ಕರೆ ಮಾಡಬಹುದು ಎಂದು ತಿಳಿಸಿದೆ. ಇನ್ನೂ ಯಾವೆಲ್ಲಾ ಭಾಗಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆಯೋ ಅಂತಹ ಪ್ರದೇಶಗಳ ನಿವಾಸಿಗಳು ಮುಂಜಾಗ್ರತಾ ಕ್ರಮವಾಗಿ ಮುಂಚಿತವಾಗಿ ಮೊಬೈಲ್ ಫೋನ್, ಲ್ಯಾಪ್‌ಟ್ಯಾಪ್, ಬ್ಯಾಟರಿ ಸೇರಿದಂತೆ ಚಾರ್ಜಿಂಗ್ ಸಂಬಂಧಪಟ್ಟ ಸಾಧನಗಳನ್ನು ಚಾರ್ಜ್ ಮಾಡಿಟ್ಟುಕೊಳ್ಳುವುದು ಉತ್ತಮ ಎಂದು ಸಲಹೆ ನೀಡಿದೆ.

ಶನಿವಾರ ಎಲ್ಲೆಲ್ಲಿ ವಿದ್ಯುತ್ ಕಡಿತ?: ಡಿಸೆಂಬರ್ 13ರಂದು ಅತ್ತೂರು ಮತ್ತು ಯಲಹಂಕ ಉಪಕೇಂದ್ರಗಳ ವ್ಯಾಪ್ತಿಯಲ್ಲಿ ತುರ್ತು ನಿರ್ವಹಣಾ ಕಾರ್ಯ ಕೈಗೊಳ್ಳುವ ಹಿನ್ನೆಲೆ ಬೆಳಗ್ಗೆ 11ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಕಡಿತ ಆಗಲಿದೆ ಎಂದು ಬೆಸ್ಕಾಂ ತಿಳಿಸಿತ್ತು.

ಯಲಹಂಕ ಎಂಯುಎಸ್‌ಎಸ್, ಕೆಎಂಎಫ್, ಮದರ್ ಡೈರಿ, ಉನ್ನಿಕೃಷ್ಣನ್ ರಸ್ತೆ, ಬಿ ಸೆಕ್ಟರ್, ಎನ್‌ಇಎಸ್ ರಸ್ತೆ, ಸಿಎಂ ಎನ್‌ಕ್ಲೇವ್, ಮಾತೃ ಲೇಔಟ್, ಸೋಮೇಶ್ವರನಗರ, ಕನಕನಗರ, ಜುಡಿಸಿಯಲ್ ಲೇಔಟ್, ಯಲಹಂಕ ಓಲ್ಡ್ ಟೌನ್, ಗಾಂಧಿ ನಗರ, ಬಿಬಿಎಂಪಿ ರಸ್ತೆ (ಓಲ್ಡ್ ಟೌನ್ ಮತ್ತು ಕೋಡಿ ರಸ್ತೆ), ಕಾರೆ, ಆರ್‌ಎಂಝೆಡ್ ಮಾಲ್, ಆರ್‌ಎಂಝೆಡ್ ರೆಸಿಡೆನ್ಸಿಯಲ್, ಪುರವಂಕರ ಅಪಾರ್ಟ್‌ಮೆಂಟ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದೆ. ಡೆಸೆಂಬರ್ 12ರಂದು ಕರೆಂಟ್ ಕಟ್: ತುರ್ತು ಕಾಮಗಾರಿ ಹಿನ್ನೆಲೆ ಡಿಸೆಂಬರ್ 12 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆವಯವರೆಗೆ ವಿದ್ಯುತ್ ಕಡಿತಗೊಳ್ಳಲಿದೆ ಎಂದು ಬೆಸ್ಕಾಂ ಮಾಹಿತಿ ನೀಡಿತ್ತು. ಕೋರಮಂಗಲ ವಿಭಾಗದ ದೇವರಬೀಸನಹಳ್ಳಿ ಮತ್ತು ಆಡುಗೋಡಿ ಸಬ್‌ಸ್ಟೇಷನ್‌ಗಳ ವ್ಯಾಪ್ತಿಯ ಪ್ರದೇಶಗಳಲ್ಲಿ ವಿದ್ಯುತ್ ಕಡಿತಗೊಳ್ಳಲಿದೆ ಎಂದು ತಿಳಿಸಿತ್ತು. ದೇವರಬೀಸನಹಳ್ಳಿ, ಬೆಳ್ಳಂದೂರು, ಆರ್‌ಎಂಝಡ್, ಎಕ್ರೋಸ್ಪೇಸ್ ಇಕೋವರ್ಲ್ಡ್, ಕರಿಯಮ್ಮನ ಅಗ್ರಹಾರ, ಸಕ್ರ ಆಸ್ಪತ್ರೆ, ಪಾಸ್‌ಪೋರ್ಟ್ ಕಚೇರಿ, ಶೋಭಾ ಅಪಾರ್ಟ್‌ಮೆಂಟ್, ಹೊರ ವರ್ತುಲ ರಸ್ತೆ, 5ನೇ ಕೈಗಾರಿಕಾ ಬಡಾವಣೆ, ಕೋರಮಂಗಲ, ಮಡಿವಾಳ ವೆಂಕಟೇಶ್ವರ ಲೇಔಟ್, ಚಿಕ್ಕ ಆಡುಗೋಡಿ, ಜೋಗಿ ಕಾಲೋನಿ, ಸೇಂಟ್ ಜಾನ್ಸ್ ಸಿಬ್ಬಂದಿ ಕ್ವಾರ್ಟರ್ಸ್, ಆಡುಗೋಡಿ 7 ಮತ್ತು 8ನೇ ಬ್ಲಾಕ್, ಸಿಎಆರ್ ಪೊಲೀಸ್ ಕ್ವಾರ್ಟರ್ಸ್.

ಆಡುಗೋಡಿ ಮುಖ್ಯ ರಸ್ತೆ, ಸೇಂಟ್ ಜಾನ್ಸ್ ಆಸ್ಪತ್ರೆ, ಮಡಿವಾಳ, ಮಾರುತಿ ನಗರ, ಡಾಲರ್ಸ್ ಕಾಲೋನಿ, 100 ಅಡಿ ರಿಂಗ್ ರಸ್ತೆ, ಒರಾಕಲ್ ಕಂಪನಿ, ಬನ್ನೇರುಘಟ್ಟ ರಸ್ತೆ (ಬಿಜಿ ರಸ್ತೆ), ಕೆಎಚ್‌ಬಿ ಕಾಲೋನಿ, ಕೋರಮಂಗಲ ಕೈಗಾರಿಕಾ ಪ್ರದೇಶ (5 ನೇ ಬ್ಲಾಕ್), ಎಂಐಸಿಒ (3 ನೇ, 4 ನೇ, 5 ನೇ ಮತ್ತು 6 ನೇ ಬ್ಲಾಕ್‌ಗಳು), ಭುವನಪ್ಪ ಕಾವೇರಿ ಲೇಔಟ್, ಕೃಷ್ಣ ನಗರ ಕೈಗಾರಿಕಾ ಲೇಔಟ್, ಎಸ್‌ಜಿ ಪಾಳ್ಯ, ಧವನ್ ಜ್ಯುವೆಲರಿ (2 ನೇ ಬ್ಲಾಕ್), ಮಡಿವಾಳ ಸಂತೆ, ಸಿದ್ಧಾರ್ಥ ಕಾಲೋನಿ, ಹ್ಯಾಪಿ ಮೈಂಡ್ ಕಂಪನಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಬಹುದು ಎಂದು ತಿಳಿಸಿತ್ತು.

# ನಟ್ಟು ಬೋಲ್ಟ್ ಬಗ್ಗೆ ನಾನಾಗೇ ಕೆದಕಿ ಮಾತಾಡಿಲ್ಲ, ಚಿತ್ರರಂಗವನ್ನ ನಾನು ಬಿಟ್ಟುಕೊಡಲ್ಲ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೆಲ ತಿಂಗಳ ಹಿಂದೆ "ಚಿತ್ರರಂಗದವರ ನಟ್ಟು ಬೋಲ್ಟ್ ಟೈಟ್ ಮಾಡೋದು ಗೊತ್ತಿದೆ" ಎಂಬ ಹೇಳಿಕೆ ನೀಡುವ ಮೂಲಕ ವಿವಾದದ ಕಿಡಿ ಹೊತ್ತಿಸಿದ್ದರು. ಇದಕ್ಕೆ ಹಲವು ತಿಂಗಳ ಬಳಿಕ ನಟ ಕಿಚ್ಚ ಸುದೀಪ್ ಪ್ರತಿಕ್ರಿಯೆ ನೀಡಿ, "ಎಲ್ಲರ ನಟ್ಟು ಬೋಲ್ಟ್ ಟೈಟೇ ಇದೆ" ಎಂದಿದ್ದರು. ಇದಾದ ಬಳಿಕ ಡಿಕೆಶಿ ಹಾಗೂ ಸುದೀಪ್ ನಡುವೆ ಮುನಿಸು ಎಂದೆಲ್ಲ ಚರ್ಚೆಗಳು ನಡೆದಿದ್ದವು. ಇತ್ತೀಚೆಗೆ ಬಿಗ್‌ಬಾಸ್ ಕಾರ್ಯಕ್ರಮಕ್ಕೆ ವಿಘ್ನ ಎದುರಾದಾಗಲೂ ಇದೇ ಹೇಳಿಕೆ ತಳುಕು ಹಾಕಿಕೊಂಡಿತ್ತು. ಈ ಬಗ್ಗೆ ಮತ್ತೆ ಮಾತನಾಡಿರುವ ಸುದೀಪ್, ನಟ್ಟು ಬೋಲ್ಟ್ ಬಗ್ಗೆ ನಾನಾಗೇ ಕೆದಕಿ ಮಾತನಾಡಿಲ್ಲ, ಚಿತ್ರರಂಗವನ್ನ ಬಿಟ್ಟುಕೊಡಲ್ಲ" ಎಂದಿದ್ದಾರೆ. 'ಡಿ.ಕೆ.ಶಿವಕುಮಾರ್ ಸಾಹೇಬರು ನನಗೆ ಬಹಳ ಪರಿಚಯಸ್ಥರು. ಅವರು ತುಂಬಾ ತಮಾಷೆ ಮಾಡಿಕೊಂಡಿರುವ ವ್ಯಕ್ತಿ. ಟಿವಿಗಳಲ್ಲಿ ಕಾಣುವಷ್ಟು ಗಂಭೀರವಾಗಿರಲ್ಲ. ಒಬ್ಬ ಮನುಷ್ಯನಿಗೆ ತನ್ನ ಪವರ್ ಏನು ಅಂತ ಗೊತ್ತಾದಾಗ ಅವರು ಯಾಕೆ ಮಾತನಾಡಬೇಕು? ಹಿಂದಿನಿಂದಲೇ ಬಂದು ಹೇಳಿದ್ದನ್ನ ಮಾಡಬಹುದಿತ್ತು. ಆದರೆ ಅವರು ಅದನ್ನು ಹೇಳಿದ್ರು ಅಂದ್ರೆ ಅದನ್ನ ಮಾಡಲ್ಲ ಎಂದರ್ಥ' ಎಂದಿದ್ದಾರೆ.

'ಡಿಕೆ ಅವರಿಗೆ ಕೆಲವು ಅರೆಬರೆ ಮಾಹಿತಿ ನೀಡಲಾಗಿತ್ತು. ಅದು ಅವರ ತಪ್ಪಲ್ಲ. ಆದರೆ ಡಿ.ಕೆ.ಶಿವಕುಮಾರ್ ಅವರಿಂದ ಆ ಮಾತು ಬರಬಾರದಿತ್ತು ಎನ್ನುವುದು ನನ್ನ ವೈಯಕ್ತಿಕ ಉದ್ದೇಶವಾಗಿತ್ತು. ಇನ್ನೊಂದೆಡೆ ನಾನು ಚಿತ್ರರಂಗದವನು, ಹಾಗಾಗಿ ನಾನು ಚಿತ್ರರಂಗವನ್ನು ಯಾರಿಗೋಸ್ಕರವೂ ಬಿಟ್ಟುಕೊಡುವವನಲ್ಲ. ಹಾಗಾಗಿ ನಾನು ಅದನ್ನ ಹೇಳಲೇಬೇಕಾಯ್ತು' ಎಂದು ಟಿವಿ9 ಸಂದರ್ಶನದಲ್ಲಿ ಸ್ಪಷ್ಟನೆ ನೀಡಿದ್ದಾರೆ. 'ನಾನು ಉತ್ತರ ನೀಡಿದರಲ್ಲೂ ಎರಡು ರೀತಿ ಇದೆ. ಒಂದು ನೇರವಾಗಿ ಹೀರೋ ತರ ಮಾತನಾಡುವುದು, ಇನ್ನೊಂದು



ಚಿತ್ರರಂಗದ ವ್ಯಕ್ತಿಯಾಗಿ ಹಾಗೂ ಅವರ ಸ್ನೇಹಿತನಾಗಿ ಸೂಕ್ಷ್ಮವಾಗಿ ಮಾತನಾಡುವುದು, ಎರಡೂ ಬೇಕಾಗುತ್ತೆ. ಇಲ್ಲಿ ಉತ್ತರನೂ ಕೊಡಬೇಕಾಗುತ್ತೆ, ಸೂಕ್ಷ್ಮತೆಯೂ ಇರಬೇಕಾಗುತ್ತೆ, ಚಿತ್ರರಂಗವನ್ನೂ ಬಿಟ್ಟುಕೊಡಬಾರದು. ಯಾರಾದರೂ ಒಬ್ಬರು ಹೇಳಬೇಕಿತ್ತು, ನಾನು ಹೇಳಿದೆ' ಎಂದಿದ್ದಾರೆ. 'ಪ್ರಶ್ನೆ ಕೇಳಿದ್ರು ಉತ್ತರ ಕೊಟ್ಟೆ' 'ಡಿ.ಕೆ.ಶಿವಕುಮಾರ್ ಅವರು ಕೂಡ ನನ್ನ ಮಾತನ್ನು ನೆಗೆಟಿವ್ ಆಗಿ ತೆಗೆದುಕೊಂಡಿಲ್ಲ. ಅದು ಅವರ ತಪ್ಪಲ್ಲ, ನಮ್ಮವರೊಬ್ಬರು ಮಾಡಿದ್ದು. ನಾವು ಅಹಂನಲ್ಲಿ ಮಾತನಾಡುವುದಕ್ಕೂ, ವಿಚಾರವನ್ನು ಸೂಕ್ಷ್ಮವಾಗಿ ನಿಭಾಯಿಸುವುದಕ್ಕೂ ವ್ಯತ್ಯಾಸವಿದೆ. ಇಲ್ಲಿ ನಾವಾಗೇ ಕೆದಕಿ ಯಾರ ಬಗ್ಗೆಯೂ ಮಾತನಾಡಿಲ್ಲ. ಬಾ ನಾನು ಯಾರಂತ ತೋರಿಸ್ತೀನಿ ಅನ್ನೋ ಅಹಂ ಕೂಡ ಇಲ್ಲ. ಹೇಳಬೇಕಿತ್ತು, ಅದಕ್ಕೊಂದು ರೀತಿ ಇತ್ತು, ವೇದಿಕೆ ಇತ್ತು. ಅವರಾಗಿಯೇ ಕೇಳಿದ್ರು, ಅದಕ್ಕೆ ನಾನು ಉತ್ತರ ಕೊಟ್ಟೆ. ಅದು ಬೇರೆಯವರಂತೆ ಅವಕಾಶಕ್ಕಾಗಿ ಕಾದು ಆಡಿರುವ ಮಾತುಗಳಲ್ಲ. ಅಂತಹ ಕೆಲಸವನ್ನು ನಾನು ಮಾಡುವುದೂ ಇಲ್ಲ. ಕೇಳದ ಪ್ರಶ್ನೆಗಳಿಗೆ ನಾನಾಗಿಯೇ ಉತ್ತರ ಕೊಟ್ಟಿಲ್ಲ' ಎಂದಿದ್ದಾರೆ ಕಿಚ್ಚ.

ಇತ್ತೀಚೆಗೆ ಬಿಗ್‌ಬಾಸ್ ಕಾರ್ಯಕ್ರಮ ದಿಢೀರ್ ನಿಂತಾಗ ಡಿ.ಕೆ.ಶಿವಕುಮಾರ್ ಅವರೇ ಸಮಸ್ಯೆ ಬಗೆಹರಿಸಿದ್ದರು. ಇದಕ್ಕೆ ಸುದೀಪ್ ಬಿಗ್‌ಬಾಸ್ ವೇದಿಕೆಯಲ್ಲಿ ಥ್ಯಾಂಕ್ಸ್ ಕೂಡ ಹೇಳಿದ್ರು. ಈ ಬಗ್ಗೆಯೂ ಮಾತನಾಡಿರುವ ಅವರು, 'ಬಿಗ್‌ಬಾಸ್ ಕಾರ್ಯಕ್ರಮಕ್ಕೆ ಅಡ್ಡಿಯಾದಾಗಲೂ ರಾತ್ರೋರಾತ್ರಿ ನನಗೆ ಸ್ಪಂದಿಸಿದರು. ನಮ್ಮಿಬ್ಬರ ಸಂಬಂಧ ಚೆನ್ನಾಗಿ ಇದ್ದಾಗ ಇದೆಲ್ಲವೂ ಸಾಧ್ಯವಾಗುತ್ತೆ. ನಾವು ಸಂಪರ್ಕ ಮಾಡುವವರ ಜೊತೆಗೆ ನಮ್ಮ ಸಂಬಂಧ ಸರಿ ಇಲ್ಲದೆ ಹೋದರೆ ಇದೆಲ್ಲ ಆಗಲ್ಲ. ಅವರೊಂದಿಗೆ ನಾವು ಚೆನ್ನಾಗಿ ಇದ್ದಾಗ, ನಮ್ಮೊಂದಿಗೆ ಅವರೂ ಚೆನ್ನಾಗಿ ಇರ್ತಾರೆ' ಎಂದಿದ್ದಾರೆ.

# ದರ್ಶನ್ ಫ್ಯಾನ್ಸ್‌ಗೆ ಹೆಣ್ಣುಮಕ್ಕಳನ್ನ ಗೌರವಿಸುವುದು ಹೇಗೆಂದು ಗೊತ್ತಿದೆ: ವಿಜಯಲಕ್ಷ್ಮಿ

ನಟ ದರ್ಶನ್ ತೂಗುದೀಪ ಅವರು ಜೈಲಿನಲ್ಲಿದ್ದು, ಅವರು ನಟಿಸಿರುವ "ಡೆವಿಲ್" ಸಿನಿಮಾ ರಿಲೀಸ್ ಆಗಿ ಭರ್ಜರಿ ಪ್ರದರ್ಶನ ಕಾಣುತ್ತಿದೆ. ಡಿಬಾಸ್ ಅಭಿಮಾನಿಗಳು ಈ ಸಿನಿಮಾವನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡು ಮೆರೆಸುತ್ತಿದ್ದಾರೆ. ಇದರ ನಡುವೆ ದರ್ಶನ್ ಪತ್ನಿ ವಿಜಯಲಕ್ಷ್ಮಿ ಅವರು ಮೊದಲ ಬಾರಿಗೆ ಸಂದರ್ಶನ ನೀಡಿ ಅಚ್ಚರಿ ವಿಚಾರಗಳನ್ನು ಹಂಚಿಕೊಂಡಿದ್ದಾರೆ. ಡೆವಿಲ್ ಸಿನಿಮಾ, ಡಿಬಾಸ್ ಅಭಿಮಾನಿಗಳ ಮೇಲಿನ ಆರೋಪಗಳಿಗೆ ತಕ್ಕ ಉತ್ತರ ನೀಡಿದ್ದಾರೆ. ಜೊತೆಗೆ ಮಾಧ್ಯಮಗಳಿಗೂ ಖಡಕ್ ವಾರ್ನಿಂಗ್ ಕೊಟ್ಟಿದ್ದಾರೆ. ಡಿ ಕಂಪನಿ ಯುಟ್ಯೂಬ್ ಚಾನೆಲ್‌ಗೆ ವಿಜಯಲಕ್ಷ್ಮಿ ದರ್ಶನ್ ಸಂದರ್ಶನ ನೀಡಿದ್ದು, ಡೆವಿಲ್ ಸಿನಿಮಾ ನಾಯಕಿ ರಚನಾ ರೈ ಸಂದರ್ಶನ ನಡೆಸಿಕೊಟ್ಟಿದ್ದಾರೆ. ಈ ಸಂದರ್ಶನದ ತುಣುಕನ್ನು ಡಿ ಕಂಪನಿ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಳ್ಳಲಾಗಿದೆ. ಇದರಲ್ಲಿ ವಿಜಯಲಕ್ಷ್ಮಿ ಅವರು ಡೆವಿಲ್ ಸಿನಿಮಾದ ಸಕ್ಸಸ್, ಜೈಲಿನಲ್ಲಿ ದರ್ಶನ್ ಅವರ ಸ್ಥಿತಿ, ಡಿಬಾಸ್ ಅಭಿಮಾನಿಗಳು, ನೆಗೆಟಿವ್ ಮಾತುಗಳ ಬಗ್ಗೆ ಉಲ್ಲೇಖಿಸಿದ್ದಾರೆ.





'ಡೆವಿಲ್ ಸಕ್ಸಸ್ ನೋಡಿ ನನಗೆ ತುಂಬಾನೇ ಖುಷಿ ಆಗ್ತಿದೆ. ದರ್ಶನ್ ಇಲ್ಲದಿದ್ದರೂ ಅವರ ಅಭಿಮಾನಿಗಳು ಸಿನಿಮಾನ, ದರ್ಶನ್‌ನ ತಲೆ ಮೇಲೆ ಇಟ್ಟುಕೊಂಡು ಮೆರೆಸುತ್ತಾರೆ ಅನ್ನೋದಕ್ಕೆ ಇದೊಂದು ಸಾಕ್ಷಿ. ಡೆವಿಲ್ ಸಿನಿಮಾ ಶೂಟಿಂಗ್ ಮುಗಿದ ತಕ್ಷಣ ದರ್ಶನ್ ಮತ್ತೆ ಜೈಲಿಗೆ ಹೋಗ್ತಾರೆ, ಈ ತರ ಆಗುತ್ತೆ ಅಂತ ಗೊತ್ತೂ ಇರಲಿಲ್ಲ. ಇದನ್ನು ನಾವು ನಿರೀಕ್ಷೆಯೂ ಮಾಡಿರಲಿಲ್ಲ' ಎಂದಿದ್ದಾರೆ ವಿಜಯಲಕ್ಷ್ಮಿ. '12 ಗಂಟೆಗೆ ದರ್ಶನ್ ಫೋನ್ ಮಾಡಿದ್ರು' 'ದರ್ಶನ್ ಈ ವೃತ್ತಿಯನ್ನ ದೇವರಿಗಿಂತ ಜಾಸ್ತಿ ಪೂಜಿಸುತ್ತಾರೆ. ನೀನು ಪದೇ ಪದೇ ಹುಟ್ಟಿ ಬರಬೇಕು ಈ ಋಣ ತೀರಿಸೋಕೆ ಅಂತೆಲ್ಲ ಅಂತಾರೆ. ವಾರದಲ್ಲಿ ಅವರು ನನಗೆ ಎರಡು ಸಲ ಫೋನ್ ಮಾಡ್ತಾರೆ. ಆ ದಿನ 12 ಗಂಟೆಗೆ ಫೋನ್ ಮಾಡಿದ್ರು. ಆಗ ಅವರು ಮೊದಲು ಕೇಳುವುದೇ ವಿಜಿ ಸಿನಿಮಾ ಹೇಗಿದೆ ಸಿನಿಮಾ ನೋಡಿ ಜನ ಮಜಾ ಮಾಡ್ತಿದ್ದಾರಾ ಸಿನಿಮಾ ಹೇಗೆ ಬಂದಿದೆ ನಿರ್ಮಾಪಕರು ಖುಷಿನಾ ಅಂತ ಕೇಳಿದ್ರು' ಎಂದಿದ್ದಾರೆ.

'ಇನ್ನು ನನ್ನ ಬಗ್ಗೆ ನೆಗೆಟಿವ್ ಮಾತನಾಡಿದ್ರೆ ನನ್ನ ಮೇಲೆ ಯಾವುದೇ ಪರಿಣಾಮ ಬೀರಲ್ಲ, ನನ್ನ ಮಗ ವಿನೀಶ್ ಬಗ್ಗೆ ಮಾತನಾಡಿದ್ರೂ ಪರಿಣಾಮ ಬೀರಲ್ಲ. ಶೇ 90ರಷ್ಟು ಜನ ನಮಗೆ ಪ್ರೀತಿ ತೋರಿಸ್ತಾರೆ ಅಂದ ಮೇಲೆ ಅಷ್ಟು ಸಾಕು! ನೆಗೆಟಿವ್ ಕಾಮೆಂಟ್‌ಗಳನ್ನು ನಾನು ಓದುವುದೂ ಇಲ್ಲ. ನಾನು ಅದಕ್ಕೆಲ್ಲ ಕೇರ್ ಕೂಡ ಮಾಡಲ್ಲ' ಎಂದು ಹೇಳಿದ್ದಾರೆ. 'ಅನಕ್ಷರಸ್ಥರು' ಎಂದವರಿಗೆ ಟಾಂಗ್ 'ಹೆಣ್ಣುಮಕ್ಕಳನ್ನು ಗೌರವಿಸುವುದು ಹೇಗೆ ಎನ್ನುವುದು ದರ್ಶನ್ ಫ್ಯಾನ್ಸ್‌ಗೆ ಗೊತ್ತಿದೆ' ಎಂದು ವಿಜಯಲಕ್ಷ್ಮಿ ತಿರುಗೇಟು ನೀಡಿದ್ದಾರೆ. 'ಇನ್ನು ದರ್ಶನ್ ಹಾಗು ಅವರ ಫ್ಯಾನ್ಸ್‌ನ ಟಾರ್ಗೆಟ್ ಮಾಡುತ್ತಿರುವ ವಿಚಾರದ ಬಗ್ಗೆ ಮಾತನಾಡಿರುವ ಅವರು, ನಮ್ಮ ಸೆಲೆಬ್ರಿಟೀಸ್ ಹತ್ತಿರ ಹಣ ಸಂಗ್ರಹಿಸಿ, ಒಂದು ಸ್ಕೂಲ್ ತೆರೆಯೋಣ. ಯಾರೆಲ್ಲ ಅವರನ್ನ ಅನ್‌ಎಜುಕೇಟೆಡ್ ಅಂತಿದ್ದಾರಲ್ಲ ಅವರನ್ನೇ ಆ ಶಾಲೆಗೆ ಕರೆಸಿ, ಇವರನ್ನು ಎಜುಕೇಟ್ ಮಾಡಿ ಅಂತ ಹೇಳೋಣ' ಎಂದು ಟಾಂಗ್ ಕೊಟ್ಟಿದ್ದಾರೆ. 'ಮೀಡಿಯಾಗಳಿಗೆ ನನ್ನ ಮನವಿ ಏನಂದ್ರೆ, ನೀವು ಸುದ್ದಿ ಮಾಡುವಾಗ ಅದರ ಬಗ್ಗೆ ಯೋಚಿಸಿ, ಆ ಸುದ್ದಿ ನಿಜಾನಾ ಅಂತ ಪರಿಶೀಲಿಸಿ ಸುದ್ದಿ ಪ್ರಸಾರ ಮಾಡಿ' ಎಂದು ವಿಜಯಲಕ್ಷ್ಮಿ ಕಿವಿಮಾತು ಹೇಳಿದ್ದಾರೆ.

# ದಾವಣಗೆರೆ, ವಿಜಯನಗರ ಹಾಗೂ ಚಿತ್ರದುರ್ಗ ಜಿಲ್ಲೆಯಲ್ಲಿ ಭೂಕಂಪದ ಅನುಭವ: ಬೆದರಿದ ಜನ

ರಾಜ್ಯದಲ್ಲಿ ಅತೀ ಹೆಚ್ಚು ಭೂಕಂನಕ್ಕೆ ಒಳಗಾಗಿರುವ ಜಿಲ್ಲೆ ಅಂದ್ರೆ ಅದು ವಿಜಯಪುರ. ಆದರೆ, ಇದೀಗ ಡಿಸೆಂಬರ್ 13ರ ಶನಿವಾರ ಸಂಜೆ ವಿಜಯನಗರ, ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಯ ಹಲವೆಡೆ ಭೂಕಂಪನದ ಅನುಭವ ಆಗಿರುವ ಘಟನೆ ನಡೆದಿದೆ. ಹಾಗಾದ್ರೆ, ಯಾವ್ಯಾವ ಭಾಗಗಳಲ್ಲಿ ಎನ್ನುವ ಸಂಪೂರ್ಣ



ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ. ದಾವಣಗೆರೆ ಜಿಲ್ಲೆಯ ಜಗಳೂರ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ನಿನ್ನೆ ಸಂಜೆ 7.30ರ ವೇಳೆ ಭಾರೀ ಸದ್ದಿನೊಂದಿಗೆ ಭೂ ಕಂಪನದ ಅನುಭವ ಆಗಿದೆ. ಪಡಿಣಾಮ ಮನೆಗಳಲ್ಲಿನ ವಸ್ತುಗಳು ಅಲ್ಲಾಡಿ ನೆಲಕ್ಕುರುಳಿದ್ದು, ಈ ವೇಳೆ ಜನರು ಭಯಗೊಂಡು ಮನೆಯಿಂದ ಹೊರಗೆ ಓಡಿ ಬಂದ ಘಟನೆ ನಡೆದಿದೆ.

ಜಗಳೂರು ತಾಲೂಕಿನ ಚಿಕ್ಕಮಲ್ಲನ ಹೊಳೆ ಚಿರಂಜೀವಿ ಸೇರಿದಂತೆ ಹಲವೆಡೆ ಭೂಮಿ ಕಂಪಿಸಿದ ಅನುಭವ ಆಗಿದೆ. ಜಗಳೂರು ತಹಶೀಲ್ದಾರರಿಗೆ ಗ್ರಾಮಸ್ಥರು ಈ ವಿಷಯ ತಿಳಿಸಿದ್ದು, ಅವರು ಸ್ಥಳಕ್ಕೆ ಬರುವುದಾಗಿ ತಿಳಿಸಿದ್ದಾರೆ. ಬಳಿಕ ಭೂಕಂಪನ ಹಾಗೂ ಕೇಳಿಬಂದ ಭಯಂಕರ ಶಬ್ಧಕ್ಕೆ ಕಾರಣ ಪತ್ತೆ ಹಚ್ಚಲು ಮುಂದಾಗಿದ್ದಾರೆ ಎಂದು ವರದಿಯಾಗಿದೆ. ಅಲ್ಲದೆ, ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಕಲ್ಲಹಳ್ಳಿ, ಚಿತ್ರದುರ್ಗ ತಾಲ್ಲೂಕಿನ ಕೋಲನ್ಮಳ್ಳಿ ಗ್ರಾಮಗಳಲ್ಲಿಯೂ ಇದೇ ರೀತಿಯ ಅನುಭವ ಆಗಿದ್ದು, ಪರಿಣಾಮ ಜನರು ಮನೆಯಿಂದ ಹೊರಗಡೆ ಓಡಿಬಂದ ಘಟನೆ ನಡೆದಿದೆ. ವಿಜಯನಗರ ಜಿಲ್ಲೆಯ ಗಡಿಭಾಗದಲ್ಲಿ ಶನಿವಾರ ಸಂಜೆ 7:10ರ ಸುಮಾರಿಗೆ ಗಡಿ ಗ್ರಾಮ ಟಿ.ಕಲ್ಲಹಳ್ಳಿ, ಚಳ್ಳಕೆರೆ ತಾಲ್ಲೂಕಿನ ಟಿ.ಕೋಲಮ್ಮನಹಳ್ಳಿಯಲ್ಲಿ ಭಾರೀ ಶಬ್ದದೊಂದಿಗೆ ಭೂಮಿ ಗಢಗಢ ನಡುಗಿದ ಅನಭವ ಜನರಿಗೆ ಆಗಿದೆ. ಈಗಲೂ ಕೂಡ ಈ ಭಾಗಗಳಲ್ಲಿ ಜನರು ಅದೇ ಆತಂಕದಲಿದ್ದಾರೆ.

ಭೂಕಂನದಿಂದ ಬೆಚ್ಚಿದ ಜನ: ಇನ್ನೂ ದೇಶದಗಳ ವಿಚಾರಕ್ಕೆ ಬಂದರೆ ಅತೀ ಹೆಚ್ಚು ಭೂಕಂಪನಕ್ಕೆ ಒಳಗಾಗಿರುವ ದೇಶ ಜಪಾನ್ ಆಗಿದೆ.ಇತ್ತೀಚೆಗಷ್ಟೇ ಜಪಾನ್?ನಲ್ಲಿ ಪ್ರಬಲ ಭೂಕಂಪ ಸಂಭವಿಸಿದೆ. ಕಂಪನದ ತೀವ್ರತೆ ರಿಕ್ಟರ್ ಮಾಪಕದಲ್ಲಿ 6.7ರಷ್ಟು ದಾಖಲಾಗಿದೆ.

ಒಂದೇ ದಿನದಲ್ಲಿ 5 ಬಾರಿ ಭೂಮಿ ಕಂಪಿಸಿದ್ದು, ಪರಿಣಾಮ 33 ಮಂದಿ ಗಾಯಗೊಂಡಿದ್ದಾರೆ ಎಂದು ತಿಳಿದುಬಂದಿದೆ. ಭದ್ರತಾ ಸಂಸ್ಥೆಗಳು ದತ್ತಾಂಶ ಸಂಗ್ರಹಿಸಿವೆ. ಆದರೆ, ವಿವರವಾದ ಮಾಹಿತಿಯನ್ನು ನಿರೀಕ್ಷಿಸಲಾಗಿದೆ ಎಂದು ತಿಳಿಬಂದಿದೆ. ಭೂಕಂಪದ ಕೇಂದ್ರಬಿಂದು ಮೇಲ್ಮೈಯಿಂದ ಕೇವಲ 10 ಕಿಲೋ ಮೀಟರ್ ಆಳದಲ್ಲಿ ಇತ್ತು. ಜಪಾನ್‌ನಲ್ಲಿ ಸಂಭವಿಸಿದ 5ನೇ ಭೂಕಂಪ ಇದಾಗಿದೆ. ಜಪಾನ್ ಹವಾಮಾನ ಸಂಸ್ಥೆ ಪ್ರಕಾರ, ಶುಕ್ರವಾರ ಈಶಾನ್ಯ ಜಪಾನ್?ನಲ್ಲಿ 6.7 ತೀವ್ರತೆಯ ಭೂಕಂಪ ಸಂಭವಿಸಿದೆ. ಸುನಾಮಿ ಎಚ್ಚರಿಕೆಯನ್ನು ಸಹ ನೀಡಲಾಗಿದೆ. ಈ ಹಿನ್ನೆಲೆ ಈ ಭಾಗಗಳ ಜನರು ಆತಂಕದಲ್ಲಿದ್ದಾರೆ. ಈ ವಾರದ ಆರಂಭದಲ್ಲಿ 7.5 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿತ್ತು. ಪೆಸಿಫಿಕ್ ಮಹಾಸಾಗರದ ಕರಾವಳಿಯಲ್ಲಿ ಬಿರುಕುಗಳು, ಸಣ್ಣ ಹಾನಿ ಮತ್ತು ಸುನಾಮಿಯನ್ನು ಉಂಟುಮಾಡಿತ್ತು. ಜಪಾನ್‌ನ ಪ್ರಮುಖ ದ್ವೀಪವಾದ ಹೊನ್ಶುವಿನ ಉತ್ತರದ ತುದಿಯಲ್ಲಿರುವ ಅಮೋರಿ ಕರಾವಳಿಯಲ್ಲಿ ಸೋಮವಾರ ಸಂಭವಿಸಿದ ಭೂಕಂಪದಲ್ಲಿ ಕನಿಷ್ಠ 34 ಜನರು ಗಾಯಗೊಂಡಿದ್ದಾರೆ.

ಇನ್ನೂ ಭೂಕಂಪದ ನಂತರ ಮುಂಜಾಗ್ರತಾ ಕ್ರಮವಾಗಿ ಈ ಭಾಗಗಳಲ್ಲಿ ಹಲವಾರು ರೈಲುಗಳನ್ನು ಸ್ಥಗಿತಗೊಳಿಸಲಾಯಿತು ಮತ್ತು ಕರಾವಳಿ ಭಾಗದ ಹೆದ್ದಾರಿಗಳನ್ನು ಮುಚ್ಚಲಾಯಿತು. ಈಗಲೂ ಸಹ ಈ ಭಾಗಗಳ ಜನರು ಮತ್ತೆ ಎಲ್ಲಿ ಭೂಕಂಪ ಸಂಭವಿಸುತ್ತದೆಯೋ ಎನ್ನುವ ಭಯದಲ್ಲೇ ಜೀವನ ನಡೆಸುತ್ತಿದ್ದಾರೆ ಎನ್ನುವ ಮಾಹಿತಿಯಿದೆ.

# ಬೆಂಗಳೂರಿಗೆ 6 ತಾಲ್ಲೂಕುಗಳ ಸೇರ್ಪಡೆ: ಉದ್ದೇಶ & ಯಾರಿಗೆ ಏನೆಲ್ಲಾ ಅನುಕೂಲಗಳಿವೆ!

ರಾಜ್ಯ ರಾಜಧಾನಿ ಬೆಂಗಳೂರು ನಗರ ವ್ಯಾಪ್ತಿ ವಿಸ್ತರಣೆ ಆಗುತ್ತಲಿದೆ. ಈಗಾಗಲೇ ಹಲವು ಜಿಲ್ಲೆಗಳವರೆಗೂ ಹಬ್ಬಿದೆ. ಇದೀಗ ಆರು ತಾಲ್ಲೂಕುಗಳನ್ನು ಬೆಂಗಳೂರಿಗೆ ಸೇರ್ಪಡೆ ಮಾಡಲು ನಿರ್ಧಾರ ಮಾಡಲಾಗಿದೆ. ಹಾಗಾದ್ರೆ, ಅವುಗಳು ಯಾವುವು ಹಾಗೂ ಉದ್ದೇಶ ಏನು ಎನ್ನುವ ಸಂಪೂರ್ಣ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ. ದೇಶದಲ್ಲಿ ಅತೀ ವೇಗವಾಗಿ ಬೆಳೆಯುತ್ತಿರುವ ಬೃಹತ್ ಐಟಿ ಸಿಟಿಗಳಲ್ಲಿ ಬೆಂಗಳೂರು ಕೂಡ ಒಂದಾಗಿದೆ. ಇದರ ವ್ಯಾಪ್ತಿ ದಿನದಿಂದ ದಿನಕ್ಕೆ ವಿಸ್ತರಣೆ ಆಗುತ್ತಲಿದೆ. ಇದೀಗ ಹೊಸಕೋಟೆ, ನೆಲಮಂಗಲ, ದೊಡ್ಡಬಳ್ಳಾಪುರ, ದೇವನಹಳ್ಳಿ, ರಾಮನಗರ, ಮಾಗಡಿ ತಾಲೂಕಿನ ಬಿಡದಿ ಸೇರಿದಂತೆ ಬೆಂಗಳೂರಿನ ಸುತ್ತಮುತ್ತಲ್ಲಿನ ಪ್ರದೇಶಗಳು ಹೊಸ ಬೆಂಗಳೂರಿಗೆ ಸೇರ್ಪಡೆ ಆಗುತ್ತವೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಾಹಿತಿ ನೀಡಿದರು. ಹಾಗಾದ್ರೆ ಇದರ ಉದ್ದೇಶ ಏನು ಎನ್ನುವ ಪ್ರಶ್ನೆಗೆ ಉತ್ತರ ಇಲ್ಲಿದೆ ನೋಡಿ.

ದೇವನಹಳ್ಳಿಯಲ್ಲಿನ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ನೂತನ ಕಚೇರಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. "ಬೆಂಗಳೂರು ವೇಗವಾಗಿ ಬೆಳೆಯುತ್ತಿರುವ ನಗರವಾಗಿದೆ. ಬೆಂಗಳೂರು ಸುತ್ತಲಿನ ಪ್ರದೇಶಗಳನ್ನು ಬೆಂಗಳೂರಿಗೆ ಸೇರ್ಪಡೆ ಮಾಡುವ ಯೋಜನೆ ರೂಪಿಸಲಾಗುತ್ತಿದೆ," ಎಂದು ಡಿಸಿಎಂ ಡಿಕೆ ಶಿವಮುಕಾರ್ ಅವರು ಹೇಳಿದರು. ಬೆಂಗಳೂರಿನಲ್ಲಿ ಇರುವ ನಿಮ್ಮ ಆಸ್ತಿ ಕಾಪಾಡಿಕೊಳ್ಳುವುದು ನಿಮ್ಮೆಲ್ಲರ ಕರ್ತವ್ಯ. ನಾನು ಬೆಂಗಳೂರಿಗೆ ಹೊಸ ರೂಪ ನೀಡುವುದರ ಜೊತೆಗೆ ಆಸ್ತಿ ಮೌಲ್ಯಕ್ಕೆ ಗೌರವ ತರುವ ಕೆಲಸ ಮಾಡುತ್ತೇನೆ. ಬೆಂಗಳೂರು ನಗರ ಹಾಗೂ ಸುತ್ತಮುತ್ತಲ್ಲಿನ ಅಭಿವೃದ್ಧಿಗೆ ಒತ್ತು ನೀಡಲಾಗಿದೆ. ಬೆಂಗಳೂರು ಗ್ರಾಮಾಂತರಕ್ಕೆ ಸಚಿವ ಕೆ.ಎಚ್.ಮುನಿಯಪ್ಪ, ಹೊಸಕೋಟೆ ಶಾಸಕ ಶರತ್ ಬಚ್ಚೇಗೌಡ, ನೆಲಮಂಗಲ ಶಾಸಕ ಶ್ರೀನಿವಾಸ್ ಬೇಡಿಕೆ ಇಟ್ಟಿದ್ದರಿಂದ ಬೆಂಗಳೂರು ಉತ್ತರ ಎಂಬ ಹೊಸ ಹೆಸರನ್ನು ನೀಡಲಾಗಿದೆ ಎಂದು ಹೇಳಿದರು.

ದೂರ ದೃಷ್ಟಿಯಿಂದ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಹೊಸ ಬೆಂಗಳೂರು ಕಟ್ಟಿ ವಿಶ್ವದ ಗಮನ ಸೆಳೆಯುವ ಕೆಲಸ ಮಾಡಬೇಕಿದೆ. ಇದನ್ನು ದೃಷ್ಟಿಕೋನದಲ್ಲಿ ಇಟ್ಟುಕೊಂಡು ಎಲ್ಲರೂ ಕಾನೂನಿನ ಚೌಕಟ್ಟಿನಲ್ಲಿ ಕೆಲಸ ಮಾಡಬೇಕು. ನಂದಗುಡಿ ಮತ್ತು ಸೋಲೂರು, ಬಿಡದಿಯ ರೈತರ ಜಮೀನಿಗೆ ಅನ್ಯಾಯ ಆಗದಂತೆ ಉತ್ತಮ ಬೆಲೆ ದೊರಕಿಸಲು ಅನುಕೂಲ ಆಗುವಂತಹ ಕೆಲಸ ಮಾಡಲಾಗುತ್ತದೆ ಎಂದು ಭರವಸೆ ನೀಡಿದರು.

ಬೆಂಗಳೂರು ಮಹಾನಗರದ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು, ಸುತ್ತಮುತ್ತಲಿನ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ, ನೆಲಮಂಗಲ, ದೊಡ್ಡಬಳ್ಳಾಪುರ, ದೇವನಹಳ್ಳಿ, ರಾಮನಗರ ಹಾಗೂ ಮಾಗಡಿ ತಾಲೂಕಿನ ಬಿಡದಿ ಪ್ರದೇಶಗಳನ್ನು ಬೆಂಗಳೂರಿಗೆ ಸೇರಿಸುವ ಯೋಜನೆ ಇದಾಗಿದೆ. ಈ ಮೂಲಕ ಈ ಪ್ರದೇಶಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುತ್ತದೆ ಅಂತಲೂ ತಿಳಿಸಿದ್ದಾರೆ.

# 'ನಿಮ್ಮ ಹಣ.. ನಾಯಿ ಮೊಲೆ ಹಾಲಿದ್ದಂಗೆ.. ಯಾರಿಗೂ ಪ್ರಯೋಜನವಿಲ್ಲ': ಡಿ.ಕೆ ಶಿವಕುಮಾರ್ ವಿರುದ್ಧ ಜೆಡಿಎಸ್ ಟೀಕಾ ಪ್ರಹಾರ

**ಬೆಂಗಳೂರು:** ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ವಿರುದ್ಧ ಜಾತ್ಯಾತೀತ ಜನತಾದಳ ಮತ್ತೆ ವಾಗ್ದಾಳಿ ಮುಂದುವರೆಸಿದ್ದು, ಕೂಡಲೇ ಅವರ ರಾಜಿನಾಮೆ ಪಡೆಯಬೇಕು ಎಂದು ಆಗ್ರಹಿಸಿದೆ.

ಬೆಂಗಳೂರು ಅಪಾರ್ಟ್‌ಮೆಂಟ್ ಫೆಡರೇಶನ್ ಶನಿವಾರ ಆಯೋಜಿಸಿದ್ದ ಕರ್ನಾಟಕ ಅಪಾರ್ಟ್‌ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) ಮಸೂದೆ 2025ರ ಸಾರ್ವಜನಿಕ ಸಂವಾದ ಕಾರ್ಯಕ್ರಮದಲ್ಲಿ ಡಿಸಿ ಡಿಕೆ ಶಿವಕುಮಾರ್ ನೀಡಿದ್ದ ಹೇಳಿಕೆಗಳನ್ನು ತೀವ್ರವಾಗಿ ವಿರೋಧಿಸಿರುವ ಜೆಡಿಎಸ್, ಇಂತಹವರು ಜನಪ್ರತಿನಿಧಿಯಾಗಿ ಮುಂದುವರೆಯಲು ನಾಲಾಯಕ್ ಎಂದು ಕಿಡಿಕಾರಿದೆ. ಈ ಕುರಿತು ಸರಣಿ ಟ್ವೀಟ್ ಮಾಡಿರುವ ಜೆಡಿಎಸ್, 'ಡಿಕೆ ಶಿವಕುಮಾರ್ ಅವರೇ, ನೀವು ಶಾಸಕರಾದರೇನು ಮಂತ್ರಿಯಾದರೇನು ಡಿಸಿಎಂ ಆದರೇನು ನೀನೊಬ್ಬ ಮನುಷ್ಯ ಅಷ್ಟೇ. ಜನರಿಂದ ಆಯ್ಕೆಯಾದ ನೀವು, ಜನಸಾಮಾನ್ಯರ ಕಷ್ಟಕ್ಕೆ ಸ್ಪಂದಿಸಿ, ಅವರ ಸಮಸ್ಯೆಗಳಿಗೆ ಪರಿಹಾರ ಒದಗಿಸುವುದು ನಿಮ್ಮ ಆದ್ಯ ಕರ್ತವ್ಯ. ಅದನ್ನು ಬಿಟ್ಟು ಪ್ರಶ್ನೆ ಮಾಡಿದವರಿಗೆ ಧಮ್ಕಿ, ಬೆದರಿಕೆ ಹಾಕುವುದು ಸಂವಿಧಾನದ ಪ್ರಕಾರ ಅಪರಾಧ! ನಾವು 80ರ ದಶಕದಲ್ಲಿ ಜೀವಿಸುತ್ತಿಲ್ಲ.. ಎಂದು ಹೇಳಿದೆ. ಅಂತೆಯೇ ಮುಂದುವರೆದು, 'ಡಿಕೆಶಿ ಅವರೇ, ನಿಮ್ಮ ಬಳಿ ದುಡ್ಡಿದ್ದರೆ, ಅದು " ನಾಯಿ ಮೊಲೆ ಹಾಲಿದ್ದಂಗೆ ". ಯಾರಿಗೂ ಪ್ರಯೋಜನವಿಲ್ಲ. ಅಧಿಕಾರದ ಮದ, ದಬ್ಬಾಳಿಕೆ ನೆತ್ತಿಗೇರಿದೆ. ಕೊತ್ವಾಲ್ ಶಿಷ್ಯನ ರೌಡಿಸಂ, ಗೂಂಡಾ ಪ್ರವೃತ್ತಿಗೆ ಕಡಿವಾಣ ಹಾಕದಿರುವುದು ದೇಶದ



ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕ. ಇಂತಹವರು ಜನಪ್ರತಿನಿಧಿಯಾಗಿ ಮುಂದುವರಿಯಲು ನಾಲಾಯಕ್ಕು.

ಸಂವಿಧಾನದ ರಕ್ಷಣೆ ಮಾಡುತ್ತೇವೆ ಎನ್ನುವ ಕಾಂಗ್ರೆಸ್ ಹೈಕಮಾಂಡ್ ಮತ್ತು ರಾಹುಲ್ ಗಾಂಧಿ ಮೊದಲು ಡಿಕೆಶಿಯಂತಹ ರೌಡಿ ರಾಜಕಾರಣಿಯ ರಾಜೀನಾಮೆ ಪಡೆದು, ಬಳಿಕ ದೇಶದ ಜನತೆಗೆ ಸಂವಿಧಾನದ ಬಗ್ಗೆ ಪಾಠ ಮಾಡುವುದು ಒಳಿತು" ಎಂದು ಟ್ವೀಟ್ ಮಾಡಿದೆ.

ಮತ್ತೊಂದು ಟ್ವೀಟ್ ನಲ್ಲಿ, 'ಹೌದು.. ಮಿಸ್ಟರ್ ಧಮ್ಕಿ ಡಿಕೆಶಿ ಅವರೇ, ಆ ದಿನಗಳಲ್ಲಿ ನೀವು ಯಾರ ಜೊತೆ ಇದ್ದೀರಿ ನಿಮ್ಮ ಹಿನ್ನೆಲೆ ಏನು ಎಂಬುದು ಸಾಮಾನ್ಯ ಜನರಿಗೆ ಗೊತ್ತಿಲ್ಲ. ಉಪಮುಖ್ಯಮಂತ್ರಿಯಾಗಿ, ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ಬೀದಿರೌಡಿಯಂತೆ ವೇದಿಕೆಯಲ್ಲೇ ನಾಗರಿಕರಿಗೆ ಹೆದರಿಸುವುದು, ಬೆದರಿಸುವುದು ಜನಪ್ರತಿನಿಧಿಗಳಿಗೆ ಶೋಭೆ ತರುವುದಿಲ್ಲ.

ನಾವು ಪ್ರಜಾಪ್ರಭುತ್ವ ದೇಶದಲ್ಲಿದ್ದೇವೆ. ಜನಪ್ರತಿನಿಧಿಯನ್ನು ಪ್ರಶ್ನಿಸುವ ಹಕ್ಕು ಪ್ರತಿಯೊಬ್ಬ ಜನಸಾಮಾನ್ಯರಿಗೂ ಇದೆ. "ಸಂವಿಧಾನ ರಕ್ಷಿಸುತ್ತೇವೆ" ಎಂದು ಸಂವಿಧಾನ ಪುಸ್ತಕ ಹಿಡಿದರೇ ಸಾಲದು. ಈ ನಿಮ್ಮ ದರ್ಪ, ದುರಂಹಕಾರಕ್ಕೆ ಮತಹಾಕುವ ಜನರೇ ಬುದ್ಧಿ ಕಲಿಸುತ್ತಾರೆ' ಎಂದು ಟ್ವೀಟ್ ಮಾಡಿದೆ.

**ಇಷ್ಟಕ್ಕೂ ಡಿಕೆಶಿ ಹೇಳಿದ್ದೇನು**

ಸರ್ಕಾರವು ತಮ್ಮ ಹಲವಾರು ಭರವಸೆಗಳನ್ನು ಈಡೇರಿಸಿದ್ದರೂ, ಅಪಾರ್ಟ್‌ಮೆಂಟ್ ನಿವಾಸಿಗಳು ಸಾಂಪ್ರದಾಯಿಕವಾಗಿ ಕಾಂಗ್ರೆಸ್‌ಗೆ ಮತ ಹಾಕಿಲ್ಲ ಎಂಬುದರತ್ತ ಪದೇ ಪದೇ ಗಮನ ಸೆಳೆದ ಡಿಕೆ ಶಿವಕುಮಾರ್, ಜಿಬಿಎ ಚುನಾವಣೆಗಳನ್ನು ಮುಂದಿಟ್ಟುಕೊಂಡು ಸರ್ಕಾರವನ್ನು ಹೆದರಿಸದಂತೆ ಪತ್ರ ಬರೆದವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

"ನಾನು ಮನೆ ಖರೀದಿದಾರರೊಂದಿಗೆ ನಿಲ್ಲುವ ಕಾರಣಕ್ಕೆ ಈ ಸಭೆಯನ್ನು ಕರೆದಿದ್ದೇನೆ. ನಿಮ್ಮ ನೋವು ಮತ್ತು ಸಮಸ್ಯೆಗಳನ್ನು ನಾನು ಅರ್ಥಮಾಡಿಕೊಳ್ಳಬಲ್ಲೆ. ಅದೇ ಸಮಯದಲ್ಲಿ ಮುಂಬರುವ ಜಿಬಿಎ ಚುನಾವಣೆಯಲ್ಲಿ ನಿಮ್ಮಿಂದ ಬೆಂಬಲವನ್ನು ನಿರೀಕ್ಷಿಸುತ್ತೇನೆ. ನಿಮ್ಮಿಂದ ನನಗೆ ಅಪಾರ ನಿರೀಕ್ಷೆಗಳಿವೆ ಮತ್ತು ನೀವು ನನ್ನನ್ನು ನಿರಾಶೆಗೊಳಿಸುವುದಿಲ್ಲ ಎಂದು ಭಾವಿಸುತ್ತೇನೆ" ಎಂದು ಡಿಸಿಎಂ ಸೂಚ್ಯವಾಗಿ ಹೇಳಿದರು.

ಈ ವೇಳೆ ಕಿರಣ್ ಹೆಬ್ಬಾರ್ ಎಂಬುವವರು ಸರ್ಕಾರಕ್ಕೆ ಬರೆದ ಪತ್ರದ ಧಾಟಿಗೆ ಅಸಮಧಾನ ವ್ಯಕ್ತಪಡಿಸಿದ ಡಿಕಜೆ ಶಿವಕುಮಾರ್, "ಪ್ರಧಾನಮಂತ್ರಿ ಮತ್ತು ಗೃಹ ಸಚಿವರಿಗೂ ಹೆದರದೆ ಜೈಲಿಗೆ ಹೋಗಿ ಬಂದವನು ನಾನು. ಅಂತದ್ದರಲ್ಲಿ ಕಿರಣ್ ಹೆಬ್ಬಾರ್ ಅವರಂತಹವರ ಗೊಡ್ಡು ಬೆದರಿಕೆಗಳಿಗೆ ಹೆದರುವ ಪ್ರಶ್ನೆಯೇ ಇಲ್ಲ. ಪ್ರೀತಿಯಿಂದ ಮಾತನಾಡಿಸಿದರೆ, ಪ್ರೀತಿಯಿಂದಲೇ ಮಾತನಾಡಿಸುವೆ" ಎಂದು ಗುಡುಗಿದರು.

# ಕಲ್ಯಾಣ ಮಂಟಪಕ್ಕೆ ನುಗ್ಗಿ ಯುವಕನಿಗೆ ಶಾಕ್! ಕೊಟ್ಟ ಲವರ್!

ಚಿಕ್ಕಮಗಳೂರು: ಸಿನಿಮಾಗಳಲ್ಲಿ ನೋಡುತ್ತಿದ್ದ ದೃಶ್ಯಗಳು ಇತ್ತೀಚೆಗೆ ನಿಜಜೀವನದಲ್ಲಿ ನಡೆಯುತ್ತಿವೆ. ಲವರ್?ಗೆ ಕೈಕೊಟ್ಟು ಬೇರೆ ಯುವತಿ ಜೊತೆಗೆ ಮದುವೆಯಾದ ಯುವಕನಿಂದ ಮೋಸ ಹೋದ ಅಶ್ವಿನಿ ಎಂಬ ಯುವತಿ ಮದುವೆ ಮಂಟಪಕ್ಕೆ ನೇರವಾಗಿ ಹೋಗಿ ರಂಪಾಟ ನಡೆಸಿರುವ ಘಟನೆ ಚಿಕ್ಕಮಗಳೂರಿನ ದೊಡ್ಡೇಗೌಡ ಕಲ್ಯಾಣ ಮಂಟಪದಲ್ಲಿ ನಡೆದಿದೆ.

ಕಳೆದ 10 ವರ್ಷದಿಂದ ಶರತ್! ಎಂಬಾತನನ್ನು ಯುವತಿ ಪ್ರೀತಿಸುತ್ತಿದ್ದು, ಮದುವೆಯಾಗುವುದಾಗಿ ನಂಬಿಸಿ ಕೊನೆಗೆ ಮೋಸ ಮಾಡಿದ್ದಾನೆ ಎಂದು ಯುವತಿ ಆರೋಪಿಸಿದ್ದಾಳೆ.

ನೇರವಾಗಿ ಮದುವೆ ಮಂಟಪಕ್ಕೆ ಬಂದ ಹಾಸನ ಜಿಲ್ಲೆ ಬೇಲೂರು ಮೂಲದ ಯುವತಿ ನೀನು ಮೋಸ ಮಾಡಿದ್ದೀಯಾ, ಈಗ ನನ್ನನ್ನು ಮದುವೆಯಾಗುತ್ತೀಯಾ ಇಲ್ಲವಾ ಎಂದು ರಂಪಾಟ ಮಾಡಿದ್ದಾಳೆ. ಶರತ್ ಮೋಸ ಮಾಡಿರುವ ವಿಚಾರವಾಗಿ 8 ತಿಂಗಳ ಹಿಂದೆಯೇ ಆಲ್ದೂರು ಪೊಲೀಸ್ ಠಾಣೆಗೆ ಯುವತಿ ದೂರು ನೀಡಿದ್ದಳು. ನಿನ್ನೆ ಶರತ್ ಮನೆಯ ಮುಂದೆ ಏಕಾಂಗಿ ಹೋರಾಟ ಕೂಡ ಮಾಡಿದ್ದಳು. ಅದರ ಮುಂದುವರಿದ ಭಾಗವಾಗಿ ಇಂದು ಮದುವೆ ಮಂಟಪಕ್ಕೆ ಬಂದು ನೊಂದ ಯುವತಿ ರಂಪಾಟ ನಡೆಸಿದ್ದಾಳೆ. ಮದುವೆ ಮಂಟಪದೊಳಗೆ ಧರಣಿ ಕುಳಿತಿದ್ದಾಳೆ. ಕೊನೆಗೆ ಪೊಲೀಸರು ಮಧ್ಯೆ ಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಿದ್ದಾರೆ.

**ನನಗೆ ಹಣ ಬೇಡ ಅವನು ಬೇಕು**

ಅಲ್ಲಿಯವರೆಗೂ ನಾನು ಹೋರಾಟ ಮಾಡುತ್ತೇನೆ. ನಾನು ಬರುವ ಮೊದಲೇ ಮದುವೆಯಾಗಿದೆ. ಈಗ ನನ್ನನ್ನು ಶರತ್ ಮದುವೆಯಾಗಬೇಕು. ಶರತ್ ಮನೆಯವರು ಹಣ ಕೊಡ್ತೀವಿ ಇಲ್ಲಿಂದ ಹೋಗು ಅಂದ್ರು. ನನಗೆ ಯಾವುದೇ ಹಣ ಬೇಡ, ಅವನೇ ನನ್ನನ್ನ ಮದುವೆ ಆಗಬೇಕು ಅಷ್ಟೇ ಎಂದು ಅಶ್ವಿನಿ ಹೇಳಿದ್ದಾರೆ.

# ಈ ದೇಶದಲ್ಲಿ ನ್ಯಾಯ ಎಲ್ಲರಿಗೂ ಒಂದೇ ರೀತಿ ಇಲ್ಲ: ನಟಿ ಭಾವನಾ

ಮಲಯಾಳಂ ಚಿತ್ರರಂಗದವರಾದ ನಟಿ ಭಾವನಾ ಮೆನನ್ ಅವರು ಕನ್ನಡದಲ್ಲಿ ಪುನೀತ್ ರಾಜ್‌ಕುಮಾರ್ ಅವರ ಜಾಕಿ ಸೇರಿದಂತೆ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. ಇದೀಗ ಅವರು ಕನ್ನಡ ಸಿನಿಮಾಗಳಲ್ಲಿ ಕಡಿಮೆ ಕಾಣಿಸಿಕೊಳ್ಳುತ್ತಿದ್ದಾರೆ. ಸದ್ಯ ಅವರು ತಮ್ಮ ಸೋಷಿಯಲ್ ಮೀಡಿಯಾದಲ್ಲಿ ಸುದೀರ್ಘವಾಗಿ ಬರೆದುಕೊಂಡಿರುವ ವಿಚಾರದ ಬಗ್ಗೆ ಹೆಚ್ಚು



ಚರ್ಚೆಗಳಾಗುತ್ತಿವೆ. 'ಈ ದೇಶದಲ್ಲಿ ಪ್ರತಿಯೊಬ್ಬ ನಾಗರಿಕನನ್ನು ಕಾನೂನಿನ ಮುಂದೆ ಸಮಾನವಾಗಿ ನೋಡುತ್ತಿಲ್ಲ' ಎಂದು ನಟಿ ಭಾವನಾ ಬೇಸರ ಹಂಚಿಕೊಂಡಿದ್ದಾರೆ. ಇತ್ತೀಚೆಗೆ ಮಲಯಾಳಂ ಚಿತ್ರರಂಗದಲ್ಲಿ ನಟಿಯೊಬ್ಬರ ಅಪಹರಣ, ಹಲ್ಲೆ ಯತ್ನ ಹಾಗೂ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ನಟ ದಿಲೀಪ್ ಅವರನ್ನು ನಿರ್ದೋಷಿ ಎಂದು ಕೋರ್ಟ್ ತೀರ್ಪು ನೀಡಿ ಖುಲಾಸೆ ಮಾಡಿತ್ತು. ಇದರ ಬೆನ್ನಲ್ಲೇ ನಟಿ ಭಾವನಾ ಅವರ ಪೋಸ್ಟ್ ಚರ್ಚೆಗೆ ಗ್ರಾಸವಾಗಿದೆ.

ಭಾವನಾ ಪೋಸ್ಟ್‌ನಲ್ಲೇನಿದೆ? '8 ವರ್ಷ, 9 ತಿಂಗಳು ಮತ್ತು 23 ದಿನಗಳ ನಂತರ ಬಹಳ ದೀರ್ಘ ಮತ್ತು ನೋವಿನ ಪ್ರಯಾಣದ ಕೊನೆಯಲ್ಲಿ ನಾನು ಕೊನೆಗೂ ಒಂದು ಸಣ್ಣ ಬೆಳಕಿನ ಕಿರಣವನ್ನು ಕಂಡೆ. ಆರು ಆರೋಪಿಗಳು ತಪ್ಪಿತಸ್ಥರೆಂದು ಸಾಬೀತಾಗಿದೆ, ಅದಕ್ಕಾಗಿ ನಾನು ಕೃತಜ್ಞಳಾಗಿದ್ದೇನೆ. ನನ್ನ ನೋವನ್ನು ಸುಳ್ಳು ಮತ್ತು ಈ ಪ್ರಕರಣವನ್ನು ಕಟ್ಟುಕಥೆ ಎಂದು ಕರೆದವರಿಗೆ ಈ ಕ್ಷಣವನ್ನು ಸಮರ್ಪಿಸಲಾಗಿದೆ. ಇಂದು ನೀವು ನಿಮ್ಮೊಂದಿಗೆ ಶಾಂತಿಯಿಂದ ಇದ್ದೀರಿ ಎಂದು ನಾನು ಭಾವಿಸುತ್ತೇನೆ' ಎಂದು ಭಾವನಾ ಬರೆದಿದ್ದಾರೆ. 'ಆರೋಪಿ ನಂ.1 ನನ್ನ ವೈಯಕ್ತಿಕ ಚಾಲಕ ಎಂದು ಇನ್ನೂ ಹೇಳುತ್ತಿರುವವರಿಗೆ, ಇದು ಸಂಪೂರ್ಣ ಸುಳ್ಳು. ಅವನು ನನ್ನ ಚಾಲಕನಾಗಿರಲಿಲ್ಲ, ನನ್ನ ಉದ್ಯೋಗಿಯೂ ಅಲ್ಲ, ನನಗೆ ತಿಳಿದಿರುವ ವ್ಯಕ್ತಿಯೂ ಅಲ್ಲ. ಅವನು 2016ರಲ್ಲಿ ನಾನು ಕೆಲಸ ಮಾಡುತ್ತಿದ್ದ ಚಲನಚಿತ್ರವೊಂದಕ್ಕೆ ಚಾಲಕನಾಗಿ ನಿಯೋಜಿಸಲ್ಪಟ್ಟ ವ್ಯಕ್ತಿ. ವಿಪರ್ಯಾಸವೆಂದರೆ ಆ ಸಮಯದಲ್ಲಿ ನಾನು ಅವನನ್ನು ಒಮ್ಮೆ ಅಥವಾ ಎರಡು ಬಾರಿ ಮಾತ್ರ ಭೇಟಿಯಾದೆ. ಈ ಅಪರಾಧ ನಡೆದ ದಿನದವರೆಗೆ ಮತ್ತೆಂದೂ ಭೇಟಿಯಾಗಲಿಲ್ಲ ಎಂದಿದ್ದಾರೆ. ದಯವಿಟ್ಟು ಸುಳ್ಳು ಸುದ್ದಿ ಹಬ್ಬಿಸುವುದನ್ನು ನಿಲ್ಲಿಸಿ. ಈ ತೀರ್ಪು ಅನೇಕ ಜನರಿಗೆ ಅಚ್ಚರಿ ಮೂಡಿಸಬಹುದು, ಆದರೆ ನನಗೆ ಅಚ್ಚರಿ ಮೂಡಿಸಲಿಲ್ಲ. 2020ರ ಆರಂಭದಲ್ಲಿ ಏನೋ ಸರಿಯಿಲ್ಲ ಎಂದು ನನಗೆ ಅನಿಸಲು ಪ್ರಾರಂಭಿಸಿತು' ಎಂದಿದ್ದಾರೆ.

'ಈ ವರ್ಷಗಳಲ್ಲಿ, ನಾನು ಹಲವು ಬಾರಿ ಹೈಕೋರ್ಟ್ ಮತ್ತು ಸುಪ್ರೀಂಕೋರ್ಟ್‌ಗೆ ಹೋಗಿ, ಈ ನ್ಯಾಯಾಲಯವನ್ನು ನಾನು ನಂಬುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದೆ. ಈ ಪ್ರಕರಣವನ್ನು ಬೇರೆಡೆಗೆ ವರ್ಗಾಯಿಸಲು ಅದೇ ನ್ಯಾಯಾಧೀಶರು ಸಲ್ಲಿಸಿದ್ದ ಪ್ರತಿಯೊಂದು ವಿನಂತಿಯನ್ನು ವಜಾಗೊಳಿಸಲಾಯಿತು. ಆ ವಿವರಗಳನ್ನು ಹಂಚಿಕೊಳ್ಳುತ್ತೇನೆ. ವರ್ಷಗಳ ನೋವು, ಕಣ್ಣೀರು ಮತ್ತು ಭಾವನಾತ್ಮಕ ಹೋರಾಟದ ನಂತರ, ನಾನು ನೋವಿನಿಂದ ಕೂಡಿದ ಅರಿವಿಗೆ ಬಂದಿದ್ದೇನೆ. ಈ ದೇಶದ ಪ್ರತಿಯೊಬ್ಬ ನಾಗರಿಕನನ್ನು ಕಾನೂನಿನ ಮುಂದೆ ಸಮಾನವಾಗಿ ನಡೆಸಿಕೊಳ್ಳಲಾಗುವುದಿಲ್ಲ' ಎಂದು ಅಸಮಾಧಾನ ಹೊರಹಾಕಿದ್ದಾರೆ.

'ಪ್ರತಿಯೊಂದು ನ್ಯಾಯಾಲಯವೂ ಒಂದೇ ರೀತಿಯಲ್ಲಿ ಕಾರ್ಯನಿರ್ವಹಿಸುವುದಿಲ್ಲ ಎಂದು ನನಗೆ ತಿಳಿದಿದೆ. ಈ ದೀರ್ಘ ಪ್ರಯಾಣದುದ್ದಕ್ಕೂ ನನ್ನೊಂದಿಗೆ ನಿಂತ ಎಲ್ಲರಿಗೂ ನನ್ನ ಹೃತ್ಪೂರ್ವಕ ಧನ್ಯವಾದಗಳು. ನನ್ನ ಬಗ್ಗೆ ನಿಂದನೀಯ ಕಾಮೆಂಟ್‌ಗಳು ಮತ್ತು ಹಣ ಪಡೆದ ನಿರೂಪಣೆಗಳ ಮೂಲಕ ನನ್ನ ಮೇಲೆ ದಾಳಿ ಮಾಡುವುದನ್ನು ಮುಂದುವರಿಸುವವರಿಗೆ, ನೀವು ಹಣ ಪಡೆಯುವುದನ್ನು ಮುಂದುವರಿಸಲು ಸ್ವತಂತ್ರರು' ಎಂದು ತಿರುಗೇಟು ನೀಡಿದ್ದಾರೆ. ನ್ಯಾಯಾಲಯದಲ್ಲಿ ನಂಬಿಕೆ ಕಳೆದುಕೊಂಡೆ 'ಈ ವಿಚಾರಣಾ ನ್ಯಾಯಾಲಯದಲ್ಲಿ ನಾನು ನಂಬಿಕೆ ಕಳೆದುಕೊಳ್ಳಲು ಕಾರಣಗಳು ಇಲ್ಲಿವೆ. ನನ್ನ ಮೂಲಭೂತ ಹಕ್ಕುಗಳನ್ನು ರಕ್ಷಿಸಲಾಗಿಲ್ಲ. ಈ ಪ್ರಕರಣದ ಪ್ರಮುಖ ಸಾಕ್ಷ್ಯವೆಂದರೆ ಮೆಮೊರಿ ಕಾರ್ಡ್ ನ್ಯಾಯಾಲಯದ ಕಸ್ಟಡಿಯಲ್ಲಿದ್ದಾಗ ಮೂರು ಬಾರಿ ಅಕ್ರಮವಾಗಿ ಪ್ರವೇಶಿಸಿರುವುದು ಕಂಡುಬಂದಿದೆ. ಈ ಪ್ರಕರಣದಿಂದ ಇಬ್ಬರು ಸಾರ್ವಜನಿಕ ಅಭಿಯೋಜಕರು ರಾಜೀನಾಮೆ ನೀಡಿ, ನ್ಯಾಯಾಲಯದ ವಾತಾವರಣವು ಪ್ರತಿಕೂಲವಾಗಿದೆ ಎಂಬುದು ಸ್ಪಷ್ಟವಾಗಿತ್ತು. ಈ ನ್ಯಾಯಾಲಯವು ಪಕ್ಷಪಾತದಿಂದ ಕೂಡಿದೆ ಎಂದು ಅವರು ಭಾವಿಸಿದ್ದರಿಂದ, ಅದರಿಂದ ನ್ಯಾಯವನ್ನು ನಿರೀಕ್ಷಿಸಬೇಡಿ ಎಂದು ಇಬ್ಬರೂ ವೈಯಕ್ತಿಕವಾಗಿ ನನಗೆ ಹೇಳಿದರು.'

'ಮೆಮೊರಿ ಕಾರ್ಡ್ ಟ್ಯಾಂಪರಿಂಗ್ ಬಗ್ಗೆ ಸೂಕ್ತ ತನಿಖೆ ನಡೆಸಬೇಕೆಂದು ನಾನು ಪದೇ ಪದೇ ವಿನಂತಿಸಿದೆ. ಆದರೆ, ನಾನು ಮತ್ತೆ ಮತ್ತೆ ಕೇಳುವವರೆಗೂ ತನಿಖಾ ವರದಿಯನ್ನು ನನಗೆ ನೀಡಲಿಲ್ಲ. ನಾನು ನ್ಯಾಯಯುತ ವಿಚಾರಣೆಗಾಗಿ ಹೋರಾಡುತ್ತಿರುವಾಗ, ಆರೋಪಿಗಳು ಇದೇ ನ್ಯಾಯಾಧೀಶರು ಪ್ರಕರಣದ ವಿಚಾರಣೆಯನ್ನು ಮುಂದುವರಿಸಬೇಕೆಂದು ಕೋರಿ ಅರ್ಜಿ ಸಲ್ಲಿಸಿದರು. ಇದು ನನ್ನ ಮನಸ್ಸಿನಲ್ಲಿ ಇನ್ನಷ್ಟು ಗಂಭೀರ ಅನುಮಾನಗಳನ್ನು ಹುಟ್ಟುಹಾಕಿತು. ನಾನು' ರಾಷ್ಟ್ರಪತಿ ಮತ್ತು ಪ್ರಧಾನ ಮಂತ್ರಿಗಳಿಗೆ ಪತ್ರಗಳನ್ನು ಬರೆದು ನನ್ನ ಕಳವಳಗಳನ್ನು ವ್ಯಕ್ತಪಡಿಸಿ ಮಧ್ಯಪ್ರವೇಶಿಸುವಂತೆ ಕೋರಿದ್ದೇನೆ. ಸಾರ್ವಜನಿಕರು ಮತ್ತು ಮಾಧ್ಯಮಗಳು ಹಾಜರಿದ್ದು ಏನು ನಡೆಯುತ್ತಿದೆ ಎಂಬುದನ್ನು ಸ್ವತಃ ನೋಡಲು ಸಾಧ್ಯವಾಗುವಂತೆ, ಮುಕ್ತ ನ್ಯಾಯಾಲಯದಲ್ಲಿ ವಿಚಾರಣೆ ನಡೆಸುವಂತೆ ನ್ಯಾಯಾಲಯವನ್ನು ವಿನಂತಿಸಿದೆ. ಈ ವಿನಂತಿಯನ್ನು ನಿರಾಕರಿಸಲಾಗಿದೆ' ಎಂದು ಬೇಸರ ಹೊರಹಾಕಿದ್ದಾರೆ.

# ಐಪಿಎಲ್ 2026 ಮಿನಿ ಹರಾಜಿಗೂ ಮುನ್ನ ಹೊಸ ತಂಡಗಳಿಗೆ ಹೋದ ಸ್ಟಾರ್ ಆಟಗಾರರು

ಐಪಿಎಲ್ 2025 ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ಚೊಚ್ಚಲ ಟ್ರೋಫಿಗೆ ಮುತ್ತಿಡುವ ಮೂಲಕ ಚಾಂಪಿಯನ್ ಪಟ್ಟ ಅಲಂಕರಿಸಿತು. ಇದೀಗ ಎಲ್ಲರ ಚಿತ್ತ 19ನೇ ಆವೃತ್ತಿಯತ್ತ ನೆಟ್ಟಿದೆ. ಡಿಸೆಂಬರ್ 16 ರಂದು ಮಿನಿ ಹರಾಜು ನಡೆಯಲಿದ್ದು, ಇದಕ್ಕೂ ಮುನ್ನ 10 ಆಟಗಾರರನ್ನು ಈ ಫ್ರಾಂಚಿಗಳು ಬರಮಾಡಿಕೊಂಡಿವೆ. ಹಾಗಾದ್ರೆ, ಯಾರು ಯಾವ ತಂಡಕ್ಕೆ ಹೋಗಿದ್ದಾರೆ ಎನ್ನುವ ಸಂಪೂರ್ಣ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ. ಐಪಿಎಲ್ 2026 ಮಿನಿ ಹರಾಜು ಪ್ರಕ್ರಿಯೆ ಡಿಸೆಂಬರ್ 16ರಂದು ಅಬುಧಾಬಿಯ ಇತಿಹಾದ್ ಅರೇನಾದಲ್ಲಿ ನಡೆಯಲಿದೆ. ಈ ಹರಾಜಿನಲ್ಲಿ 349ಕ್ಕಿಂತ ಹೆಚ್ಚಿನ ಆಟಗಾರರ ಹೆಸರು ಇರಲಿದೆ. ಈ ಪೈಕಿ ಗರಿಷ್ಠ 77 ಆಟಗಾರರು ಮಾತ್ರ ಹರಾಜು ಆಗಲಿದ್ದಾರೆ. ಯಾಕೆಂದ್ರೆ, 10 ಫ್ರಾಂಚೈಸಿಗಳಲ್ಲಿ ಒಟ್ಟು 77 ಸ್ಥಾನಗಳು ಮಾತ್ರ ಖಾಲಿ ಒದ್ದು, ಈ ಸ್ಥಾನಗಳಿಗಾಗಿ ಬಿಡ್ಡಿಂಗ್ ನಡೆಯಲಿದೆ.

* ಮಿನಿ ಹರಾಜಿಗೂ ಮುನ್ನ 10 ಆಟಗಾರರು ಬೇರೆ ತಂಡಗಳಿಗೆ ಸೇರ್ಪಡೆಗೊಂಡಿದ್ದಾರೆ. ಕೆಲ ಫ್ರಾಂಚೈಸಿಗಳು ಟ್ರೇಡಿಂಗ್ ಆಯ್ಕೆ ವೇಳೆ ಕೆಲ ಆಟಗಾರರನ್ನು ಖರೀದಿ ಮಾಡಿ ಸ್ವಾಗತಿಸಿವೆ. ರಾಜಸ್ಥಾನ್ ತಂಡದ ನಾಯಕ ಸಂಜು ಸ್ಯಾಮ್ಸನ್ ಅವರನ್ನು ಕೈಬಿಟ್ಟಿದ್ದು, ಅವರು ಮುಂದಿನ ಆವೃತ್ತಿಯಲ್ಲಿ ಸಿಎಸ್‌ಕೆ ಪರ ಆಡಲಿದ್ದಾರೆ. ಚೆನ್ನೈ ಸೂಪರ್ ಕಿಂಗ್ಸ್ ರವೀಂದ್ರ ಜಡೇಜಾ ಮತ್ತು ಸ್ಯಾಮ್ ಕರನ್ ಅವರನ್ನು ಬಿಟ್ಟುಕೊಟ್ಟು ಸಂಜು ಸ್ಯಾಮ್ಸನ್ ಅವರನ್ನು ಸ್ವಾಪ್ ಡೀಲ್ ಮಾಡಿಕೊಂಡಿದೆ. * ಸಿಎಸ್‌ಕೆ ತಂಡದ ಸ್ಟಾರ್ ಆಲ್??ರೌಂಡರ್ ರವೀಂದ್ರ ಜಡೇಜಾ ಮುಂದಿನ ಆವೃತ್ತಿಯಲ್ಲಿ ಆರ್‌ಆರ್ ಪರ ಆಡಲಿದ್ದಾರೆ. ರವೀಂದ್ರ ಜಡೇಜಾ ಅವರನ್ನು ಸ್ವಾಪ್ ಡೀಲ್ ಮಾಡಿಕೊಳ್ಳುವ ಮೂಲಕ ಚೆನ್ನೈ ಸೂಪರ್ ಕಿಂಗ್ಸ್ ಸಂಜು ಸ್ಯಾಮ್ಸನ್ ಅವರನ್ನು ಖರೀದಿ ಮಾಡಿದೆ. * ಸಿಎಸ್‌ಕೆ ಹಾಗೂ ಆರ್‌ಆರ್ ನಡುವೆ ಸ್ವಾಪ್ ಡೀಲ್????ನಡೆದಿದ್ದು, ಈ ವೇಳೆ ಸ್ಯಾಮ್ ಕರನ್ ಆರ್?ಆರ್?ತಂಡಕ್ಕೆ ಬಿಟ್ಟುಕೊಡಲಾಗಿದೆ. ರವೀಂದ್ರ ಜಡೇಜಾ ಹಾಗೂ ಸ್ಯಾಮ್ ಕರನ್ ಅವರನ್ನು ಕೂಡ ರಾಜಸ್ಥಾನ್ ರಾಯಲ್‌ಗೆ ಬಿಟ್ಟುಕೊಡಲಾಗಿದ್ದು, ಇವರ




ಬದಲಾಗಿದೆ ಸಂಜು ಸ್ಯಾಮ್ಸನ್ ಅವರನ್ನು ಸಿಎಸ್‌ಕೆಗೆ ಕಳುಹಿಸಲಾಗಿದೆ.

* ಕೆಕೆಆರ್ ತಂಡದಲ್ಲಿದ್ದ ಯುವ ಸ್ಪಿನ್ನರ್?ಮಯಾಂಕ್ ಮಾರ್ಕಂಡೆ ಅನ್ನು ಮುಂಬೈ ಇಂಡಿಯನ್ಸ್ ಫ್ರಾಂಚೈಸಿಯು 30 ಲಕ್ಷ ರೂಪಾಯಿ ಕ್ಯಾಶ್ ಡೀಲ್?ನೊಂದಿಗೆ ಖರೀದಿ ಮಾಡಿದೆ. ಅದರಂತೆಯೇ ಮುಂದಿನ ಆವೃತ್ತಿಯಲ್ಲಿ ಅವರು ಮುಂಬೈ ಇಂಡಿಯನ್ಸ್ ಪರ ಆಡಲಿದ್ದಾರೆ. * ಐಪಿಎಲ್ 2025ರಲ್ಲಿ ರಾಜಸ್ಥಾನ್ ರಾಯಲ್ಸ್ ಪರ ಆಡಿದ್ದ ನಿತೀಶ್ ರಾಣಾ ಮುಂದಿನ ಆವೃತ್ತಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಪರ ಕಣಕ್ಕಿಳಿಯಲಿದ್ದಾರೆ. ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿಯು 4.2 ಕೋಟಿ ರೂಪಾಯಿ ನೀಡಿ ಆರ್?ಆರ್ ತಂಡದಿಂದ ನಿತೀಶ್ ರಾಣಾ ಅವರನ್ನು ಖರೀದಿ ಮಾಡಿದೆ. * ಮುಂಬೈ ಇಂಡಿಯನ್ಸ್ ತಂಡದಲ್ಲಿದ್ದ ಅರ್ಜುನ್ ತೆಂಡೂಲ್ಕರ್ ಮುಂಬರುವ ಆವೃತ್ತಿಯಲ್ಲಿ ಎಲ್‌ಎಸ್‌ಜಿ ಪರ ಆಡಲಿದ್ದಾರೆ. 30 ಲಕ್ಷ ರೂಪಾಯಿಗೆ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿಯು ಅವರನ್ನು ಟ್ರೇಡ್ ಮಾಡಿಕೊಂಡಿದೆ.

* ಗುಜರಾತ್ ಟೈಟಾನ್ಸ್ (ಉಖಿ) ತಂಡದಲ್ಲಿದ್ದ ವೆಸ್ಟ್ ಇಂಡೀಸ್‌ನ ಶೆರ್ಫೆನ್ ರದರ್?ಫೋರ್ಡ್ ಅವರನ್ನು 2.6 ಕೋಟಿ ರೂಪಾಯಿಗೆ ಮುಂಬೈ ಇಂಡಿಯನ್ಸ್ ಟ್ರೇಡ್ ಮಾಡಿಕೊಂಡಿದೆ. ಅದರಂತೆಯೇ ಮುಂದಿನ ಆವೃತ್ತಿಯಲ್ಲಿ ರದರ್ಫೋರ್ಡ್??ಅವರು ಎಂಐ ಪರ ಆಡಲಿದ್ದಾರೆ. * ಡೆಲ್ಲಿ ಕ್ಯಾಪಿಟಲ್‌ನಲ್ಲಿದ್ದ ಸೌತ್ ಆಫ್ರಿಕಾದ ಡೊನೊವನ್ ಫೆರೀರಾ ಅವರನ್ನು ರಾಜಸ್ಥಾನ ರಾಯಲ್ಸ್ 1 ಕೋಟಿ ರೂಪಾಯಿಗೆ ಖರೀದಿ ಮಾಡಿದೆ. * ಸನ್??ರೈಸರ್ಸ್ ಹೈದರಾಬಾದ್ ತಂಡದಲ್ಲಿದ್ದ ಸ್ಟಾರ್ ವೇಗಿ ಮೊಹಮ್ಮದ್ ಶಮಿ ಅವರನ್ನು ಲಕ್ನೋ ಸೂಪರ್ ಜೈಂಟ್ಸ್ ಟ್ರೇಡ್ ಮಾಡಿಕೊಂಡಿದೆ. 10 ಕೋಟಿ ರೂಪಾಯಿ ನೀಡಿ ಶಮಿಯನ್ನು ಲಕ್ನೋ ಸೂಪರ್ ಜೈಂಟ್ಸ್ ಖರೀದಿ ಮಾಡಿದೆ. * ಲಕ್ನೋ ಸೂಪರ್ ಜೈಂಟ್ಸ್ ತಂಡದಲ್ಲಿದ್ದ ಆಲ್??ರೌಂಡರ್ ಶಾರ್ದೂಲ್ ಠಾಕೂರ್ ಅವರನ್ನು ಮುಂಬೈ ಇಂಡಿಯನ್ಸ್ ಖರೀದಿ ಮಾಡಿದೆ. 2 ಕೋಟಿ ರೂಪಾಯಿ ನೀಡುವ ಮೂಲಕ ಮುಂಬೈ ಇಂಡಿಯನ್ಸ್ ಶಾರ್ದೂಲ್ ಠಾಕೂರ್ ಅವರನ್ನು ಕಬಳಿಸಿಕೊಂಡಿದೆ. ಹೀಗೆ ಹತ್ತು ಆಟಗಾರರನ್ನು ಐಪಿಎಲ್ 2026 ಮಿನಿ ಹರಾಜಿಗೂ ಮುನ್ನ ಬೇರೆ ತಂಡಗಳಿಗೆ ಬರಮಾಡಿಕೊಳ್ಳಲಾಗಿದೆ.

# ಭಾರತದ ದಿನಚರಿ.......

ಸಾಮಾನ್ಯವಾಗಿ ಸ್ವಲ್ಪ ಹೆಚ್ಚು ಕಡಿಮೆ ಬೆಳಗಿನ 6 ಗಂಟೆಗೆ ಭಾರತ ನಿದ್ದೆಯಿಂದ ಎದ್ದು ಕಣ್ಣ ರೆಪ್ಪೆ ತೆರೆಯುತ್ತದೆ.

( ಆ - ಮುಂಜಾನೆಯ 3/4/5 ಗಂಟೆಯ ಹೊತ್ತಿಗೆಲ್ಲಾ ಏಳುವ ಅಥವಾ ರಾತ್ರಿ ಇಡೀ ಕೆಲಸ ಮಾಡುವ ಅನೇಕ ಜನರು ಇದ್ದಾರೆ )

ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳು ಒಂದು ರೀತಿಯಲ್ಲಿ ಸಿದ್ದರಾಗುತ್ತಾರೆ. ಕೆಲವರು ಸ್ವಯಂ ಆಗಿ ಮತ್ತೆ ಕೆಲವರು ಪೋಷಕರ ಸಹಾಯದಿಂದ ತಯಾರಾಗುತ್ತರೆ. ಮನೆಯ ಹೆಣ್ಣು ಮಕ್ಕಳು ಮುಖ್ಯವಾಗಿ ತಾಯಂದಿರು ಅವರಿಗೆ ಬೇಕಾದ ಉಪಹಾರ ತಯಾರಿಸುವುದರಲ್ಲೇ ಬೆಳಗಿನ ಚಟುವಟಿಕೆ ಆರಂಭಿಸುತ್ತಾರೆ. ಹಾಗೆಯೇ ಗಂಡ ಅಥವಾ ಹೆಂಡತಿ ಅಥವಾ ಇಬ್ಬರೂ ಉದ್ಯೋಗಕ್ಕೆ ಹೋಗುವುದಾದರೆ ಅವರ ಮನೆಯಲ್ಲಿ ಹಿರಿಯರಿದ್ದರೆ ಅಥವಾ ಯಾರು ಇಲ್ಲದಿದ್ದಾಗ ಬೇರೆಯದೇ ವ್ಯವಸ್ಥೆ ಮಾಡಿಕೊಂಡಿರುತ್ತಾರೆ. ಒಟ್ಟಿನಲ್ಲಿ ಬಹುತೇಕ ಭಾರತದ ಜನಸಂಖ್ಯೆ ಬೆಳಗ್ಗೆ ಶಿಕ್ಷಣ, ಉದ್ಯೋಗ, ವ್ಯಾಪಾರಕ್ಕಾಗಿ ಮನೆಯಿಂದ ಹೊರಡುವ ಗಡಿಬಿಡಿಯಲ್ಲಿರುತ್ತಾರೆ. ಕೃಷಿ ಅವಲಂಬಿತ ರೈತರು ಸಹ ಇದೇ ಸಮಯದಲ್ಲಿ ಹೊರಡುತ್ತಾರಾದರೂ ಇಷ್ಟೊಂದು ಗಡಿಬಿಡಿ ಇರುವುದಿಲ್ಲ. ಆದರೆ ಹೈನುಗಾರಿಕೆ - ಮೀನುಗಾರಿಕೆ ಮಾಡುವವರಲ್ಲಿ ಸ್ವಲ್ಪ ಹೆಚ್ಚಿನ ಚಟುವಟಿಕೆ ಕಂಡುಬರುತ್ತದೆ.

ವೈವಿಧ್ಯಮಯ ಭಾರತದಲ್ಲಿ ಸಾರಿಗೆಯೂ ಅಷ್ಟೇ ವೈವಿಧ್ಯಮಯವಾಗಿದೆ ಮತ್ತು ಪ್ರದೇಶದಿಂದ ಪ್ರದೇಶಕ್ಕೆ ಭಿನ್ನವಾಗಿದೆ. ನಡಿಗೆಯಿಂದ ವಿಮಾನದವರೆಗೆ. ಆದರೂ ಆಧುನಿಕತೆಯ ಪರಿಣಾಮದಿಂದ ದ್ವಿಚಕ್ರ ವಾಹನ, ಕಾರು, ಬಸ್ಸು, ರೈಲು ತುಂಬಾ ಹೆಚ್ಚಾಗಿ ಬಳಸಲ್ಪಡುತ್ತದೆ.

ಬಿಸಿಲೇರಿದಂತೆ ಇಡೀ ದೇಶದ ಕೆಲಸಗಳ ವಿರಾಟ್ ರೂಪ ಕಾಣುತ್ತದೆ. ಕೂಲಿಯಿಂದ ರಾಷ್ಟ್ರಪತಿಯವರೆಗೆ, ಅಗೆಯುವುದರಿಂದ ಸಹಿ ಹಾಕುವವರೆಗೆ, ಕಲ್ಲುಗಣಿಯಿಂದ ಸಾಫ್ಟ್‌ವೇರ್ ವರೆಗೆ, ಗಟಾರದಿಂದ ಹೃದಯ ಶಸ್ತ್ರಚಿಕಿತ್ಸೆಯವರೆಗೆ, ಮಗುವಿನ ಜನನದಿಂದ ಹೆಣ ಹೂಳುವುವರೆಗೆ, ಆಟದಿಂದ ಪಾಠದವರೆಗೆ ಬಹುಶಃ ವರ್ಣಿಸಲು- ಊಹಿಸಲು ತುಂಬಾ ತುಂಬಾ ಕಷ್ಟವಾಗುವಷ್ಟು ವೃತ್ತಿಗಳು ಕೆಲಸಗಳು ಮೈ ಬಿಚ್ಚಿಕೊಳ್ಳುತ್ತವೆ.

ಸಾಮಾನ್ಯವಾಗಿ ಮಧ್ಯಾಹ್ನ ಎಂಬುದು ಊಟದ ಸಮಯ. ಕನ್ಯಾಕುಮಾರಿಯಿಂದ ಕಾಶ್ಮೀರದ ಹಿಮಾಲಯದವರೆಗೂ, ಪೂರ್ವದಿಂದ ಪಶ್ಚಿಮದವರೆಗೂ ಎಷ್ಟೊಂದು ಆಹಾರದ ವೈವಿಧ್ಯತೆ. ಗಂಜಿಯಿಂದ ಮೃಷ್ಟಾನ್ನದವರೆಗೆ, ಮೀನಿನಿಂದ ದನದವರೆಗೆ, ಹಣ್ಣು, ತರಕಾರಿ, ಬೇಳೆಕಾಳುಗಳು, ಸಿರಿ ಧಾನ್ಯ ಎಲ್ಲವೂ ಪ್ರದೇಶದಿಂದ ಪ್ರದೇಶಕ್ಕೆ ಭಿನ್ನವಾಗುತ್ತಾ ಆ ಪ್ರದೇಶದ ಮಣ್ಣಿನ ಸೊಗಡಿನೊಂದಿಗೆ ದೇಹ ಸೇರುತ್ತದೆ.

ಸಂಜೆಯ ಹೊತ್ತಿಗೆ ಮತ್ತದೇ ಗಡಿ ಬಿಡಿ. ಮನಸ್ಸುಗಳಲ್ಲಿ ಮಾತ್ರ ಭಿನ್ನ ಭಾವ. ಸಂತೋಷ, ದುಃಖ, ಕೋಪ, ಅಸೂಯೆ, ಅತೃಪ್ತಿ, ಸೋಲು ಗೆಲುವು, ಲಾಭ ನಷ್ಟ ಎಲ್ಲವೂ ಪ್ರತಿ ಜೀವಿಯಲ್ಲಿ ಪ್ರತ್ಯೇಕವಾದ ಕ್ರಿಯೆ ಪ್ರತಿಕ್ರಿಯೆಗಳು ಮುಖಭಾವದಲ್ಲಿ ಮೂಡುತ್ತಿರುತ್ತದೆ. ಅದು ತೀರಾ ಖಾಸಗಿ ಮತ್ತು ಆ ಸನ್ನಿವೇಶಗಳ ಮನಸ್ಥಿತಿ ಅವಲಂಬಿಸಿರುತ್ತದೆ. ಜೊತೆಗೆ ಸಂಜೆಯಲ್ಲಿ ಸಾರಿಗೆ ವ್ಯಾಪಾರ ವಹಿವಾಟು ಜನದಟ್ಟಣೆ ಎಲ್ಲವೂ ಸ್ವಲ್ಪ ಹೆಚ್ಚು.

ಭಾರತೀಯರ ರಾತ್ರಿಗಳ ಪ್ರಾರಂಭದ ಕೆಲವು ಗಂಟೆಗಳು ಸಾಮಾನ್ಯವಾಗಿ ಚೇತೋಹಾರಿ, ಉಲ್ಲಾಸದಾಯಕ ಮನರಂಜನೆ ಮತ್ತು ಮಾತುಕತೆಗಳೇ ತುಂಬಿರುತ್ತದೆ. ವಿದ್ಯಾರ್ಥಿಗಳು ಓದು, ಬರಹ, ಹೋಂ ವರ್ಕ್ ಗಳಲ್ಲಿ ತಲ್ಲೀನ, ಗೃಹಿಣಿಯರು ಅಡುಗೆ ಕೆಲಸ ಮತ್ತು ಧಾರಾವಾಹಿಗಳ ವೀಕ್ಷಣೆ, ಪುರುಷರು ಮದ್ಯಪಾನ, ವಾರ್ತೆಗಳು, ಅಕ್ಕಪಕ್ಕದ ಸಮಾನ ಮನಸ್ಕರೊಂದಿಗೆ ಲೋಕಾಭಿರಾಮದ ಮಾತುಗಳು , ಕಷ್ಟ ಸುಖಗಳ ಹಂಚಿಕೆ ಹೀಗೆ ಸಿಕ್ಕ ಸ್ವಲ್ಪ ಸಮಯದಲ್ಲಿ ಹರಟೆಗೇ ಮೀಸಲು. ಒಂದಷ್ಟು ಜನ ಓದು, ಬರಹ, ಅಧ್ಯಯನ ಮುಂತಾದ ಗಂಭೀರವಾದ ವಿಷಯಗಳಲ್ಲಿ ಸಹ ಮಗ್ನರಾಗಿರುತ್ತಾರೆ.

ರಾತ್ರಿಯ ಊಟದ ನಂತರ ಸುಮಾರು 10 ಗಂಟೆಗೆ ಭಾರತ ನಿದ್ರೆಗೆ ಜಾರುತ್ತದೆ. ಮತ್ತೆ ಬೆಳಗಿನ 6 ಗಂಟೆಯಿಂದ ಎಂದಿನ ಚಟುವಟಿಕೆ ಪ್ರಾರಂಭ.

ಹಾಗೆಯೇ ಸಾಮಾನ್ಯ ಜನ ರಾತ್ರಿ ನಿದ್ರೆಗೆ ಜಾರಿದರು ಒಂದಷ್ಟು ಜನ ಇಡೀ ರಾತ್ರಿ ಬೇರೆ ಬೇರೆ ಕೆಲಸಗಳಲ್ಲಿ ನಿರತರಾಗಿರುತ್ತಾರೆ. ಅದು ಅನಿವಾರ್ಯವೂ ಆಗಿರಬಹುದು ಅಥವಾ ಅವಶ್ಯಕತೆಯೂ ಆಗಿರಬಹುದು ಅಥವಾ ಹವ್ಯಾಸವೂ ಆಗಿರಬಹುದು.

ಇದಲ್ಲದೇ ಕೊಲೆಗಳು, ದರೋಡೆಗಳು, ಅತ್ಯಾಚಾರಗಳು, ಭ್ರಷ್ಟಾಚಾರಿಗಳು ಮುಂತಾದ ಅತ್ಯಂತ ನೀಚ ಕೆಲಸ ಮಾಡುವ ಒಂದಷ್ಟು ಜನರು ಹಾಗೆಯೇ ಧೈರ್ಯವಂತರು, ತ್ಯಾಗ ಜೀವಿಗಳು, ಸೇವಾ ಮನೋಭಾವದವರು, ಅದ್ಭುತ ಪ್ರತಿಭಾವಂತರು ಹೀಗೆ ಮತ್ತೊಂದಿಷ್ಟು ಜನರು ತಮ್ಮದೇ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುತ್ತಾರೆ.

ಭಾರತದ ಅಮೃತ ಮಹೋತ್ಸವದ ಸಂದರ್ಭದಲ್ಲಿ ಬಹಳಷ್ಟು ಭಾರತೀಯರ ಜೀವನಶೈಲಿ ನನ್ನ ಅನುಭವದಲ್ಲಿ ಕಂಡದ್ದು, ಸಂಕ್ಷಿಪ್ತವಾಗಿ..........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ - ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



**ವಿವೇಕಾನಂದ. ಎಚ್.ಕೆ.**
**9663750451.....**
**9844013068......**

# ಮೆಟ್ರೋದಲ್ಲಿ ಹಿಂದಿ - ಉರ್ದು ಭಾಷೆ ಬಳಕೆ: ಕನ್ನಡಿಗರು ಹೇಳಿದ್ದೇನು!

ಬೆಂಗಳೂರಿನ ನಮ್ಮ ಮೆಟ್ರೋದಲ್ಲಿ ಕನ್ನಡ ಮತ್ತು ಇಂಗ್ಲಿಷ್ ಭಾಷೆಯನ್ನು ಮಾತ್ರ ಬಳಸಲಾಗುತ್ತಿದೆ. ಹಿಂದಿ ಭಾಷೆಯ ಅಳವಡಿಕೆಯನ್ನು ವಿರೋಧಿಸಿ ಕನ್ನಡಿಗರು ಹಾಗೂ ಕನ್ನಡಪರ ಹೋರಾಟಗಾರರು ಬೃಹತ್ ಅಭಿಯಾನವನ್ನೇ ನಡೆಸಿದ್ದರು. ಅದರ ಪರಿಣಾಮವಾಗಿ ನಮ್ಮ ಮೆಟ್ರೋದಲ್ಲಿ ಹಿಂದಿ ಭಾಷೆ ಬಳಕೆ ಇಲ್ಲ. ಇದು ಸುದೀರ್ಘ ಹೋರಾಟವಾಗಿತ್ತು. ಆದರೆ, ಇದೀಗ ನೆರೆಯ ತೆಲಂಗಾಣದ ರಾಜಧಾನಿ ಹೈದರಾಬಾದ್ ಮೆಟ್ರೋದಲ್ಲಿ ಹಿಂದಿ ಹಾಗೂ ಉರ್ದು ಭಾಷೆಯನ್ನೂ ಬಳಸಲಾಗಿದೆ. ಇದು ಭಾರೀ ಚರ್ಚೆಗೆ ಕಾರಣವಾಗಿದೆ. ಕನ್ನಡಿಗರು ಹಿಂದಿ - ಉರ್ದು ಹೇರಿಕೆ ಆಗದಂತೆ ನೋಡಿಕೊಂಡಿದ್ದೇವೆ ಎನ್ನುವ ಮಾತು ಸೋಷಿಯಲ್ ಮೀಡಿಯಾದಲ್ಲಿ ವ್ಯಕ್ತವಾಗುತ್ತಿದೆ.

ಬೆಂಗಳೂರು ನಮ್ಮ ಮೆಟ್ರೋದ ವಿಸ್ತೀರ್ಣ ಹೆಚ್ಚಾಗುತ್ತಿದೆ. ದಿನದಿಂದ ದಿನಕ್ಕೆ ಬೆಂಗಳೂರು ನಮ್ಮ ಮೆಟ್ರೋ ಬಳಸುವವರ ಸಂಖ್ಯೆ ಹೆಚ್ಚಳವಾಗಿದೆ. ಇದರೊಂದಿಗೆ ಬೆಂಗಳೂರಿಗರ ಸಂಚಾರ ಸಾರಥಿಯಾಗಿ ನಮ್ಮ ಮೆಟ್ರೋ ಬದಲಾಗಿದೆ. ಬೆಂಗಳೂರಿನ ಮೆಟ್ರೋದಲ್ಲಿ ಈ ಮೊದಲು ಅಥವಾ ಪ್ರಾರಂಭದ ದಿನಗಳಲ್ಲಿ ಹಿಂದಿ ಭಾಷೆಯನ್ನು ಮೂರನೇ ಭಾಷೆಯನ್ನಾಗಿ ಬಳಕೆ ಮಾಡಲಾಗುತ್ತಿತ್ತು. ಆದರೆ, ಕನ್ನಡಪರ ಹೋರಾಟಗಾರರು ಹಾಗೂ ಕನ್ನಡಿಗರ ತೀವ್ರ ವಿರೋಧದ ನಂತರ ಹಿಂದಿ ಭಾಷೆ ಬಳಕೆಯನ್ನು ಕೈಬಿಡಲಾಗಿದೆ. ಇದೀಗ ಕನ್ನಡ ಮತ್ತು ಇಂಗ್ಲಿಷ್ ಭಾಷೆಯನ್ನು ಮಾತ್ರ ಬಳಸಲಾಗುತ್ತಿದೆ. ನಾಮಫಲಕ ಹಾಗೂ ಪ್ರಮುಖ ಸೂಚನೆಗಳಲ್ಲೂ ಹಿಂದಿ ಭಾಷೆಯನ್ನು ಸಂಪೂರ್ಣವಾಗಿ ಕೈಬಿಡಲಾಗಿದೆ. ಇದೀಗ ತೆಲಂಗಾಣದ ಹೈದರಾಬಾದ್‌ನಲ್ಲಿ ಹಿಂದಿ - ಉರ್ದು ಭಾಷೆಗೆ ಪ್ರಾಧಾನ್ಯತೆ ಕೊಡಲಾಗಿದ್ದು. ಕನ್ನಡಿಗರು "ನಮ್ಮ ಮೆಟ್ರೋದಲ್ಲಿ ಕನ್ನಡ ಪ್ರಾಧಾನ್ಯತೆ"ಗೆ ನಡೆಸಿದ್ದ ತಮ್ಮ ಹೋರಾಟವನ್ನು ನೆನಪಿಸಿಕೊಳ್ಳುತ್ತಿದ್ದಾರೆ. ಕನ್ನಡಿಗರು ಈ ಬೆಳವಣಿಗೆಗೆ ಹೇಳಿದ್ದೇನು, ಅಂದಿನ ಹೋರಾಟದ ನೆನಪಿನ ಬಗ್ಗೆ ಕನ್ನಡಿಗರು ಹೇಳಿದ್ದೇನು ಎನ್ನುವುದನ್ನು ನೋಡೋಣ.

ಮೆಟ್ರೋದಲ್ಲಿ ಹಿಂದಿ - ಉರ್ದು ಬಳಕೆ ಸೋಷಿಯಲ್ ಮೀಡಿಯಾ ಚರ್ಚೆ ರಘು ಎನ್ನುವವರು ಜನರು ಹಿಂದಿ ಹೇರಿಕೆ ವಿರೋಧಿಸಿ ಏಕೆ ಪ್ರತಿಭಟಿಸುತ್ತಿದ್ದಾರೆ ಎಂದು ಪ್ರಶ್ನಿಸಿದವರಲ್ಲಿ ನಾನೂ ಒಬ್ಬನಾಗಿದ್ದೆ. ಇಂಗ್ಲಿಷ್ ಮತ್ತು ಹಿಂದಿ ಜೊತೆಗೆ ಕನ್ನಡ ಅಸ್ತಿತ್ವದಲ್ಲಿತ್ತು, ಹಾಗಾದರೆ ಸಮಸ್ಯೆ ಏನು? ಕನ್ನಡಕ್ಕೆ ಸ್ಥಳವಿರುವವರೆಗೆ, ಎಲ್ಲವೂ ಸರಿಯಾಗಿಯೇ ಇತ್ತು. ಆದರೆ ಕೋವಿಡ್ ಸಮಯದಲ್ಲಿ ಮತ್ತು ನಂತರ, ಕೇಂದ್ರ ಸರ್ಕಾರಿ ಕಚೇರಿಗಳ ನಾಮಫಲಕಗಳಲ್ಲಿ ಹಿಂದಿ ಹೇಗೆ ಕನ್ನಡದ ಜಾಗವನ್ನು ಸ್ಥಿರವಾಗಿ ತಿನ್ನುತ್ತಿದೆ ಎಂಬುದನ್ನು ನಾನು ಗಮನಿಸಲು ಪ್ರಾರಂಭಿಸಿದೆ. ಜೊತೆಗೆ ಹಿಂದಿ ಪರವಾಗಿ




ಮತ್ತು ಇತರ ಭಾರತೀಯ ಭಾಷೆಗಳ ವಿರುದ್ಧ ಸ್ಪಷ್ಟವಾದ ಪಕ್ಷಪಾತವೂ ಇದೆ ಎನ್ನುವುದು ತಿಳಿಯಿತು ಎಂದಿದ್ದಾರೆ.

ತೆರಿಗೆ ವಿಕೇಂದ್ರೀಕರಣ ಪಕ್ಷಪಾತವು ಗಾಯಕ್ಕೆ ಉಪ್ಪು ಸೇರಿಸುತ್ತಿದೆ, ಹಿಂದಿ ಮಾತನಾಡುವ ರಾಜ್ಯಗಳಿಗೆ ಹೆಚ್ಚು ಲಾಭ ಸಿಗುತ್ತಿದೆ ಮತ್ತು ಕೇಂದ್ರ ಸರ್ಕಾರದ ನೀತಿಗಳಿಗೆ ಅನುಗುಣವಾಗಿ ಜನಸಂಖ್ಯೆಯನ್ನು ಯಶಸ್ವಿಯಾಗಿ ನಿಯಂತ್ರಿಸಿದ್ದಕ್ಕಾಗಿ ದಕ್ಷಿಣ ರಾಜ್ಯಗಳಿಗೆ ದಂಡ ವಿಧಿಸುತ್ತದೆ. ಇದು ಯಾವುದೇ ರಾಜಕೀಯ ಪಕ್ಷವನ್ನು ಗುರಿಯಾಗಿಸುವ ಬಗ್ಗೆ ಅಲ್ಲ. ನಿಜವಾದ ಸಮಸ್ಯೆ ಭಾರತ ಕೇಂದ್ರ ಸರ್ಕಾರದ ಬಳಿ ಇದೆ. ನಾವು ಕಠಿಣವಾಗಿ ಹಿಂದಕ್ಕೆ ತಳ್ಳುವ ಮತ್ತು ನಮ್ಮ ವಿರುದ್ಧದ ಈ ಅನ್ಯಾಯಗಳನ್ನು ರದ್ದುಗೊಳಿಸುವ ಸಮಯ ಇದು ಎಂದು ಅವರು ಈ ಪೋಸ್ಟ್ ಹಂಚಿಕೊಂಡಿದ್ದಾರೆ. ಇದೇ ಸಂದರ್ಭದಲ್ಲಿ ಕನ್ನಡ ಪರ ಹೋರಾಟಗಾರರಿಗೆ ಧನ್ಯವಾದವನ್ನೂ ಹೇಳಿದ್ದಾರೆ.

ನಾಲ್ಕು ಭಾಷೆ ಬಳಕೆ: ಇನ್ನು ಹೈದರಾಬಾದ್ ಮೆಟ್ರೋದ ಭಾಷಾ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಹಲವರು ಹೈದರಾಬಾದ್ ಮೆಟ್ರೋದಲ್ಲಿ ತೆಲುಗು, ಹಿಂದಿ, ಇಂಗ್ಲಿಷ್ ಹಾಗೂ ಉರ್ದು ನಾಲ್ಕು ಭಾಷೆಗಳನ್ನು ಬಳಸಲಾಗುತ್ತಿದೆ. ಅನವಶ್ಯಕವಾದ ವಿವಾದ ಸೃಷ್ಟಿ ಮಾಡುವ ಅಗತ್ಯ ಇಲ್ಲ ಎಂದೂ ಪ್ರತಿಪಾದಿಸಿದ್ದಾರೆ.

# "ಬೆಳಗಾವಿ ಚಳಿಗಾಲ ಅಧಿವೇಶನದಲ್ಲಿ ಸಹಕಾರ ಪತ್ತಿನ ಸಂಘಗಳ ತೀವ್ರ ಸಮಸ್ಯೆಗಳ ಪರಿಹಾರಕ್ಕೆ ತಕ್ಷಣದ ಐತಿಹಾಸಿಕ ಚರ್ಚೆ ಅಗತ್ಯ!– ಡಾ ಸಂಜಯ ಪಂಚಾಕ್ಷರಿ ಹೊಸಮಠ

**ಬೆಳಗಾವಿ:** ಡಿಸೆಂಬರ್ 8 ರಿಂದ 20 ರವರೆಗೆ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯಲಿರುವ ರಾಜ್ಯ ವಿಧಾನಮಂಡಲದ ಚಳಿಗಾಲ ಅಧಿವೇಶನದಲ್ಲಿ ಸಹಕಾರ ಪತ್ತಿನ ಸಂಘಗಳ ಗಂಭೀರ ಸಮಸ್ಯೆಗಳ ಬಗ್ಗೆ ಸಮಗ್ರ, ನಿಷ್ಪಕ್ಷಟ ಮತ್ತು ಪರಿಣಾಮಕಾರಿ ಚರ್ಚೆ ನಡೆಯಬೇಕೆಂದು ಡಾ ಸಂಜಯ ಹೊಸಮಠ ಸರ್ಕಾರ ಮತ್ತು ಎಲ್ಲ ಶಾಸಕರಿಗೆ ಕಳಕಳಿಯ ಮನವಿ ಮಾಡಿದ್ದಾರೆ.

**120 ವರ್ಷಗಳ ಸಹಕಾರ ಚಳುವಳಿಯ ಪರಂಪರೆ – ಆದರೆ ಸಮಸ್ಯೆಗಳು ಇನ್ನೂ ಬಗೆಹರಿದಿಲ್ಲ!**



ದೇಶದ ಸಹಕಾರ ಚಳುವಳಿ ಗದಗ ಜಿಲ್ಲೆಯ ಕನಗಿನಹಾಳ ಗ್ರಾಮದಲ್ಲಿ ಸಹಕಾರ ಪಿತಾಮಹ ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲ ಅವರಿಂದ ಆರಂಭವಾದದ್ದು 120 ವರ್ಷಗಳ ಹಿಂದೆ.

ರಾಜ್ಯದ ಆರ್ಥಿಕ ಬಲದ ಹೆಮ್ಮೆಯ ಸ್ತಂಭಗಳಾದ ಪತ್ತಿನ ಸಂಘಗಳು ದಶಕಗಳ ಸೇವೆಯ ಬಳಿಕವೂ, ಇಂದಿಗೂ ಗಮನಾರ್ಹ ಹಾಗೂ ನಿರ್ದಿಷ್ಟ ರಕ್ಷಣಾತ್ಮಕ ನೀತಿ ಅನುಕೂಲಗಳನ್ನು ಸರ್ಕಾರದಿಂದ ಪಡೆಯದೆ ಬಳಲುತ್ತಿರುವುದು ವಿಪರ್ಯಾಸ.

**"ಮುಖ್ಯಮಂತ್ರಿಗಳೇ, ಈಗಲೇ ಕ್ರಮ!" – ಸಕಾಲ, ಸನ್ಮಾರ್ಗ ಮತ್ತು ಸತ್ಸಂದರ್ಭ ಇಂದೇ**

ಸಹಕಾರ ಇಲಾಖೆ ನೇರವಾಗಿ ಮಾನ್ಯ ಮುಖ್ಯಮಂತ್ರಿಗಳವರ ಅಧೀನದಲ್ಲಿರುವುದು, ಈ ಬಾರಿ ಸಮಸ್ಯೆಗಳ ಶೀಘ್ರ ಪರಿಹಾರಕ್ಕೆ ಅತ್ಯುತ್ತಮ ಅವಕಾಶ.

ರಾಜ್ಯ ವಿಧಾನಸಭೆಯಲ್ಲಿ 'ಸಹಕಾರ ಭೀಷ್ಮರು' ಎಂದು ಗೌರವಿಸಲ್ಪಡುವ ಗಣ್ಯ ಶಾಸಕರು ಹಾಗೂ ಅನುಭವೀ ಸಚಿವರು ಇರುವುದೂ ದೊಡ್ಡ ಶಕ್ತಿಯಾಗಿದೆ.

ಈ ಹಿನ್ನೆಲೆಯಲ್ಲಿ ಲಕ್ಷಾಂತರ ಠೇವಣಿದಾರರು, ದಶಲಕ್ಷ ಸದಸ್ಯರು ಹಾಗೂ ಸಾವಿರಾರು ನೌಕರರ ಭವಿಷ್ಯಕ್ಕೆ ಸಂಬಂಧಿಸಿದ ಪತ್ತಿನ ಸಂಘಗಳ ವಿಚಾರವನ್ನು ಉಲ್ಲೇಖರಹಿತವಾಗಿ ಗಂಭೀರವಾಗಿ ಪರಿಗಣಿಸಲು ಡಾ ಸಂಜಯ ಹೋಸಮಠರು ಒತ್ತಾಯಿಸಿದ್ದಾರೆ.

**ಪತ್ತಿನ ಸಂಘಗಳ ತುರ್ತು ಬೇಡಿಕೆಗಳು – ಅಧಿವೇಶನದಲ್ಲಿ ನಿರ್ಣಾಯಕ ನಿರ್ಧಾರಗಳ ಅವಶ್ಯಕತೆ**

**1. ಆಡಳಿತ ಮತ್ತು ಸಾಲ ವಸೂಲಾತಿ ಸಮಸ್ಯೆಗಳು**

ಸಂಘಗಳಲ್ಲಿ ಎದುರಾಗುತ್ತಿರುವ ಆಡಳಿತಾತ್ಮಕ ಅನಾನುಕೂಲತೆಗಳಿಗೆ ಶಾಶ್ವತ ಪರಿಹಾರ.

ಸಾಲ ವಸೂಲಾತಿ ಪ್ರಕ್ರಿಯೆಗೆ ಬಲ ನೀಡುವ ಕಾನೂನಾತ್ಮಕ ಹಾಗೂ ಕಾರ್ಯನಿರ್ವಹಣಾತ್ಮಕ ಕ್ರಮಗಳು.

**2. ಕೇಂದ್ರ ಸರ್ಕಾರದ ತೆರಿಗೆ ಸಂಬಂಧಿತ ತೀವ್ರ ಸವಾಲುಗಳು**

Income Tax ಮತ್ತು GST ಸಮಸ್ಯೆಗಳ ಬಗ್ಗೆ ರಾಜ್ಯವು ಕೇಂದ್ರದೊಂದಿಗೆ ತಕ್ಷಣ ಚರ್ಚೆ ನಡೆಸಿ ಪರಿಹಾರ ಒದಗಿಸಬೇಕು.

ರಾಷ್ಟ್ರೀಕೃತ ಮತ್ತು ಖಾಸಗಿ ಬ್ಯಾಂಕುಗಳಂತೆ CIBIL Score ಆಧಾರಿತ ಸಾಲ ವಿಂಗಡಣೆ ಮಾಡಲು ಪತ್ತಿನ ಸಂಘಗಳಿಗೂ ಸಾದೃಶ್ಯ ಹಕ್ಕುಗಳು.

**3. ನ್ಯಾಯಾಂಗ ಸಂಬಂಧಿತ ಸಮಸ್ಯೆಗಳು**

ವರ್ಷಗಳಿಂದ ಬಾಕಿ ಉಳಿದಿರುವ ABN ಪ್ರಕರಣಗಳ ತ್ವರಿತ ವಿಲೇವಾರಿಗಾಗಿ ವಿಶೇಷ ಕಾರ್ಯಪಡೆ.

ಪತ್ತಿನ ಸಂಘಗಳ ವ್ಯಾಜ್ಯಗಳ ವಿಲೇವಾರಿಗಾಗಿ ಪ್ರತ್ಯೇಕ ಸಹಕಾರ ನ್ಯಾಯಾಲಯ ಸ್ಥಾಪನೆಯ ಕುರಿತ ಚರ್ಚೆ.

**4. ಪಾರದರ್ಶಕ ಆಡಳಿತಕ್ಕೆ ತಂತ್ರಜ್ಞಾನ ಬಳಕೆ**

ರಾಜ್ಯದ ಎಲ್ಲಾ ಪತ್ತಿನ ಸಂಘಗಳಿಗೆ Common Application Software (CAS) ಕಡ್ಡಾಯಗೊಳಿಸಲು ಮುಂದಾಗಬೇಕು.

5. ಹೂಡಿಕೆ ಮತ್ತು ಬಡ್ಡಿಯೇತರ ಆದಾಯ ಹೆಚ್ಚಿಸಲು ಹೊಸ ನೀತಿಗಳು

Non-Interest Income ಗಳಿಕೆಗೆ ವಿಶೇಷ ಯೋಜನೆಗಳು.

ಸಂಘಗಳ ಹೂಡಿಕೆಗಳಿಗೆ ಲಾಭದಾಯಕ, ಸುರಕ್ಷಿತ ಮತ್ತು ಸ್ಪಷ್ಟ ನೀತಿಗಳು.

**6. ಜಿಲ್ಲಾ ಮಧ್ಯವರ್ತಿ ಬ್ಯಾಂಕುಗಳ (DCC Bank) ಪಾತ್ರ**

ಪತ್ತಿನ ಸಂಘಗಳ ರಿಸರ್ವ್ ಫಂಡ್ ಮತ್ತು ಠೇವಣಿಗಳ ದೊಡ್ಡ ಭಾಗ ಬ್ಯಾಂಕುಗಳಲ್ಲಿ ಹೂಡಿಕೆ ಮಾಡಿದ್ದರೂ ಕೂಡ, ಪತ್ತಿನ ಸಂಘಗಳಿಗೆ ಮಧ್ಯವರ್ತಿ ಬ್ಯಾಂಕುಗಳಿಂದ ಯಾವುದೇ ವಿಶೇಷ ಸೌಲಭ್ಯಗಳ ಇಲ್ಲದ ಕೊರತೆ.

ಇದನ್ನು ಸರಿಪಡಿಸಲು ಪಾರದರ್ಶಕ ಮೇಲಾಡಳಿತ ಮತ್ತು ಸೂಕ್ತ ಸೌಲಭ್ಯಗಳನ್ನು ಕಡ್ಡಾಯಗೊಳಿಸುವ ಕ್ರಮ.

**7. ರೋಗಗ್ರಸ್ತ ಪತ್ತಿನ ಸಂಘಗಳ ಪುನಶ್ಚೇತನ**

ಆರ್ಥಿಕವಾಗಿ ದುರ್ಬಲವಾಗಿರುವ ಸಂಘಗಳಿಗಾಗಿ ವಿಶೇಷ ಪುನಶ್ಚೇತನ ಪ್ಯಾಕೇಜ್ ಮತ್ತು ಹಣಕಾಸು ನೆರವು.

**ಪಕ್ಷಾತೀತ ಸಹಕಾರಕ್ಕಾಗಿ ಕಳಕಳಿ ಮನವಿ**

ಸಹಕಾರ ಚಳುವಳಿಯ ಸಮಸ್ಯೆಗಳು ಪಕ್ಷ ರಾಜಕಾರಣಕ್ಕೆ ಸಂಬಂಧಿಸಿದ ವಿಷಯವಲ್ಲ – ಇದು ಗ್ರಾಮೀಣ ಮತ್ತು ನಗರ ಜನಜೀವನದ ಆರ್ಥಿಕ ಭದ್ರತೆಗೆ ನೇರವಾಗಿ ಸಂಬಂಧಿಸಿದೆ.

ಅದರ್ದರಿಂದ, ಎಲ್ಲಾ ಪಕ್ಷದ ಶಾಸಕರು ಮತ್ತು ಸಚಿವರು ಪಕ್ಷಾತೀತವಾಗಿ ಒಂದಾಗಿ ನಿಂತು, ಈ ಅಧಿವೇಶನದಲ್ಲಿ ಪತ್ತಿನ ಸಂಘಗಳ ಸಮಸ್ಯೆಗಳಿಗೆ ಪ್ರಾಥಮಿಕತೆ ನೀಡಿ, ರಾಜ್ಯದ ಸಹಕಾರ ಕ್ಷೇತ್ರದ ಭವಿಷ್ಯವನ್ನು ರಕ್ಷಿಸುವ ಸಕಾರಾತ್ಮಕ ನಿರ್ಧಾರಗಳನ್ನು ಕೈಗೊಳ್ಳಬೇಕೆಂದು ಡಾ ಹೋಸಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಗಳೂರು ಸಮೀಪ ಹೊಸ ವಿಮಾನ ನಿಲ್ದಾಣಕ್ಕೆ 12 ಹಳ್ಳಿಗಳ 2,900 ಎಕರೆ ಭೂಸ್ವಾಧೀನ

ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಬೆಂಗಳೂರಿನ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಇನ್ನೂ ಜಾಗ ಜಾಗ ನಿಗದಿಯಾಗಿಲ್ಲ. ಆದರೆ ತಲಾ 4,500 ಎಕರೆಗಳನ್ನು ಗುರುತಿಸಿ ಕಾರ್ಯಸಾಧ್ಯತಾ ಅಧ್ಯಯನಕ್ಕಾಗಿ ಟೆಂಡರ್ ಕರೆದಿದೆ. ಆದರೆ ಪಕ್ಕದ ತಮಿಳುನಾಡು ಸರ್ಕಾರ ಬೆಂಗಳೂರಿನ



ಸಮೀಪದಲ್ಲೇ ಹೊಸ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯವನ್ನು ಚುರುಕುಗೊಳಿಸಿದೆ. ಹೊಸೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ತಮಿಳುನಾಡಿನ ಕೃಷ್ಣಗಿರಿ ಜಿಲ್ಲೆಯ 12 ಹಳ್ಳಿಗಳಲ್ಲಿ ಸುಮಾರು 2,900 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿದೆ. ಈ ಭಾಗದಲ್ಲಿ ಸರ್ಕಾರಿ ಸ್ವಾಮ್ಯದ 800 ಎಕರೆ ಸೇರಿದಂತೆ 2,900 ಎಕರೆ ಭೂಮಿಯನ್ನು ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲು ನಿರ್ಧರಿಸಿದೆ. ಬೆಂಗಳೂರಿಗೆ ಬಹಳ ಹತ್ತಿರದಲ್ಲಿರುವ ಹಾಗೂ ವೇಗವಾಗಿ ಬೆಳೆಯುತ್ತಿರುವ ಕೈಗಾರಿಕಾ ನಗರವಾದ ಹೊಸೂರು ಸಮೀಪ ಈ ಹೊಸ ವಿಮಾನ ನಿಲ್ದಾಣ ತಲೆ ಎತ್ತಲಿದೆ.

ಕರ್ನಾಟಕಕ್ಕೆ ಟಕ್ಕರ್ ಕೊಡಲು ಮುಂದಾಗಿರುವ ತಮಿಳುನಾಡು, ತನ್ನ ಹೊಸ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ವಿವರವಾದ ತಾಂತ್ರಿಕ ಆರ್ಥಿಕ ವರದಿ (ಡಿಟಿಇಆರ್) ತಯಾರಿಸುವ ಸಲುವಾಗಿ ಸಲಹೆಗಾರರನ್ನು ಆಯ್ಕೆ ಮಾಡಲು ಸರ್ಕಾರ ಕಳೆದ ತಿಂಗಳೇ ಟೆಂಡರ್ ಕರೆದಿತ್ತು. ಅಲ್ಲದೆ ಸ್ಥಳ ಅನುಮತಿಗಾಗಿ ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯದ ಮೆಟ್ಟಿಲೇರಿತ್ತು. ಯಾವ ಗ್ರಾಮಗಳಲ್ಲಿ ಸ್ವಾಧೀನ? ಹೊಸೂರು ವಿಮಾನ ನಿಲ್ದಾಣಕ್ಕೆ ಕೃಷಿ ಭೂಮಿಯೂ ಸೇರಿ 2,134 ಎಕರೆ ಖಾಸಗಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಬೇಕೆಂದು ಈ ಯೋಜನೆ ಉದ್ದೇಶಿಸಿದ್ದು, ಒಟ್ಟಾರೆ ವಿಮಾನ ನಿಲ್ದಾಣ ಯೋಜನೆಗಾಗಿ 2,979 ಎಕರೆಗಳನ್ನು ಸ್ವಾಧೀನಪಡಿಸಿಕೊಳ್ಳಲಿದೆ ಎಂದು ಡೆಕ್ಕನ್ ಹೆರಾಲ್ಡ್ ವರದಿ ಮಾಡಿದೆ. ಹೊಸೂರು ತಾಲ್ಲೂಕಿನ 10 ಗ್ರಾಮಗಳು ಹಾಗೂ ಶೂಲಗಿರಿ ತಾಲ್ಲೂಕಿನ 2 ಗ್ರಾಮಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ಶುರುವಾಗಲಿದೆ. ಕಾರುಪಲ್ಲಿ, ನಂದಿಮಂಗಲಂ, ಸೂಡುಕೊಂಡಪಲ್ಲಿ, ಮಿದುಡೆಪಲ್ಲಿ ಮತ್ತು ವೆಂಕಟೇಶಪುರಂ, ಬಲವನಪಲ್ಲಿ, ಮುತಾಲಿ, ಅತ್ತೂರು, ಅಲೆನಾಥಂ, ಅಡವನಪಲ್ಲಿ, ದಾಸಪಲ್ಲಿ, ಪೇಡ ಮುತಾಲಿ ಗ್ರಾಮಗಳಲ್ಲಿ ಈಗ ಭೂಸ್ವಾಧೀನ ಪ್ರಕ್ರಿಯೆ ಶುರುವಾಗಲಿದೆ.

ಎಲ್‌ಡಿಪಿ ಅನುಮೋದನೆ ಪಡೆದ ನಂತರ ಇದನ್ನು ಆಡಳಿತಾತ್ಮಕ ಅನುಮೋದನೆಗಾಗಿ ವಿವಿಧ ಇಲಾಖೆಗಳಿಗೆ ಕಳುಹಿಸಿ ನಂತರ ಸರ್ಕಾರಿ ಆದೇಶ ಹೊರಡಿಸಲಾಗುತ್ತದೆ. ಇದಾದ ನಂತರ ಭೂಮಿಯನ್ನು ಸ್ವಾಧೀನ ಆರಂಭಗೊಳ್ಳಲಿದೆ. ಫೆಬ್ರವರಿ ವೇಳೆಗೆ ಈ ಪ್ರಕ್ರಿಯೆ ಪೂರ್ಣಗೊಳ್ಳುವ ನಿರೀಕ್ಷೆ ಇದ್ದು, ಈಗ ಎಲ್ಲದಕ್ಕೂ ಅನುಮೋದನೆಗಳಿಗೆ ಕಾಯುತ್ತಿವೆ.

ಈಗ ಹೊಸೂರು ವಿಮಾನ ನಿಲ್ದಾಣಕ್ಕಾಗಿ ಆಯ್ಕೆ ಮಾಡಲಾದ ಸ್ಥಳವು ಬೆರಿಗೈ ಬಾಗಲೂರು ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರಸ್ತೆಯ (ಎಸ್‌ಟಿಆರ್‌ಆರ್) ತಮಿಳುನಾಡು ವಿಭಾಗಕ್ಕೆ ಸಮೀಪದಲ್ಲೇ ಇದೆ. ಈ ಹೊಸ ವಿಮಾನ ನಿಲ್ದಾಣವು 500ಕ್ಕೂ ಹೆಚ್ಚು ಕೈಗಾರಿಕೆಗಳು ಮತ್ತು ಸುಮಾರು 3,000 ಎಂಎಸ್‌ಎಂಇ ಘಟಕಗಳನ್ನು ಹೊಂದಿದೆ. ಹೀಗಾಗಿ ಪ್ರಯಾಣಿಕರಿಗೆ ಮಾತ್ರವಲ್ಲ, ಸರಕು ಸಾಗಣೆಯಲ್ಲೂ ಈ ಏರ್‌ಪೋರ್ಟ್ ಪ್ರಮುಖ ಪಾತ್ರ ವಹಿಸಲಿದೆ. ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ 150 ಕಿ.ಮೀ ಒಳಗೆ 2033ರವರೆಗೆ ಯಾವುದೇ ವಿಮಾನ ನಿಲ್ದಾಣ ನಿರ್ಮಿಸುವಂತಿಲ್ಲ ಎಂಬ ಒಪ್ಪಂದವಿದೆ. ಇದು ಮುಗಿದ ನಂತರ ವಿನಾಯಿತಿ ಪಡೆಯಲು ಅಥವಾ ಯೋಜನೆಯನ್ನು ಕಾರ್ಯಗತಗೊಳಿಸಲು ಮತ್ತೊಂದು ಒಪ್ಪಂದ ಮಾಡಿಕೊಳ್ಳಲು ತಮಿಳುನಾಡು ಮುಂದಾಗಿದೆ.

# ಕರ್ನಾಟಕ ದ್ವೇಷ ಭಾಷಣ ವಿಧೇಯಕ: ಇದು ಜನರ ಧ್ವನಿ ಹತ್ತಿಕ್ಕುವ ಕಾಯ್ದೆ

ಕರ್ನಾಟಕ ರಾಜ್ಯ ಸರ್ಕಾರ ಉದ್ಯೋಗಾಕಾಂಕ್ಷಿಗಳು, ರೈತರು, ವಿಪಕ್ಷ ನಾಯಕರ ಪ್ರತಿಭಟನೆ ಎದುರಿಸಿತ್ತು. ಇದೀಗ ಕನ್ನಡ ಪರ ಚಳವಳಿಗಾರರ ಪ್ರತಿಭಟನೆ ಎದುರಿಸಬೇಕಾದ ಅನಿವಾರ್ಯತೆ ಎದುರಾಗಿದೆ. ರಾಜ್ಯ ಸರ್ಕಾರ ಇತ್ತೀಚೆಗೆ ಸದನದಲ್ಲಿ ಮಂಡಿಸಿದ "ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕ 2025" ಈ ಕಾನೂನು ಅನ್ನು ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ನಾರಾಯಣ ಗೌಡ ಅವರು ವಿರೋಧಿಸಿದ್ದಾರೆ. ಜಾರಿಗೆ ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದ್ದಾರೆ. ಏಕೆ ಕಾರಣವೇನು?, ಹೊಸ ಕಾನೂನು ಹಿಂದಿನ ಉದ್ದೇಶವೇನೆಂದು ಈ ಲೇಖನದಲ್ಲಿ ತಿಳಿಯೋಣ. ರಾಜ್ಯದಲ್ಲಿ ದ್ವೇಷ ಭಾಷಣಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಸರ್ಕಾರ ಬೆಳಗಾವಿ ಚಳಿಗಾಲ ಅಧಿವೇಶನದಲ್ಲಿ ಕಳೆದ ಬುಧವಾರ "ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕ 2025' ಮಂಡಿಸಿತು.

ಭಾರತದ ಸಂವಿಧಾನದ ಅನುಚ್ಛೇದ 19(1)(ಎ)ಯಲ್ಲಿ ಮಾತನಾಡುವ ಹಕ್ಕು ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ನೀಡಲಾಗಿದೆ. ಆದರೆ ಈ ವಿಧೇಯಕದಲ್ಲಿ "ದ್ವೇಷ ಭಾಷಣ"ಕ್ಕೆ ನೀಡಿರುವ ವ್ಯಾಖ್ಯೆಯೇ ಅಸ್ಪಷ್ಟವಾಗಿದೆ. ಸರ್ಕಾರದ ಉದ್ದೇಶವೇ ಅನುಮಾನ ಹುಟ್ಟಿಸುವಂತಿದೆ. ಹಿಂಸೆಗೆ ಪ್ರಚೋದನೆ ನೀಡುವ ಭಾಷಣಗಳನ್ನು ತಡೆಯಲು ಈಗಿರುವ ಕಾನೂನುಗಳಲ್ಲೇ ಅವಕಾಶ ಇದೆ. ಆದರೆ ಸರ್ಕಾರ ಈಗ ರೂಪಿಸಿರುವ ದ್ವೇಷಭಾಷಣ ಕಾಯ್ದೆಯ ಕರಡಿನಲ್ಲಿ ಧರ್ಮ, ಜಾತಿ, ಲಿಂಗ, ಭಾಷೆ, ಲೈಂಗಿಕತೆ ಮುಂತಾದವುಗಳ ಆಧಾರದಲ್ಲಿ "ಅಸಾಮರಸ್ಯ ಅಥವಾ ದ್ವೇಷದ ಭಾವನೆಗಳನ್ನು" ಮೂಡಿಸುವ ಯಾವುದೇ ಮಾತು ಅಥವಾ ಬರಹವನ್ನು ಅಪರಾಧ ಎಂದು ಕರೆಯಲಾಗಿದೆ.

**ಪ್ರಜಾಪ್ರಭುತ್ವದ ಮೂಲ ತತ್ವಕ್ಕೆ ಹಾನಿ**

ಕಾಯ್ದೆ ಜಾರಿಯಾದರೆ ಸರ್ಕಾರದ ನೀತಿಗಳ ವಿರುದ್ಧದ ಟೀಕೆ, ಸಾಮಾಜಿಕ ಚರ್ಚೆ, ಹಾಸ್ಯ ಅಥವಾ ಸತ್ಯವನ್ನು ಹೇಳುವುದು ಕೂಡ ದ್ವೇಷ ಎಂದು ಪರಿಗಣಿಸುವ ಅಪಾಯವಿದೆ. ಜನರು ಭಯದಿಂದ ಮಾತನಾಡದೆ ಇರುವುದು ಸರ್ಕಾರದ ಉದ್ದೇಶವಾಗಿದ್ದಂತಿದೆ. ಇದು ಪ್ರಜಾಪ್ರಭುತ್ವದ ಮೂಲ ತತ್ವಕ್ಕೆ ಹಾನಿ ಮಾತ್ರವಲ್ಲ ಪ್ರಜಾಪ್ರಭುತ್ವದ ಕಚ್ಚು ಹಿಸುಕುವ ಯತ್ನ ಎಂದು ಅವರು ವಿಶ್ಲೇಷಿಸಿದರು. ಸಂವಿಧಾನದ ಅನುಚ್ಛೇದ 19(2)ಯಲ್ಲಿ ವಾಕ್ ಸ್ವಾತಂತ್ರ್ಯಕ್ಕೆ ನಿರ್ಬಂಧಗಳು ಇದ್ದರೂ, ಈ ವಿಧೇಯಕವು ಅದನ್ನು ಮೀರಿ ಹೋಗುತ್ತದೆ. ಈ ಕಾನೂನು ಪೊಲೀಸರಿಗೆ ಮತ್ತು ಸರ್ಕಾರಕ್ಕೆ ನಿರಂಕುಶ ಅಧಿಕಾರ ನೀಡುತ್ತದೆ. ಕಾಯ್ದೆ ಹೇಳುವಂತೆ ಇಲ್ಲಿನ ಅಪರಾಧಗಳು ಸಂಜ್ಞೆಯವು ಮತ್ತು ಜಾಮೀನು ಇಲ್ಲದ್ದು. ಯಾರಾದರೂ




ದೂರು ಕೊಟ್ಟರೆ ಸಾಕು, ಪೊಲೀಸರು ತಕ್ಷಣ ಬಂಧನ ಮಾಡಬಹುದು. ಆರೋಪಿಗಳಿಗೆ ನೋಟಿಸ್ ನೀಡುವ ಅಗತ್ಯವೂ ಇರುವುದಿಲ್ಲ. ಇದು ಎಂಥ ಕರಾಳ ಕಾಯ್ದೆ? ಜನಸಾಮಾನ್ಯರನ್ನು ಅಪರಾಧಿಗಳಾಗಿ ಮಾಡುವ ಈ ಕೀಳುಮಟ್ಟದ ಕಾಯ್ದೆ ನಮಗೆ ಬೇಕೆ? ಎಂದು ಪ್ರಶ್ನೆ ಮಾಡಿದರು.

**ಇದು ಸ್ವಾತಂತ್ರ್ಯ ಕಿತ್ತುಕೊಳ್ಳುವ ಕಾನೂನು**

ವಿಧೇಯಕದ ಕಲಂ 4ರಲ್ಲಿ ಪ್ರತಿಬಂಧಕ ಕ್ರಮಗಳನ್ನೂ ಸಹ ಉಲ್ಲೇಖಿಸಲಾಗಿದೆ. ಪೊಲೀಸರು ಅಥವಾ ಅಧಿಕಾರಿಗಳು "ಸಂಭಾವ್ಯ ಅಪರಾಧ" ಎಂದು ಭಾವಿಸಿ ಮುಂಚಿತವಾಗಿ ಕ್ರಮ ಕೈಗೊಳ್ಳಬಹುದು. ಇದರಿಂದ ಪ್ರತಿಭಟನೆಗಳು, ಸಭೆಗಳು ಅಥವಾ ಸಾಮಾಜಿಕ ಚಳವಳಿಗಳನ್ನು ತಡೆಯಬಹುದು. ಕಲಂ 6ರಲ್ಲಿ ಸರ್ಕಾರ ಹೇಳುತ್ತಿರುವ 'ದ್ವೇಷ ಭಾಷಣ'ಗಳನ್ನು ಬ್ಲಾಕ್ ಮಾಡುವ ಅಧಿಕಾರವನ್ನೂ ನೀಡಲಾಗಿದೆ. ಇದರ ಮೂಲಕ ಸರ್ಕಾರದ ಟೀಕೆ ಮಾಡುವ ಪೋಸ್ಟ್‌ಗಳನ್ನು ಸುಲಭವಾಗಿ ತೆಗೆದುಹಾಕಬಹುದು. ಇದು ಸಂವಿಧಾನದಲ್ಲಿ ನೀಡಿರುವ ಸ್ವಾತಂತ್ರ್ಯವನ್ನು ಕಿತ್ತುಕೊಳ್ಳುತ್ತದೆ.

**ಜನರ ಧ್ವನಿ ಹತ್ತಿಕ್ಕುವ ಕಾಯ್ದೆ ಬೇಡ!**

ಈ ವಿಧೇಯಕದಿಂದ ಸಾಮಾಜಿಕ ಕಾರ್ಯಕರ್ತರು, ಪತ್ರಕರ್ತರು, ಸಾಮಾಜಿಕ ಮಾಧ್ಯಮ ಬಳಸುವವರು ಹೆಚ್ಚು ತೊಂದರೆಗೀಡಾಗುತ್ತಾರೆ. ಅನ್ಯಾಯ ಅಥವಾ ಸರ್ಕಾರದ ತಪ್ಪುಗಳ ಬಗ್ಗೆ ಮಾತನಾಡಿದರೆ "ಭಾವನಾತ್ಮಕ ಹಾನಿ" ಎಂದು ಆರೋಪಿಸಿ ಬಂಧನ ಮಾಡಲು ಇದು ಪೊಲೀಸರಿಗೆ ಅಧಿಕಾರ ನೀಡುತ್ತದೆ. ಪತ್ರಕರ್ತರ ತನಿಖಾ ವರದಿಗಳು ಅಪಾಯಕ್ಕೆ ಸಿಲುಕುತ್ತವೆ. ಸಾಮಾಜಿಕ ಮಾಧ್ಯಮದಲ್ಲಿ ಹಾಸ್ಯ ಅಥವಾ ಟೀಕೆಯನ್ನು ದ್ವೇಷ ಎಂದು ಕರೆದು ಬ್ಲಾಕ್ ಮಾಡಬಹುದು. ಪ್ರಜಾಪ್ರಭುತ್ವದಲ್ಲಿ ಮಾಧ್ಯಮ ಮತ್ತು ಜನರ ಧ್ವನಿಯನ್ನು ನಾಶಪಡಿಸುವ ಇಂಥಹ ಕಾಯ್ದೆ ಯಾವುದೇ ಕಾರಣಕ್ಕೂ ಜಾರಿಯಾಗಕೂಡದು ಎಂದು ಅವರು ಪುನರುಚ್ಚರಿಸಿದರು.

**ಕಾಯ್ದೆಯ ರಾಜಕೀಯ ದುರುಪಯೋಗ ಸಾಧ್ಯತೆ**

ಈ ವಿಧೇಯಕವು ಹಳೆಯ ರಾಜದ್ರೋಹ ಕಾನೂನು (ಐಪಿಸಿ ಸೆಕ್ಷನ್ 124ಎ) ಅಥವಾ ಯುಎಪಿಎಯಂತೆ ರಾಜಕೀಯ ದುರುಪಯೋಗಕ್ಕೆ ಬಳಕೆಯಾಗುವ ಸಾಧ್ಯತೆಯೇ ಹೆಚ್ಚಾಗಿದೆ. ಐಟಿ ಆಕ್ಟ್ ಸೆಕ್ಷನ್ 66ಎಯನ್ನು ಸುಪ್ರೀಂ ಕೋರ್ಟ್ ರದ್ದು ಮಾಡಿತು. ರಾಜ್ಯ ಸರ್ಕಾರ ತಂದಿರುವ ವಿಧೇಯಕ ಇದೇ ಮಾದರಿಯದ್ದು. "ಸಾಮಾಜಿಕ ಸಾಮರಸ್ಯ"ದ ಹೆಸರಲ್ಲಿ ಅಭಿವ್ಯಕ್ತಿಯನ್ನು ನಿರ್ಬಂಧಿಸುವುದು ಪ್ರಜಾಸತ್ತೆಯನ್ನು ದುರ್ಬಲಗೊಳಿಸುತ್ತದೆ ಎಂದು ಅವರು ವಿವರಿಸಿದರು.

**ಕಾನೂನು ಹಿಂಪಡೆಯದಿದ್ದರೆ ಹೋರಾಟ:**

ಎಚ್ಚರಿಕೆ ಕರ್ನಾಟಕ ರಕ್ಷಣಾ ವೇದಿಕೆಯು ಈ ವಿಧೇಯಕವನ್ನು ತಕ್ಷಣ ಹಿಂಪಡೆಯಬೇಕೆಂದು ಒತ್ತಾಯಿಸುತ್ತದೆ. ಹಿಂದಕ್ಕೆ ಪಡೆಯದೇ ಹೋದರೆ ನಾವು ಬೀದಿಗಿಳಿದು ಹೋರಾಟ ನಡೆಸಬೇಕಾಗುತ್ತದೆ. ಈ ದೇಶದ ನಾಗರಿಕರಿಗೆ ಸಂವಿಧಾನದ ಹಕ್ಕುಗಳನ್ನು ರಕ್ಷಿಸುವುದು ನಮ್ಮ ಕರ್ತವ್ಯ. ಈ ಕಾನೂನು ನಾಗರಿಕರ ಸ್ವಾತಂತ್ರ್ಯವನ್ನು ಕೊಲ್ಲುತ್ತದೆ. ಹೀಗಾಗಿ ಇದು ಜಾರಿಯಾಗಲು ನಾವು ಅವಕಾಶ ನೀಡುವುದಿಲ್ಲ.

# ಈ ಭಾಗಗಳಲ್ಲಿ ಮುಂದಿನ 5 ದಿನ ವಿಪರೀತ ಚಳಿ!

*ಕರ್ನಾಟಕದಲ್ಲಿ ದಿನದಿಂದ ದಿನಕ್ಕೆ ಮೈಕೊರೆವ ಚಳಿ, ದಟ್ಟ ಮಂಜು ಹೆಚ್ಚಾಗುತ್ತಿದೆ. ಎಲ್ಲ ಜಿಲ್ಲೆಗಳಿಗೂ ಇದೇ ವಾತಾವರಣ ವಿಸ್ತರಣೆ ಆಗುವ ಮುನ್ಸೂಚನೆ ಸಿಕ್ಕಿದೆ. ಉತ್ತರ ಕರ್ನಾಟಕ ಹಲವು ಜಿಲ್ಲೆಗಳ ಜೊತೆಗೆ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಚಳಿ ಆತಂಕ ಶುರುವಾಗಿದ್ದು, ಹವಾಮಾನ ಇಲಾಖೆಯು ವಿವಿಧ ಜಿಲ್ಲೆಗಳಿಗೆ ಶೀತ ಅಲೆಯ ಮುನ್ಸೂಚನೆ ನೀಡಿದೆ. ರಾಜಧಾನಿ ಬೆಂಗಳೂರಿನಲ್ಲಿ ಕೆಲವು ದಿನಗಳಿಂದ ತಾಪಮಾನ ಕುಸಿದಿದೆ. ದಾಖಲೆಯ ಕನಿಷ್ಠ ತಾಪಮಾನ (12.9 ಡಿ.ಸೆ.) ಕಂಡು ಬಂದಿದೆ. ಇಂದು ಡಿಸೆಂಬರ್ 14 ಮತ್ತು 15ರಂದು ಒಟ್ಟು 17 ಜಿಲ್ಲೆಗಳಿಗೆ ಶೀತದ ಅಲೆಯ ಮುನ್ಸೂಚನೆ ನೀಡಲಾಗಿದೆ. ಅರ್ಧ ರಾಜ್ಯಕ್ಕಿಂತಲೂ ಅಧಿಕ ಪ್ರದೇಶಗಳಲ್ಲಿ ಶೀತ ಅಲೆ ವಿಸ್ತರಿಸಿದೆ. ಇನ್ನೂ ಕೆಲವೇ ದಿನಗಳಲ್ಲಿ ರಾಜ್ಯಾದ್ಯಂತ ದಟ್ಟ ಮಂಜು, ರಣಭೀಕರ ಚಳಿ ಆವರಿಸುವ ಲಕ್ಷಣಗಳು ಕಾಣುತ್ತಿವೆ.*

*ಶೀತ ಅಲೆಯ 17 ಜಿಲ್ಲೆಗಳು ಯಾವುವು? ಹವಾಮಾನ ಇಲಾಖೆ ಪ್ರಕಾರ, ಮುಂದಿನ 48 ಗಂಟೆಗಳಲ್ಲಿ ಇಂದು ಬೀದರ್, ಕಲಬುರಗಿ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನಿರೀಕ್ಷೆಗೂ ಮೀರಿದ ಚಳಿ, ಮಂಜು ಕಂಡು ಬರಲಿದ್ದು, 'ಆರೆಂಜ್ ಅಲರ್ಟ್' ನೀಡಲಾಗಿದೆ. ಉಳಿದಂತೆ ಇಂದು ಮತ್ತು ನಾಳೆ ಬಾಗಲಕೋಟೆ, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಕೊಪ್ಪಳ, ಬಳ್ಳಾರಿ, ಚಿಕ್ಕಬಳ್ಳಾಪುರ, ದಾವಣಗೆರೆ, ಹಾಸನ, ಶಿವಮೊಗ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಅತೀವ ಚಳಿ ದಾಖಲಾಗಲಿದ್ದು, 'ಯೆಲ್ಲೋ ಅಲರ್ಟ್' ನೀಡಲಾಗಿದೆ ಎಂದು ಭಾನುವಾರದ ಹವಾಮಾನ ವರದಿಯಲ್ಲಿ ಐಎಂಡಿ ಮುನ್ಸೂಚನೆ ನೀಡಿದೆ.*

*ಈ ಮೇಲಿನ ಹಲವು ಜಿಲ್ಲೆಗಳನ್ನು ಹೊರತುಪಡಿಸಿದರೆ ಉಳಿದ ಕರಾವಳಿಯ ಮೂರು ಜಿಲ್ಲೆಗಳಾದ ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ ಹಾಗೂ ತುಮಕೂರು, ಚಿತ್ರದುರ್ಗ, ಹಾಸನ, ಮಂಡ್ಯ, ಮೈಸೂರು, ರಾಮನಗರ, ಚಾಮರಾಜನಗರ ಜಿಲ್ಲೆಗಳಲ್ಲಿ ಕೊಂಚ ಚಳಿ ಕಂಡು ಬರುತ್ತಿದೆ. ಅಲ್ಲೆಲ್ಲ ಒಣಹವೆಯ ವಾತಾವರಣ ದಾಖಲಾಗಿದೆ. ಹಗಲು ರಾಜ್ಯದಲ್ಲಿ ಗರಿಷ್ಠ ತಾಪಮಾನ ಹೆಚ್ಚಾಗುತ್ತಿದೆ ಎಂದು ಹವಾಮಾನ ತಜ್ಞರು ತಿಳಿಸಿದ್ದಾರೆ.*

*ಬೆಂಗಳೂರು ಹವಾಮಾನ ಹೇಗಿರಲಿದೆ? ಬೆಂಗಳೂರಿನಲ್ಲಿ ನೆನ್ನೆ ಮತ್ತೆ 12 ಡಿಗ್ರಿ ಸೆಲ್ಸಿಯಸ್ ತಾಪಮಾನ ಕೆಐಎಎಲ್ ನಲ್ಲಿ ದಾಖಲಾಗಿದೆ. ಇದು ಹತ್ತು ವರ್ಷಗಳ ಹಿಂದೆ (2016) ದಾಖಲಾಗಿದ್ದ ತಾಪಮಾನವಾಗಿದೆ. ಅದರ ನಂತರ ಡಿಸೆಂಬರ್ ತಿಂಗಳಲ್ಲಿ ಡಿ.12, 13ರಂದು ದಾಖಲಾಗಿದೆ. ಮುಂದಿನ ಎರಡು ದಿನ ನಗರದಲ್ಲಿ ಕನಿಷ್ಠ 15 ಹಾಗೂ ಗರಿಷ್ಠ 26 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಕಂಡು ಬರಲಿದೆ ಎಂದು ಐಎಂಡಿ ತಿಳಿಸಿದೆ.*

Printed, Published, & owned by : YOGESH, Printed at: SNEHA PRINTERS, No. 129, Kempe gowda Nagar, Magadi Main Road, Bangalore 560 091.
Published at : No. 10, 2nd Floor, 7th Block, Sir M. Visweswaraiah Layout, Muddayanapalya Circle, Bangalore 560 091.
Editor : YOGESH : Mobile : 9912220350 Email : info.southindiatimes@gmail.com